ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 2 ಮಂಗಳವಾರ 2025

₹4

46

ಸಂಪುಟ: 46 | ಸಂಚಿಕೆ: 136 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಸಿದ್ದರಾಮನಹುಂಡಿಯಲ್ಲಿ ಕರ್ನಾಟಕ ಪಬ್ಲಿಕ್ ಶಾಲಾ ಕಟ್ಟಡ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದವರಿಂದ ಶಾಲೆ ದತ್ತು

ಮೈಸೂರು, ಸೆ.1(ಬಿಎಲ್‌ಯು)–ತನ್ನ ಹುಟ್ಟೂರು ಮೈಸೂರಿನ ಸಿದ್ದರಾಮನಹುಂಡಿಯ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ನೂತನವಾಗಿ ನಿರ್ಮಿಸಿರುವ ಕಟ್ಟಡವನ್ನು ಸಿಎಂ ಸಿದ್ದರಾಮಯ್ಯ ಇಂದು ಉದ್ಘಾಟಿಸಿದರು.

ಕರ್ನಾಟಕ ಪಬ್ಲಿಕ್ ಶಾಲೆ ನೂತನ ಕಟ್ಟಡ ಉದ್ಘಾಟಿಸಿದ ನಂತರ ಪತ್ರಕರ್ತರಿಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ ಅವರು, ಊರಿನ ಋಣ ಯಾವಾಗಲೂ ಇದ್ದೆ ಇರುತ್ತದೆ. ಈ ಕಾರಣದಿಂದಲೇ ನಾನು ನಮ್ಮೂರಿನಲ್ಲಿ ಕರ್ನಾಟಕ ಪಬ್ಲಿಕ್ ಶಾಲೆ ತೆರೆದಿದ್ದೇನೆ ಎಂದು ಹೇಳಿದರು.

ಈ ಶಾಲೆಯಲ್ಲಿ ನಾನು 5ರಿಂದ 7ನೇ ತರಗತಿವರೆಗೆ ವ್ಯಾಸಂಗ ಮಾಡಿದ್ದೆ. ಈಗ ನಾನು ಓದಿದ ಶಾಲೆಯನ್ನು ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ನೂತನವಾಗಿ ನಿರ್ಮಿಸಲಾಗಿದೆ. ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದವರು ಈ ಶಾಲೆಯನ್ನು ದತ್ತು ಪಡೆದಿದ್ದಾರೆ ಎಂದು ತಿಳಿಸಿದರು.



ಮೈಸೂರಿನ ಸಿದ್ದರಾಮನಹುಂಡಿಯಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯ ನೂತನವಾಗಿ ನಿರ್ಮಿಸಿರುವ ಕಟ್ಟಡವನ್ನು ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು. ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್, ಸರ್ಕಾರಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಕಾರ್ಯದರ್ಶಿ ರಶ್ಮಿ ಮಹೇಶ್ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಪ್ರಾಥಮಿಕ, ಪ್ರೌಢಶಾಲೆ, ಪಿಯು ಕಾಲೇಜು ಇಲ್ಲಿ ನಡೆಯುತ್ತಿದೆ. ಪದವಿ ವಿದ್ಯಾರ್ಥಿಗಳು ದೊರೆಯುವುದಿಲ್ಲ ಎಂದು ಪದವಿ ಕೋರ್ಸ್ ತೆರೆದಿಲ್ಲ. ಆದರೆ ಊರಿನಲ್ಲಿ ಬಿಸಿಎಂ ಹಾಸ್ಟೆಲ್, ಪಶು ಚಿಕಿತ್ಸಾ ಕೇಂದ್ರ, ಗ್ರಂಥಾಲಯ, ಸಮುದಾಯ ಆರೋಗ್ಯ ಕೇಂದ್ರಗಳಿವೆ ಎಂದು ಮಾಹಿತಿ ನೀಡಿದರು.

ಆದರೆ ನಾವು ಮಾಡುತ್ತಿರುವ ಇಂತಹ ಅಭಿವೃದ್ಧಿ ಕಾರ್ಯಗಳು ಬಿಜೆಪಿಯವರಿಗೆ ಕಾಣುತ್ತಿಲ್ಲ. ಬಿಜೆಪಿ ನಾಯಕರಿಗೆ ಸುಳ್ಳು ಹೇಳುವುದು ಬಿಟ್ಟು ಬೇರೇನು ಗೊತ್ತಿಲ್ಲ ಎಂದು ಸಿದ್ದರಾಮಯ್ಯ ಟೀಕಿಸಿದರು.

ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಸರ್ಕಾರಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಕಾರ್ಯದರ್ಶಿ ರಶ್ಮಿ ಮಹೇಶ್ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ಈ ವೇಳೆ ಹಾಜರಿದ್ದರು.

ಚಾಮುಂಡಿಬೆಟ್ಟ ಹಿಂದೂಗಳ ಆಸ್ತಿಯೇ ಇರಬಹುದು...!

ಹುಟ್ಟೂರು ಸಿದ್ದರಾಮನಹುಂಡಿಯಲ್ಲಿ ಬಿಜೆಪಿ ನಾಯಕರಿಗೆ ಸಿಎಂ ಸಿದ್ದರಾಮಯ್ಯ ತಿರುಗೇಟು

- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆ ನನಗೆ ಗೊತ್ತಿಲ್ಲ
- ಬಿಜೆಪಿಯವರ ಧರ್ಮಸ್ಥಳ ಚಲೋ ಕೇವಲ ರಾಜಕೀಯ ಪ್ರೇರಿತ
- ಬಿಜೆಪಿ ನಾಯಕರ ಈ ಯೋಜನೆಯಿಂದ ಹಿಂದುತ್ವ ಗಟ್ಟಿಯಾಗಲ್ಲ
- ಮೈಸೂರು ದಸರಾ ಮೇಲೆ ಯಾವುದೇ ಕೆಟ್ಟ ಪರಿಣಾಮ ಬೀರಲ್ಲ

ಮೈಸೂರು, ಸೆ.1(ಬಿಎಲ್‌ಯು)– ಮೈಸೂರಿನ ಚಾಮುಂಡಿಬೆಟ್ಟ ಹಿಂದೂಗಳ ಆಸ್ತಿಯೇ ಇರಬಹುದು. ಆದರೆ, ಈಗ ಚರ್ಚೆ ವಿಷಯ ನಾಡಹಬ್ಬ ದಸರಾ ಬಗ್ಗೆಯೇ ಹೊರತು ಚಾಮುಂಡಿಬೆಟ್ಟದ ಹಕ್ಕು ಪ್ರತಿಪಾದನೆಯಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಮೈಸೂರಿನ ಸಿದ್ದರಾಮನಹುಂಡಿಯಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ಚಾಮುಂಡಿಬೆಟ್ಟ ಹಿಂದೂಗಳಿಗೆ ಮಾತ್ರ ಸೇರಿದ್ದಲ್ಲ ಎಂಬ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹೇಳಿಕೆ ನನಗೆ ಗೊತ್ತಿಲ್ಲ ಎಂದು ಸ್ಪಷ್ಟನೆ ನೀಡಿದರು.

ನಾಡಹಬ್ಬ ದಸರಾ ಎಲ್ಲರಿಗೂ ಸೇರಿದೆ. ಈ ವಿಚಾರವಾಗಿ ಪ್ರಸ್ತುತ ಚರ್ಚೆ ನಡೆಯುತ್ತಿದೆಯೇ ಹೊರತು, ಚಾಮುಂಡಿಬೆಟ್ಟದ ಬಗ್ಗೆ ಅಲ್ಲ ಎಂದು ಹೇಳಿದರು.

ರಾಜಕೀಯ ಕಾರಣ: ಬಿಜೆಪಿಯವರು ಧರ್ಮಸ್ಥಳ ಚಲೋ ಕೈಗೊಂಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿದ್ದರಾಮಯ್ಯ, ಬಿಜೆಪಿ ನಾಯಕರು ರಾಜಕೀಯ ಕಾರಣಕ್ಕಾಗಿ ಯಾತ್ರೆ ಮಾಡುತ್ತಿದ್ದಾರೆ. ಆದರೆ ಇದರಿಂದ ಅವರಿಗೆ ಯಾವ ಲಾಭವೂ ಆಗುವುದಿಲ್ಲ ಎಂದು ಕೇಸರಿ ನಾಯಕರಿಗೆ ತಿರುಗೇಟು ನೀಡಿದರು.

ಧರ್ಮಸ್ಥಳದ ಬಗ್ಗೆ ಆರೋಪ ಕೇಳಿ ಬಂದಾಗ ನಾವು ತನಿಖೆ ಮಾಡಲು ಎಸ್‌ಐಟಿ ರಚನೆ ಮಾಡಿದ್ದೆವು. ಎಸ್‌ಐಟಿ



ರಚನೆ ಮಾಡಿದಾಗ ಧರ್ಮಸ್ಥಳ ಯಾತ್ರೆ ಮಾಡದ ಬಿಜೆಪಿ ನಾಯಕರು ಈಗ ಯಾತ್ರೆ ಮಾಡುತ್ತಿರುವ ಉದ್ದೇಶವೇನು ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

ಧರ್ಮಸ್ಥಳ ಯಾತ್ರೆ ಮಾಡುವುದರಿಂದ ಹಿಂದುತ್ವ ಗಟ್ಟಿಯಾಗುತ್ತದೆ ಎಂದು ಬಿಜೆಪಿ ನಾಯಕರು ಯೋಜನೆ ರೂಪಿಸಿದ್ದಾರೆ. ಆದರೆ ಇದರಿಂದ ಹಿಂದುತ್ವ ಗಟ್ಟಿಯಾಗುವುದಿಲ್ಲ ಎಂಬ ಕಟು ಸತ್ಯ ಅವರಿಗೆ ಅರ್ಥವಾಗಿಲ್ಲ ಅನ್ನಿಸುತ್ತದೆ ಎಂದು ಸಿದ್ದರಾಮಯ್ಯ ಟಾಂಗ್ ನೀಡಿದರು.

ನಾವು ಮಾತ್ರ ಹಿಂದೂ ಎಂದು ಬಿಜೆಪಿ ನಾಯಕರು ಪ್ರಚಾರ ಮಾಡುತ್ತಾರೆ. ನಾನೂ ಹಿಂದೂ, ನಾವೆಲ್ಲರೂ ಹಿಂದೂ ಧರ್ಮಿಯರೆ. ನನ್ನೂರು ಸಿದ್ದರಾಮನಹುಂಡಿಯಲ್ಲಿ ರಾಮಮಂದಿರ ಕಟ್ಟಿಸಿದ್ದೇನೆ. ಹಿಂದೂಗಳು ಎಂದರೆ ಸುಳ್ಳು ಹೇಳುವುದು, ಅಪಪ್ರಚಾರ ಮಾಡುವುದಲ್ಲ. ಅಮಾನವೀಯ ನಡುವಳಿಕೆ ತೋರಿದವರು ಹಿಂದೂಗಳಲ್ಲ. ಮನುಷ್ಯತ್ವ ಇರುವವರು ಹಿಂದೂಗಳು. ಹಿಂದೂಗಳೆಲ್ಲಾ ಬಿಜೆಪಿಯವರ ಜೊತೆಯಲ್ಲಿ ಇಲ್ಲ. ಈ ಕಟು ಸತ್ಯವನ್ನು ಬಿಜೆಪಿ ನಾಯಕರು ಅರಿಯಬೇಕು ಎಂದು ಸಲಹೆ ನೀಡಿದರು.

ಬಿಜೆಪಿ ನಾಯಕರು ದಸರಾ ಆಚರಣೆಯಲ್ಲೂ ರಾಜಕೀಯ ಮಾಡುತ್ತಿದ್ದಾರೆ. ಪ್ರತಿ ವಿಚಾರವನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳುತ್ತಾರೆ. ಸುಳ್ಳು ಹೇಳುವುದು ಬಿಟ್ಟು ಬಿಜೆಪಿಯವರಿಗೆ ಬೇರೇನು ಗೊತ್ತಿಲ್ಲ ಎಂದು ಆರೋಪಿಸಿದರು.

ನಾಡಹಬ್ಬ ಮೈಸೂರು ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿರುವುದನ್ನು ಬಿಜೆಪಿಯವರು ಟೀಕಿಸಿದ್ದಾರೆ. ಆದರೆ ಬಿಜೆಪಿಯವರ ಈ ಹೋರಾಟದಿಂದ ಮೈಸೂರು ದಸರಾ ಮೇಲೆ ಯಾವುದೇ ಕೆಟ್ಟ ಪರಿಣಾಮ ಬೀರುವುದಿಲ್ಲ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಗಣೇಶ ವಿಸರ್ಜನೆ ವೇಳೆ ಡಿಜೆ ಸೌಂಡ್‌ಗೆ ಡ್ಯಾನ್ಸ್ ಮಾಡುತ್ತಿರುವಾಗಲೇ

ಹೃದಯಾಘಾತದಿಂದ ಕುಸಿದು ಬಿದ್ದು ಇಬ್ಬರು ಸಾವು

- ಗಣಪತಿ ಮೆರವಣಿಗೆ ಟ್ರ್ಯಾಕ್ಟರ್‌ನಿಂದ ಬಿದ್ದು ಮತ್ತೋರ್ವ ಸಾವು
- ಮಂಡ್ಯ, ಹುಣಸೂರು, ಚಿಕ್ಕಬಳ್ಳಾಪುರದಲ್ಲಿ ದುರಂತ

ಮಂಡ್ಯ, ಸೆ.1– ಐದು ದಿನದಿಂದ ಗಣಪನಿಗೆ ಪೂಜೆ ಪುನಸ್ಕಾರ ಮಾಡಿದವರು, ನಿನ್ನೆ ಸಂಭ್ರಮದಿಂದ ಗಣೇಶ ಮೂರ್ತಿಗಳ ವಿಸರ್ಜನೆ ಮಾಡಿದರು. ಈ ಸಂಭ್ರಮದ ವೇಳೆ ಕೆಲ ಕಹಿ ಘಟನೆಗಳು ಸಂಭವಿಸಿವೆ. ರಾಜ್ಯದಲ್ಲಿ ಗಣಪತಿ ವಿಸರ್ಜನಾ ಮೆರವಣಿಗೆ ವೇಳೆ ಡಿಜೆ ಸೌಂಡ್‌ಗೆ ಡ್ಯಾನ್ಸ್ ಮಾಡುತ್ತಿರುವಾಗಲೇ ಇಬ್ಬರು ಹೃದಯಾಘಾತದಿಂದ ಸಾವನ್ನಪ್ಪಿರುವ ಎರಡು ಪ್ರತ್ಯೇಕ ಘಟನೆಗಳು ಮಂಡ್ಯ ಮತ್ತು ಚಿಕ್ಕಬಳ್ಳಾಪುರದಲ್ಲಿ ನಡೆದಿವೆ. ಅಲ್ಲದೇ, ಗಣಪತಿ ಮೆರವಣಿಗೆ ಟ್ರ್ಯಾಕ್ಟರ್‌ನಿಂದ ಬಿದ್ದು ವ್ಯಕ್ತಿಯೋರ್ವ ಸಾವನ್ನಪ್ಪಿದ ಘಟನೆ ಹುಣಸೂರು ತಾಲೂಕಿನಲ್ಲಿ ಸಂಭವಿಸಿದೆ.

ಮಂಡ್ಯ ಜಿಲ್ಲೆ, ಕೆ.ಆರ್.ಪೇಟೆ ತಾಲೂಕಿನ ಜೊತ್ತನಪುರ ಗ್ರಾಮದಲ್ಲಿ ಭಾನುವಾರ ಗಣೇಶ ವಿಸರ್ಜನಾ ಮೆರವಣಿಗೆ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಯುವಕರ



ಮಂಡ್ಯದ ಮಂಜುನಾಥ್

ಜೊತೆ ಡಿಜೆ ಹಾಡಿಗೆ ಮಂಜುನಾಥ್ (55) ಭರ್ಜರಿ ಹೆಜ್ಜೆ ಹಾಕುತ್ತಿದ್ದರು. ಆದರೆ ಹಠಾತ್ ಹೃದಯಾಘಾತದಿಂದ ಕುಸಿದು ಬಿದ್ದು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮಂಜುನಾಥ್ ಅವರ ಕೊನೆಯ ಕ್ಷಣದ ದೃಶ್ಯಗಳು ಸ್ಥಳೀಯರ ಮೊಬೈಲ್‌ನಲ್ಲಿ ಸೆರೆ ಆಗಿದೆ.

ಇದೇ ರೀತಿಯಾಗಿ ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲೂಕಿನ ಬೋದಗೂರು ಗ್ರಾಮದಲ್ಲಿ ಕೂಡ ನಿನ್ನೆ ರಾತ್ರಿ ಗಣೇಶ ವಿಸರ್ಜನೆ ವೇಳೆ ನಾಗವಲ್ಲಿ ಹಾಡಿಗೆ ಡ್ಯಾನ್ಸ್ ಮಾಡುತ್ತಿದ್ದ ಲಕ್ಷ್ಮಿಪತಿ (40) ಎಂಬ ವ್ಯಕ್ತಿ ಹೃದಯಾಘಾತವಾಗಿ ಕುಸಿದುಬಿದ್ದಿದ್ದಾರೆ. ಸದ್ಯ ವಿಡಿಯೋ ವೈರಲ್ ಆಗುತ್ತಿದೆ.

ಗಣೇಶ ಮೆರವಣಿಗೆ ವೇಳೆ ಟ್ರ್ಯಾಕ್ಟರ್‌ನಿಂದ ಬಿದ್ದು ವ್ಯಕ್ತಿ ಸಾವನ್ನಪ್ಪಿರುವಂತಹ ಘಟನೆ ಮೈಸೂರು ಜಿಲ್ಲೆ, ಹುಣಸೂರು ತಾಲೂಕಿನ ಹರವೆ ಗ್ರಾಮದಲ್ಲಿ ನಡೆದಿದೆ. ಆಟೋ ರಾಜು(34) ಮೃತ ವ್ಯಕ್ತಿ. ಗ್ರಾಮದಲ್ಲಿ ಗಣಪತಿ ವಿಸರ್ಜನೆಗಾಗಿ ಟ್ರ್ಯಾಕ್ಟರ್‌ನಲ್ಲಿ ಮೆರವಣಿಗೆ ಮಾಡಲಾಗುತ್ತಿತ್ತು. ಇತ್ತ ಮನೆ ಬಳಿ ಬಂದ ಗಣಪನಿಗೆ ಪೂಜೆ ಸಲ್ಲಿಸಲು ರಾಜು ಟ್ರ್ಯಾಕ್ಟರ್ ಹತ್ತಿದ್ದ. ಪೂಜೆ ಸಲ್ಲಿಸುತ್ತಾ ಏಕಾಏಕಿ ಕೆಳಗೆ ಬಿದ್ದಿದ್ದಾರೆ. ಕೂಡಲೇ ರಾಜುನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗುವಾಗ ಮಾರ್ಗ ಮಧ್ಯೆ ಕೊನೆಯುಸಿರೆಳೆದಿದ್ದಾರೆ.

ಕಾಂಗ್ರೆಸ್ ಜಿಲ್ಲಾ ಪ್ರಚಾರ ಸಮಿತಿ ಪದಾಧಿಕಾರಿಗಳ ಪದಗ್ರಹಣ ಇಂದು

ಮೈಸೂರು, ಸೆ.1(ಜಿಎ)–ಮೈಸೂರು ನಗರ (ಜಿಲ್ಲಾ) ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ಸೆ.2ರಂದು ಜಿಲ್ಲಾ ಪದಾಧಿಕಾರಿಗಳ ಸಭೆ, ಅಧ್ಯಕ್ಷರು, ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ರಘುರಾಜೇ ಅರಸು ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 10 ಗಂಟೆಗೆ ಆರಂಭವಾಗಲಿದ್ದು, ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ವಿನಯ್‌ಕುಮಾರ್ ಸೊರಕೆ ಆಗಮಿಸಿ, ಮುಂದಿನ ತಾಪಂ, ಜಿಪಂ, ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಗೆಲುವಿಗೆ ಸಲಹೆ ನೀಡುವರು ಎಂದರು.

ಪ್ರಚಾರ ಸಮಿತಿ ಉಪಾಧ್ಯಕ್ಷ ಕೋಟೆ ಎಂ.ಶಿವಣ್ಣ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್‌ಸೇಠ್, ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಗ್ರಾಮಾಂತರ ಅಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ನಿಗಮ ಮಂಡಳಿ ಅಧ್ಯಕ್ಷರು, ಶಾಸಕರು,ಮಾಜಿ ಶಾಸಕರು, ಮಾಜಿ ಮೇಯರ್‌ಗಳು, ನಗರ ಪಾಲಿಕೆ ಮಾಜಿ ಸದಸ್ಯರು, ಮುಖಂಡರು ಆಗಮಿಸುವರು ಎಂದರು. ಗೋಷ್ಠಿಯಲ್ಲಿ ಪ್ರಚಾರ ಸಮಿತಿ ಗ್ರಾಮಾಂತರ ಅಧ್ಯಕ್ಷ ರವಿ ಮಾವಿನಹಳ್ಳಿ ಮತ್ತಿತರರಿದ್ದರು.

ಮೈಲಾರಿ ಹೋಟೆಲ್‌ನಲ್ಲಿ ಮಸಾಲೆ ದೋಸೆ ಸವಿದ ಸಿಎಂ



ಮೈಸೂರಿನ ಮೈಲಾರಿ ಹೋಟೆಲ್‌ನಲ್ಲಿ ಸಿದ್ದರಾಮಯ್ಯ ಮಸಾಲೆ ದೋಸೆ ತಿಂದರು.

ಮೈಸೂರು, ಸೆ.1(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮೈಸೂರಿನ ಸಯ್ಯಾಜಿರಾವ್ ರಸ್ತೆಯಲ್ಲಿರುವ ಮೈಲಾರಿ ಹೋಟೆಲ್‌ನಲ್ಲಿ ಮಸಾಲೆ ದೋಸೆ ಸವಿದರು.

ಅವರಿಗೆ ಮಸಾಲೆ ದೋಸೆ ಎಂದರೆ ಪಂಚಪ್ರಾಣ. ಮೈಸೂರಿಗೆ ಬಂದಾಗ ಸಮಯ ಸಿಕ್ಕರೆ ಮಸಾಲೆ ದೋಸೆಗೆ ಪ್ರಖ್ಯಾತವಾಗಿರುವ ಈ ಹೋಟೆಲ್‌ಗೆ ಹೋಗುತ್ತಾರೆ. ಅಂತೆಯೇ ಇಂದು ಮೈಲಾರಿ ಹೋಟೆಲ್‌ನಲ್ಲಿ ಮಸಾಲೆ ದೋಸೆ ಸವಿದರು. ಬೆಂಗಳೂರಿನಲ್ಲಿ ಆಗಾಗ ವಿದ್ಯಾರ್ಥಿ ಭವನ ಹಾಗೂ ಜನಾರ್ಧನ ಹೋಟೆಲ್‌ಗೆ ಹೋಗುವ ಸಿದ್ದರಾಮಯ್ಯ, ಅಲ್ಲಿಯೂ ಈ ಮಸಾಲೆ ದೋಸೆ ಸವಿಯುತ್ತಾರೆ.

ಅವರ ಜೊತೆಗೆ ಇಂದು ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್‌ಕುಮಾರ್, ದಕ್ಷಿಣ ವಲಯ ಐಜಿಪಿ ಡಾ.ಬೋರಲಿಂಗಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣು ವರ್ಧನ ಕೂಡ ಮಸಾಲೆ ದೋಸೆ ತಿಂದರು.

ನಾಳೆ ಚಾಮರಾಜ ಕ್ಷೇತ್ರ ಕಾಂಗ್ರೆಸ್‌ನಿಂದ ಧರ್ಮಸ್ಥಳಕ್ಕೆ ಧರ್ಮಯಾತ್ರೆ

ಮೈಸೂರು,ಸೆ.1(ಜಿಎ)–ಶ್ರೀಕ್ಷೇತ್ರ ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಖಂಡಿಸಿ ಹಾಗೂ ಅಲ್ಲಿನ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರಿಗೆ ಬೆಂಬಲ ಸೂಚಿಸಲು ಮೈಸೂರು ನಗರ ಕಾಂಗ್ರೆಸ್ ಸಮಿತಿ ಚಾಮರಾಜ ಕ್ಷೇತ್ರದ ವತಿಯಿಂದ ಸೆ.3ರಂದು ಧಮಸ್ಥಳ ಯಾತ್ರೆ ಕೈಗೊಂಡಿರುವುದಾಗಿ ಅಧ್ಯಕ್ಷ ರವಿ ಮಂಚೇಗೌಡನಕೊಪ್ಪಲು ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 7ಗಂಟೆಗೆ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಶಾಸಕ ಕೆ.ಹರೀಶ್‌ಗೌಡ ಚಾಲನೆ ನೀಡಲಿದ್ದಾರೆ. ಸುಮಾರು 30 ಬಸ್‌ಗಳಲ್ಲಿ ಎರಡು ಸಾವಿರ ಮಂದಿ ಪ್ರಯಾಣ ಬೆಳೆಸಲಿದ್ದಾರೆ. ಅಂದು ಮಧ್ಯಾಹ್ನ ಧರ್ಮಸ್ಥಳ ತಲುಪಿ ವಾಸ್ತವ್ಯ ಹೂಡಿ, ಮರುದಿನ ಬೆಳಗ್ಗೆ 8.30ಕ್ಕೆ ಅಲ್ಲಿ ಧರ್ಮಾಧಿಕಾರಿಗಳ ಪರ ಶಾಂತಿಯಾತ್ರೆ ನಡೆಸಿ ಬಳಿಕ ಮೈಸೂರಿಗೆ ವಾಪಸಾಗಲಿದ್ದಾರೆ ಎಂದರು.

ಕೆಲವು ವರ್ಷಗಳಿಂದ ಧಾರ್ಮಿಕ ಕ್ಷೇತ್ರ ಧರ್ಮಾಧಿಕಾರಿಗಳ ವಿರುದ್ಧ ಕೆಲ ಯೂಟ್ಯೂಬರ್‌ಗಳು ಅಪಪ್ರಚಾರ ಮಾಡುತ್ತಿದ್ದಾರೆ. ಇದು ಭಕ್ತರ ಮನಸ್ಸಿಗೆ ನೋವುಂಟು ಮಾಡಿದೆ. ಅನಾಮಿಕ ನೀಡಿದ ದೂರಿನ ಮೇರೆಗೆ ಕಾಂಗ್ರೆಸ್ ಸರ್ಕಾರ ಎಸ್‌ಐಟಿ ರಚಿಸಿ ತನಿಖೆ ಪಾರದರ್ಶಕವಾಗಿ ನಡೆದಿದೆ. ಆದರೆ ಸಾಮಾಜಿಕ ಮಾಧ್ಯಮಗಳಲ್ಲಿ ತಪ್ಪು ಸಂದೇಶಗಳನ್ನು ಹಲವರು ಬಿತ್ತುತ್ತಿರುವುದು ಸರಿಯಲ್ಲ. ಹೀಗಾಗಿ ಇದನ್ನು ಖಂಡಿಸಿ ಹಾಗೂ ಧರ್ಮಸ್ಥಳದ ಧರ್ಮಾಧಿಕಾರಿಗಳಿಗೆ ಬೆಂಬಲ ಸೂಚಿಸಿ ಈ ಧರ್ಮಯಾತ್ರೆ ಹಮ್ಮಿಕೊಳ್ಳಲಾಗುತ್ತಿದೆ. ಇದೇ ವೇಳೆ ಬಿಜೆಪಿಯವರು ರಾಜಕೀಯ ಲಾಭಕ್ಕಾಗಿ ಧರ್ಮಸ್ಥಳ ಯಾತ್ರೆ ಕೈಗೊಳ್ಳುತ್ತಿದ್ದಾರೆಂದು ಆರೋಪಿಸಿದರು.

ಗೋಷ್ಠಿಯಲ್ಲಿ ರಮೇಶ್ ರಾಯಪ್ಪ, ಯೋಗೇಶ್, ಅನಂತ ನಾರಾಯಣ, ರಾಮಚಂದ್ರ ಮತ್ತಿತರರಿದ್ದರು.

ಬಿ. ರೇಖಾಗೆ ಪಿಹೆಚ್.ಡಿ



ಮೈಸೂರು: ಡಾ. ಆರ್. ಕಿರಣ್ ಅವರ ಮಾರ್ಗದರ್ಶನದಲ್ಲಿ ಬಿ. ರೇಖಾ ಅವರು ನಿರ್ವಹಣೆ ವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಆಸ್ತಿ ವಿಚಾರಕ್ಕೆ ಅಣ್ಣನನ್ನೇ ಭೀಕರವಾಗಿ ಕೊಂದ ತಮ್ಮ

ತಂದೆ, ಅತ್ತಿಗೆ ಮೇಲೂ ಮಾರಣಾಂತಿಕ ಹಲ್ಲೆ

ಮೈಸೂರು, ಸೆ.1(ಬಿಎಲ್‌ಯು)– ಆಸ್ತಿ ವಿಚಾರಕ್ಕೆ ತನ್ನ ಅಣ್ಣನನ್ನೇ ತಮ್ಮ ಭೀಕರವಾಗಿ ಕೊಲೆ ಮಾಡಿರುವ ಘಟನೆ ಮೈಸೂರಿನ ಬೋರೆ ಆನಂದೂರಿನಲ್ಲಿ ಸಂಭವಿಸಿದೆ.

ಮೈಸೂರು ತಾಲೂಕು ಬೋರೆ ಆನಂದೂರಿನ ಕೃಷ್ಣೇಗೌಡರ ಪುತ್ರ ಮಹೇಶ್ (33) ಕೊಲೆಯಾದ ದುರ್ದೈವಿಯಾಗಿದ್ದಾನೆ. ಹೆಚ್ಚಿನ ಆಸ್ತಿ ತನಗೆ ಬರಬೇಕೆಂದು ಕೃಷ್ಣೇಗೌಡರ ಕಿರಿಯ ಪುತ್ರ ರವಿ ಗಲಾಟೆ ಮಾಡುತ್ತಿದ್ದ. ಆಗಾಗ ಹಿರಿಯರು ಮಧ್ಯ ಪ್ರವೇಶಿಸಿ ರಾಜೀ ಸಂಧಾನ ಮಾಡುತ್ತಿದ್ದರು. ಇಂದು ಮಧ್ಯಾಹ್ನ ಸುಮಾರು 12 ಗಂಟೆಯಲ್ಲಿ ಮನೆಯಲ್ಲಿದ್ದ ತಂದೆ ಕೃಷ್ಣೇಗೌಡರ ಜೊತೆ ಜಗಳ ತೆಗೆದ ರವಿ ಅವರ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿದ್ದಾನೆ. ನಂತರ ಜಮೀನಿನ ಪಂಪ್‌ಸೆಟ್ ಮನೆಯಲ್ಲಿದ್ದ ಅಣ್ಣ ಮಹೇಶ್ ಬಳಿ ಹೋಗಿದ್ದಾನೆ



ಮಹೇಶ್



ರವಿ

ಆಸ್ತಿ ಹಂಚಿಕೆ ಸಂಬಂಧ ಇಬ್ಬರ ನಡುವೆ ಗಲಾಟೆ ನಡೆದಿದೆ. ಈ ವೇಳೆ ಅಣ್ಣ ಮಹೇಶ್ ಮೇಲೆ ಮಚ್ಚಿನಿಂದ ಹಲ್ಲೆ ನಡೆಸಿ ನೆತ್ತರು ಹರಿಸಿದ್ದಾನೆ. ಕೊನೆಗೆ ಮಹೇಶ್ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಪತಿ ಮೇಲೆ ನಡೆಯುತ್ತಿದ್ದ ಹಲ್ಲೆಯನ್ನು ತಡೆಯಲು ಹೋದ ಮಹೇಶ್ ಪತ್ನಿ ಲಕ್ಷ್ಮಿ ಮೇಲೂ ರವಿ ಮಚ್ಚಿನಿಂದ ಹಲ್ಲೆ ಮಾಡಿ ಅಲ್ಲಿಂದ ಪರಾರಿಯಾಗಿದ್ದಾನೆ. ಗಾಯಗೊಂಡಿರುವ ಲಕ್ಷ್ಮಿ ಹಾಗೂ ಕೃಷ್ಣೇಗೌಡರನ್ನು ಕೆ.ಆರ್. ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಸಂಬಂಧ ಇಲವಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿ ಪತ್ತೆಗೆ ಶೋಧ ಕಾರ್ಯ ನಡೆಸಿದ್ದಾರೆ.

ಬೈಕ್ ಬಿಟ್ಟು ಪರಾರಿಯಾದ ಸರಗಳ್ಳ!

ಮೈಸೂರು: ಮಹಿಳೆಯ ಸರ ಕದಿಯಲು ಯತ್ನಿಸಿದ ಖದೀಮನೊಬ್ಬ ಸುತ್ತುವರಿದ ಜನರಿಂದ ಭೀತಿಗೊಂಡು ಬೈಕ್ ಬಿಟ್ಟು ಪರಾರಿಯಾಗಿದ್ದಾನೆ.

ಸೋಮವಾರ ರಾತ್ರಿ ಮೈಸೂರು ಕುವೆಂಪುನಗರದ ಅನಿಕೇತನ ರಸ್ತೆಯ ಕುವೆಂಪು ಪ್ರತಿಮೆ ಬಳಿ ನಡೆದುಕೊಂಡು ಹೋಗುತ್ತಿದ್ದ ಮಹಿಳೆಯ ಸರ ಕಳವಿಗೆ ಬೈಕ್ ಸವಾರ ಯತ್ನಿಸಿದ್ದಾನೆ. ಈ ವೇಳೆ ಮಹಿಳೆ ಸರವನ್ನು ಬಿಗಿಯಾಗಿ ಹಿಡಿದಿದ್ದರಿಂದ ಅವನ ಪ್ರಯತ್ನ ಫಲ ನೀಡಿಲ್ಲ. ಅಷ್ಟರಲ್ಲಿ ಇದನ್ನು ಕಂಡ ಜನ ಸುತ್ತುವರಿದಿದ್ದಾರೆ. ಇನ್ನೇನು ಸಿಕ್ಕಿಬೀಳುವ ಭಯದಿಂದ ಬೈಕ್ ಬಿಟ್ಟು ಸರಗಳ್ಳ ಪೇರಿಕಿತ್ತಿದ್ದಾನೆ. ವಿಷಯ ತಿಳಿದು ಸ್ಥಳಕ್ಕೆ ಬಂದ ಪೊಲೀಸರು ಬೈಕ್ ವಶಪಡಿಸಿಕೊಂಡು ಸರಗಳ್ಳನನ್ನ ಶೀಘ್ರವೇ ಬಂಧಿಸುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಶಾಸಕ ಜಿ.ಟಿ.ದೇವೇಗೌಡರಿಗೆ ಸನ್ಮಾನ...




ಮೈಸೂರಿನ ಸರ್ದಾರ್ ವಲ್ಲಭಬಾಯ್‌ಪಟೇಲ್ ನಗರದಲ್ಲಿ ಎಸ್‌ವಿಪಿ ಗೆಳೆಯರ ಬಳಗದಿಂದ ಹಮ್ಮಿಕೊಂಡಿದ್ದ ಗಣೇಶೋತ್ಸವದಲ್ಲಿ ಶಾಸಕ ಜಿ.ಟಿ.ದೇವೇಗೌಡರನ್ನು ಸನ್ಮಾನಿಸಲಾಯಿತು. ಬಳಗದ ಅಧ್ಯಕ್ಷ ಗಗನ್, ಪ್ರಧಾನ ಕಾರ್ಯದರ್ಶಿ ಪ್ರದೀಪ್, ಸಿದ್ದರಾಜು, ಮಧುಸೂದನ್, ಹರ್ಷಗೌಡ, ಅಂತರರಾಷ್ಟ್ರೀಯ ವಿಶೇಷಚೇತನ ಕ್ರೀಡಾಪಟು ಅಲೋಕ್ ಜೈನ್, ನಂಜುಂಡಸ್ವಾಮಿ, ಮಹಾನ್ ಶ್ರೇಯಸ್ ಇದ್ದರು.

ವೃದ್ಧ ನಾಪತ್ತೆ



ಶ್ರೀರಂಗಪಟ್ಟಣ: ತಾಲೂಕಿನ ಪಾಲಹಳ್ಳಿ ನಿವಾಸಿ ಆರ್.ಜೋಸೆಫ್ (73) ನಾಪತ್ತೆಯಾಗಿದ್ದಾರೆ ಎಂದು ಅವರ ಪುತ್ರ ಸಂತೋಷ್ ಜೋಷಿ ಶ್ರೀರಂಗಪಟ್ಟಣ ಟೌನ್ ಠಾಣೆಗೆ ಆ.28ರಂದು ದೂರು ಸಲ್ಲಿಸಿದ್ದಾರೆ. ತಮ್ಮ ತಂದೆ ಮರೆವಿನ ಕಾಯಿಲೆಯಿಂದ ಬಳಲುತ್ತಿದ್ದು, ಈ ಹಿಂದೆಯೂ ಮನೆ ಬಿಟ್ಟು ಹೋಗಿ ಮತ್ತೆ ವಾಪಸ್ಸಾಗಿದ್ದಾರೆ. ಅಂದು ಮಧ್ಯಾಹ್ನ (ಆ.28) ಮನೆ ಬಿಟ್ಟು ಹೋಗಿದ್ದು, ಈವರೆಗೂ ವಾಪಸ್ಸಾಗಿಲ್ಲ. ಅವರ ತಲೆ ಮಧ್ಯ ಭಾಗ ಶಸ್ತ್ರಚಿಕಿತ್ಸೆ ಮಾಡಿದ ಗುರುತು ಇದೆ ಎಂದು ತಿಳಿಸಿದ್ದಾರೆ. ಇವರ ಬಗ್ಗೆ ಮಾಹಿತಿ ಸಿಕ್ಕರೆ ಶ್ರೀರಂಗಪಟ್ಟಣ ಟೌನ್ ಠಾಣೆ ಮೊಬೈಲ್ ಸಂಖ್ಯೆ 9480804855 ಅನ್ನು ಸಂಪರ್ಕಿಸಬಹುದು ಎಂದು ಪೊಲೀಸ್ ಪ್ರಕಟಣೆ ತಿಳಿಸಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

02.09.2025 ಮಂಗಳವಾರ, ಮಳೆ ನಕ್ಷತ್ರ: ಪುಬ್ಬ 31.08.2025 ರಿಂದ 13.09.2025 ವಿಶ್ವವಸು ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಭಾದ್ರಪದ ಮಾಸ, ಶುಕ್ಲ ಪಕ್ಷ, ತಿಥಿ: ದಶಮಿ, ನಕ್ಷತ್ರ: ಮೂಲ, ರಾಹುಕಾಲ: ಮಧ್ಯಾಹ್ನ 3 ರಿಂದ 4.30 ರವರೆಗೆ

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಕಣ್ಣಿನ ಸೋಂಕು ಮತ್ತು ಕಣ್ಣಿನಲ್ಲಿ ಮಾಂಸ ಬೆಳವಣಿಗೆ ಶಿಬಿರ– ಕಣ್ಣು ಕೆಂಪಾಗುವುದು, ಕಣ್ಣಿನಲ್ಲಿ ಏನೋ ಇರುವ ಅನುಭವ, ಕಣ್ಣಿನಿಂದ ಸೋರುವುದು, ಕಣ್ಣು ತುರಿಸುವುದು, ಶುಷ್ಕ ನೇತ್ರ, ಆಭರಣ ಮತ್ತು ಸೌಂದರ್ಯವರ್ಧಕಗಳಿಂದ ಆಗಿರುವ ಚರ್ಮದ ಅಲರ್ಜಿ ಮತ್ತು ಚರ್ಮಕ್ಕೆ ಸಂಬಂಧಪಟ್ಟ ಕಾಯಿಲೆಗೆ ಚಿಕಿತ್ಸೆ, ಯುವಕರ ಮಾನಸಿಕ ಆರೋಗ್ಯ ಜಾಗೃತಿ, ಗರ್ಭ ಸಂಸ್ಕಾರ ಕುರಿತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10ರಿಂದ.

■ **ರಾಮಸನ್ಸ್ ಬೊಂಬೆ ಮನೆ:** ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ.

■ **ಎಸ್‌ಪಿವಿಜಿಎಂಸಿ ಟ್ರಸ್ಟ್ :** 64ನೇ ಪಾರಂಪರಿಕ ಸಂಗೀತೋತ್ಸವ, ಸಂಜೆ 5.30 ರಿಂದ ಗಮಕ ವಾಚನ ಕಾರ್ಯಕ್ರಮ, ಕಾವ್ಯ : ಕೌಶಿಕ ರಾಮಾಯಣ–ಭರತ ಪಾದುಕೆ, ವಾಚನ : ವಿದ್ವಾನ್ ಡಾ. ಮಂಜುನಾಥ, ವ್ಯಾಖ್ಯಾನ : ವಿದ್ವಾನ್ ಡಾ. ರಾಮಶೇಷನ್, ಸಂಜೆ 6.45ಕ್ಕೆ ವಿದ್ವಾನ್ ವಿಠ್ಠಲ್ ರಾಮಮೂರ್ತಿ ಮತ್ತು ವಿದುಷಿ ಪದ್ಮಶಂಕರ್ ಅವರಿಂದ ದ್ವಂದ್ವ ಪಿಟೀಲು ವಾದನ, ವಿದ್ವಾನ್ ಬೆಂಗಳೂರು ಪ್ರವೀಣ್–ಮೃದಂಗ, ವಿದ್ವಾನ್ ಭಾರದ್ವಾಜ್ ಆರ್. ಸಾತವಲ್ಲಿ–ಮೋರ್ಚಿಂಗ್, ಸ್ಥಳ: 8ನೇ ಕ್ರಾಸ್, ವಿವಿ ಮೊಹಲ್ಲಾ.

■ **ಸಾವರ್ಕರ್ ಪ್ರತಿಷ್ಠಾನ :** ಸಾವರ್ಕರ್ ಕಲ್ಪನೆಯ ಭಾರತೀಯ ಸೇನೆ ಮತ್ತು ಆಪರೇಷನ್ ಸಿಂಧೂರ್, ಮುಖ್ಯ ಭಾಷಣ: ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್, ಮುಖ್ಯ ಅತಿಥಿಗಳು : ಆದಿತ್ಯ ಅಧಿಕಾರಿ ಆಸ್ಪತ್ರೆಯ ಡಾ. ಚಂದ್ರಶೇಖರ್, ಅಧ್ಯಕ್ಷತೆ : ಸಾವರ್ಕರ್ ಪ್ರತಿಷ್ಠಾನ ಅಧ್ಯಕ್ಷ ಡಾ. ಎಸ್. ಯಶಸ್ವಿನಿ, ಸ್ಥಳ: ಕರ್ನಾಟಕ ಕಲಾಮಂದಿರ, ಸಂಜೆ 5.30ಕ್ಕೆ.

■ **ನನ್ನವ್ವ ಸಾಂಸ್ಕೃತಿಕ ಕಲಾ ತಂಡ :** ಮಯೂರ ವರ್ಮ ಪ್ರಶಸ್ತಿ ಪ್ರದಾನ, ಡಾ. ಸರ್ವಪಲ್ಲಿ ರಾಧಾಕೃಷ್ಣನ್ ರಾಜ್ಯ ಮಟ್ಟದ ಶಿಕ್ಷಕ ರತ್ನ ಪ್ರಶಸ್ತಿ ಪ್ರದಾನ ಮತ್ತು ಕವಿಗೋಷ್ಠಿ ಕಾರ್ಯಕ್ರಮ, ಉದ್ಘಾಟನೆ : ಶಾಸಕ ಕೆ. ಹರೀಶ್‌ಗೌಡ, ಅಧ್ಯಕ್ಷತೆ : ರಂಗಕರ್ಮಿ ಡಾ. ರಾಜಶೇಖರ ಕದಂಬ, ಆಕಾಶವಾಣಿ ನಿವೃತ್ತ ಕಾರ್ಯಕ್ರಮಾಧಿಕಾರಿ ಎನ್.ವಿ. ರಮೇಶ್ ಅವರಿಂದ ರಾಷ್ಟ್ರಾಭಿವೃದ್ಧಿಗೆ ಶಿಕ್ಷಕರ ಪಾತ್ರ ಕುರಿತು ಉಪನ್ಯಾಸ, ಪ್ರಶಸ್ತಿ ಪ್ರದಾನ : ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಟಿ. ಜವರೇಗೌಡ, ಕವಿಗೋಷ್ಠಿ ಅಧ್ಯಕ್ಷತೆ: ರಾಷ್ಟ್ರ ಪ್ರಶಸ್ತಿ ಪುರಸ್ಕೃತ ವಿಶ್ರಾಂತ ಶಿಕ್ಷಕ ಡಾ. ನ.ಗಂಗಾಧರಪ್ಪ, ನಾಲ್ವಡಿ ಕೃಷ್ಣರಾಜ ಒಡೆಯರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ : ವಕೀಲರ ಸಂಘದ ಮಾಜಿ ಕಾರ್ಯದರ್ಶಿ ಎಸ್.ಉಮೇಶ್, ಮಯೂರ ವರ್ಮ ಪ್ರಶಸ್ತಿ ಪುರಸ್ಕೃತರು : ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸುಗಮ ಸಂಗೀತ ಪರಿಷತ್ ಅಧ್ಯಕ್ಷ ಡಾ. ನಾಗರಾಜು ವಿ. ಭೈರಿ, ಸ್ಥಳ: ನಮನ ಕಲಾ ಮಂಟಪ, ಅಶೋಕ ವೃತ್ತ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ.ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ನಿತಿನ್ ರಾಜಾರಾಂ ಶಾಸ್ತ್ರೀ, ಸದಾಶಿವಪಾಟೀಲ್ ಹಾಗೂ ಎ. ಎಸ್. ನಾಗಲಕ್ಷ್ಮಿ, ವ್ಯಾಖ್ಯಾನ – ಡಾ.ಸಿ. ನಾಗಣ್ಣ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ:ಎಂ. ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್. ಎಸ್., 8.30 ವಿಶೇಷ ಕಾರ್ಯಕ್ರಮ ಸರಣಿ ಆಕಾಶವಾಣಿ 90–ನೆನಪುಗಳ ಹೊತ್ತು ಪದ್ಮಶ್ರೀ ಪುರಸ್ಕೃತರು, ಮೈಸೂರಿನ ಸಿಎಫ್‌ಟಿಆರ್‌ಐನ ನಿವೃತ್ತ ನಿರ್ದೇಶಕರು ಹಾಗೂ ನವದೆಹಲಿಯ ಸಿಎಸ್‌ಐಆರ್ ಇಂಡಿಯಾದ ಪ್ರತಿಷ್ಠಿತ ವಿಜ್ಞಾನಿಗಳೂ ಆದ ಡಾ. ವಿಶ್ವೇಶ್ವರಯ್ಯ ಪ್ರಕಾಶ್ ಅವರೊಂದಿಗಿನ ಮಾತುಕತೆ, ಇವರೊಂದಿಗೆ ಭಾಗವಹಿಸುತ್ತಾರೆ– ಬೇದ್ರೆ ಮಂಜುನಾಥ್, 9.00 ಕರೆಗೊಂದು ಗೀತೆ– ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಆರ್. ಕೆ. ಸೂರ್ಯನಾರಾಯಣ್ –ವೀಣಾವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹೊಂಗಿರಣ ವಿಕಸಿತ ಹಾದಿಗೊಂದು ಸೋಪಾನ, ಪ್ರಸ್ತುತಿ–ಎಸ್. ಲಕ್ಷ್ಮೀನಾರಾಯಣ, ಆರ್. ಲೋಕೇಶ್ವರಿ ಹಾಗೂ ಬಿ.ಜಿ. ಕವಿತಾ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಕನ್ನಡದಲ್ಲಿ ಭಾಷಣ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಎ.ಕೆ.ಸಿ. ನಟರಾಜನ್–ಕ್ಲ್ಯಾರಿಯೋನೆಟ್ ವಾದನ, 4.00 ಕಥಾಕಾಲಕ್ಷೇಪ–ಶಬರಿ ಶಂಕರಲೀಲೆ, ಪ್ರಸ್ತುತಿ–ಸಂತ ಶ್ರೀ ಭದ್ರಗಿರಿ ಅಚ್ಯುತ ದಾಸರು, 5.00 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ – ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಮತ್ಸ ತರಂಗ–ಮೀನು ಸಾಕಾಣಿಕೆ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ, ತಿಲಾಪಿಯಾ ಮೀನುಮರಿ ಉತ್ಪಾದನೆ ಹಾಗೂ ಪಾಲನೆ ಈ ಕುರಿತು ಹುಣಸೂರು ತಾಲೂಕು ಕರಿಮುದ್ದನಹಳ್ಳಿಯ ತಿಲಾಪಿಯಾ ಮೀನುಮರಿ ಉತ್ಪಾದನಾ ಕೇಂದ್ರದ ಸಹಾಯಕ ನಿರ್ದೇಶಕರಾದ ಎಲ್. ಯೋಗೀಶ್ ಅವರೊಂದಿಗೆ ಸಂದರ್ಶನ. ಸಂದರ್ಶಕರು –ಎನ್.ಕೇಶವಮೂರ್ತಿ, 7.45 ಮೈಸೂರು ಜಂಕ್ಷನ್–ಸಾಪ್ತಾಹಿಕ ಸಂಚಿಕೆ. ಪ್ರಸ್ತುತಿ–ಬಿ.ದಿಗ್ವಿಜಯ್, 8.00 ನಾಟಕ – ಮಾಯಾಮೃಗ, ನಿರ್ಮಾಣ–ಉಮೇಶ್ ಎಸ್.ಎಸ್., 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ಕೋವಿಲಾಡಿ ಆರ್.ಕಲಾ–ಹಾಡುಗಾರಿಕೆ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ–ಡಾ.ಎ.ಎಸ್.ಶಂಕರನಾರಾಯಣ, 10.30 ಸವಿನೆನಪು

■ **ಮೈಸೂರು ನಗರ ಮತ್ತು ಜಿಲ್ಲಾ ಕಾಂಗ್ರೆಸ್ ಸಮಿತಿ :** ಪ್ರಚಾರ ಸಮಿತಿ ಪದಾಧಿಕಾರಿಗಳ ಸಭೆ, ಪದಗ್ರಹಣ, ಉಪಸ್ಥಿತರು : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಕೆಪಿಸಿಸಿ ವಿನಯ್ ಕುಮಾರ್ ಸೊರಕೆ, ಸ್ಥಳ: ಕಾಂಗ್ರೆಸ್ ಭವನ, ಬೆಳಗ್ಗೆ 11.30ಕ್ಕೆ.

ಸುತ್ತೂರಿನಲ್ಲಿಂದು, ನಂಜನಗೂಡು ತಾ.

■ **ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀ ಕ್ಷೇತ್ರ :** ಶ್ರೀ ವೀರಭದ್ರಸ್ವಾಮಿ ಜಯಂತ್ಯೋತ್ಸವ, ಸ್ಥಳ: ಶ್ರೀ ವೀರಭದ್ರಸ್ವಾಮಿ ದೇವಸ್ಥಾನ (ಗುಡ್ಡ) ಹಾಗೂ ಶ್ರೀ ಮಠದ ಆವರಣದಲ್ಲಿರುವ ಶ್ರೀ ವೀರಭದ್ರಸ್ವಾಮಿ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಜಯಂತ್ಯುತ್ಸವ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 2 ಮಂಗಳವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 136 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮೈಸೂರಿನ ಆಯಿಷ್ ದೇಶದ ಹೆಮ್ಮೆ

●ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಶಂಸೆ ●ಆಯಿಷ್ ವಜ್ರ ಮಹೋತ್ಸವ ಅಂಗವಾಗಿ ಲಾಂಛನ, ಅಂಚೆ ಲಕೋಟೆ ಬಿಡುಗಡೆ



ಮೈಸೂರಿನ ಆಯಿಷ್ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಸಂಸ್ಥೆಯ ವಜ್ರ ಮಹೋತ್ಸವ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ವಜ್ರ ಮಹೋತ್ಸವ ಪ್ರಯುಕ್ತ ಹೊರತಂದಿರುವ ಅಂಚೆ ಲಕೋಟೆ ಬಿಡುಗಡೆ ಮಾಡಿದರು. ಚಿತ್ರದಲ್ಲಿ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಆರೋಗ್ಯ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಸಂಸದ ಯದುವೀರ್ ಒಡೆಯರ್, ಆಯಿಷ್ ಸಂಸ್ಥೆ ನಿರ್ದೇಶಕಿ ಡಾ.ಎಂ.ಪುಷ್ಪಾವತಿ ಅವರನ್ನು ಕಾಣಬಹುದು.

ಮೈಸೂರು,ಸೆ.1(ಪಿಎಂ)–ವಾಕ್ ಮತ್ತು ಶ್ರವಣ ದೋಷ ತಡೆಗಟ್ಟುವಿಕೆಗೆ ಪರಿಣಾಮಕಾರಿ ಚಿಕಿತ್ಸೆಯಲ್ಲಿ ರಾಷ್ಟ್ರದ ಮಹತ್ತರ ಸಂಸ್ಥೆಯಾಗಿ ಆಯಿಷ್ (ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ) ಕಾರ್ಯ ನಿರ್ವಹಿಸುತ್ತಿದೆ. ಅಂತೆಯೇ ಆವಿಷ್ಕಾರ ಕಾರ್ಯ ಹಾಗೂ ಸಹಾನುಭೂತಿಯ ಸೇವೆಯನ್ನು ಆಯಿಷ್ ಹೀಗೆ ಮುಂದುವರೆಸಲಿ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಆಶಯ ವ್ಯಕ್ತಪಡಿಸಿದರು.

ಮೈಸೂರಿನ ಅಖಿಲ ಭಾರತ ವಾಕ್–ಶ್ರವಣ ಸಂಸ್ಥೆಯ ನೈಮಿಷಂ ಆವರಣದ ನಾಲೆಡ್ಜ್ ಪಾರ್ಕ್‌ನ ಸೆಮಿನಾರ್ ಹಾಲ್‌ನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸಂಸ್ಥೆಯ (ಆಯಿಷ್‌ನ) ವಜ್ರ ಮಹೋತ್ಸವ (60 ವರ್ಷ) ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು, ವಜ್ರ ಮಹೋತ್ಸವದ ಲಾಂಛನ ಹಾಗೂ ಅಂಚೆ ಲಕೋಟೆ ಬಿಡುಗಡೆಗೊಳಿಸಿ ಅವರು ಮಾತ ನಾಡಿದರು. 'ನಮಸ್ಕಾರ ಕರ್ನಾಟಕ' ಎಂದು ಇಡೀ ರಾಜ್ಯದ ಜನತೆಗೆ ಗೌರವ ಸೂಚಿಸಿದ ಅವರು, ಬಳಿಕ ಸುಮಾರು 10 ನಿಮಿಷಗಳ ಕಾಲ ಹಿಂದಿ ಭಾಷೆಯಲ್ಲಿ ಭಾಷಣ ಮಾಡಿದರು. ವಾಕ್ ಮತ್ತು ಶ್ರವಣ ದೋಷ ನಿವಾ ರಣೆಯಲ್ಲಿ ರಾಷ್ಟ್ರೀಯ ಕಾರ್ಯಕ್ರಮದ ನೋಡಲ್ ಕೇಂದ್ರವಾಗಿ ಆಯಿಷ್ ಮಹತ್ತರವಾದ ಜವಾಬ್ದಾರಿ ನಿರ್ವಹಿಸುತ್ತಿದೆ ಎಂದು ಅವರು ಶ್ಲಾಘಿಸಿದರು.

ವಾಕ್ ಮತ್ತು ಶ್ರವಣ ಸಮಸ್ಯೆ ಸಂಬಂಧ ಚಿಕಿತ್ಸೆ, ಶಿಕ್ಷಣ, ವೈದ್ಯಕೀಯ ಮತ್ತು ಸಂಶೋಧನೆ ಕಾರ್ಯದಲ್ಲಿ ಅನನ್ಯ ಸೇವೆಯನ್ನು ಆಯಿಷ್ ಸಲ್ಲಿಸುತ್ತಿದ್ದು, ಮೈಸೂರಿನ ಆಯಿಷ್ ಸಂಸ್ಥೆಯು ಇಡೀ ದೇಶದ ಹೆಮ್ಮೆ. ಇದೊಂದು ಐತಿಹಾಸಿಕ ಸಂದರ್ಭ. 1965ರಲ್ಲಿ ಪ್ರಾರಂಭವಾದ ಈ ಸಂಸ್ಥೆಯು ಕಳೆದ 6 ದಶಕಗಳಲ್ಲಿ ▶ 6ನೇ ಪುಟಕ್ಕೆ

“ ಆವಿಷ್ಕಾರದಲ್ಲಿ ಆಯಿಷ್ ಪ್ರಮುಖ ಪಾತ್ರ ವಹಿಸಲಿ

ಇಂದಿನ ತಂತ್ರಜ್ಞಾನ ಯುಗದಲ್ಲಿ ವಾಕ್ ಮತ್ತು ಶ್ರವಣ ತೊಂದರೆಗಳನ್ನು ನಿವಾರಿಸಲು ಅತ್ಯಾಧುನಿಕ ತಂತ್ರಜ್ಞಾನ ಬಹಳ ಮುಖ್ಯ. ಇವುಗಳ ಬಳಕೆಯಿಂದ ಸಾಮಾನ್ಯ ಜನರು ಶ್ರವಣ ಸಹಾಯಕ ಸಾಧನಗಳು ಮತ್ತು ಸಾಧನೋಪಕರಣಗಳನ್ನು ಸುಲಭವಾಗಿ ಪಡೆಯ ಬಹುದು. ಕಾಕ್ಲಿಯರ್ ಇಂಪ್ಲಾಂಟ್‌ನಂತಹ ಸಾಧನ ಗಳು ಈಗ ಲಭ್ಯವಾಗುತ್ತಿವೆ. ಇಂತಹ ಸಾಧನಗಳ ತಯಾರಿಕೆಯಲ್ಲಿ ಸ್ವಾವಲಂಬಿ ಆಗಲು ಆಯಿಷ್ ನಂತಹ ಸಂಸ್ಥೆಗಳು ಪ್ರಮುಖ ಪಾತ್ರ ವಹಿಸಬೇಕು. ಸಂಶೋಧನೆ, ಆವಿಷ್ಕಾರಗಳ ಮೂಲಕ ದೇಶವನ್ನು ಆತ್ಮನಿರ್ಭರವಾಗಿಸಲು ಸಹಕಾರಿಯಾಗಬೇಕು.

–ದ್ರೌಪದಿ ಮುರ್ಮು, ರಾಷ್ಟ್ರಪತಿಗಳು.

ವರುಣ ಕ್ಷೇತ್ರದಲ್ಲಿ ಆಯಿಷ್ ಸಂಸ್ಥೆಗೆ 10 ಎಕರೆ ಭೂಮಿ

ಇನ್ನೂ ಅಗತ್ಯ ಸಹಕಾರ ನೀಡಲು ಸಿದ್ಧ; ಸಿಎಂ ಸಿದ್ದರಾಮಯ್ಯ

ಮೈಸೂರು,ಸೆ.1(ಪಿಎಂ)–ಅಖಿಲ ಭಾರತ ವಾಕ್–ಶ್ರವಣ ಸಂಸ್ಥೆಗೆ (ಆಯಿಷ್) ವರುಣ ಕ್ಷೇತ್ರದಲ್ಲಿ 10 ಎಕರೆ ಭೂಮಿಯನ್ನು ರಾಜ್ಯ ಸರ್ಕಾರದಿಂದ ಕಲ್ಪಿಸಲಾಗಿದೆ. ಸದರಿ ಸಂಸ್ಥೆಗೆ ಸಾಧ್ಯವಾಗುವ ಎಲ್ಲಾ ಸಹಕಾರವನ್ನು ನಮ್ಮ ಸರ್ಕಾರ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಮೈಸೂರಿನ ಅಖಿಲ ಭಾರತ ವಾಕ್–ಶ್ರವಣ ಸಂಸ್ಥೆಯ ನೈಮಿಷಂ ಆವರಣದ ನಾಲೆಡ್ಜ್ ಪಾರ್ಕ್‌ನ ಸೆಮಿನಾರ್ ಹಾಲ್‌ನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸಂಸ್ಥೆಯ ವಜ್ರ ಮಹೋತ್ಸವ ಸಮಾರಂಭದಲ್ಲಿ ಮಾತನಾಡಿದರು. ಕನ್ನಡದಲ್ಲೇ ಭಾಷಣ ಮಾಡಿದ ಅವರು, ಮೊದಲಿಗೆ ಮೈಸೂರು ▶ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಹೆಂಡತಿ ಬೆಳ್ಳಗೆ ಇರೋಳು ಸಿಗಬಹುದು
ತೆಳ್ಳಗೆ ಇರೋಳು ಸಿಗಬಹುದು
ಕಪ್ಪಗೆ ಇರೋಳು ಸಿಗಬಹುದು
ದಪ್ಪಗೆ ಇರೋಳು ಸಿಗಬಹುದು
ಆದರೆ ತೆಪ್ಪಗೆ ಇರೋಳು ಸಿಗೋದು ಅಸಾಧ್ಯ..!!

ಮೈಸೂರು ಮಿತ್ರ

ಮಂಗಳವಾರ, 2 ಸೆಪ್ಟೆಂಬರ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ......

ವ್ಯಾಯಾಮ ಕೇವಲ ದೇಹವನ್ನೇ ಬದಲಿಸುವುದಿಲ್ಲ. ಅದು ನಮ್ಮ ಮನಸ್ಸು, ವರ್ತನೆ ಮತ್ತು ಮನೋಸ್ಥಿತಿಯನ್ನು ಬದಲಿಸುತ್ತದೆ.

– ಅನಾಮಿಕ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ವಿದ್ಯೆಗೆ ವಿನಯವೇ ಭೂಷಣ

ನಿಮ್ಮ ಪತ್ರಗಳು

ದಸರಾ ಹಬ್ಬವು ಧರ್ಮಾತೀತ ಹೇಗಾಗುತ್ತದೆ?

ಮಾನ್ಯರೆ,

ದಸರಾ ಹಬ್ಬವು ವಿಶ್ವಮಾನ್ಯತೆಯನ್ನು ಪಡೆದಿರುವ ಹಬ್ಬವೆಂಬುದು ಎಲ್ಲರಿಗೂ ತಿಳಿದಿರುವ ವಿಚಾರ. ಕೆಲವು ಸಮಾಜವಾದಿ ಹಿನ್ನೆಲೆಯವರು 'ದಸರಾ ಹಬ್ಬವನ್ನು' ಆಚರಿಸಿದರೂ ಈ ಹಬ್ಬವು ನಿಷ್ಠಾವಂತರು ಆಚರಿಸುವ ಹಿಂದೂ ಹಬ್ಬವೇ ಆಗಿದೆ ಎಂಬ ವಿಷಯವು ಪ್ರಶ್ನಾತೀತವಾಗಿದೆ. ಆದರೆ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಈ ವಿಷಯದಲ್ಲಿಯೂ ರಾಜಕೀಯ ಮಾಡುತ್ತಿರುವುದು ಎಷ್ಟು ಸರಿ ಎಂಬುದು ಜನಸಾಮಾನ್ಯನ ಪ್ರಶ್ನೆಯಾಗಿದೆ. ಅವರು 'ದಸರಾ ಹಬ್ಬ'ವು ನಮ್ಮ ಸಾಂಸ್ಕೃತಿಕ ಹಬ್ಬವಾಗಿದೆ ಎಂದು ಅಪ್ಪಣೆ ಕೊಟ್ಟಿದ್ದಾರೆ. ಆದರೆ ದಸರಾ ಹಬ್ಬವು ಸಾಂಸ್ಕೃತಿಕ ಹಬ್ಬ ಹೇಗಾಗುತ್ತದೆ. ಅದು ಕೇವಲ ಹಿಂದೂಗಳ ನಿಷ್ಠೆಯ ಹಬ್ಬವಾಗಿದೆ. ವರ್ಷಪೂರ್ತಿ ನಮ್ಮ ದೇಶದ ನಾನಾ ಭಾಗಗಳಿಂದ ಶ್ರೀಮಾತಾ ಚಾಮುಂಡೇಶ್ವರಿ, ಮಹಿಷಾಸುರ ಮರ್ಧಿನಿಯ ದರ್ಶನವನ್ನು ಪಡೆಯಲು ಮೈಸೂರಿಗೆ ಆಗಮಿಸಿ ಬೆಟ್ಟಕ್ಕೆ ಬಂದು ದೇವಿಯ ದರ್ಶನವನ್ನು ಪಡೆದು ಪುನೀತರಾಗುತ್ತಾರೆ. ಪರದೇಶದವರೂ ಇಲ್ಲಿಗೆ ಆಗಮಿಸಿದಾಗ ತಮ್ಮ ಹಣೆಗೆ ದೇವಿಯ ಪ್ರಸಾದ ಕುಂಕುಮವನ್ನು ಹಣೆಯಲ್ಲಿ ಧರಿಸಿ ಸಂಭ್ರಮಿಸುತ್ತಾರೆ.


ಹೀಗಿರುವಲ್ಲಿ ಶ್ರೀಮತಿ ಬಾನು ಮುಷ್ತಾಕ್ ಅವರು ತಮ್ಮ ಹಣೆಯಲ್ಲಿ ಕುಂಕುಮವನ್ನು ಇಟ್ಟುಕೊಂಡು ದಸರಾ ಹಬ್ಬದ ಪ್ರತೀಕವಾದ ಜಂಬೂಸವಾರಿಯಲ್ಲಿ ವಿರಾಜಮಾನವಾಗಿರುವ ಮಹಿಷಾಸುರ ಮರ್ಧಿನಿ, ಚಾಮುಂಡೇಶ್ವರಿಯನ್ನು ಪೂಜಿಸಿದರೆ ಯಾರ ಅಭ್ಯಂತರವೂ ಇರುವುದಿಲ್ಲ. ಇದಕ್ಕೆ ಬಾನು ಮುಷ್ತಾಕ್ ತಯಾರಿದ್ದಾರೆಯೇ? ತಯಾರಿದ್ದರೆ ಸರಿ. ಇಲ್ಲದಿದ್ದರೆ ಖಂಡಿತಾ ಅವರು ದಸರಾ ಹಬ್ಬ ಉದ್ಘಾಟನೆಯನ್ನು ಮಾಡಬಾರದು ಎಂಬುದು ಜನತೆಯ ಆಶಯ, ಅಭಿಪ್ರಾಯವಾಗಿದೆ. ಇದಕ್ಕೆ ವ್ಯತಿರಿಕ್ತವಾಗಿ ನಡೆದರೆ ನಾಡಿಗೆ ಏನಾದರೂ ಕೇಡುಂಟಾದರೆ ಅದಕ್ಕೆ ಯಾರು ಹೊಣೆ? ಇದರ ಹೊಣೆಯನ್ನು ಸಿದ್ದರಾಮಯ್ಯನವರಾಗಲೀ, ಅವರ ಮಂತ್ರಿಮಂಡಲದ ಸದಸ್ಯರು ಯಾರಾದರೂ ವಹಿಸಿಕೊಳ್ಳಲು ತಯಾರಿದ್ದಾರೆಯೇ?

ಈ ಹಿಂದೆ ಅನೇಕ ಸಾಹಿತಿಗಳೂ, ವಿಚಾರವಾದಿಗಳೂ ದಸರಾ ಹಬ್ಬದ ಉದ್ಘಾಟನೆಯನ್ನು ಮಾಡಿ, ಜಂಬೂಸವಾರಿಯ ಮೇಲೆ ಇರುವ ಶ್ರೀಚಾಮುಂಡೇಶ್ವರಿಯ ಪೂಜೆ ಮಾಡಿರುವುದನ್ನು ಜನತೆಯು ವೀಕ್ಷಿಸಿದ್ದಾರೆ. ಅವರು ಯಾರೂ ಶ್ರೀ ಚಾಮುಂಡೇಶ್ವರಿಯ ಮೇಲೆ ನಂಬಿಕೆಯನ್ನು ಕುರಿತು ಮಾತನ್ನಾಡಿರುವುದಿಲ್ಲ. ಅವರುಗಳಿಗೆ ಇಲ್ಲದ ಸ್ವಜಾತಿ ಮೋಹವು ಈಗ ಬಾನು ಮುಷ್ತಾಕ್ ಅವರಿಗೆ ಏಕೆ? ಸಿದ್ದರಾಮಯ್ಯನವರು ಹೇಳಿರುವಂತೆ ಎಲ್ಲಾ ಧರ್ಮದವರೂ ದಸರಾ ಹಬ್ಬವನ್ನು ಆಚರಿಸುವುದಿಲ್ಲ ಎಂಬುದು ಎಲ್ಲರಿಗೂ ತಿಳಿದ ವಿಷಯ.

–ಬೇಲೂರು ದ.ಶಂ. ಪ್ರಕಾಶ್, ಮೈಸೂರು.

ಅರಮನೆ ಬಳಿ ಬಾಯ್ತೆರೆದಿರುವ ಅಪಾಯಕಾರಿ ಗುಂಡಿ !!

ಮಾನ್ಯರೇ,



ಮೈಸೂರಿನ ಸಿಟಿ ಬಸ್ ನಿಲ್ದಾಣದ ಬಳಿ ಇರುವ ಜಿಲ್ಲಾ ಹಾಪ್‌ಕಾಮ್ಸ್‌ನಿಂದ ಅರಮನೆ ಕಡೆಗೆ ಹೋಗುವ ಪಾದಚಾರಿ ಮಾರ್ಗದ ಮಳೆ ನೀರು ಚರಂಡಿಯ ಚಪ್ಪಡಿ ಕಲ್ಲುಗಳು ಮುರಿದು ಬಾಯ್ತೆರೆದುಕೊಂಡಿವೆ. ಇದು ತುಂಬಾ ಅಪಾಯಕಾರಿ. ಏಕೆಂದರೆ ಈ ರಸ್ತೆಯಲ್ಲಿ ದಿನನಿತ್ಯ ಸಾವಿರಾರು ಸಾರ್ವಜನಿಕರು ಓಡಾಡುತ್ತಾರೆ. ರಾತ್ರಿಯ ವೇಳೆಯಂತೂ ಈ ಗುಂಡಿಗಳು ಇರುವುದು ಕಾಣಿಸದೇ ಆಯತಪ್ಪಿ ಬೀಳುವ ಸಾಧ್ಯತೆ ಹೆಚ್ಚಾಗಿದೆ. ಇನ್ನೇನು ದಸರಾ ವೈಭವದ ಕ್ಷಣಗಣನೆ ಶುರುವಾಗಿದೆ. ಜನಪ್ರತಿನಿಧಿಗಳಿಗೆ ಇದರ ಅರಿವೇ ಇಲ್ಲ. ಏನಾದರೂ ಹೆಚ್ಚು ಕಡಿಮೆಯಾದರೆ ತೀವ್ರ ಅಸ್ವಸ್ಥರಾಗುವ ಸಾಧ್ಯತೆ ಇದೆ. ಇದಲ್ಲದೇ ಈ ಸ್ಥಳದಲ್ಲಿ ದಸರಾ ಜಂಬೂಸವಾರಿಯನ್ನು ಸಾರ್ವಜನಿಕರು ವೀಕ್ಷಿಸಲು ಆಸನಗಳನ್ನು ಅಳವಡಿಸಲಾಗುತ್ತದೆ. ಆದುದರಿಂದ ಜನಪ್ರತಿನಿಧಿಗಳು ಈ ಗುಂಡಿಗಳನ್ನು ಆದಷ್ಟು ಬೇಗ ಮುಚ್ಚಿಸುವ ಕೆಲಸ ಮಾಡಬೇಕಿದೆ. ಇದರ ಜೊತೆಗೆ ನಗರದಲ್ಲಿ ಎಲ್ಲೆಲ್ಲಿ ಇಂತಹ ಗುಂಡಿಗಳು ಬಿದ್ದಿವೆಯೋ ಅವುಗಳನ್ನೆಲ್ಲಾ ಮುಚ್ಚುವ ಕೆಲಸಕ್ಕೆ ಮೊದಲ ಆದ್ಯತೆ ಕೊಡಬೇಕು.

– ಜಿ.ಪಿ.ಹರೀಶ್, ವಿ.ವಿ.ಮೊಹಲ್ಲಾ, ಮೈಸೂರು

ನಿರುದ್ಯೋಗಿಗಳ ನೋವಿಗೆ ಸರ್ಕಾರ ಸ್ಪಂದಿಸಲಿ

ಮಾನ್ಯರೆ,

ರಾಜ್ಯದಲ್ಲಿ ಲಕ್ಷಾಂತರ ಸರ್ಕಾರಿ ಹುದ್ದೆಗಳು ಖಾಲಿ ಇವೆ. ಈ ಹುದ್ದೆಗಳನ್ನು ಭರ್ತಿ ಮಾಡುವ ಜವಾಬ್ದಾರಿ, ಕಾಳಜಿ ಯಾವ ಸರ್ಕಾರಕ್ಕೂ ಇಲ್ಲ. ಖಾಲಿ ಹುದ್ದೆಗಳಿಗೆ ಹೊರಗುತ್ತಿಗೆಯಡಿ ನೇಮಿಸಿಕೊಳ್ಳಲಾಗುತ್ತಿದೆ. ಇದರಿಂದ ಸರ್ಕಾರಿ ನೌಕರಿ ಬಯಸಿ ಕಾದು ಕುಳಿತಿರುವ ಯುವಜನರ ಬವಣೆ ಹೇಳತೀರದಾಗಿದೆ. ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮಸ್ಯೆಯೂ ಬಗೆಹರಿದಿದೆ. ಮತ್ತೊಂದೆಡೆ ಪರೀಕ್ಷೆಗೆ ಸಿದ್ಧರಾಗಿ ಉದ್ಯೋಗಕ್ಕಾಗಿ ಕಾದು ಕುಳಿತ ಯುವಜನರ ವಯಸ್ಸು ಮೀರುತ್ತಿದೆ. ಹಾಗಾಗಿ, ಸರ್ಕಾರ ಖಾಲಿ ಹುದ್ದೆಗಳ ಭರ್ತಿಗೆ ತ್ವರಿತವಾಗಿ ಅಧಿಸೂಚನೆ ಪ್ರಕಟಿಸಬೇಕಿದೆ. ಜೊತೆಗೆ ಹುದ್ದೆಗಳ ಭರ್ತಿಯಲ್ಲಿ ಅನಗತ್ಯ ವಿಳಂಬ ಮಾಡಬಾರದು. ಕಾಲಮಿತಿಯೊಳಗೆ ಪಾರದರ್ಶಕತೆ ಕಾಯ್ದುಕೊಂಡು ಭರ್ತಿ ಮಾಡಬೇಕಿದೆ.

–ಸಿದ್ದಲಿಂಗೇಗೌಡ, ಹೈರಿಗೆ ಗ್ರಾಮ, ಹೆಚ್.ಡಿ. ಕೋಟೆ ತಾ.



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಚಿಂತನೆ

ನಾನು ಅನ್ನುವುದು ಕೇವಲ ನಿಮಿತ್ತ !



ಮನುಷ್ಯನ ಬಹುದೊಡ್ಡ ದೌರ್ಬಲ್ಯವೆಂದರೆ ಸ್ವಯಂಪ್ರಶಂಸೆ. ತಮ್ಮನ್ನು ತಾವೇ ಹೊಗಳಿಕೊಂಡು ಮಾತನಾಡುವುದು ಒಂದು ರೀತಿಯ ದೌರ್ಬಲ್ಯವೇ ಹೌದು. ತನ್ನನ್ನು ಇತರರು ಗುರುತಿಸಬೇಕು, ನನ್ನನ್ನು ಹೊಗಳಬೇಕು ಎಂದು ಮನಸ್ಸು ಬಯಸುತ್ತದೆ. ಅನೇಕ ವೇಳೆ ನಾವು ಮಾತನಾಡುವಾಗ ಆ ಕೆಲಸ ಮಾಡಲು ನಾನು ಇಲ್ಲದೆ ಇದ್ದಿದ್ದರೆ ಸಾಧ್ಯವೇ ಆಗುತ್ತಿರಲಿಲ್ಲ ಎಂದು ಕೊಚ್ಚಿಕೊಳ್ಳುತ್ತೇವೆ. ಅದು ನನ್ನ ಬುದ್ಧಿವಂತಿಕೆಯಿಂದ, ನನ್ನ ಧೈರ್ಯದಿಂದಲೇ ಆಗಿದ್ದು ಎಂದು ಹೇಳಿ ಬೀಗುತ್ತೇವೆ.

ಇತ್ತೀಚೆಗೆ ಪರಿಚಯವಾದ ಒಬ್ಬರೊಡನೆ ಸ್ವಲ್ಪಕಾಲ ಕಳೆಯಬೇಕಾಯಿತು. ಅವರು ವಾಚಾಳಿ. ಆರಂಭದ ಮಾತಿನ ನಂತರ ತಮ್ಮ ಸಾಧನೆಗಳ ಬಗ್ಗೆಯೇ ಅತೀ ಹೇಳಿಕೊಂಡರು. ಅವರ ಸ್ವಭಾವ ಇತರರ ಮಾತು ಆಲಿಸುವುದು ಆಗಿರಲಿಲ್ಲ. ಅವರಿಗೆ ತಮ್ಮ ಬಗ್ಗೆ, ತಮ್ಮ ಹೆಚ್ಚುಗಾರಿಕೆಯ ಬಗ್ಗೆಯೇ ಹೇಳಿಕೊಳ್ಳುವ ಮನಸ್ಥಿತಿ. ಹೀಗೆ ಪರಿಚಯವಾದವರ ಸ್ನೇಹ ಬಹುಕಾಲ ಉಳಿಯುತ್ತದೆಯೇ ಎಂಬುದು ಸಂದೇಹ. ಏಕೆಂದರೆ ಅವರಿಗೆ ಇತರರ ಮಾತು, ಅವರ ಸ್ವಭಾವ, ಮಾಡಿರಬಹುದಾದ ಸಾಧನೆಗಳನ್ನು ತಿಳಿದುಕೊಳ್ಳುವುದಕ್ಕಿಂತ ತಮ್ಮ ಬಗ್ಗೆಯೇ ಹೇಳಿಕೊಳ್ಳುವ ಅತೀ ಉತ್ಸಾಹ. ತಾವು ಮಾಡಿದ್ದೆಲ್ಲಾ ಸಾಧನೆಯೇ ಎಂಬಂತೆ ಬಿಂಬಿಸಿಕೊಳ್ಳುವ ಮನಸ್ಥಿತಿ ಅವರದ್ದು. ಮಾತುಕತೆ ಎಂದಾದಾಗ ನಾವು ಆಡುವವರ ಮಾತಿಗೂ ಕಿವಿಯಾಗಬೇಕು. ನನ್ನ ಎದುರಿಗೆ ಕುಳಿತವರು ನನಗಿಂತ ತಿಳಿದವರು, ಸಾಧಕರೂ ಆಗಿರಬಹುದು. ಅವರು ಸೌಜನ್ಯಕ್ಕಾಗಿ ಕೆಲ ಹೊತ್ತು ನಮ್ಮ ಮಾತು ಕೇಳಬಹುದು. ಆದರೆ ಸ್ವಯಂ ಹೊಗಳಿಕೆಯನ್ನು ಹೆಚ್ಚು ಕಾಲ ಯಾರಿಗೂ ಸಹಿಸಲಾಗದು. ಕೆಲವರು ತಾವು ಮಾಡಿದ ಸಾಧನೆ ಅಂತಹ ದೊಡ್ಡದೇನಲ್ಲಾ ಎಂದು ಭಾವಿಸಿ, ತಮ್ಮ ಬಗ್ಗೆ ತಾವು ಏನೂ ಹೇಳಿಕೊಳ್ಳುವುದಿಲ್ಲ. ಹಾಗೆಂದು ಅಂತಹವರೊಡನೆ ಮಾತಿಗೆ ಕುಳಿತಾಗ ನಮ್ಮ ಅಲ್ಪ ಸಾಧನೆಯನ್ನೇ ದೊಡ್ಡ ಸಾಧನೆ ಎಂದು ಬಣ್ಣಿಸಿ ಮಾತನಾಡುವಾಗ ಅವರು ಏನೆಂದುಕೊಂಡಾರು? ಎಂಬುದರ ಬಗ್ಗೆಯೂ ಯೋಚಿಸಬೇಕಾಗುತ್ತದೆ.

ಹೌದು, ನಾವು ಸಾಧಕರಿರಬಹುದು. ಆದರೆ ಅಂತಹುದನ್ನೇ ಇನ್ನಿತರರೂ ಸಾಧಿಸಿಲ್ಲ ಎಂದು ಭಾವಿಸುವುದು ತಪ್ಪಾಗುತ್ತದೆ. ಕೆಲವು ಸಲ ನಾವು ಮಾತನಾಡುವಾಗ, ಕೆಲವು ಕೆಲಸ ನನ್ನಿಂದ ಮಾತ್ರ ಸಾಧ್ಯ ಎಂಬಂತೆ ಮಾತನಾಡುತ್ತೇವೆ. ಆದರೆ ಅಂತಹ ಕೆಲಸ ಮಾಡಿದವರು ಹಲವರಿರಬಹುದು ಎಂಬುದನ್ನು ಮರೆಯಬಾರದು. ಯಾವುದೇ ವ್ಯಕ್ತಿ ಅನಿವಾರ್ಯತೆಗಳಿಗೆ ಸಿಲುಕಿದಾಗ ಮಹಾನ್ ಕೆಲಸಗಳನ್ನು ಮಾಡಬೇಕಾಗುತ್ತದೆ ಹಾಗೂ ಮಾಡಿರುತ್ತಾರೆ ಸಹ. ಅದು ಆ ಸಮಯಕ್ಕೆ ಮಾಡಲೇಬೇಕಾದ ಅನಿವಾರ್ಯ ಕರ್ತವ್ಯ ಎನ್ನಿಸುತ್ತದೆ. ಹಾಗೆ ಮಾಡಿದ್ದನ್ನು ಇತರರು ಗುರುತಿಸಿ ನಮ್ಮ ಬಗ್ಗೆ ಮಾತನಾಡಬೇಕು ಎಂದು ಬಯಸುವುದು ಸರಿಯಾದುದಲ್ಲ. ಹಾಗೆ ಯಾರೂ ತಮ್ಮ ಬಗ್ಗೆ ಮಾತನಾಡದಿದ್ದಾಗ ನಮ್ಮನ್ನೇ ನಾವು ಬಣ್ಣಿಸಿಕೊಳ್ಳಲು ಹೋಗಿ ಅಪಹಾಸ್ಯಕ್ಕೆ ಗುರಿಯಾಗಬೇಕಾಗುತ್ತದೆ.

ಕೆಲವರು ಎಂದೋ ಮಾಡಿದಂತಹ ಕೆಲಸವನ್ನೇ ಹೆಚ್ಚುಗಾರಿಕೆ ಎಂಬಂತೆ ಹೇಳಿಕೊಳ್ಳುತ್ತಾರೆ. ಇದಕ್ಕೆ ಜಂಬಕೊಚ್ಚಿಕೊಳ್ಳುವುದು ಎಂದು ಹೇಳಲಾಗುತ್ತದೆ. ನೀರಿನಲ್ಲಿ ಮುಳುಗುತ್ತಿದ್ದವರನ್ನು ಬದುಕಿಸುವುದು, ಬೆಂಕಿ ಬಿದ್ದಾಗ ಹೋಗಿ ಸಹಾಯ ಮಾಡುವುದು, ಅಪಘಾತಗಳಾದಾಗ ಗಾಯಾಳುವಿಗೆ ನೆರವಾಗುವುದು ಒಂದು ರೀತಿ ಮಾನವೀಯತೆ ಎನ್ನಿಸಿಕೊಳ್ಳುವುದೇ ವಿನಃ ಸಾಧನೆ ಎನ್ನಿಸಿಕೊಳ್ಳುವುದಿಲ್ಲ. ಅಂತಹ ಸಂದರ್ಭಗಳಲ್ಲಿ ತನ್ನ ಪ್ರಾಣವನ್ನೂ ಲೆಕ್ಕಿಸದೆ ರಕ್ಷಣೆಗೆ ಧಾವಿಸಿದರೆ ಅದು ಸಾಧನೆ ಎನ್ನಿಸಿಕೊಳ್ಳುತ್ತದೆ. ಆದರೂ ಅಂತಹ ಕೆಲಸವನ್ನು ಇತರರು ಗುರುತಿಸಿ ನಮ್ಮ ಬಗ್ಗೆ ಮಾತನಾಡಬೇಕೇ ವಿನಃ ನಾವೇ ಹೇಳಿಕೊಂಡು, ನಾನೆಷ್ಟು ದೊಡ್ಡವನು ಎಂದು ಬೀಗುವುದು ಹಾಸ್ಯಾಸ್ಪದ ಎನ್ನಿಸಿಕೊಳ್ಳುತ್ತದೆ.

ಅನೇಕ ವೇಳೆ ನಾವು ನಮ್ಮ ಕರ್ತವ್ಯವನ್ನೇ ದೊಡ್ಡದಾಗಿ ಹೇಳಿಕೊಳ್ಳುವುದು ಮಾಡುತ್ತೇವೆ. ನಾನಾಗಿದ್ದುದರಿಂದ ಈ ಸಂಸಾರವನ್ನು ನಿಭಾಯಿಸಿದೆ ಎಂದು ಹೇಳುತ್ತೇವೆ. ನಾನಾಗಿದ್ದುದರಿಂದ ಈ ಪರೀಕ್ಷೆ ಪಾಸು ಮಾಡಿದೆ ಎಂದೂ ಹೇಳುತ್ತೇವೆ. ಆದರೆ ಇಂತಹ ಕಾರ್ಯವನ್ನು ಇತರರೂ ಮಾಡಿರುತ್ತಾರೆ. ನಮಗಿಂತ ಕಷ್ಟದಲ್ಲಿಯೂ ಸ್ವಾಭಿಮಾನದಿಂದ ಸಂಸಾರ ನಡೆಸಿದವರು, ನಮಗಿಂತ ಉತ್ತಮ ಶ್ರೇಣಿಯಲ್ಲಿ ಪರೀಕ್ಷೆ ಪಾಸು ಮಾಡಿದವರೂ ಇರುತ್ತಾರೆ. ಆದರೆ ನಾವು ನಮ್ಮದೇ ದೊಡ್ಡದು ಎಂದು ಬಡಾಯಿಕೊಚ್ಚಿಕೊಳ್ಳುತ್ತೇವೆ. ನನ್ನಿಂದ ನನ್ನ ಸಂಸಾರ, ನನ್ನ ಮಡದಿ ಮಕ್ಕಳು ಸುಖವಾಗಿದ್ದಾರೆ ಎಂದಾಗ ಅದು ಕರ್ತವ್ಯ ಆಗುವುದೇ ವಿನಃ ಅದೇನು ಹೆಚ್ಚುಗಾರಿಕೆ ಎನ್ನಿಸುವುದಿಲ್ಲ.

> ಕೆಲವರು ಎಂದೋ ಮಾಡಿದಂತಹ ಕೆಲಸವನ್ನೇ ಹೆಚ್ಚುಗಾರಿಕೆ ಎಂಬಂತೆ ಹೇಳಿಕೊಳ್ಳುತ್ತಾರೆ. ಇದಕ್ಕೆ ಜಂಬಕೊಚ್ಚಿಕೊಳ್ಳುವುದು ಎಂದು ಹೇಳಲಾಗುತ್ತದೆ. ನೀರಿನಲ್ಲಿ ಮುಳುಗುತ್ತಿದ್ದವರನ್ನು ಬದುಕಿಸುವುದು, ಬೆಂಕಿ ಬಿದ್ದಾಗ ಹೋಗಿ ಸಹಾಯ ಮಾಡುವುದು, ಅಪಘಾತಗಳಾದಾಗ ಗಾಯಾಳುವಿಗೆ ನೆರವಾಗುವುದು ಒಂದು ರೀತಿ ಮಾನವೀಯತೆ ಎನ್ನಿಸಿಕೊಳ್ಳುವುದೇ ವಿನಃ ಸಾಧನೆ ಎನಿಸಿಕೊಳ್ಳುವುದಿಲ್ಲ. ಅಂತಹ ಸಂದರ್ಭಗಳಲ್ಲಿ ತನ್ನ ಪ್ರಾಣವನ್ನೂ ಲೆಕ್ಕಿಸದೆ ರಕ್ಷಣೆಗೆ ಧಾವಿಸಿದರೆ ಅದು ಸಾಧನೆ ಎನಿಸಿಕೊಳ್ಳುತ್ತದೆ. ಆದರೂ ಅಂತಹ ಕೆಲಸವನ್ನು ಇತರರು ಗುರುತಿಸಿ ನಮ್ಮ ಬಗ್ಗೆ ಮಾತನಾಡಬೇಕೇ ವಿನಃ ನಾವೇ ಹೇಳಿಕೊಂಡು, ನಾನೆಷ್ಟು ದೊಡ್ಡವನು ಎಂದು ಬೀಗುವುದು ಹಾಸ್ಯಾಸ್ಪದ ಎನ್ನಿಸಿಕೊಳ್ಳುತ್ತದೆ.

ರಾಮಾಯಣದಲ್ಲಿ ಹನುಮಂತನ ಬಗ್ಗೆ ಮಾತನಾಡುವಾಗ ಇಂತಹ ಅನೇಕ ಸಂದರ್ಭಗಳು ಕಂಡುಬರುತ್ತವೆ. ಆದರೆ ತಾನು ಮಹಾ ಪವಾಡ ಸದೃಶ್ಯ ಕೆಲಸಗಳನ್ನು ಮಾಡಿದ್ದರೂ ಹನುಮಂತ ಅದೆಲ್ಲ ಅದಾಗೇ ಆಯಿತು, ನನ್ನದೇನೂ ದೊಡ್ಡಸ್ತಿಕೆ ಇಲ್ಲ ಎಂದೇ ಭಾವಿಸುತ್ತಾನೆ. ಲಂಕೆಗೆ ಹಾರುವ ಬಗ್ಗೆ ಎಲ್ಲರೂ ತಮ್ಮ ಶಕ್ತಿಯನ್ನು ಹೇಳಿಕೊಳ್ಳುತ್ತಿದ್ದರೆ, ಅವರೆಲ್ಲರಿಗಿಂತಲೂ ಶಕ್ತಿವಂತನಾದ, ಬಹುದೂರ ಹಾರಬಲ್ಲ ಶಕ್ತಿ ಇದ್ದ ಹನುಮಂತ ಏನನ್ನೂ ಹೇಳದೇ ಸುಮ್ಮನೆ ಇರುತ್ತಾನೆ. ನಂತರ ಅವನಿಗೆ ನಿನ್ನ ಶಕ್ತಿ ಇಷ್ಟು ಎಂದು ಹುರಿದುಂಬಿಸಿ ಸಮುದ್ರ ಹಾರಲು ಪ್ರೇರೇಪಿಸಲಾಗುತ್ತದೆ. ಇಂತಹ ಹಲವು ಘಟನೆಗಳು ರಾಮಾಯಣದಲ್ಲಿ ಹನುಮಂತನ ಬಗ್ಗೆ ಸಿಗುತ್ತದೆ. ಹನುಮಂತ ಲಂಕೆ ತಲುಪಿದ ನಂತರ ಅಶೋಕ ವನದಲ್ಲಿ ಸೀತೆಯನ್ನು ಕಾಣುತ್ತಾನೆ. ಅವನು ಅಶೋಕವನದಲ್ಲಿ ಇದ್ದಾಗಲೇ ರಾವಣ ಬಂದು ಸೀತೆಯ ಮೇಲೆ ಕೋಪಗೊಂಡು ಅವಳನ್ನು ಕೊಲ್ಲಲು ಕತ್ತಿ ಸರಿಸುತ್ತಾನೆ. ಆಗ ಹನುಮಂತನಿಗೆ ರಾವಣನನ್ನು ಕೊಲ್ಲಬೇಕೆನಿಸುತ್ತದೆ. ಆದರೆ ಹಾಗೆ ಮಾಡದೇ ತಾಳ್ಮೆಯಿಂದ ಸಹಿಸಿಕೊಂಡು, ಎಲ್ಲವನ್ನೂ ಗಮನಿಸುತ್ತಿರುವಾಗಲೇ, ರಾವಣನ ಮಡದಿ ಮಂಡೋದರಿ ರಾವಣನ ಕೈಹಿಡಿದು ತಡೆಯುತ್ತಾಳೆ. ಆಗ ಹನುಮಂತನಿಗೆ ಅನ್ನಿಸುತ್ತದೆ, ಇಲ್ಲಿ ನಾನಿಲ್ಲದಿದ್ದರೆ ಸೀತೆಯನ್ನು ಯಾರು ಕಾಪಾಡುತ್ತಾರೆ ಎಂದುಕೊಂಡಿದ್ದೆ ಆದರೆ ಮಂಡೋದರಿ, ಸೀತೆಯನ್ನು ಕಾಪಾಡಿದ್ದಾಳೆ. ಅಂದರೆ ನಾನಿಲ್ಲದಿದ್ದರೂ ಬೇರೊಂದು ಶಕ್ತಿ ನೆರವಿಗೆ ನಿಲ್ಲುತ್ತದೆ ಎಂಬುದನ್ನು ಹನುಮಂತ ಕಂಡುಕೊಳ್ಳುತ್ತಾನೆ. ನಾನೇ ಎಲ್ಲ ಎಂಬುದೇನಿಲ್ಲ, ನಾನಿಲ್ಲದಿದ್ದರೂ ನಾವು ಮಾಡಬೇಕೆಂದುಕೊಂಡ ಕೆಲಸವನ್ನು ಮತ್ತೊಂದು ಶಕ್ತಿ ಮಾಡುತ್ತದೆ ಎಂಬುದನ್ನು ನಾವು ಮನವರಿಕೆ ಮಾಡಿಕೊಳ್ಳಬೇಕು. ನಮ್ಮನ್ನು ನಾವು ಹೊಗಳಿಕೊಳ್ಳಲು ನಾನಾಗಿದ್ದಿದ್ದರೆ ಎಂದು ಹೇಳಿಕೊಳ್ಳುತ್ತೇವೆ ಅಷ್ಟೇ. ಆ ಸಮಯದಲ್ಲಿ ಹನುಮಂತ ಯೋಚಿಸಿದ್ದು, ನಾನಿಲ್ಲಿ ಇಲ್ಲದಿದ್ದರೆ ಸೀತಾಮಾತೆಯನ್ನು ಯಾರು ರಕ್ಷಿಸುತ್ತಾರೆ ಎಂದು. ಆದರೆ ಭಗವಂತನು ಆ ಕೆಲಸವನ್ನು ಮಂಡೋದರಿಯಿಂದ ಮಾಡಿಸಿದ ಎಂದು. ಯಾರಿಂದ ಯಾವ ಕೆಲಸ ಆಗಬೇಕೋ ಅದನ್ನು ಅಂತಹವರಿಂದ ಭಗವಂತ ನೆರವೇರಿಸುತ್ತಾನೆ ಎಂದು ಅವನಿಗೆ ಅರಿವಾಗುತ್ತದೆ.


ಈ ಮಾತಿಗೆ ಅದೇ ಕಥಾ ಸರಣಿಯಲ್ಲಿ ನಮಗೆ ಮತ್ತಷ್ಟು ಪುಷ್ಟಿ ಕೊಡುವ ಸಂಗತಿಗಳು ಕಂಡುಬರುತ್ತವೆ. ಸೀತೆಯ ಕಾವಲು ಕಾಯುತ್ತಿದ್ದ ತ್ರಿಜಟಾ ಎನ್ನುವವಳು ಹನುಮಂತನನ್ನು ಕುರಿತು 'ನಾನು, ನಿನ್ನೆಯೇ ನೀನು ಲಂಕೆಗೆ ಬಂದು, ಲಂಕೆಯನ್ನು ಸುಡುತ್ತಿರುವಂತೆ ಕನಸು ಕಂಡೆ' ಎಂದು ಹೇಳುತ್ತಾಳೆ. ಇದು ಹನುಮಂತನಿಗೆ ಆಶ್ಚರ್ಯ ತರುತ್ತದೆ. ಏಕೆಂದರೆ ರಾಮ ತನಗೆ ತಿಳಿಸಿದ್ದು ಸೀತೆಯನ್ನು ನೋಡಿಬರಲು ಮಾತ್ರ ಆದರೆ ಲಂಕೆಯನ್ನು ಸುಡುವಂತೆ ಹೇಳಿರಲಿಲ್ಲ. ಆದರೆ ತ್ರಿಜಟೆ ಹೇಳುತ್ತಿದ್ದಾಳೆ ನೀನು ಲಂಕೆಯನ್ನು ಸುಡುತ್ತಿರುವಂತೆ ನಾನು ಕನಸನ್ನು ಕಂಡೆ ಎಂದು. ಆಗ ಭಗವಂತನ ಇಚ್ಛೆಯಂತೆಯೇ ಎಲ್ಲವೂ ಆಗುತ್ತದೆ ಎಂದು ಹನುಮಂತ ಭಾವಿಸಿದ. ಲಂಕಾ ದಹನದ ಬಗ್ಗೆ ಅವನು ಯೋಚಿಸಿಯೇ ಇರಲಿಲ್ಲ. ಅಷ್ಟರಲ್ಲಿ ರಾವಣನ ಕಡೆಯವರು ಅವನನ್ನು ಹಿಡಿಯಲು ಅಲ್ಲಿಗೆ ಬರುತ್ತಾರೆ. ಆಗ ಹನುಮಂತ ಏನಾಗುತ್ತದೋ ನೋಡೋಣ ಎಂದು ಯಾವ ಪ್ರತಿರೋಧವನ್ನೂ ತೋರುವುದಿಲ್ಲ. ರಾವಣನ ಕಡೆಯವರು, ಹನುಮಂತನನ್ನು ಸೆರೆ ಹಿಡಿದು ರಾವಣನ ಮುಂದೆ ನಿಲ್ಲಿಸುತ್ತಾರೆ. ರಾವಣ ಕೋಪದಿಂದ ಹನುಮಂತನ ಕೊಲ್ಲಲು ಯೋಚಿಸುತ್ತಾನೆ. ಆಗ ಹನುಮಂತನಿಗೆ ಈಗ ತನ್ನನ್ನು ರಕ್ಷಿಸುವವರು ಯಾರು ಎಂಬ ಪ್ರಶ್ನೆ ಮೂಡುತ್ತದೆ. ಆಗ ಸಹಾಯಕ್ಕೆ ಬಂದವನು ವಿಭೀಷಣ. ಅವನು ದೂತನನ್ನು ಕೊಲ್ಲುವುದು ಸರಿಯಲ್ಲ ಎಂದು ರಾವಣನಿಗೆ ಬುದ್ಧಿ ಹೇಳುತ್ತಾನೆ. ಆಶ್ಚರ್ಯ ಎಂದರೆ ಅದಕ್ಕೆ ರಾವಣ ಸಮ್ಮತಿಸುತ್ತಾನೆ. ಆಗ ಹನುಮಂತನಿಗೆ ಅನಿಸಿದ್ದು ಭಗವಂತ ನನಗೆ ವಿಭೀಷಣನ ರೂಪದಲ್ಲಿ ಸಹಾಯ ಮಾಡಿದ ಎನ್ನುವುದು. ಇಲ್ಲದಿದ್ದರೆ ಯಾರೂ ಪರಿಚಯವೇ ಇರದ ಆ ಜಾಗದಲ್ಲಿ ಅವನನ್ನು ರಕ್ಷಿಸಲು ಯಾರೂ ಇರಲಿಲ್ಲ. ಅಲ್ಲದೆ ಹನುಮಂತನಿಗೆ ಯಾವ ರೀತಿಯ ಶಿಕ್ಷೆ ಕೊಡಬೇಕು ಎಂಬ ಬಗ್ಗೆ ವಿಭೀಷಣನೇ ರಾವಣನಿಗೆ ಹೇಳುತ್ತಾನೆ: ಕೋತಿಗಳಿಗೆ ಅವುಗಳ ಬಾಲದ ಬಗ್ಗೆ ಹೆಚ್ಚು ಪ್ರೀತಿ ಇರುತ್ತದೆ. ಆದ್ದರಿಂದ ಹನುಮಂತನ ಬಾಲಕ್ಕೆ ಬೆಂಕಿ ಹಚ್ಚಬಹುದು ಎಂದಾಗ, ಅದಕ್ಕೆ ರಾವಣ ಕೂಡ ಒಪ್ಪುತ್ತಾನೆ. ಹಾಗೆ ತನ್ನ ಬಾಲಕ್ಕೆ ಹಚ್ಚಿದ ಬೆಂಕಿಯಿಂದ ಹನುಮಂತ ಲಂಕೆಗೇ ಬೆಂಕಿ ಹಚ್ಚುತ್ತಾನೆ. ಆಗ ಹನುಮಂತನಿಗೆ ಅನ್ನಿಸುತ್ತದೆ, ತ್ರಿಜಟೆ ಕನಸು ಕಂಡಂತೆ ನಾನು ಲಂಕೆಗೆ ಬೆಂಕಿ ಹಚ್ಚಬೇಕಾಗಿದ್ದರೆ ಎಷ್ಟೊಂದು ತಯಾರಿ ಮಾಡಿಕೊಳ್ಳಬೇಕಿತ್ತು. ಅದನ್ನು ಈ ಅಪರಿಚಿತ ಜಾಗದಲ್ಲಿ ಎಲ್ಲಿಂದ ಹೊಂದಿಸುವುದು? ಆದರೆ ಈಗ ತಾನಾಗೇ ಆ ಕೆಲಸವಾಗುತ್ತಿದೆ. ರಾವಣನೇ ಸ್ವತಃ ಆ ವ್ಯವಸ್ಥೆಗಳನ್ನು ಮಾಡುತ್ತಾನೆ. ಹನುಮಂತ ಲಂಕೆಯನ್ನು ದಹಿಸುತ್ತಾನೆ. ಆದರೆ ಎಲ್ಲೂ ನಾನೇ ಬೆಂಕಿ ಹಚ್ಚಿದೆ ಎಂದು ಹೇಳುವುದಿಲ್ಲ. ಆಗಲೂ ನಾನಾಗಿದ್ದುದರಿಂದ ಇದನ್ನು ಮಾಡಿದೆ ಎಂದು ಹೇಳಿಕೊಳ್ಳುವುದಿಲ್ಲ.

ಹಾಗೆಯೇ ಲಕ್ಷ್ಮಣ ಮೂರ್ಛೆ ಹೋದಾಗ ಇಡೀ ಸಂಜೀವಿನಿ ಪರ್ವತವನ್ನೇ ಹೊತ್ತು ತರುತ್ತಾನೆ. ಆಗಲೂ ಇದನ್ನು ನಾನು ಮಾಡಿದ್ದು, ನಾನಿಲ್ಲದಿದ್ದರೆ ಲಕ್ಷ್ಮಣ ಬದುಕುತ್ತಿರಲಿಲ್ಲ ಎಂದು ಸಹ ಎಲ್ಲೂ ಹೇಳುವುದಿಲ್ಲ.

ಇಲ್ಲೆಲ್ಲಾ ಮನವರಿಕೆ ಆಗುವುದು ಎಂದರೆ ಏನು ನಡೆಯಬೇಕೋ ಅದನ್ನು ಒಂದು ಮಹಾಶಕ್ತಿ ನೆರವೇರಿಸುತ್ತದೆ. ನಾವು ನೆಪ ಮಾತ್ರರು ಎಂಬುದು. ಅನೇಕ ಸಲ ನಾವು ಏನೋ ಮಾಡಲು ಹೋಗುತ್ತೇವೆ, ಆದರೆ ನಾವು ಎಣಿಸಿದಂತೆ ನಡೆಯುವುದಿಲ್ಲ. ಅದಕ್ಕೂ ಆ ಮಹಾಶಕ್ತಿಯೇ ಕಾರಣವಾಗಿರುತ್ತದೆ. ಮನುಷ್ಯನ ಜೀವನ ಇಂತಹ ಹೊಂದಾಣಿಕೆಗಳ ನಡುವೆಯೇ ನಡೆಯುತ್ತದೆ. ಆದರೂ ನಾವು ಎಲ್ಲವನ್ನೂ ನಾನೇ ಮಾಡಿದ್ದು, ನಾನಿಲ್ಲದಿದ್ದರೆ ಏನಾಗುತ್ತಿರಲಿಲ್ಲ ಎಂದೇ ಹೇಳಿಕೊಳ್ಳುತ್ತೇವೆ. ಯಾವುದು ನಡೆಯಬೇಕಾಗಿತ್ತೋ ಅದು ನಮ್ಮ ಮೂಲಕ ನಡೆದಿರುತ್ತದೆ ಅಷ್ಟೇ. ಅದನ್ನು ಅತಿಶಯೋಕ್ತಿಗೊಳಿಸಿ ಹೇಳಿಕೊಳ್ಳಬಾರದು. ಹಾಗೆ ಹೇಳಿಕೊಂಡಾಗ ನಾವು ದೊಡ್ಡವರೇನು ಆಗುವುದಿಲ್ಲ, ಬದಲಾಗಿ ಇನ್ನು ಸಣ್ಣವರಾಗಿ ಬಿಡುತ್ತೇವೆ.

ಲಿಂಗಾಂಬುದಿಪಾಳ್ಯದಲ್ಲಿ ನೂತನ ಅಂಗನವಾಡಿ ಕಟ್ಟಡ ಉದ್ಘಾಟನೆ

ಇದ್ದರೂ ಕೊಡುಗೆ ನೀಡಲು ಹಿಂದೆಮುಂದೆ ನೋಡುವವರ ನಡುವೆ ಮಾದರಿ ದಾನಿ ಎ.ಎನ್.ಪ್ರಕಾಶ್: ಜಿಟಿಡಿ ಪ್ರಶಂಸೆ



ಮೈಸೂರಿನ ಲಿಂಗಾಂಬುದಿಪಾಳ್ಯ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಅಂಗನವಾಡಿ ಕಟ್ಟಡವನ್ನು ಶಾಸಕ ಜಿ.ಟಿ.ದೇವೇಗೌಡರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ದಾನಿ ಎ.ಎನ್.ಪ್ರಕಾಶ್, ಶ್ರೀರಾಂಪುರ ಪಪಂ ಮುಖ್ಯಾಧಿಕಾರಿ ಹೆಚ್.ಎಂ.ಸುರೇಶ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಂ.ತಿಬ್ಬಯ್ಯ, ಇಂಜಿನಿಯರ್‌ಗಳಾದ ಶ್ರೀನಿವಾಸ್, ಶರತ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು,ಸೆ.1(ಎಂಟಿವೈ)– ಮಕ್ಕಳಿಗೆ ಶಿಕ್ಷಣದೊಂದಿಗೆ ಸಂಸ್ಕಾರ ಕಲಿಸುವುದು ಅನಿವಾರ್ಯ ಎಂದು ಶಾಸಕ ಜಿ.ಟಿ. ದೇವೇಗೌಡರು ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ತಾಲೂಕಿನ ಲಿಂಗಾಂಬುದಿಪಾಳ್ಯ ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶ್ರೀರಾಂಪುರ ಪಟ್ಟಣ ಪಂಚಾಯಿತಿ ವತಿಯಿಂದ ಆಯೋಜಿಸಿದ್ದ ನೂತನ ಅಂಗನವಾಡಿ ಕಟ್ಟಡ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಮಕ್ಕಳು ಶಿಕ್ಷಣ ಪಡೆದು ವಿದ್ಯಾವಂತರಾಗಬೇಕು. ಪೋಷಕರು ಹೇಳಿದ ಮಾತನ್ನು ಮಕ್ಕಳು ಕೇಳುತ್ತಾರೆ. ಇಂದು ಸಂಸ್ಕಾರಯುತ ಶಿಕ್ಷಣ ಕಲಿಸಿದರೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗಲಿದೆ ಎಂದರು.

ಚಾಮುಂಡೇಶ್ವರಿ ಕ್ಷೇತ್ರ ಸೇರಿದಂತೆ ಅನೇಕ ಕಡೆಗಳಲ್ಲಿ ಶಾಲೆಗಳು, ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳ ಸಮಸ್ಯೆ ಇವೆ. ಈ ಕ್ಷೇತ್ರದಲ್ಲಿ ಸ್ವಂತ ಕಟ್ಟಡ ಇಲ್ಲದಿರುವುದನ್ನು ಗಮನಿಸಿ ಸಿಎಸ್‌ಆರ್ ನಿಧಿಯಿಂದ ಕಟ್ಟಡ ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತದೆ. ಸರ್ಕಾರಿ ಶಾಲೆಗಳಲ್ಲಿ ಕೊಠಡಿಗಳ ಕೊರತೆ ಇರುವುದನ್ನು ನೀಗಿಸಲು ಸ್ಥಳೀಯ ಕಾರ್ಖಾನೆಗಳ ಮೂಲಕ ಅನುದಾನ ಕೊಡಿಸಿ ಹೊಸ ಕಟ್ಟಡ ನಿರ್ಮಿಸಲಾಗಿದೆ. ಈಗ ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕೂ ಕೆಲವು ಸಂಸ್ಥೆಗಳೊಂದಿಗೆ ಮಾತನಾಡಿದ್ದೇನೆ ಎಂದು ಅವರು ಹೇಳಿದರು.

ಚಾಮುಂಡೇಶ್ವರಿ ಕ್ಷೇತ್ರ ದೊಡ್ಡ ಕ್ಷೇತ್ರವಾಗಿದೆ. ಹಲವಾರು ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ. ಗ್ರಾಮಕ್ಕೆ ಕುಡಿಯುವ ನೀರು, ಚರಂಡಿ, ವಿದ್ಯುತ್, ಉತ್ತಮ ರಸ್ತೆ ವ್ಯವಸ್ಥೆ ಕಲ್ಪಿಸಲಾಗಿದೆ. ಯುಜಿಡಿ ಸಮಸ್ಯೆ ಬಗ್ಗೆ ಆಗಿಂದಾಗ್ಗೆ ದೂರುಗಳು ಬರುತ್ತಿರುವುದರಿಂದ ಪರಿಗಣಿಸಲಾಗಿದೆ. ಶೀಘ್ರದಲ್ಲೇ ಯುಜಿಡಿ ಸಮಸ್ಯೆ ನಿವಾರಿಸಲಾಗುವುದು. ಇಂದು ಹಲವರಿಗೆ ಶ್ರೀಮಂತಿಕೆ ಬರುತ್ತದೆ. ಕೆಲವರಿಗೆ ದುಡ್ಡು ಕೂಡಿ ಹಾಕುವುದು ಗೊತ್ತಿರುತ್ತದೆ. ಆದರೆ, ಕೈಯಾರೆ ದಾನ ಮಾಡುವ ಮನಸ್ಸು ಬರಲ್ಲ. ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕು ಎನ್ನುವ ಮನಸ್ಸು ಬಂದರೆ ತಮ್ಮ ಕೈಲಾದಷ್ಟು ಸಹಾಯ ಮಾಡುತ್ತಾರೆ ಎನ್ನುವುದಕ್ಕೆ ಎ.ಎನ್.ಪ್ರಕಾಶ್ ಅವರೇ ಸಾಕ್ಷಿಯಾಗಿದ್ದಾರೆ ಎಂದರು.

ಕಟ್ಟಡ ನಿರ್ಮಾಣದ ದಾನಿ ಎ.ಎನ್. ಪ್ರಕಾಶ್ ಮಾತನಾಡಿ, ನಾನು ಈ ರಸ್ತೆಯಲ್ಲಿ ಓಡಾಡುವಾಗ ಅಂಗನವಾಡಿ ಕಟ್ಟಡ ಶಿಥಿಲಗೊಂಡಿರುವುದನ್ನು ಗಮನಿಸಿದೆ. ಆಗ ಹೊಸ ಕಟ್ಟಡ ನಿರ್ಮಿಸಬೇಕೆಂದು ಮನಸ್ಸು ಬಂತು. ಅದಕ್ಕಾಗಿ 10 ಲಕ್ಷ ರೂ. ವೆಚ್ಚದಲ್ಲಿ ಹೊಸ ಕಟ್ಟಡ ನಿರ್ಮಿಸಲಾಗಿದೆ. ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಟ್ಟಡದ ವಿಶೇಷ: ಹತ್ತು ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗಿರುವ ಅಂಗನವಾಡಿ ಕೇಂದ್ರ ವಿಶೇಷತೆಯಿಂದ ಕೂಡಿದೆ. ಸರ್ಕಾರದಿಂದ ನಿರ್ಮಾಣ ಮಾಡುವ ಕಟ್ಟಡಕ್ಕಿಂತ ಇದು ಭಿನ್ನವಾಗಿದೆ. ಕೇಂದ್ರದಲ್ಲಿ ಕುಡಿಯುವ ನೀರು, ಶೌಚಾಲಯ ಅಲ್ಲದೆ, ಸ್ಟೋರ್ ರೂಂ, ಮಕ್ಕಳಿಗೆ ಬೇಕಾಗುವ ಆಟೋಟ ಸಾಮಗ್ರಿಗಳನ್ನು ಹೊಂದಿಸಲಾಗಿದೆ. ದಾನಿ ಎ.ಎನ್.ಪ್ರಕಾಶ್ ಸಂಪೂರ್ಣ 10 ಲಕ್ಷ ರೂ. ವೆಚ್ಚವನ್ನು ಭರಿಸಿ ಕಟ್ಟಿಸಿಕೊಟ್ಟಿರುವುದು ವಿಶೇಷವಾಗಿದೆ.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡ ಮಂಜು ಅಂಗನವಾಡಿಯ 25 ಮಕ್ಕಳಿಗೆ ಉಚಿತವಾಗಿ ಸಮವಸ್ತ್ರ ವಿತರಿಸಿದರು. ಶ್ರೀರಾಂಪುರ ಪಪಂ ಮುಖ್ಯಾಧಿಕಾರಿ ಹೆಚ್.ಎಂ.ಸುರೇಶ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಂ.ತಿಬ್ಬಯ್ಯ, ಇಂಜಿನಿಯರ್‌ಗಳಾದ ಶ್ರೀನಿವಾಸ್, ಶರತ್ ಮತ್ತಿತರರು ಹಾಜರಿದ್ದರು.

ಆಧಾರ್ ಸೀಡಿಂಗ್ ಅಭಿಯಾನ

ಮೈಸೂರು: ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಯೋಜನೆಗಳನ್ನು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ (SSP) ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ನೇರ ನಗದು ವರ್ಗಾವಣೆ (DBT) ತಂತ್ರಾಂಶದ ಮೂಲಕ ಅರ್ಹ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ವಿದ್ಯಾರ್ಥಿವೇತನ ಪಾವತಿಸಲಾಗುತ್ತಿದ್ದು, ಪರಿಶಿಷ್ಟ ಪಂಗಡದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಉತ್ತೇಜಿಸಲು ಹಾಗೂ ಸದರಿ ಕಾರ್ಯಕ್ರಮದಡಿ ಪ್ರಯೋಜನ ಪಡೆಯಲು ಆಧಾರ್ ಸೀಡಿಂಗ್ ಮಾಡಿಸಿಕೊಳ್ಳುವಂತೆ ಆಗಸ್ಟ್ 25 ರಿಂದ ಸೆ.7 ರವರೆಗೆ ವಿಶೇಷ ಆಧಾರ್ ಸೀಡಿಂಗ್ ಅಭಿಯಾನವನ್ನು ಪ್ರಾರಂಭಿಸಲಾಗಿದೆ.

ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನವನ್ನು ನಿಗದಿತ ಸಮಯಕ್ಕೆ ಸರಿಯಾಗಿ ವಿತರಣೆಯಾಗಲು ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ವಿದ್ಯಾರ್ಥಿಗಳು www.npci.org.in ಪೋರ್ಟಲ್ ಮೂಲಕ ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಆಗಿರುವ ಕುರಿತು ಖಚಿತಪಡಿಸಿಕೊಳ್ಳಬಹುದಾಗಿದೆ. ಮಾಹಿತಿಗಾಗಿ ಯೋಜನಾ ಸಮನ್ವಯಾಧಿಕಾರಿಗಳ ಕಚೇರಿ, ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆ, ಡಾ. ಬಾಬು ಜಗಜೀವನ್ ರಾಮ್ ಭವನ ಆದಿಪಂಪ ರಸ್ತೆ, ಒಂಟಿಕೊಪ್ಪಲು ಪೂರ್ವ ಬಡಾವಣೆ, ಪಡುವಾರಹಳ್ಳಿ ಮೈಸೂರು ಇವರ ದೂ.ಸಂ:0821–2427140/ 9591122826 ಅನ್ನು ಸಂಪರ್ಕಿಸಬಹುದು ಎಂದು ಮೈಸೂರು ಜಿಲ್ಲೆಯ ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ನೌಕರರ ಪಿಎಫ್ ಹಣ ಕಚೇರಿಗೆ ಪಾವತಿಸದೇ ಗುತ್ತಿದಾರನಿಂದ ವಂಚನೆ ಆರೋಪ

ಮೈಸೂರು, ಸೆ. 1– ಮೈಸೂರು ಜಿಪಂ ಅಡಿಯಲ್ಲಿನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ವ್ಯಾಪ್ತಿಯ ತಳೂರು ಪಂಪ್‌ಹೌಸ್ ಕಾರ್ಯಾಗಾರದಲ್ಲಿ ಕೆಲಸ ಮಾಡು ತ್ತಿರುವ 22 ನೌಕರರ ಪಿಎಫ್ ಹಣ 8,83,224 ರೂ.ಗಳನ್ನು ಪಿಎಫ್ ಕಚೇರಿಗೆ ಪಾವತಿಸದೇ ಗುತ್ತಿದೆದಾರ ಪುನೀತ್ ವಂಚನೆ ಎಸಗಿದ್ದಾರೆ ಎಂದು ಕೆಎಸ್‌ಐಸಿ ಹಾಗೂ ಇತರೆ ಸಂಸ್ಥೆ ನೌಕರರುಗಳ ಸಂಘ ಆರೋಪಿಸಿದೆ.

ಮೈಸೂರು ತಾಲೂಕು ತಳೂರು ಪಂಪ್ ಹೌಸ್ ಕಾರ್ಯಾಗಾರದಲ್ಲಿ 22 ಮಂದಿ ಆಪರೇಟರ್‌ಗಳು ಮತ್ತು ವಾಲ್‌ಮೆನ್ ಹುದ್ದೆ ನೌಕರರು ಕಳೆದ 10 ವರ್ಷದಿಂದ ಕೆಲಸ ಮಾಡು ತ್ತಿದ್ದು, 2024ರ ಜುಲೈನಿಂದ 2025ರ ಜುಲೈವರೆಗಿನ ಪಿಎಫ್ ಹಣವನ್ನು ನೌಕರರ ವೇತನದಿಂದ ಕಡಿತಗೊಂಡಿರುವ ಗುತ್ತಿಗೆದಾರ ಪುನೀತ್ ಈ ಮೊತ್ತವನ್ನು ಪಿಎಫ್ ಕಚೇರಿಗೆ ಪಾವತಿಸದೇ ವಂಚನೆ ಎಸಗಿದ್ದಾರೆ.

ನೌಕರರಿಗೆ ಸಲ್ಲಬೇಕಾದ ಪಿಎಫ್ ಮೊತ್ತ 8,83,224 ರೂ.ಗಳ ಜೊತೆಗೆ ಶೇ. 8.25ರಷ್ಟು ಬಡ್ಡಿ ಸೇರಿಸಿ, ಗುತ್ತಿಗೆದಾರ ಪುನೀತ್ ಅವರಿಂದ ಪಿಎಫ್ ಕಚೇರಿಗೆ ಪಾವತಿ ಮಾಡಿಸಲು ಮೈಸೂರು ಜಿಪಂ ಸಿಇಓ ಮತ್ತು ಆರ್‌ಡಬ್ಲ್ಯೂಎಸ್‌ಡಿ ಇಲಾಖೆ ಅಭಿಯಂತರರು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

District Health and Family Welfare Society
District Programme Management Unit,
Chamarajanagar District, Chamarajanagar.

#308, 3rd Floor, District Administrative Building, Sri. B. Rachaiah Double Road, Chamarajanagar District - 571313

Email ID:rchochamarajanagar@gmail.com — ದೂರವಾಣಿ ಸಂಖ್ಯೆ : 08226-355162

15th FC/DPMU/CHN/MH/RFP/01/2025-26 — **Dated: 30-08-2025**

Request for Proposal (RFP)

To Conduct FT4, TSH & Vitamin 12 services to Pregnant Women under 15th Finance commission in Chamarajanagar District for FY 2025-2026

GOVERNMENT OF KARNATAKA
15th Finance commission

Tender No: DHFWS/2025-26/SE1673 — Date: 30.08.2025

Name of the Tender	:	FT4, TSH & Vitamin 12 Lab services to Pregnant Women under 15th Finance Commission in Chamarajanagar District
Date and time for commencement of downloading of bidding document	:	Date:30.08.2025 Time: 10:30AM
Last date and time for bid submission/ uploading of bid in E-Procurement platform	:	Date:11.09.2025 Time: 04:30PM
Date and time for opening of Technical Bids	:	Date: 12.09.2025 Time: 4.30 PM The bids will be opened online by the Authorized Officers at the appointed time
Date and time for opening of Financial Bids	:	Date: 16.09.2025 Time:4:30PM
Place of opening of bids and address for communication	:	District Health & Family Welfare Office, Chamarajanagar

Sd/- Member Secretary
District Health & Family Welfare Society,
Chamarajanagar District, Chamarajanagar.

ಸಂ:ವಾಸಸಂಇ:ಚಾನಗರ:318:2025-26

ಮೈಸೂರು ಮಿತ್ರ — ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (KSOU)

ಮುಕ್ತಗಂಗೋತ್ರಿ, ಮೈಸೂರು – 570006, ಕರ್ನಾಟಕ.

ಕಚೇರಿ ದೂರವಾಣಿ ಸಂಖ್ಯೆ: 0821-2500981, 2519941 / 43 / 48 / 52, ಸಹಾಯವಾಣಿ: 86905 44544.

ಇ-ಮೇಲ್: techsupport@ksouportal.com, ಅಂತರ್ಜಾಲ : www.ksoumysuru.ac.in

ACCREDITED WITH GRADE A+ NAAC — KARNATAKA STATE OPEN UNIVERSITY

ಪರಿಷ್ಕೃತ ಅಧಿಸೂಚನೆ ಸಂಖ್ಯೆ : ಕರಾಮುವಿ/ಪ್ರವಿ/ಎಡಿಎಂ-1/143/2025-26/1 — ದಿನಾಂಕ: 01-09-2025



ಪರಿಷ್ಕೃತ ಅಧಿಸೂಚನೆ

ವಿದ್ಯಾರ್ಥಿಗಳಿಗೆ ಸುವರ್ಣಾವಕಾಶ

ಯುಜಿಸಿ ನಿಯಮಗಳ ಪ್ರಕಾರ ಎರಡು ಶೈಕ್ಷಣಿಕ ಕಾರ್ಯಕ್ರಮಗಳನ್ನು (ಪ್ರೋಗ್ರಾಂಗಳನ್ನು) ಏಕ ಕಾಲದಲ್ಲಿ ಓದಲು ಅವಕಾಶವಿದ್ದು ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳುವುದು.

ಯುಜಿಸಿ ಮಾನ್ಯತೆ ಹೊಂದಿದ ಶಿಕ್ಷಣಕ್ರಮಗಳಿಗೆ 2025-26 ರ ಜುಲೈ ಆವೃತ್ತಿಗೆ ನೇರ ಪ್ರವೇಶಾತಿಯನ್ನು ಒಳಗೊಂಡಂತೆ ಪ್ರಥಮ ವರ್ಷದ ಒಡಿಎಲ್ ಶೈಕ್ಷಣಿಕ ಕಾರ್ಯಕ್ರಮಗಳ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸ್ನಾತಕ (ಯುಜಿ) ಶಿಕ್ಷಣ ಕಾರ್ಯಕ್ರಮಗಳು

- ಬಿ.ಎ. • ಬಿ.ಕಾಂ.
- ಬಿ.ಎಲ್‌ಐ.ಎಸ್‌ಸಿ.
- ಬಿ.ಬಿ.ಎ.
- ಬಿ.ಎಸ್.ಡಬ್ಲ್ಯೂ
- ಬಿ.ಇಡಿ (ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ)
- ಬಿ.ಎಸ್‌ಸಿ — ಜನರಲ್ – ಸಂಯೋಜನೆಗಳು (• PCM • PMCs • CBZ • CZEs • CBEs [• P-Physics • C-Chemistry • M-Mathematics • Cs-Computer Science • B-Botany • Z-Zoology • Es-Environmental Science
- ಬಿ.ಎಸ್‌ಸಿ. – ಇನ್‌ಫರ್‌ಮೇಷನ್ ಟೆಕ್ನಾಲಜಿ (ಬಿ.ಎಸ್‌ಸಿ-ಐಟಿ)
- ಬಿ.ಸಿ.ಎ. – ಬ್ಯಾಚುಲರ್ ಆಫ್ ಕಂಪ್ಯೂಟರ್ ಅಪ್ಲಿಕೇಷನ್ಸ್

ಸ್ನಾತಕೋತ್ತರ (ಪಿಜಿ) ಶಿಕ್ಷಣ ಕಾರ್ಯಕ್ರಮಗಳು:

• ಎಂ.ಎ.
• ಕನ್ನಡ • ಇಂಗ್ಲಿಷ್ • ಸಂಸ್ಕೃತ • ಉರ್ದು • ಹಿಂದಿ • ತೆಲುಗು • ಶಿಕ್ಷಣ • ಇತಿಹಾಸ • ರಾಜ್ಯಶಾಸ್ತ್ರ • ಅರ್ಥಶಾಸ್ತ್ರ • ಸಾರ್ವಜನಿಕ ಆಡಳಿತ • ಸಮಾಜಶಾಸ್ತ್ರ • ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ • ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ

• ಎಂ.ಎಸ್.ಡಬ್ಲ್ಯೂ

• ಎಂ.ಬಿ.ಎ. – ಆನ್‌ಲೈನ್ ಪ್ರವೇಶ ಪರೀಕ್ಷೆ ಮೂಲಕ
ಸ್ಪೆಷಲೈಜೇಷನ್:
• ಫೈನಾನ್ಸ್ • ಮಾರ್ಕೆಟಿಂಗ್ • ಹೆಚ್‌ಆರ್ • ಆಪರೇಷನ್ಸ್ • ಟೂರಿಸಂ • ಕಾರ್ಪೋರೇಟ್ ಲಾ • ಇನ್‌ಫರ್‌ಮೇಷನ್ ಟೆಕ್ನಾಲಜಿ • ಆಸ್ಪತ್ರೆ ಮತ್ತು ಆರೋಗ್ಯ ರಕ್ಷಣೆ ನಿರ್ವಹಣೆ.

• ಎಂ.ಕಾಂ.
ಡ್ಯುಯೆಲ್ ಸ್ಪೆಷಲೈಜೇಷನ್:
• ಅಕೌಂಟಿಂಗ್ ಮತ್ತು ಫೈನಾನ್ಸ್/ಹೆಚ್‌ಆರ್‌ಎಂ • ಮಾರ್ಕೆಟಿಂಗ್ ಮ್ಯಾನೇಜ್‌ಮೆಂಟ್ ಮತ್ತು ಹೆಚ್‌ಆರ್‌ಎಂ/ಫೈನಾನ್ಸ್

• ಎಂ.ಸಿ.ಎ.

• ಎಂ.ಎಲ್‌ಐ.ಎಸ್‌ಸಿ.

• ಎಂ.ಎಸ್‌ಸಿ.
• ಭೌತಶಾಸ್ತ್ರ • ರಸಾಯನ ಶಾಸ್ತ್ರ • ಗಣಿತ ಶಾಸ್ತ್ರ • ಪರಿಸರ ವಿಜ್ಞಾನ • ಭೂಗೋಳ ಶಾಸ್ತ್ರ • ಸಸ್ಯಶಾಸ್ತ್ರ • ಪ್ರಾಣಿಶಾಸ್ತ್ರ • ಮಾಹಿತಿ ತಂತ್ರಜ್ಞಾನ • ಕಂಪ್ಯೂಟರ್ ಸೈನ್ಸ್ • ಡಾಟಾ ಸೈನ್ಸ್ • ಅರ್ಥ್ ಸೈನ್ಸ್ • ಜೀವ ವಿಜ್ಞಾನ

ಪಿಜಿ ಸರ್ಟಿಫಿಕೇಟ್ ಕಾರ್ಯಕ್ರಮಗಳು–(ಪದವಿ ಆಧಾರಿತ) (ಒಂದು ವರ್ಷ)

• ಇಂಗ್ಲಿಷ್ • ಕಮ್ಯುನಿಕೇಟಿವ್ ಇಂಗ್ಲಿಷ್ • ಪತ್ರಿಕೋದ್ಯಮ & ಸಮೂಹ ಸಂವಹನ • ಕುವೆಂಪು ಸಾಹಿತ್ಯ • ಹಣಕಾಸು ನಿರ್ವಹಣೆ • ಮಾನವ ಸಂಪನ್ಮೂಲ ನಿರ್ವಹಣೆ • ಬಿಸಿನೆಸ್ ಲಾ • ಬಿಸಿನೆಸ್ ಅಡ್ಮಿನಿಸ್ಟ್ರೇಷನ್ • ಮಾರ್ಕೆಟಿಂಗ್ ಮ್ಯಾನೇಜ್‌ಮೆಂಟ್ • ಅಂಬೇಡ್ಕರ್ ಅಧ್ಯಯನಗಳು • ಮಾಹಿತಿ ತಂತ್ರಜ್ಞಾನ • ಕಂಪ್ಯೂಟರ್ ಅಪ್ಲಿಕೇಷನ್ಸ್ • ಭಾಷಾ ವಿಜ್ಞಾನ

ಡಿಪ್ಲೋಮ ಶಿಕ್ಷಣ ಕಾರ್ಯಕ್ರಮಗಳು–(10+2 ಆಧಾರಿತ) (ಒಂದು ವರ್ಷ)


• ಕನ್ನಡ • ಪತ್ರಿಕೋದ್ಯಮ • ಮಾಹಿತಿ ತಂತ್ರಜ್ಞಾನ • ಕಂಪ್ಯೂಟರ್ ಅಪ್ಲಿಕೇಷನ್ಸ್ • ಅರ್ಲಿ ಚೈಲ್ಡ್‌ಹುಡ್ ಕೇರ್ ಅಂಡ್ ಎಜುಕೇಷನ್ • ಭಾಷಾಂತರ ಅಧ್ಯಯನ • ಫಲ ಜ್ಯೋತಿಷ್ಯ • ಮೇಧಿನಿ ಜ್ಯೋತಿಷ್ಯ • ವಾಸ್ತು ಶಾಸ್ತ್ರ

ಸರ್ಟಿಫಿಕೇಟ್ ಶಿಕ್ಷಣ ಕಾರ್ಯಕ್ರಮಗಳು (ಆರು ತಿಂಗಳು)

• ಪಂಚಾಯತ್ ರಾಜ್ • ಮಾಹಿತಿ ಸಂವಹನ ತಂತ್ರಜ್ಞಾನ (ಐಸಿಟಿ) • ಭಾಷಾಂತರ ಅಧ್ಯಯನ • ಜ್ಯೋತಿರ್ ವಿಜ್ಞಾನ

ONLINE PROGRAMMES • B.A. • B.Com

• M.A. ♦ Kannada ♦ Hindi ♦ Sanskrit ♦ Economics ♦ English
• M.Com • M.B.A. • M.Sc Mathematics



ಉನ್ನತ ಶಿಕ್ಷಣ ಎಲ್ಲರಿಗೂ, ಎಲ್ಲೆಡೆ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು NAAC A+ ಮಾನ್ಯತೆ ಪಡೆದಿದೆ, UGC-DEB ಪತ್ರ ಸಂಖ್ಯೆ. F.No.39-2/2023 (DEB-1) ದಿನಾಂಕ: 17-08-2023, F.No.30-30/2023 (DEBIII) ದಿನಾಂಕ: 11-09-2023, ಮತ್ತು ಕರ್ನಾಟಕ ರಾಜ್ಯದಲ್ಲಿ ಅಧಿಕಾರ ಹೊಂದಿರುವ ಏಕೈಕ ಸಾರ್ವಜನಿಕ ವಿಶ್ವವಿದ್ಯಾನಿಲಯವಾಗಿದ್ದು, ಉನ್ನತ ಶಿಕ್ಷಣ ಕಾರ್ಯಕ್ರಮಗಳನ್ನು ದೂರ ಶಿಕ್ಷಣ (ಒ.ಡಿ.ಎಲ್) ಪದ್ಧತಿಯಲ್ಲಿ ನೀಡುತ್ತಿದೆ.

ವಿಶ್ವವಿದ್ಯಾನಿಲಯವು ಕೆಳಕಂಡ ವಿಶೇಷತೆಗಳನ್ನು ಹೊಂದಿರುತ್ತದೆ :

- ವಿಶಾಲ ಅತ್ಯಾಧುನಿಕ ಹಾಗೂ ಹಸಿರುಮಯ ಕ್ಯಾಂಪಸ್
- ಆಧುನಿಕ ಐಸಿಟಿ ತಂತ್ರಜ್ಞಾನ ಬೆಂಬಲಿತ ಬೋಧನಾ ಸೌಲಭ್ಯಗಳು
- ಅನುಭವಿ ಹಾಗೂ ನುರಿತ ಬೋಧನಾ ಸಿಬ್ಬಂದಿ
- ಸುಸಜ್ಜಿತ ಪ್ರಯೋಗಾಲಯಗಳು
- ಸುಸಜ್ಜಿತ ಗ್ರಂಥಾಲಯ ಹಾಗೂ ಇಂಟರ್ನೆಟ್ ಸೌಲಭ್ಯಗಳು
- ಪ್ರಾದೇಶಿಕ ಕೇಂದ್ರಗಳು ಹಾಗೂ ಕಲಿಕಾರ್ಥಿ ಸಹಾಯ (ಲರ್ನರ್ ಸಪೋರ್ಟ್ ಸೆಂಟರ್) ಕೇಂದ್ರಗಳನ್ನೊಳಗೊಂಡ ಸೇವಾ ವ್ಯವಸ್ಥೆ
- ಗುಣಮಟ್ಟದ ಸ್ವಯಂ ಕಲಿಕಾ ಸಾಮಗ್ರಿಗಳು (ಎಸ್.ಎಲ್.ಎಮ್)
- ವೃತ್ತಿ ಸಂಬಂಧಿತ ಸಲಹೆ ಹಾಗೂ ನೇಮಕಾತಿಯಲ್ಲಿ ನೆರವು

ಪ್ರವೇಶಾತಿ (ಎನ್‌ರೋಲ್ಮೆಂಟ್) ಮಾಹಿತಿ ಹಾಗೂ ವಿಧಾನ

1. ಅರ್ಹತೆಯ ಮಾನದಂಡ ಹಾಗೂ ಶುಲ್ಕದ ವಿವರಗಳನ್ನು ವಿವರಣಾ ಪುಸ್ತಕ (ಪ್ರಾಸ್ಪೆಕ್ಟಸ್) ದಲ್ಲಿ ನಮೂದಿಸಲಾಗಿದೆ. ಅಭ್ಯರ್ಥಿಗಳು ಸಂಬಂಧಿತ ಕಾರ್ಯಕ್ರಮಗಳ ಪ್ರಾಸ್ಪೆಕ್ಟಸ್‌ನ್ನು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ವೀಕ್ಷಿಸಬಹುದು / ಡೌನ್‌ಲೋಡ್ ಮಾಡಿಕೊಳ್ಳಬಹುದು. ಅಭ್ಯರ್ಥಿಗಳು, ಮೈಸೂರಿನಲ್ಲಿರುವ ಕರಾಮುವಿಯ ಕೇಂದ್ರ ಕಚೇರಿಯಲ್ಲಿ ನೇರವಾಗಿ / ಆನ್‌ಲೈನ್ ಮುಖಾಂತರ, ಅಥವಾ ತಮ್ಮ ಆಯ್ಕೆಯ ಸಮೀಪದ ಪ್ರಾದೇಶಿಕ ಕೇಂದ್ರಗಳಲ್ಲಿ ಮಾತ್ರವೇ ಖುದ್ದಾಗಿ ಪ್ರವೇಶಾತಿಯನ್ನು ಪಡೆಯುವುದು. ಆನ್‌ಲೈನ್ ಪ್ರವೇಶ ಅರ್ಜಿ ಫಾರಂನ್ನು ಭರ್ತಿ ಮಾಡಲು **KSOU Online Admission Portal** ಗೆ ಭೇಟಿ ನೀಡಿ. ಪ್ರವೇಶಾತಿ ಹಾಗೂ ಇನ್ನಿತರ ಮಾಹಿತಿಗಾಗಿ ಅರ್ಜಿದಾರರು ಕರಾಮುವಿಯ ಅಧಿಕೃತ ವೆಬ್‌ಸೈಟ್: **www.ksoumysuru.ac.in** ನ್ನು ವೀಕ್ಷಿಸುವುದು.
   - ಪ್ರವೇಶಪೂರ್ವ ಸಮಾಲೋಚನೆಗೆ ಮಾತ್ರ ಅರ್ಜಿದಾರರು ತಮ್ಮ ವ್ಯಾಪ್ತಿಯಲ್ಲಿ ಬರುವ ಕರಾಮುವಿಯ ಅಧಿಕೃತ ಕಲಿಕಾರ್ಥಿ ಸಹಾಯ ಕೇಂದ್ರವನ್ನು ಸಂಪರ್ಕಿಸಬಹುದು.
   - ವಿದ್ಯಾರ್ಥಿಗಳು ಪಾವತಿಸಬೇಕಾದ ನಿಗದಿತ ಶುಲ್ಕವನ್ನು (ವಿವರಗಳು ವೆಬ್‌ಸೈಟ್‌ನಲ್ಲಿ ಲಭ್ಯವಿದೆ) ಮಾತ್ರ ಪಾವತಿಸಬೇಕು. ಹೆಚ್ಚುವರಿ ಪಾವತಿಗೆ ವಿಶ್ವವಿದ್ಯಾನಿಲಯವು ಜವಬ್ದಾರಿಯಾಗುವುದಿಲ್ಲ.
   - ಪ್ರವೇಶಾತಿ ಶುಲ್ಕವನ್ನು ಆನ್‌ಲೈನ್ ವಿಧಾನದ ಮೂಲಕ ಮಾತ್ರ ಪಾವತಿಸತಕ್ಕದ್ದು.
   - ಅಭ್ಯರ್ಥಿಗಳು ಗುರುತಿನ ಚೀಟಿಗಳು ಹಾಗೂ ಲಭ್ಯ ಸ್ವಯಂ ಕಲಿಕಾ ಸಾಮಗ್ರಿಗಳನ್ನು ಮೈಸೂರಿನಲ್ಲಿರುವ ಕರಾಮುವಿಯ ಆಡಳಿತ ಕಛೇರಿಯಿಂದ ಅಥವಾ ತಮ್ಮ ಆಯ್ಕೆಯ ಪ್ರಾದೇಶಿಕ ಕೇಂದ್ರದಿಂದ ಪಡೆಯಬಹುದು.
2. ಪ.ಜಾ./ಪ.ಪ. ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ನಿಗಧಿತ ಶುಲ್ಕವನ್ನು ಪಾವತಿಸಿ ಸಮಾಜ ಕಲ್ಯಾಣ ಇಲಾಖೆಯಿಂದ ಶುಲ್ಕ ಮರುಭರಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ಶುಲ್ಕ ವಿನಾಯಿತಿ ಯೋಜನೆಯಡಿ ಪ್ರವೇಶಾತಿ ಪಡೆಯಬಹುದಾಗಿದೆ. ಪ್ರವೇಶಾತಿಯು ವಿ.ವಿ.ಯ ಸ್ಕಾಲರ್‌ಷಿಪ್ ಘಟಕವು ವಿಧಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
   - ಬಿಪಿಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳು / ಮಿಲಿಟರಿ ಸೇವೆಯಲ್ಲಿರುವ / ಮಾಜಿ ಸೈನಿಕ ವಿದ್ಯಾರ್ಥಿಗಳು / ಆಟೋ / ಕ್ಯಾಬ್ ಚಾಲಕರು ಮತ್ತು ಅವರ ಪತ್ನಿ / ಮಕ್ಕಳಿಗೆ / ಕೆಎಸ್‌ಆರ್‌ಟಿಸಿ / ಬಿಎಂಟಿಸಿ / ಎನ್‌ಡಬ್ಲ್ಯೂಕೆಆರ್‌ಟಿಸಿ / ಕೆಕೆಆರ್‌ಟಿಸಿಯಲ್ಲಿನ ನೌಕರರುಗಳಿಗೆ ಯುಜಿ ಮತ್ತು ಪಿಜಿ ಪದವಿ ಶಿಕ್ಷಣ ಕ್ರಮಗಳಿಗೆ ಬೋಧನಾ ಶುಲ್ಕದಲ್ಲಿ **ಶೇಕಡ 10%ರಷ್ಟು ರಿಯಾಯಿತಿಯನ್ನು** ಪಡೆಯಬಹುದು.
   - **ತೃತೀಯ ಲಿಂಗಕ್ಕೆ** ಸೇರಿದ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ **ವಿನಾಯಿತಿ** ಇರುತ್ತದೆ.
   - ಕೋವಿಡ್-19 ಖಾಯಿಲೆಯಿಂದ ಮೃತಪಟ್ಟ ತಂದೆ / ತಾಯಿಯ ಮಕ್ಕಳಿಗೆ ಸಂಬಂಧಪಟ್ಟ ಇಲಾಖೆಯಿಂದ ಅಗತ್ಯ ಪ್ರಮಾಣ ಪತ್ರಗಳನ್ನು ಸಲ್ಲಿಸುವ ಷರತ್ತಿಗೊಳಪಟ್ಟು ಪೂರ್ಣ ಶುಲ್ಕ **ವಿನಾಯಿತಿ** ಇರುತ್ತದೆ.
   - ಸರ್ಕಾರವು ಆಗಿಂದ್ದಾಗ್ಗೆ ನಿಗದಿಪಡಿಸಿರುವ ಹಾಗೂ ಚಾಲ್ತಿಯಲ್ಲಿರುವ ಆದೇಶಗಳನ್ವಯ ಶೇಕಡ 50ಕ್ಕೂ ಹೆಚ್ಚಿನ ದೃಷ್ಟಿ ದೋಷವುಳ್ಳ ಅಭ್ಯರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ **(ಬಿ.ಎಡ್. ಮತ್ತು ಎಂ.ಬಿ.ಎ. ಹೊರತುಪಡಿಸಿ).**
3. ಪ್ರಥಮ / ದ್ವಿತೀಯ ಯುಜಿ/ಪಿಜಿ ಶಿಕ್ಷಣ ಕ್ರಮ ಪೂರೈಸಿ ಕಾರಣಾಂತರದಿಂದ ಪದವಿಯನ್ನು ಪೂರ್ಣಗೊಳಿಸಿಕೊಂಡಿಲ್ಲದ ವಿದ್ಯಾರ್ಥಿಗಳು ಕರಾಮುವಿಯ ನಿಯಮಗಳಿಗೆ ಒಳಪಟ್ಟು ದ್ವಿತೀಯ/ತೃತೀಯ ಯುಜಿ/ಪಿಜಿ ಶಿಕ್ಷಣ ಕ್ರಮಗಳಿಗೆ ನೇರ ಪ್ರವೇಶಾತಿ ಪಡೆಯಬಹುದಾಗಿದೆ. ವಿದ್ಯಾರ್ಥಿಗಳು ಈ ಸಂಬಂಧ ಅಂತರ್‌ಜಾಲದಲ್ಲಿ ಪ್ರಕಟಿಸಿರುವ ಸುತ್ತೋಲೆಯನ್ವಯ ಕ್ರಮಗಳನ್ನು ಅನುಸರಿಸುವುದು.
4. ಬಿ.ಇಡಿ ಶೈಕ್ಷಣಿಕ ಕಾರ್ಯಕ್ರಮಕ್ಕೆ ಅರ್ಹ ಅಭ್ಯರ್ಥಿಗಳನ್ನು ಸಾಮಾನ್ಯ ಪ್ರವೇಶ ಪರೀಕ್ಷೆಯ ಮೂಲಕ ಹಾಗೂ ಚಾಲ್ತಿ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

ಕರಾಮುವಿ ಪ್ರಾದೇಶಿಕ ಕೇಂದ್ರಗಳು

1. **ಮೈಸೂರು (ಕೇಂದ್ರ ಕಚೇರಿ)** : ಪ್ರವೇಶಾತಿ ವಿಭಾಗ, ಕರಾಮುವಿ, ಮುಕ್ತಗಂಗೋತ್ರಿ, ಮೈಸೂರು-570 006, ದೂ (ಕ): 0821-2500981, ಮೊಬೈಲ್: 9945366062 / 9113512565 / 9611418726 / 9900509959 / 9035395137 / 8123469017 / 9844010407.
2. **ಬೆಂಗಳೂರು-1 ಪ್ರಾದೇಶಿಕ ಕೇಂದ್ರ** : ಸ್ಯಾಟಲೈಟ್ ಬಸ್ ನಿಲ್ದಾಣ ಕಟ್ಟಡ, 1ನೇ ಮಹಡಿ, ಮೈಸೂರು ರಸ್ತೆ, **ಚಾಮರಾಜಿನಗರ,** ಬೆಂಗಳೂರು-560 026. ದೂ: 080-26603664, ಮೊಬೈಲ್: 9880526439/ 9019526439.
3. **ಬೆಂಗಳೂರು-2 ಪ್ರಾದೇಶಿಕ ಕೇಂದ್ರ** : ಕರಾಮುವಿ ಮಹಿಳಾ ಪ್ರಾದೇಶಿಕ ಕೇಂದ್ರ, ಸರ್ಕಾರಿ ಬಾಲಕಿಯರ ಪಿ.ಯು. ಕಾಲೇಜ್, 4ನೇ ಮೇನ್, 13ನೇ ಕ್ರಾಸ್, ಬೆಸ್ಕಾಂ ಕಚೇರಿ ಹತ್ತಿರ, **ಮಲ್ಲೇಶ್ವರಂ,** ಬೆಂಗಳೂರು-560 003. ದೂ: 080-23448811, ಮೊಬೈಲ್ : 9741197921 / 9483517160.
4. **ಬೆಂಗಳೂರು-3 ಪ್ರಾದೇಶಿಕ ಕೇಂದ್ರ** : ಆಕ್ಸ್‌ಫರ್ಡ್ ಎಜುಕೇಷನಲ್ ಟ್ರಸ್ಟ್, ಶ್ರೀನಿವಾಸಪುರ, ಕೋಗಿಲು ಮುಖ್ಯ ರಸ್ತೆ, **ಯಲಹಂಕ,** ಬೆಂಗಳೂರು-560 064, ಮೊಬೈಲ್: 9008540090/7337718249.
5. **ಬೆಂಗಳೂರು-4 ಪ್ರಾದೇಶಿಕ ಕೇಂದ್ರ:** ನಂ.121, 2ನೇ ಮಹಡಿ, **ಮಡಿವಾಳ,** ಮಡಿವಾಳ ಸಂಚಾರಿ ಪೊಲೀಸ್ ಸ್ಟೇಷನ್ ಹಿಂಭಾಗ, ಹ್ಯಾಪಿಯೆಸ್ಟ್ ಮೈಂಡ್ ಹತ್ತಿರ, ಹೊಸೂರು ಮುಖ್ಯ ರಸ್ತೆ, ಬೆಂಗಳೂರು-560 068. ದೂ: 080-23158888, ಮೊಬೈಲ್ : 8618821417.
6. **ಬೆಂಗಳೂರು-5 ಪ್ರಾದೇಶಿಕ ಕೇಂದ್ರ:** ಸರಕಾರಿ ಪ್ರಥಮ ದರ್ಜೆ ಕಾಲೇಜು ಆವರಣ, **ಕೆ.ಆರ್. ಪುರಂ,** ಬೆಂಗಳೂರು-560 036. ಮೊಬೈಲ್: 8722788788.
7. **ಬೆಂಗಳೂರು-6 ಪ್ರಾದೇಶಿಕ ಕೇಂದ್ರ:** ಶ್ರೀ ಲಕ್ಷ್ಮೀ ಕಾಲೇಜ್ ಆಫ್ ಮ್ಯಾನೇಜ್‌ಮೆಂಟ್ ಅಂಡ್ ಸೈನ್ಸ್ ಆವರಣ, ನಂ.4 ಮತ್ತು 5, ಶ್ರೀ ಗಂಧಕಾವಲ್, ಮಾಗಡಿ ಮುಖ್ಯ ರಸ್ತೆ, **ಸುಂಕದಕಟ್ಟೆ,** ಬೆಂಗಳೂರು-560 091. ಮೊಬೈಲ್: 8453458238 / 9632332265.
8. **ಬೆಂಗಳೂರು-7 ಪ್ರಾದೇಶಿಕ ಕೇಂದ್ರ : ಹಜ್ ಭವನ, ತಿರುಮೇನಹಳ್ಳಿ ಕ್ರಾಸ್, ಹೆಗ್ಗಡೆ ನಗರ ಮೈನ್ ರೋಡ್,** ಬೆಂಗಳೂರು-560 064. ಮೊಬೈಲ್ : 9900667916.
9. **ಬೆಳಗಾವಿ ಪ್ರಾದೇಶಿಕ ಕೇಂದ್ರ** : ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಶಿಕ್ಷಣ ಮಹಾವಿದ್ಯಾಲಯ ಆವರಣ, ನೆಹರು ನಗರ, ಬೆಳಗಾವಿ-590010. ದೂ. 0831-2002815, ಮೊಬೈಲ್: 9663451169 / 9606040407.
10. **ಬಳ್ಳಾರಿ ಪ್ರಾದೇಶಿಕ ಕೇಂದ್ರ** : ಪ್ರಾದೇಶಿಕ ವಿಜ್ಞಾನ ಕೇಂದ್ರದ ಹಿಂಭಾಗ, ಜಿಲ್ಲಾ ಕ್ರೀಡಾಂಗಣದ ಹತ್ತಿರ, ನಲ್ಲಚೆರವು ಪ್ರದೇಶ, ಬಳ್ಳಾರಿ-583 102. ಮೊಬೈಲ್: 7892597159.
11. **ಚಾಮರಾಜನಗರ ಪ್ರಾದೇಶಿಕ ಕೇಂದ್ರ** : ಕೆ.ಹೆಚ್.ಬಿ. ಕಾಲೋನಿ, ರಾಮಸಮುದ್ರ ಲೇಔಟ್, ಇಮ್ಮಾನ್ಯುಯೆಲ್ ಕ್ರಿಶ್ಚಿಯನ್ ಪಬ್ಲಿಕ್ ಸ್ಕೂಲ್ ಹತ್ತಿರ, ಚಾಮರಾಜನಗರ-571342, ಮೊಬೈಲ್: 9980302686.
12. **ಚಿಕ್ಕಮಗಳೂರು ಪ್ರಾದೇಶಿಕ ಕೇಂದ್ರ** : ಸಾಯಿಮಂದಿರ ರಸ್ತೆ, ಮಧುವನ ಬಡಾವಣೆ, ಚಿಕ್ಕಮಗಳೂರು-577 102, ಮೊಬೈಲ್: 8088716236.
13. **ದಾವಣಗೆರೆ ಪ್ರಾದೇಶಿಕ ಕೇಂದ್ರ** : ಜೆ. ಹೆಚ್. ಪಟೇಲ್ ಬಡಾವಣೆ, ಶಾಮನೂರು-ನಾಗನೂರು ರಸ್ತೆ ಹಿಂಭಾಗ, ದಾವಣಗೆರೆ-577 004, ಮೊಬೈಲ್: 9986458055 / 9844926125.
14. **ಧಾರವಾಡ ಪ್ರಾದೇಶಿಕ ಕೇಂದ್ರ** : ಅಮರಗೋಳ 2ನೇ ಹಂತ, ಜಡ್ಜ್ ಕಾಲೋನಿ ಹತ್ತಿರ, ಕಡೆಯ ಬಸ್ ನಿಲ್ದಾಣ, ನವನಗರ, ಹುಬ್ಬಳ್ಳಿ-580025. ದೂ: 0836-2441199, ಮೊಬೈಲ್: 9916894944.
15. **ಹಾಸನ ಪ್ರಾದೇಶಿಕ ಕೇಂದ್ರ** : ಎಸ್. ಎಂ. ಕೃಷ್ಣ ನಗರ, ಅರಸೀಕೆರೆ ರಸ್ತೆ, ದೊಡ್ಡಪುರ ಅಂಚೆ, ಬಿ. ಟಿ. ಕೊಪ್ಪಲು, ಹಾಸನ-573 118, ಮೊಬೈಲ್: 8197818807 / 9482603060.
16. **ಕಲಬುರ್ಗಿ ಪ್ರಾದೇಶಿಕ ಕೇಂದ್ರ** : ಕನ್ನಡ ಅಧ್ಯಯನ ಸಂಸ್ಥೆ, ಗುಲ್ಬರ್ಗಾ ವಿಶ್ವವಿದ್ಯಾನಿಲಯ ಆವರಣ, ಕಲ್ಬುರ್ಗಿ-585 106, ಮೊಬೈಲ್: 9916783555.
17. **ಕಾರವಾರ ಪ್ರಾದೇಶಿಕ ಕೇಂದ್ರ** : ಯು.ಎಸ್.ಕೆ.ವಿ ಹಳೆ ಕಟ್ಟಡ, ಮೊದಲನೇ ಮಹಡಿ, ಸವಿತ ಸರ್ಕಲ್ ಮುಖ್ಯ ರಸ್ತೆ, ಕಾರವಾರ-581 301, ಮೊಬೈಲ್: 9916894944.
18. **ಕೋಲಾರ ಪ್ರಾದೇಶಿಕ ಕೇಂದ್ರ** : ಎಸ್. ಪಿ. ಕಚೇರಿ ಹಿಂಭಾಗ, ಆರ್. ಎಲ್. ಜಾಲಪ್ಪ ಆಸ್ಪತ್ರೆ ಸಮೀಪ, ಕೋಲಾರ-563 101, ದೂ. 0815-2243301, ಮೊಬೈಲ್: 8970223247.
19. **ಮಂಡ್ಯ ಪ್ರಾದೇಶಿಕ ಕೇಂದ್ರ** : # ನಂ. 11(ಎ), 'ಇ' ಬ್ಲಾಕ್, ವಿವೇಕಾನಂದ ನಗರ ಲೇಔಟ್, ಕೆರ ಅಂಗಳ, ಸಂತೆಮಾಳದ ಎದುರ, ಮೇಲುಕೋಟೆ ರಸ್ತೆ, ಮಂಡ್ಯ-571402. ದೂ. 08232200862, ಮೊಬೈಲ್: 9741990284.
20. **ಮಂಗಳೂರು ಪ್ರಾದೇಶಿಕ ಕೇಂದ್ರ** : ಕಸ್ಟಮ್ ಕ್ವಾಟರ್ಸ್ ಎದುರು, 4ನೇ ಕ್ರಾಸ್, ದತ್ತನಗರ, ಮಂಗಳೂರು-575 016, ಮೊಬೈಲ್: 9945058950 / 9972196692.
21. **ರಾಮನಗರ ಪ್ರಾದೇಶಿಕ ಕೇಂದ್ರ** : ನಂ. 103, 'ಇ' ಬ್ಲಾಕ್, ಶಾಂತಿನಿಕೇತನ್ ಗ್ರೂಪ್ ಆಫ್ ಇನ್ಸ್‌ಟಿಟ್ಯೂಷನ್ಸ್, ಬಿ. ಎಂ. ರಸ್ತೆ, ವಿವೇಕಾನಂದ ನಗರ, ರಾಮನಗರ-562159, ಮೊಬೈಲ್: 9448668880 / 8861732487.
22. **ಶಿವಮೊಗ್ಗ ಪ್ರಾದೇಶಿಕ ಕೇಂದ್ರ** : ಅಲ್ಕೋಳ ಸರ್ಕಲ್, ಎಲ್.ಐ.ಸಿ. ಕಚೇರಿ ಹತ್ತಿರ, ಸಾಗರ ರಸ್ತೆ, ಶಿವಮೊಗ್ಗ-577 201, ದೂ: 08182-250367.
23. **ತುಮಕೂರು ಪ್ರಾದೇಶಿಕ ಕೇಂದ್ರ** : ಸಿಎ-07, ಟೂಡಾ ಲೇಔಟ್, ರಾಜೀವ್‌ಗಾಂಧಿ ನಗರ, ಮೆಳೆಕೋಟೆ, ಗಂಗಸಂದ್ರ ಮುಖ್ಯ ರಸ್ತೆ, ತುಮಕೂರು-572 105, ದೂ: 0816-2955580, ಮೊಬೈಲ್: 9844506629.
24. **ಉಡುಪಿ ಪ್ರಾದೇಶಿಕ ಕೇಂದ್ರ** : ಜಿಲ್ಲಾ ಪಂಚಾಯತ್ ಕಚೇರಿ ಹಳೇ ಕಟ್ಟಡ, 2ನೇ ಮಹಡಿ, ಬನ್ನಂಜೆ, ಉಡುಪಿ-576 101, ದೂ: 0820-2522247, ಮೊಬೈಲ್: 9972526647.
25. **ಬೀದರ್-1 ಪ್ರಾದೇಶಿಕ ಕೇಂದ್ರ** : ಸರ್ಕಾರಿ ಪ್ರ.ದ. ಕಾಲೇಜು, **ನೌಬಾದ್,** ಬೀದರ್-585402, ದೂ: 08482-232020, ಮೊಬೈಲ್: 9986696487.
26. **ಬೀದರ್-2 ಪ್ರಾದೇಶಿಕ ಕೇಂದ್ರ** : ಕರ್ನಾಟಕ ಪಬ್ಲಿಕ್ ಸ್ಕೂಲ್, **ಗೊರಟ (ಬಿ) ಗ್ರಾಮ,** ಹಲಸೂರು ತಾ॥ ಬೀದರ್-585327, ಮೊಬೈಲ್: 9986696487.
27. **ಬಾಗಲಕೋಟೆ ಪ್ರಾದೇಶಿಕ ಕೇಂದ್ರ** : ಬಿ.ವಿ.ವಿ.ಎಸ್. ಜನಶಿಕ್ಷಣ ಸಂಸ್ಥೆ ಕ್ಯಾಂಪಸ್, ಬಸವೇಶ್ವರ ಸ್ವತಂತ್ರ ಪಿ.ಯು. ಕಾಲೇಜ್ ಪಕ್ಕ, ವಿದ್ಯಾಗಿರಿ, ಬಾಗಲಕೋಟೆ-587 103, ಮೊಬೈಲ್: 7022222241 / 8861040975.
28. **ಮಡಿಕೇರಿ ಪ್ರಾದೇಶಿಕ ಕೇಂದ್ರ:** ಜೂನಿಯರ್ ಕಾಲೇಜು ಕ್ಯಾಂಪಸ್, ಫೀಲ್ಡ್ ಮಾರ್ಷಲ್ ಕಾರ್ಯಪ್ಪ, ಇಂಡೋರ್ ಸ್ಟೇಡಿಯಂ, ಮಡಿಕೇರಿ-571 201, ಮೊಬೈಲ್: 8762551115.
29. **ಕೊಳ್ಳೇಗಾಲ ಪ್ರಾದೇಶಿಕ ಕೇಂದ್ರ:** ಹರಿಚರಣ್ ಆರ್ಕೆಡ್, 2ನೇ ಮಹಡಿ, ಸೌತ್ ಎಕ್ಸ್‌ಟೆನ್‌ಷನ್, ಮಹದೇಶ್ವರ ಕಲ್ಯಾಣ ಮಂಟಪದ ಎದುರು, ಕೊಳ್ಳೇಗಾಲ-571 440. ಮೊಬೈಲ್: 9980740048.
30. **ಚಿತ್ರದುರ್ಗ ಪ್ರಾದೇಶಿಕ ಕೇಂದ್ರ:** ಡಾನ್ ಬಾಸ್ಕೋ ಪದವಿ ಕಾಲೇಜು ಆವರಣ, ಬಿಸಿಎಂ ಹಾಸ್ಟೆಲ್ ಹತ್ತಿರ, ಶನಿಮಹಾತ್ಮ ದೇವಸ್ಥಾನ ರಸ್ತೆ, ಚಳ್ಳಕೆರೆ ರಸ್ತೆ, ಚಿತ್ರದುರ್ಗ-577501. ಮೊಬೈಲ್: 7406612788.
31. **ಹಾವೇರಿ ಪ್ರಾದೇಶಿಕ ಕೇಂದ್ರ:** ಶ್ರೀ ಶಿವಲಿಂಗೇಶ್ವರ ವಿದ್ಯಾಪೀಠ, ಹುಕ್ಕೇರಿಮಠ, ಹಾವೇರಿ-581110. ಮೊಬೈಲ್: 97432 76734.
32. **ಚಿಕ್ಕಬಳ್ಳಾಪುರ ಪ್ರಾದೇಶಿಕ ಕೇಂದ್ರ:** ಸರ್ಕಾರಿ ಪ್ರಥಮ ದರ್ಜೆ (ಪುರಸಭೆ) ಕಾಲೇಜು, ಎಂ. ಜಿ. ರಸ್ತೆ, ಚಿಕ್ಕಬಳ್ಳಾಪುರ-562101. ಮೊಬೈಲ್: 9164300299.
33. **ರಾಯಚೂರು ಪ್ರಾದೇಶಿಕ ಕೇಂದ್ರ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನಿಜಲಿಂಗಪ್ಪ ಕಾಲೋನಿ, ವಾಲ್ಮೀಕಿ ಸರ್ಕಲ್ ಹತ್ತಿರ, ಲಿಂಗಸಗೂರು ರಸ್ತೆ, ರಾಯಚೂರು-584101. ಮೊಬೈಲ್: 9686619555.
34. **ಯಾದಗಿರಿ ಪ್ರಾದೇಶಿಕ ಕೇಂದ್ರ:** ಸರ್ಕಾರಿ ಪದವಿ ಕಾಲೇಜು, ಚಿತ್ತಾಪುರ ರಸ್ತೆ, ಯಾದಗಿರಿ-585202 ಮೊಬೈಲ್: 9880061361.
35. **ವಿಜಯಪುರ ಪ್ರಾದೇಶಿಕ ಕೇಂದ್ರ** : ಸ್ಯಾಟಲೈಟ್ ಬಸ್ ನಿಲ್ದಾಣ ಹತ್ತಿರ, ಅಂಬಾ ಭವಾನಿ ದೇವಸ್ಥಾನದ ಎದುರು, ವಿಜಯಪುರ-586 101, ಮೊಬೈಲ್: 9483628267.
36. **ಕೊಪ್ಪಳ ಪ್ರಾದೇಶಿಕ ಕೇಂದ್ರ** : ನಗರಾಭಿವೃದ್ಧಿ ಪ್ರಾಧಿಕಾರ ಕಾರ್ಯಾಲಯದ ಕಟ್ಟಡ, ಮೊದಲನೇ ಮಹಡಿ, ಗೋವನಕೊಪ್ಪ ಆಸ್ಪತ್ರೆ ಎದುರು, ಹೊಸಪೇಟೆ ರಸ್ತೆ, ಕೊಪ್ಪಳ-583 231, ಮೊಬೈಲ್: 9008588675 / 8722588675.
37. **ಗದಗ ಪ್ರಾದೇಶಿಕ ಕೇಂದ್ರ** : ಡಾ॥ ಪಂಡಿತ್ ಪುಟ್ಟರಾಜಗವಾಯಿ, ಐ.ಟಿ.ಐ. ಕಾಲೇಜು, ಎಲ್.ಎಲ್. ಬಿಲ್ಡಿಂಗ್, (ಹಳೆ ಡಿಸಿ ಅಫೀಸ್ ಸರ್ಕಲ್), ಜನರಲ್ ಕಾರ್ಯಪ್ಪ ಸರ್ಕಲ್, ಗದಗ-582 101. ಮೊಬೈಲ್: 8618929376 / 8884231002.
38. **ವಿಜಯನಗರ (ಹೊಸಪೇಟೆ) ಪ್ರಾದೇಶಿಕ ಕೇಂದ್ರ** : ಕನ್ನಡ ವಿಶ್ವವಿದ್ಯಾನಿಲಯ, ವಿದ್ಯಾರಣ್ಯ, ಹಂಪಿ, ವಿಜಯನಗರ ಜಿಲ್ಲೆ-583 276, ಮೊಬೈಲ್: 9945171920.
39. **ಪಿರಿಯಾಪಟ್ಟಣ ಪ್ರಾದೇಶಿಕ ಕೇಂದ್ರ** : ಡಿ.ಪಿ.ಬಿ.ಎಸ್. ಸರ್ಕಾರಿ ಬಾಲಕರ ಪಿಯು ಕಾಲೇಜು ಕ್ಯಾಂಪಸ್ (ಪ್ರೌಢಶಾಲಾ ವಿಭಾಗ), ಬಿ.ಎಂ. ರಸ್ತೆ, ಬೆಟ್ಟದಪುರ ಸರ್ಕಲ್ ಹತ್ತಿರ, ಪಿರಿಯಾಪಟ್ಟಣ – 571107. ಮೊಬೈಲ್: 9901423273.

1.	**ಪ್ರವೇಶಾತಿಯ ಅಂತಿಮ ದಿನಾಂಕ:** (ಬಿ.ಇಡಿ. ಹೊರತುಪಡಿಸಿ ಇತರೆ ಶೈಕ್ಷಣಿಕ ಕಾರ್ಯಕ್ರಮಗಳಿಗೆ)	**15.10.2025**
2.	**ಬಿ.ಇಡಿ ಶೈಕ್ಷಣಿಕ ಕಾರ್ಯಕ್ರಮಕ್ಕೆ:**	
	(i) ಸಾಮಾನ್ಯ ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ:	**21.09.2025**
	(ii) ಸಾಮಾನ್ಯ ಪ್ರವೇಶ ಪರೀಕ್ಷೆಯ ದಿನಾಂಕ:	**28.09.2025**

ತರಗತಿ ಹಾಗೂ ಪರೀಕ್ಷೆಗಳನ್ನು ಪ್ರಾದೇಶಿಕ ಕೇಂದ್ರ / ಕಲಿಕೆ ಸಹಾಯ ಕೇಂದ್ರಗಳಲ್ಲಿ ನಡೆಸಲಾಗುವುದು.

ಸಹಿ/–, ಕುಲಸಚಿವರು

ಅಫ್ಘಾನಿಸ್ತಾನದಲ್ಲಿ ಭಾರಿ ಭೂಕಂಪ

810ಕ್ಕೂ ಹೆಚ್ಚು ಸಾವು 2,500 ಮಂದಿಗೆ ಗಾಯ



ನವದೆಹಲಿ, ಸೆ.1– ಅಫ್ಘಾನಿಸ್ತಾನದಲ್ಲಿ ಸಂಭವಿಸಿದ ಪ್ರಬಲ ಭೂಕಂಪದಲ್ಲಿ 800ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ ಮತ್ತು 2,500 ಜನರು ಗಾಯಗೊಂಡಿದ್ದಾರೆ. ಈ ದುರಂತದಲ್ಲಿ ನುರ್ಗಲ್, ಚಾವ್ಕೇ ಮತ್ತು ವಟಪುರಗಳು ಹೆಚ್ಚು ಹಾನಿಗೊಳಗಾಗಿವೆ. ರಕ್ಷಣಾ ಪ್ರಯತ್ನಗಳು ಮುಂದುವರಿದಿದ್ದು, ಭೂಕಂಪ ಪೀಡಿತ ಅಫ್ಘಾನಿಸ್ತಾನಕ್ಕೆ ಭಾರತ ಬೆಂಬಲ ನೀಡುವುದಾಗಿ ಭರವಸೆ ನೀಡಿದೆ.

ಪ್ರಧಾನಿ ನರೇಂದ್ರ ಮೋದಿ ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ಅಫ್ಘಾನಿಸ್ತಾನದಲ್ಲಿ ಸಂಭವಿಸಿದ ಭೂಕಂಪದಿಂದ ಉಂಟಾದ ಜೀವಹಾನಿಯಿಂದ ತೀವ್ರ ದುಃಖಿತನಾಗಿದ್ದೇನೆ. ಈ ಕಷ್ಟದ ಸಮಯದಲ್ಲಿ ನಮ್ಮ ಪ್ರಾರ್ಥನೆಗಳು ಮೃತರ ಕುಟುಂಬಗಳೊಂದಿಗೆ ಇವೆ. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಬೇಕೆಂದು ನಾವು ಬಯಸುತ್ತೇವೆ. ಭಾರತವು ಪೀಡಿತರಿಗೆ ಸಾಧ್ಯವಿರುವ ಎಲ್ಲಾ ಮಾನವೀಯ ನೆರವು ಮತ್ತು ಪರಿಹಾರವನ್ನು ಒದಗಿಸಲು ಸಿದ್ಧವಾಗಿದೆ ಎಂದು ಅವರು ಬರೆದಿದ್ದಾರೆ.

ಪೂರ್ವ ಅಫ್ಘಾನಿಸ್ತಾನಕ್ಕೆ ಅಪ್ಪಳಿಸಿದ ಪ್ರಬಲ ಭೂಕಂಪದಿಂದ ಸಾವನ್ನಪ್ಪಿದವರ ಸಂಖ್ಯೆ 800ಕ್ಕಿಂತ ಹೆಚ್ಚಾಗಿದೆ ಎಂದು ತಾಲಿಬಾನ್ ಸರ್ಕಾರದ ವಕ್ತಾರರು ಖಚಿತಪಡಿಸಿದ್ದಾರೆ. ಅವರಲ್ಲಿ ಹೆಚ್ಚಿನವರು ದೂರದ ಕುನಾರ್ ಪ್ರಾಂತ್ಯದವರು. ಕುನಾರ್‌ನಲ್ಲಿ ಸುಮಾರು 800 ಜನರು ಸಾವನ್ನಪ್ಪಿದ್ದಾರೆ ಮತ್ತು 2,500 ಜನರು ಗಾಯಗೊಂಡಿದ್ದಾರೆ ಎಂದು ವಕ್ತಾರ ಜಬಿಹುಲ್ಲಾ ಮುಜಾಹಿದ್ ರಾಜಧಾನಿ ಕಾಬೂಲ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ. ನಂಗರ್‌ಹಾರ್ ಪ್ರಾಂತ್ಯದಲ್ಲಿ 12 ಜನರು ಸಾವನ್ನಪ್ಪಿದ್ದಾರೆ ಮತ್ತು 255 ಜನರು ಗಾಯಗೊಂಡಿದ್ದಾರೆ ಎಂದು ಎಎಫ್‌ಪಿ ವರದಿ ಮಾಡಿದೆ.

ಕುನಾರ್ ಪ್ರಾಂತ್ಯದಲ್ಲಿ 3 ಗ್ರಾಮಗಳು ನಾಶವಾಗಿವೆ. ನುರ್ಗಲ್, ಚಾವ್ಕೇ ಮತ್ತು ವಟಪುರ್ ಭೂಕಂಪದಿಂದ ಹೆಚ್ಚು ಹಾನಿಗೊಳಗಾದ ಜಿಲ್ಲೆಗಳಾಗಿವೆ ಎಂದು ಬಖ್ತರ್ ವರದಿ ಮಾಡಿದೆ. ಬಲವಾದ ಕಂಪನದಿಂದ ಉಂಟಾದ ನಾಶ ಮತ್ತು ಅವಶೇಷಗಳ ಅಡಿಯಲ್ಲಿ ಕಾಣೆಯಾದ ಜನರನ್ನು ಹುಡುಕಲು ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ.

ಭೂಕಂಪದ ಕೇಂದ್ರಬಿಂದು ಅಫ್ಘಾನಿಸ್ತಾನದ ಬಸಾವುಲ್‌ನಿಂದ ಉತ್ತರಕ್ಕೆ 36 ಕಿ.ಮೀ. (22 ಮೈಲುಗಳು) ದೂರದಲ್ಲಿತ್ತು ಎಂದು ಯುಎಸ್ ಭೂವೈಜ್ಞಾನಿಕ ಸಮೀಕ್ಷೆ ತಿಳಿಸಿದೆ. ಈ ಭೂಕಂಪವು ಕಾಬೂಲ್‌ನಿಂದ ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ವರೆಗಿನ ಕಟ್ಟಡಗಳನ್ನು ಸುಮಾರು 370 ಕಿ.ಮೀ. ದೂರದಲ್ಲಿ ಹಲವಾರು ಸೆಕೆಂಡುಗಳ ಕಾಲ ಭೂಮಿಯನ್ನು ನಡುಗಿಸಿತು. ಈ ಮೊದಲು ಅಕ್ಟೋಬರ್ 7, 2023ರಂದು ಅಫ್ಘಾನಿಸ್ತಾನವನ್ನು 6.3 ತೀವ್ರತೆಯ ಭೂಕಂಪವು ಬಲವಾದ ನಂತರದ ಕಂಪನಗಳೊಂದಿಗೆ ಅಪ್ಪಳಿಸಿತು. ತಾಲಿಬಾನ್ ಸರ್ಕಾರವು ಕನಿಷ್ಠ 4,000 ಜನರು ಸಾವನ್ನಪ್ಪಿದ್ದಾರೆ ಎಂದು ಅಂದಾಜಿಸಿದೆ. ಯುಎನ್ ಸುಮಾರು 1,500ರಷ್ಟು ಕಡಿಮೆ ಸಂಖ್ಯೆಯನ್ನು ಒದಗಿಸಿದೆ. ಇದು ಇತ್ತೀಚಿನ ವರ್ಷಗಳಲ್ಲಿ ಅಫ್ಘಾನಿಸ್ತಾನವನ್ನು ಅಪ್ಪಳಿಸಿದ ಅತ್ಯಂತ ಮಾರಕ ನೈಸರ್ಗಿಕ ವಿಕೋಪವಾಗಿದೆ

ಪ್ರಸನ್ನಕುಮಾರ್.ಎಸ್‌ಗೆ ಪಿಹೆಚ್.ಡಿ ಪದವಿ



ಮೈಸೂರು,ಸೆ.1– ಪ್ರಸನ್ನಕುಮಾರ್.ಎಸ್ ಅವರು ಮೈಸೂರು ವಿಶ್ವವಿದ್ಯಾನಿಲಯದ ಗಾಂಧಿ ಅಧ್ಯಯನ ಕೇಂದ್ರದ ವಿಶ್ರಾಂತ ನಿರ್ದೇಶಕ ಪ್ರೊ.ಎಸ್. ಶಿವರಾಜಪ್ಪ ಅವರ ಮಾರ್ಗದರ್ಶನದಲ್ಲಿ ಸಾದರಪಡಿಸಿದ 'ಗಾಂಧೀಜಿ ಚಿಂತನೆಯ ಸುಸ್ಥಿರ ಗ್ರಾಮೀಣಾಭಿವೃದ್ಧಿಯಲ್ಲಿ ಸ್ಥಳೀಯ ಸರ್ಕಾರಗಳ ಪಾತ್ರ– ಮೈಸೂರು ತಾಲೂಕನ್ನು ಅನುಲಕ್ಷಿಸಿ' ವಿಷಯದಲ್ಲಿ ಸಂಶೋಧನೆ ನಡೆಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾಲಯ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

ಹಿಂದೂ ಧರ್ಮ, ಸಂಸ್ಕೃತಿಯ ಬಗ್ಗೆ ಕಂಡ ಕಂಡವರು ತೆಗಳಿದರೆ ನಾವೇಕೆ ಸುಮ್ಮನಿದ್ದೇವೆ...!

● ಹಿಂದೂಗಳಿಗೆ ಚಿಂತಕ ಸೂಲಿಬೆಲೆ ಅಚ್ಚರಿ ಪ್ರಶ್ನೆ ● ಇಂದು ಧರ್ಮಸ್ಥಳ, ಚಾಮುಂಡಿಬೆಟ್ಟ, ಊರ ದೇವಸ್ಥಾನದ ನಂತರ ದೇವರ ಕೋಣೆಗೂ ಗಂಡಾಂತರ ತಪ್ಪಿದ್ದಲ್ಲ

ಮೈಸೂರು, ಸೆ.1(ಎಸ್‌ಬಿಡಿ)– ಹಿಂದೂ ಧರ್ಮ ಹಾಗೂ ಸಂಸ್ಕೃತಿಯನ್ನು ಯಾರೋ ತೆಗಳಿದರೆ ಅದನ್ನು ವಿವೇಚನೆ ಮರೆತು ನಂಬಬೇಡಿ ಎಂದು ಚಿಂತಕ ಚಕ್ರವರ್ತಿ ಸೂಲಿಬೆಲೆ ಹೇಳಿದರು.

ಪುಣ್ಯಕ್ಷೇತ್ರ ಸಂರಕ್ಷಣಾ ಸಮಿತಿ ವತಿಯಿಂದ ಜಗನ್ಮೋಹನ ಅರಮನೆಯಲ್ಲಿ ಸೋಮವಾರ ಏರ್ಪಡಿಸಿದ್ದ 'ಧರ್ಮಕ್ಷೇತ್ರ ಉಳಿಸೋಣ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯಾರಾದರೂ ಹಿಂದೂ ಧರ್ಮ ಹಾಗೂ ವ್ಯಕ್ತಿತ್ವವನ್ನು ತೆಗಳಿದರೆ ಯಾವ ಸಾಕ್ಷಿಯನ್ನೂ ಕೇಳದೆ ನಂಬುತ್ತೇವೆ. ತೆಗಳುವವರ ಬಳಿ ನಾವು ಯಾವುದೇ ಆಧಾರ ಕೇಳುವುದಿಲ್ಲ. ನಮ್ಮ ವಿವೇಚನೆಗೆ ಏನಾಗಿದೆ. ಈ ಮಾನಸಿಕತೆ ಬದಲಾಗದಿದ್ದರೆ ಇಂದು ಧರ್ಮಸ್ಥಳಕ್ಕೆ ಎದುರಾಗಿದ್ದ ಅಪಾಯ ಮುಂದೆ ನಮ್ಮೂರಿನ ದೇವಸ್ಥಾನವನ್ನಷ್ಟೇ ಅಲ್ಲ ನಮ್ಮ ಮನೆಯ ದೇವರಕೋಣೆಯನ್ನೂ ಪ್ರವೇಶಿಸಬಹುದು ಎಂದರು.



ಪುಣ್ಯಕ್ಷೇತ್ರ ಸಂರಕ್ಷಣಾ ಸಮಿತಿ ವತಿಯಿಂದ ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ಸೋಮವಾರ ಏರ್ಪಡಿಸಿದ್ದ 'ಧರ್ಮಕ್ಷೇತ್ರ ಉಳಿಸೋಣ' ಕಾರ್ಯಕ್ರಮದಲ್ಲಿ ಚಿಂತಕ ಚಕ್ರವರ್ತಿ ಸೂಲಿಬೆಲೆ ಮಾತನಾಡಿದರು. ಶ್ರೀ ಶಿವಬಸವ ಸ್ವಾಮೀಜಿ, ಕಿರಿಕ್ ಕೀರ್ತಿ ಹಾಗೂ ವಿಕಾಸ್ ಶಾಸ್ತ್ರಿ ವೇದಿಕೆಯಲ್ಲಿದ್ದರು.

ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಕಳೆದ ಹತ್ತು ವರ್ಷಗಳಲ್ಲಿ ನಾಡಿನ 12 ಸಾವಿರಕ್ಕೂ ಹೆಚ್ಚು ದೇವಸ್ಥಾನಗಳಿಗೆ 175 ಕೋಟಿ ರೂ.ಅನುದಾನ ನೀಡಿದ್ದಾರೆ. ತಮ್ಮ ಧರ್ಮೋತ್ಥಾನ ಟ್ರಸ್ಟ್ ಮೂಲಕ 400ಕ್ಕೂ ಹೆಚ್ಚು ಪಾಳುಬಿದ್ದ ಹಿಂದೂ ದೇವಸ್ಥಾನಗಳನ್ನು ಪುನರ್‌ನಿರ್ಮಾಣ ಮಾಡಿದ್ದಾರೆ. ಕಷ್ಟವಿದೆ ಎಂದು ಹೋದ ಲಕ್ಷಾಂತರ ಜನರಿಗೆ ಆಶೀರ್ವಾದ ಮಾಡಿದ್ದಾರೆ. ಆರೂವರೆ ಲಕ್ಷ ಸ್ವಸಹಾಯ ಗುಂಪುಗಳ ಮೂಲಕ 55 ಲಕ್ಷ ಜನರಿಗೆ ಸಾಲ ನೀಡಿ, ಅವರ ಬದುಕು ಕಟ್ಟಿಕೊಳ್ಳಲು ನೆರವಾಗಿದ್ದಾರೆ. ಶ್ರೀ ಮಂಜುನಾಥನ ಹೆಸರಲ್ಲಿ ಹೆಗ್ಗಡೆಯವರು ಮಧ್ಯ ನಿಂತು ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಈವರೆಗೆ 1.25 ಲಕ್ಷ ಕೋಟಿ ಸಾಲ ಕೊಡಿಸಿದ್ದಾರೆ. 70 ಸಾವಿರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಸಾವಿರಾರು ಬೆಂಚು ಇನ್ನಿತರ ಪೀಠೋಪಕರಣಗಳು, ಸರ್ಕಾರಿ ಶಾಲೆಗಳಿಗೆ ಸಾವಿರಕ್ಕೂ ಹೆಚ್ಚು ಶಿಕ್ಷಕರ ನಿಯೋಜನೆ, ನಿತ್ಯ ಸುಮಾರು 40 ಸಾವಿರ ಜನರಿಗೆ ಅನ್ನ ಪ್ರಸಾದ ನೀಡುತ್ತಿದ್ದಾರೆ. ಶಿಬಿರಗಳ ಮೂಲಕ ಒಂದೂವರೆ ಲಕ್ಷಕ್ಕಿಂತ ಹೆಚ್ಚು ಜನರನ್ನು ಕುಡಿತದ ವ್ಯಸನದಿಂದ ಹೊರ ತಂದಿದ್ದಾರೆ ಎಂದು ತಿಳಿಸಿದರು.

ಪರ್ಯಾಯ ಸರ್ಕಾರದಂತೆ ಸೇವೆ: ಧರ್ಮಸ್ಥಳ ಮಂಜುನಾಥ ಜನರಿಗೆ ಎಲ್ಲವನ್ನೂ ಕೊಡುತ್ತಿದ್ದಾನೆ. ಧರ್ಮದರ್ಶಿಗಳಾದ ವೀರೇಂದ್ರ ಹೆಗ್ಗಡೆಯವರು ಯಾವ ದಿಕ್ಕಿನಲ್ಲಿ ಸೇವೆ ಮಾಡಿಲ್ಲ ನೀವೇ ಹೇಳಿ. ಧರ್ಮಸ್ಥಳ ಒಂದು ರೀತಿಯಲ್ಲಿ ಪರ್ಯಾಯ ಸರ್ಕಾರದ ರೀತಿಯಲ್ಲಿ ಸಮಾಜಕ್ಕೆ ನೆರವಾಗಿದೆ ಇದನ್ನು ಸಹಿಸಲಾಗದೆ ಷಡ್ಯಂತರ ಮಾಡಿ ಸುಳ್ಳುಗಳ ಸರಮಾಲೆ ಪೋಣಿಸಿಕೊಂಡು ಬರಲಾಗುತ್ತಿದೆ ಯಾವನೋ ಒಬ್ಬ ಮಾಡಿದ ವಿಡಿಯೋ ನೋಡಿ ನೂರಾರು ವರ್ಷಗಳಿಂದ ನಂಬಿಕೊಂಡು ಬಂದಿರುವ ದೇವಸ್ಥಾನದ ಮೇಲೆ ಅನುಮಾನಪಡುವುದು ಸರಿಯೇ. 55 ವರ್ಷದಿಂದ ಧರ್ಮಾಧಿಕಾರಿ ಸ್ಥಾನದಲ್ಲಿ ಕುಳಿತು ಹಗಲಿರುಳು ಸಮಾಜದ ಒಳಿತಿನ ಬಗ್ಗೆ ಯೋಚನೆ ಮಾಡುವವರ ಬಗ್ಗೆ ಈ ರೀತಿ ಮಾತನಾಡಲು ನಾಚಿಕೆಯಾಗಬೇಕು. ಧರ್ಮಾತೀತವಾಗಿ ಮಂಜುನಾಥನ ಭಕ್ತರು ಹಾಗೂ ಸಮಾಜಕ್ಕಾಗಿ ಇಷ್ಟೊಂದು ಸೇವೆ ಮಾಡುವಾಗ ಅವರು ಜೈನರಾಗಿರಲಿಲ್ಲವೇ?. ಯಾರೋ ನಾಲ್ಕು ಜನ ಎಲ್ಲೋ ಕುಳಿತು ಹೇಳಿದ್ದನ್ನು ನಂಬಿ, ಹೆಗ್ಗಡೆಯವರು ಜೈನರು ಎಂದು ಯೋಚಿಸುತ್ತೀರಾ?. ಸಜ್ಜನರಿಗೆ ಇಂತಹ ಆರೋಪಗಳನ್ನು ಕೇಳಿಸಿಕೊಳ್ಳುವುದು ಪ್ರಾಣಹಾನಿಯಾದಷ್ಟು ನೋವು ನೀಡುತ್ತದೆ ಎಂದು ಬೇಸರ ವ್ಯಕ್ತಪಡಿಸಿದರು.

ದಾಳಿ ಈಗಿನಿಂದಲ್ಲಾ: ಯಾಕೆ ಹಿಂದೂ ದೇವಸ್ಥಾನಗಳ ಮೇಲೆ ದಾಳಿ ನಡೆಸುತ್ತಾರೆ, ಯಾಕೆ ಹಿಂದೂ ಮಠಾಧೀಶರನ್ನು ಗುರುತಿಸಿ ಅವರನ್ನು ಪೀಠದಿಂದ ಕೆಳಗಿಳಿಸಲು ಯತ್ನಿಸುತ್ತಾರೆ, ಏಕೆ ಹಿಂದೂ ಪ್ರಮುಖ ವ್ಯಕ್ತಿಗಳನ್ನು ನೋಡಿದರೆ ನಾಚಿಕೆಪಡುವಂತೆ ಮಾಡುತ್ತಾರೆ ಎಂದು ಆಲೋಚಿಸಬೇಕು. ಈ ದಾಳಿ ಯೂಟ್ಯೂಬರ್ ಸಮೀರ್‌ನಿಂದ ಆಗಿದ್ದಲ್ಲ. ಮಹಮ್ಮದ್ ಘೋರಿ, ಮಹಮ್ಮದ್ ಘಜ್ನಿ ಅವರಿಂದಲೇ ಶುರುವಾಗಿದೆ. ಘಜ್ನಿ ಅನೇಕ ದೇವಾಲಯಗಳಂತೆ ಸೋಮನಾಥ ದೇವಾಲಯವನ್ನೂ ನಾಶ ಮಾಡಿದ. ಆದರೆ ಸೋಮನಾಥ ತನ್ನನ್ನು ತಾನು ರಕ್ಷಿಸಿಕೊಂಡಿದ್ದಾನೆ. ಎಷ್ಟೇ ದಾಳಿ ನಡೆದರೂ ಈಗಲೂ ವೈಭವದಿಂದ ಕಂಗೊಳಿಸುತ್ತಿದ್ದಾನೆ. ಇದೀಗ ಧರ್ಮಸ್ಥಳವನ್ನು ಮಂಜುನಾಥ ಹಾಗೂ ಅಣ್ಣಪ್ಪ ಸ್ವಾಮಿ ರಕ್ಷಿಸಿಕೊಳ್ಳುತ್ತಾರೆ. ಅಸ್ಥಿಪಂಜರ ಹುಡುಕಾಟದ ವಿಷಯದಲ್ಲೂ ಅದು ದೇವರ ಮಹಿಮೆ ಸಾಬೀತಾಗಿದೆ. ಆದರೆ ಎಲ್ಲವನ್ನೂ ದೇವರೇ ನೋಡಿಕೊಳ್ಳುವುದಾದರೆ ನಾವೇನು ಮಾಡುತ್ತಿದ್ದೇವೆ. ಒಂದು ವೇಳೆ ಅಗೆದ ಗುಂಡಿಗಳಲ್ಲಿ ಮೂರ್ನಾಲ್ಕು ಕಳೇಬರ ಸಿಕ್ಕಿದ್ದರೆ ಹಿಂದೆ–ಮುಂದೆ ಯೋಚಿಸದೆ ಸಮೂಹ ಸನ್ನಿಗೆ ಒಳಗಾಗಿ ನಾವೇ ಧರ್ಮಸ್ಥಳಕ್ಕೆ ಕಲ್ಲು ಹೊಡೆಯುತ್ತಿದ್ದವೇನೋ? ಇದೆಲ್ಲದರ ಬಗ್ಗೆ ಗಂಭೀರವಾಗಿ ಚಿಂತನೆ ಮಾಡಬೇಕು. ಧರ್ಮ ಹಾಗೂ ಸತ್ಯ ರಕ್ಷಣೆಗೆ ನಿಲ್ಲಲೇಬೇಕು ಎಂದರು.

ಮೈಸೂರು ನಂಟು: ಧರ್ಮಸ್ಥಳ ಪ್ರಕರಣಕ್ಕೂ ಮೈಸೂರು ಮೂಲ. ಇಲ್ಲಿನ ಒಡನಾಡಿ ಸಂಸ್ಥೆಯ ಸ್ಟ್ಯಾನ್ಲಿ 2023ರಲ್ಲಿ ಧರ್ಮಸ್ಥಳದ ಮನೆ ಮನೆಗೆ ಹೋಗಿ ಅಪಪ್ರಚಾರ ಮಾಡಿದ್ದ. ಈಗ ಸೌಜನ್ಯ ಅಪಹರಣವನ್ನು ನೋಡಿದ್ದಾಗಿ ಹೇಳಿಕೆ ನೀಡಿರುವ ಮಹಿಳೆಯ ವಿಡಿಯೋ ಬಿಟ್ಟಿದ್ದಾರೆ. ಇದು ಬುರುಡೆ ಪ್ರಕರಣವನ್ನು ಡೈವರ್ಟ್ ಮಾಡುವ ಪ್ರಯತ್ನ. ಒಡನಾಡಿ ಯುಎಸ್, ಒಡನಾಡಿ ಯುಕೆ ಎಂದೆಲ್ಲಾ ಇದೆ. ಒಡನಾಡಿ ಯುಎಸ್ ತಂಡ ಅಮೆರಿಕಾದ ಅಧ್ಯಕ್ಷರಾಗಿದ್ದ ಒಬಾಮಾ ಸಹೋದರಿ ಜೊತೆ ಊಟ ಮಾಡಿದ ಫೋಟೋ ಹಂಚಿಕೊಂಡಿದೆ ಎಂದರೆ ಎಷ್ಟೊಂದು ವಿಸ್ತಾರಗೊಂಡಿದೆ ನೋಡಿ. ಒಡನಾಡಿ ಹಿಂದೆ ದಕ್ಷಿಣ ಕನ್ನಡದಲ್ಲಿ ಜಿಲ್ಲಾಧಿಕಾರಿಯಾಗಿದ್ದ ಸದ್ಯ ತಮಿಳುನಾಡಿನಲ್ಲಿ ಸೆಂಥಿಲ್ ಇದ್ದಾನೆಂದು ಸದನದಲ್ಲೇ ಸದಸ್ಯರೊಬ್ಬರು ಆರೋಪಿಸಿದ್ದಾರೆ. ಈ ಸ್ಟ್ಯಾನ್ಲಿ, ಸೆಂಥಿಲ್, ಸಮೀರ್‌ಗೂ ಧರ್ಮಸ್ಥಳಕ್ಕೂ ಏನು ಸಂಬಂಧ?. ಹೌದು ಹೆಣ್ಣು ಮಗಳ ಮೇಲಿನ ದೌರ್ಜನ್ಯ ಪ್ರಶ್ನಿಸಲು ಧರ್ಮದ ಅಡ್ಡಿಯಿಲ್ಲ. ಹಾಗಾದರೆ ರಾಯಚೂರು, ಚಿಕ್ಕಬಳ್ಳಾಪುರದಲ್ಲಿ ಅನ್ಯಧರ್ಮದ ಪ್ರಾರ್ಥನಾ ಕೇಂದ್ರದಲ್ಲಿ ಬಾಲಕಿಯರ ಮೇಲೆ ಅತ್ಯಾಚಾರ ನಡೆದಿದ್ದರ ಬಗ್ಗೆ ಏಕೆ ಚಕಾರವೆತ್ತಲಿಲ್ಲ. ಹಾಗಾದರೆ ಇದೊಂದು ಅಜೆಂಡಾ ಅಲ್ಲವೇ?. ಸಿದ್ದರಾಮಯ್ಯನವರ ಬಗ್ಗೆ ಮಾತನಾಡುವುದಿಲ್ಲ. ಆದರೆ ಅವರ ಸುತ್ತಲಿರುವ ಲೆಫ್ಟಿಸ್ಟ್ ಟೀಮ್ ಕೂಡ ಇಂತಹವರ ಜೊತೆಗಿದೆ ಎಂದು ಹೇಳಿದರು.


ಬೇಬಿಬೆಟ್ಟ ಶ್ರೀ ರಾಮಯೋಗೀಶ್ವರ ಮಠದ ಪೀಠಾಧ್ಯಕ್ಷ ಶ್ರೀ ಶಿವಬಸವ ಸ್ವಾಮೀಜಿ, ಹಿಂದೂ ಹೋರಾಟಗಾರರಾದ ಕಿರಿಕ್ ಕೀರ್ತಿ ಹಾಗೂ ವಿಕಾಸ್ ಶಾಸ್ತ್ರಿ ಮಾತನಾಡಿ, ಧರ್ಮಸ್ಥಳದ ವಿರುದ್ಧ ಷಡ್ಯಂತರ ನಡೆಸಿದವರ ಬಂಡವಾಳ ಶೀಘ್ರದಲ್ಲೇ ಬಯಲಾಗಲಿದೆ ಎಂದು ಅಭಿಪ್ರಾಯಿಸಿದರು.

ಬಾನು ಮುಷ್ತಾಕ್ ಆಯ್ಕೆಗೆ ಆಕ್ರೋಶ

ಭುವನೇಶ್ವರಿ ದೇವಿಯನ್ನು ಒಪ್ಪದೆ ಇರುವ ಹೆಣ್ಣು ಮಗಳಿಂದ ಚಾಮುಂಡೇಶ್ವರಿ ದೇವಿಯ ಉತ್ಸವವನ್ನು ಮಾಡಿಸುವಾಗ ನಿಮ್ಮಿಂದ ಏನು ಮಾಡಲಿಕ್ಕಾಯಿತು. ಉದ್ಘಾಟನೆಯಾದ ಮೇಲೆ ಈಗ ವಿರೋಧಿಸುತ್ತಿರುವವರೆಲ್ಲಾ ಉತ್ಸವ ನೋಡಿ ಚೆನ್ನಾಗಿತ್ತು ಎಂದು ಬರಬೇಕಷ್ಟೇ. ಹಿಂದೂಗಳ ವಿರೋಧದ ನಡುವೆಯೂ ದಸರಾ ಶಾಂತವಾಗಿ ಜರುಗಿತು ಎಂದು ವರದಿಯಾಗುತ್ತದೆ. ಹಿಂದೂಗಳದ್ದು ಇದೆಂಥಾ ಮನೋಭಾವ. ಏನೂ ಮಾಡುವುದಿಲ್ಲ ನಾವು. ಫೇಸ್‌ಬುಕ್, ಟಿವಿಯಲ್ಲಷ್ಟೇ ಫೈಟ್. ಪ್ರತ್ಯಕ್ಷವಾಗಿ ಇಲ್ಲ. ಬುರುಡೆ ಪ್ರಕರಣ ತೀವ್ರವಾಗಿದ್ದರಿಂದ ಹಿಂದೂಗಳ ಗಮನ ಬದಲಿಸಲೆಂದೇ ದಸರಾ ಉತ್ಸವಕ್ಕೆ ಬಾನು ಮುಷ್ತಾಕ್ ಅವರನ್ನು ಕರೆದಿರಬಹುದು. ಆದರೆ ಹಿಂದೂಗಳು ಬುದ್ಧಿವಂತರಾಗಿದ್ದಾರೆ. ಎರಡೂ ವಿಷಯಗಳ ಬಗ್ಗೆ ಹೋರಾಟ ಮಾಡುತ್ತಿದ್ದಾರೆ. ಯಾವುದೇ ಕಾರಣಕ್ಕೂ ಧರ್ಮಸ್ಥಳ ಹೋರಾಟ ನಿಲ್ಲಿಸುವುದಿಲ್ಲ.

-ಚಕ್ರವರ್ತಿ ಸೂಲಿಬೆಲೆ

ಸಂದೇಶ್ ನಾಗರಾಜ್ ಅವರಿಗೆ ಹುಟ್ಟುಹಬ್ಬದ ಶುಭಾಶಯ



ವಿಧಾನಪರಿಷತ್ ಮಾಜಿ ಸದಸ್ಯರೂ ಆದ ಉದ್ಯಮಿ ಸಂದೇಶ್ ನಾಗರಾಜ್ ಅವರಿಗೆ ಚಲನಚಿತ್ರ ನಾಯಕ ನಟರೂ ಆದ ಕಾವೇರಿ ಕ್ರಿಯಾ ಸಮಿತಿಯ ಅಧ್ಯಕ್ಷ ಜಯಪ್ರಕಾಶ್ (ಜೆಪಿ), ಶ್ರೀನಿವಾಸ್, ಮಹೇಶ್, ಸಾಬು ಅವರು ಹುಟ್ಟುಹಬ್ಬದ ಶುಭಾಶಯ ಕೋರಿದರು.

ಮೂರನೇ ಪುಟದಿಂದ

ಮೈಸೂರಿನ ಆಯಿಷ್ ದೇಶದ ಹೆಮ್ಮೆ

ಸಂವಹನ ದೋಷ ಪರಿಹಾರಕ್ಕಾಗಿ ತಜ್ಞ ಮಾನವ ಸಂಪನ್ಮೂಲಗಳ ಸಹಾಯದಿಂದ ಅಪ್ರತಿಮ ಸೇವೆ ನೀಡಿದೆ. ಎಲ್ಲಾ ವಂಶೋವಾನದವರಿಗೂ ಬಹುವಿಧಾನದ ಚಿಕಿತ್ಸೆ ಮೂಲಕ ಸೇವೆ ಒದಗಿಸುತ್ತಿರುವುದು ಅಭಿನಂದನೀಯ. ಸಮುದಾಯ ಸೇವಾ ಕೇಂದ್ರಗಳು, ಟೆಲಿ–ಸರ್ವೇಕ್ಷಣೆ ಸೇರಿದಂತೆ ಇನ್ನಿತರ ಕಾರ್ಯವಿಧಾನಗಳ ಮೂಲಕ ದೇಶದಾದ್ಯಂತ ಜನತೆಗೆ ನೆರವಾಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಭೂಮಿ ಕೊಟ್ಟ ಒಡೆಯರ್ ಸ್ಮರಣೆ: ಹಲವು ವರ್ಷಗಳಿಂದ ಈ ಸಂಸ್ಥೆಯ ನಾಯಕತ್ವವನ್ನು ಮಹಿಳೆಯರು ವಹಿಸಿರುವುದು ವಿಶೇಷ. ಪ್ರಸ್ತುತದಲ್ಲಿ ಸಂಸ್ಥೆಯ ನಿರ್ದೇಶಕಿ ಡಾ.ಎಂ.ಪುಷ್ಪಾವತಿ ಅವರು ನೀಡುತ್ತಿರುವ ಸೇವೆಯೂ ಪ್ರಶಂಸನೀಯ. ಈ ಸಂಸ್ಥೆ ಮಹಿಳಾ ನೇತೃತ್ವದ ಅಭಿವೃದ್ಧಿಗೆ ಒಂದು ಉತ್ತಮ ಉದಾಹರಣೆ. ಈ ಸಂಸ್ಥೆ ಪ್ರಾರಂಭಕ್ಕೆ ಮೈಸೂರು ಮಹಾರಾಜ ಜಯಚಾಮರಾಜೇಂದ್ರ ಒಡೆಯರ್ ಅವರು ಭೂಮಿ ದಾನ ಮಾಡಿರುವುದು ಸ್ಮರಣೀಯ. ಜೊತೆಗೆ ಇಂದು ಅವರ ಕುಟುಂಬದ ಯದುವೀರ್ ಒಡೆಯರ್ ಅವರು ಉಪಸ್ಥಿತರಿರುವುದು ಖುಷಿ ತಂದಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಅಂದಾಜಿನ ಪ್ರಕಾರ 2023ರಲ್ಲಿ ದೇಶದ 6 ಕೋಟಿ ಜನರು ವಾಕ್ ಮತ್ತು ಶ್ರವಣ ದೋಷದಿಂದ ಬಳಲುತ್ತಿದ್ದರು. ಈ ದೋಷದ ನಿವಾರಣೆಯ ರಾಷ್ಟ್ರೀಯ ಕಾರ್ಯಕ್ರಮದಲ್ಲಿ ಆಯಿಷ್ ಹೊಣೆಗಾರಿಕೆ ಮಹತ್ವದ್ದಾಗಿದೆ. ಇತರೆ ಅನಾರೋಗ್ಯ ಸಮಸ್ಯೆಗಳಂತೆ ವಾಕ್ ಮತ್ತು ಶ್ರವಣ ಸಂಬಂಧಿತ ತೊಂದರೆಗಳಲ್ಲಿ ಕೂಡ ಪ್ರಾಥಮಿಕ ಹಂತದಲ್ಲಿಯೇ ಲಕ್ಷಣಗಳನ್ನು ಗುರುತಿಸಿ ಚಿಕಿತ್ಸೆ ನೀಡಲು ತಜ್ಞರ ಅವಶ್ಯಕತೆ ಇದೆ ಎಂದರು.

ದೇಶದಲ್ಲೇ ಉತ್ತಮ ಪ್ರಯೋಗ: ಆಯಿಷ್ ಮೂಲಕ ಸ್ಥಾಪಿಸಲ್ಪಟ್ಟ 'ಇನ್‌ಕ್ಲೂಸಿವ್ ಥೆರಪಿ ಪಾರ್ಕ್' ದೇಶದ ಮೊದಲ ಮಾದರಿಯಾಗಿದೆ. ಇದನ್ನು ವಿಶೇಷವಾಗಿ ಮಕ್ಕಳಿಗಾಗಿ ವಿನ್ಯಾಸಗೊಳಿಸಲಾಗಿದೆ. ಇದು ಸಂವಹನ ದೋಷದಿಂದ ಬಳಲುತ್ತಿರುವವರಿಗೆ ಉಪಯುಕ್ತವಾಗಿದೆ. ಈ ಪಾರ್ಕ್ ಭಾರತದಲ್ಲಿ ಮಾತ್ರವಲ್ಲದೆ, ವಿದೇಶಗಳಲ್ಲಿ ಸಹ ಮಾದರಿಯಾಗಿ ಪರಿಗಣಿತವಾಗಿದೆ. ಆಯಿಷ್‌ನ 'ಆರೋಗ್ಯ ವಾಣಿ' ಒಂದು ಉತ್ತಮ ಯೋಜನೆ ಆಗಿದ್ದು, ಇದನ್ನು ಸಂವಹನ ದೋಷದ ಬಗ್ಗೆ ಜಾಗೃತಿ ಮೂಡಿಸಲು ವಿನ್ಯಾಸಗೊಳಿಸಲಾಗಿದೆ. ಇದರಿಂದ ಜನಸಾಮಾನ್ಯರಿಗೆ ಸರಳವಾಗಿ ಮಾಹಿತಿ ಲಭ್ಯವಾಗುತ್ತಿದೆ. ಆ ಮೂಲಕ ಆಯಿಷ್ ಸಂಸ್ಥೆ ರಾಷ್ಟ್ರೀಯ ನೀತಿ ರೂಪಿಸಲು ಸಹ ಸಲಹೆ ನೀಡಬಹುದು ಎಂದು ತಿಳಿಸಿದರು.



ಆಯಿಷ್ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸುತ್ತಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು.

ಆಯಿಷ್ ಸಂಸ್ಥೆಯು ದೇಶದಲ್ಲಿ ದಿವ್ಯಾಂಗ ಮಾನವ ಸಂಪನ್ಮೂಲಗಳನ್ನು ಶಕ್ತಗೊಳಿಸುವ ಪ್ರಮುಖ ಸಂಸ್ಥೆಯಾಗಿದೆ. ಇಲ್ಲಿ ಸ್ಥಾಪಿಸಲ್ಪಟ್ಟ ಉತ್ಕೃಷ್ಟತಾ ಕೇಂದ್ರವು ಶಿಕ್ಷಣ, ವೈದ್ಯಕೀಯ, ತಾಂತ್ರಿಕ ತಜ್ಞತೆ ಹಾಗೂ ಸಂಶೋಧನೆಗಳಿಗೆ ಮಾರ್ಗದರ್ಶನ ನೀಡುತ್ತಿದೆ. ಇದು ದಿವ್ಯಾಂಗ ಜನಸಮುದಾಯದ ಸಬಲೀಕರಣಕ್ಕೆ ಪ್ರಮುಖ ಹೆಜ್ಜೆಯಾಗಿದೆ. ಈ ಕಾರ್ಯದಲ್ಲಿ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳು, ದೇಶ–ವಿದೇಶಗಳಲ್ಲಿ ಸೇವೆ ನೀಡುತ್ತಿರುವವರು ಕೂಡ ಭಾಗಿಯಾಗಿರುವುದು ಶ್ಲಾಘನೀಯ ಎಂದರು.

ಸರ್ಕಾರ, ತಾಂತ್ರಿಕ ಹಾಗೂ ಸಾಮಾಜಿಕ ಕಾರ್ಯಕರ್ತರ ಸಹಯೋಗದ ಮೂಲಕ ದಿವ್ಯಾಂಗ ಜನಸಮುದಾಯಕ್ಕಾಗಿ ಮುಕ್ತ ಪರಿಸರವನ್ನು ನಿರ್ಮಿಸಬೇಕು. ಇದರಿಂದ ಅವರು ಯಾವುದೇ ಅಡಚಣೆಯಿಲ್ಲದೆ ಜೀವನದಲ್ಲಿ ಮುಂದುವರಿಯಲು ಸಾಧ್ಯವಾಗುತ್ತದೆ. 'ಸುಗಮ್ಯ ಭಾರತ ಅಭಿಯಾನ್' ಅಡಿಯಲ್ಲಿ ದಿವ್ಯಾಂಗ ಜನರ ಒಳಗೊಳ್ಳುವಿಕೆ ಹಾಗೂ ಅಭಿವೃದ್ಧಿಗೆ ಒತ್ತು ನೀಡಿ ಸಮಾನ ಅವಕಾಶ ಕಲ್ಪಿಸಲು ಪ್ರಯತ್ನಿಸಲಾಗುತ್ತಿದೆ. ಸಾರ್ವಜನಿಕ ಸ್ಥಳಗಳು, ಸೌಲಭ್ಯಗಳು ಹಾಗೂ ಮಾಹಿತಿ ಮೂಲಗಳು ದಿವ್ಯಾಂಗ ಸ್ನೇಹಿಯಾಗಿರಬೇಕು. ಆ ಮೂಲಕ ನಮ್ಮ ಸಮಾಜ ನಮ್ಮ ಬಗ್ಗೆ ಕಾಳಜಿ ಹೊಂದಿದೆ ಎಂಬ ಮನೋಭಾವ ಅವರಲ್ಲಿ ಬರಬೇಕು. ಇದರಿಂದ ಅವರ ಬದುಕಿನಲ್ಲಿ ಭರವಸೆ ಮೂಡಲಿದೆ. ವಿಶ್ವ ಸಂಜ್ಞಾ ಭಾಷಾ ದಿನವನ್ನು ಪ್ರತಿ ವರ್ಷ ಸೆಪ್ಟೆಂಬರ್ 23ರಂದು ಆಚರಿಸಲಾಗುತ್ತದೆ. ಸಂಜ್ಞಾ ಭಾಷೆ ಬಗ್ಗೆ ಜಾಗೃತಿ ಮೂಡಿಸುವುದು ಇದರ ಉದ್ದೇಶವಾಗಿದೆ. ಸಂಜ್ಞಾ ಭಾಷೆಯ ಬಳಕೆ ಬಲಪಡಿಸಲು ಸಂಕಲ್ಪ ಮಾಡಬೇಕಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು '60@60 ; ಆಯಿಷ್ ಎ ಡೈಮಂಡ್ ಬೀಕನ್' ಯಶೋಗಾಥೆಗಳ ಆಲ್ಬಮ್ ಬಿಡುಗಡೆ ಮಾಡಿ ಅದರ ಮೊದಲ ಪ್ರತಿಯನ್ನು ರಾಷ್ಟ್ರಪತಿಗಳಿಗೆ ನೀಡಿದರು.

ಅಲ್ಲದೆ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು 'ಕಮ್ಯುನಿಕೇಷನ್ ಪಲ್ಸ್' ಕೈಪಿಡಿಯನ್ನು ಬಿಡುಗಡೆಗೊಳಿಸಿ ಮೊದಲ ಪ್ರತಿಯನ್ನು ರಾಷ್ಟ್ರಪತಿಗಳಿಗೆ ಸಲ್ಲಿಸಿದರು. ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್, ಕರ್ನಾಟಕ ಸರ್ಕಾರದ ಆರೋಗ್ಯ ಸಚಿವ ದಿನೇಶ್ ಗುಂಡೂ ರಾವ್, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಆಯಿಷ್ ನಿರ್ದೇಶಕಿ ಡಾ.ಎಂ.ಪುಷ್ಪಾವತಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

10 ಎಕರೆ ಭೂಮಿ

ಜಿಲ್ಲಾಡಳಿತ ಹಾಗೂ ರಾಜ್ಯ ಸರ್ಕಾರದಿಂದ ರಾಷ್ಟ್ರಪತಿಗಳಿಗೆ ಸ್ವಾಗತ ಕೋರಿದರು. ಬಳಿಕ ಮಾತು ಮುಂದುವರೆಸಿದ ಅವರು, ಕ್ಲಿನಿಕಲ್ ಮತ್ತು ಪುನರ್ವಸತಿ ಕಾರ್ಯವನ್ನು ಇನ್ನಷ್ಟು ವಿಸ್ತರಿಸಲು ಪೂರಕವಾಗಿ ವರುಣದಲ್ಲಿ 10 ಎಕರೆ ಜಮೀನನ್ನು ಆಯಿಷ್ ಸಂಸ್ಥೆಗೆ ನಮ್ಮ ಸರ್ಕಾರ ಉಚಿತವಾಗಿ ನೀಡಿದೆ. ಈ ಸಂಸ್ಥೆಯ ಅಂಗಳದಲ್ಲಿ 2.55 ಕೋಟಿ ರೂ. ವೆಚ್ಚದಲ್ಲಿ ಮೈಸೂರು ಪಾಲಿಕೆ ವತಿಯಿಂದ ಅಂಗವಿಕಲ ಮಕ್ಕಳಿಗೆ ಆಂಫಿಥಿಯೇಟರ್ ನಿರ್ಮಾಣ, ಅಂಗವಿಕಲ ಸ್ನೇಹಿ ಸಲಕರಣೆಗಳು, ಉದ್ಯಾನವನ ಅಭಿವೃದ್ಧಿ, ಮಾತು ಬಾರದ, ಕಿವಿ ಕೇಳದ ಮಕ್ಕಳಿಗೆ ನಿರೀಕ್ಷಣಾ ಕೊಠಡಿ ಮತ್ತು ಮ್ಯೂಸಿಯಂ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸುತ್ತಿದೆ ಎಂದು ತಿಳಿಸಿದರು.

ಆಯಿಷ್ ಸಂಸ್ಥೆಯನ್ನು ನನ್ನ ವಿದ್ಯಾರ್ಥಿ ದಿನಗಳಿಂದಲೂ ನೋಡುತ್ತಿದ್ದೇನೆ. ಇಡೀ ಏಷ್ಯಾದಲ್ಲೇ ಇದೊಂದು ಪ್ರತಿಷ್ಠಿತ ಸಂಸ್ಥೆ. ವಾಕ್ ಮತ್ತು ಶ್ರವಣ ದೋಷದಿಂದ ಬಳಲುವವರಿಗೆ ಉತ್ತಮ ರೀತಿಯಲ್ಲಿ ಚಿಕಿತ್ಸೆ ನೀಡುತ್ತಿದ್ದು, ಇದು ಶ್ಲಾಘನೀಯ. 2011ರ ಜನಗಣತಿ ಪ್ರಕಾರ ರಾಜ್ಯದಲ್ಲಿ 3.3 ಲಕ್ಷ ಜನರು ವಾಕ್ ಮತ್ತು ಶ್ರವಣ ದೋಷದಿಂದ ಬಳಲುತ್ತಿದ್ದಾರೆ. ಶೇ.0.5ರಷ್ಟಿರುವ ಈ ಅಸಹಾಯಕರನ್ನು ಅತ್ಯಂತ ಎಚ್ಚರಿಕೆಯಿಂದ ಕಾಪಾಡಿಕೊಳ್ಳುವುದು ನಾಗರಿಕ ಸಮಾಜದ ಹಾಗೂ ಸರ್ಕಾರದ ಜವಾಬ್ದಾರಿಯಾಗಿದೆ. ಅವರು ಎಲ್ಲರಂತೆ ಬದುಕುವ ವ್ಯವಸ್ಥೆ ನಿರ್ಮಿಸಿಕೊಡಬೇಕು. ಕಿವಿ ಮತ್ತು ಬಾಯಿ ಮನುಷ್ಯನ ಪ್ರಮುಖ ಅಂಗಗಳು. ಧ್ವನಿಯಿಲ್ಲದವರಿಗೆ ಧ್ವನಿಯಾಗಿರುವ, ಕಿವಿ ಕೇಳದೆ ಮೌನವಾಗಿರುವವರಿಗೆ ಮಾತಿನ ಚೈತನ್ಯ ತುಂಬಿರುವ ಇಂತಹ ಸಂಸ್ಥೆಯು ಮೈಸೂರಲ್ಲಿರುವುದು ಹಾಗೂ ವಜ್ರ ಮಹೋತ್ಸವವನ್ನು ಆಚರಿಸಿಕೊಳ್ಳುತ್ತಿರುವುದು ಹೆಮ್ಮೆಯ ಸಂಗತಿ.

ಮಗು ತಾಯಿ ಹೊಟ್ಟೆಯಲ್ಲಿರುವಾಗಲೇ ಮಗುವಿನ ವಾಕ್–ಶ್ರವಣ ಸಮಸ್ಯೆ ಪತ್ತೆ ಹಚ್ಚಲು ಸಾಧ್ಯವಾಗಿರುವುದು ನಿಜಕ್ಕೂ ದೊಡ್ಡ ಸಾಧನೆ. ಇದಕ್ಕಾಗಿ ಮೈಸೂರಿನ ವಾಕ್ ಮತ್ತು ಶ್ರವಣ ಸಂಸ್ಥೆ ಅಭಿನಂದನೀಯ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮನ್ನಣೆ ಗಳಿಸಿರುವ ಈ ಸಂಸ್ಥೆಯನ್ನು ವಿಶ್ವ ಆರೋಗ್ಯ ಸಂಸ್ಥೆಯು 'ಸೆಂಟರ್ ಆಫ್ ಎಕ್ಸಲೆನ್ಸ್' ಎಂದು ಗುರುತಿಸಿದ್ದರೆ, ಕೇಂದ್ರ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು 'ಸೈನ್ಸ್ ಅಂಡ್ ಟೆಕ್ನಾಲಜಿ ಇನ್ಸ್‌ಟಿಟ್ಯೂಟ್' ಎಂದು ಗುರುತಿಸಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಈ ಸಂಸ್ಥೆಯ ಹೊರವಲಯ ಸೇವಾ ಕೇಂದ್ರಗಳು, ನವಜಾತ ಶಿಶು ತಪಾಸಣೆ ಘಟಕಗಳಿಗೆ ರಾಜ್ಯ ಸರ್ಕಾರದ ಆರೋಗ್ಯ–ಕುಟುಂಬ ಕಲ್ಯಾಣ ಇಲಾಖೆಯು ಜಿಲ್ಲಾ, ತಾಲೂಕು ಆಸ್ಪತ್ರೆಗಳಲ್ಲಿ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಸ್ಥಳಾವಕಾಶ ಒದಗಿಸುತ್ತಿದೆ. ನಮ್ಮ ರಾಜ್ಯ ಸರ್ಕಾರದ ಪ್ರಾಯೋಜಿತ ಕಾಕ್ಲಿಯರ್ ಇಂಪ್ಲಾಂಟ್ ಕಾರ್ಯಕ್ರಮವಾದ 'ಶ್ರವಣ ಸಂಜೀವಿನಿ' ಯೋಜನೆಗೆ ರಾಜ್ಯ ಸರ್ಕಾರವು 2024–25ರ ಬಜೆಟ್ಟಿನಲ್ಲಿ ಆರ್ಥಿಕವಾಗಿ ದುರ್ಬಲ ವರ್ಗದ ಮಕ್ಕಳಿಗೆ ದುಬಾರಿ ಕಾಕ್ಲಿಯರ್ ಇಂಪ್ಲಾಂಟ್ ಶಸ್ತ್ರಚಿಕಿತ್ಸೆಗಳನ್ನು ಉಚಿತವಾಗಿ ಒದಗಿಸಲು 32 ಕೋಟಿ ರೂ. ಮೀಸಲಿಟ್ಟಿದೆ ಎಂದರು.

ವಜ್ರ ಮಹೋತ್ಸವದ ಈ ಸಂದರ್ಭದಲ್ಲಿ ಈ ಸಂಸ್ಥೆಯಲ್ಲಿದ್ದುಕೊಂಡು ಸಮಾಜದ ಏಳಿಗೆಗಾಗಿ ದುಡಿದ–ದುಡಿಯುತ್ತಿರುವ ತಜ್ಞರು, ಪ್ರಾಧ್ಯಾಪಕರು, ಸಹಾಯಕರು, ವಿದ್ಯಾರ್ಥಿಗಳು ಸೇರಿದಂತೆ ಎಲ್ಲರನ್ನೂ ಕೃತಜ್ಞತೆಯಿಂದ ಸ್ಮರಿಸುತ್ತೇನೆ. 60 ವರ್ಷಗಳ ಸುದೀರ್ಘ ಇತಿಹಾಸವುಳ್ಳ ಈ ಸಂಸ್ಥೆಯು ಇನ್ನಷ್ಟು ಎತ್ತರಕ್ಕೆ ಬೆಳೆಯಲಿ, ವಾಕ್ ಮತ್ತು ಶ್ರವಣದೋಷದ ಸಮಸ್ಯೆಗಳು ಶಾಶ್ವತವಾಗಿ ಬಾರದಂತೆ ತಡೆಯಲು ಅಗತ್ಯವಿರುವ ಎಲ್ಲ ಸಂಶೋಧನೆಗಳನ್ನು ಕೈಗೊಂಡು ಜಗತ್ತಿಗೆ ಬೆಳಕು ನೀಡಲಿ ಎಂದು ಆಶಿಸಿದರು.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ರಾಜ್ಯಪಾಲರು, ಸಿಎಂ ಆತ್ಮೀಯ ಸ್ವಾಗತ



ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ ಆತ್ಮೀಯವಾಗಿ ಬರಮಾಡಿಕೊಂಡರು.

ಮೈಸೂರು,ಸೆ.1(ಎಂಟಿವೈ)–ಎರಡು ದಿನಗಳ ಮೈಸೂರು ಪ್ರವಾಸ ಕೈಗೊಂಡಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಸೋಮವಾರ ಮಧ್ಯಾಹ್ನ 3.10ಕ್ಕೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಇನ್ನಿತರರು ರಾಷ್ಟ್ರಪತಿಗಳನ್ನು ಆತ್ಮೀಯವಾಗಿ ಬರಮಾಡಿಕೊಂಡರು.

ಮೈಸೂರು ಪ್ರವಾಸಕ್ಕಾಗಿ ದೆಹಲಿಯ ಪಾಲಂ ವಿಮಾನ ನಿಲ್ದಾಣದಿಂದ ಇಂದು ಮಧ್ಯಾಹ್ನ 12.15ಕ್ಕೆ ಭಾರತೀಯ ವಾಯುಸೇನೆಗೆ ಸೇರಿದ ಐಎಎಫ್–ಬಿಬಿಜೆ ವಿಮಾನದಲ್ಲಿ ಪ್ರಯಾಣ ಆರಂಭಿಸಿದ್ದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮಧ್ಯಾಹ್ನ 3.25ಕ್ಕೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಆಗಮಿಸಿದರು.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರದ ಆರೋಗ್ಯ ಮತ್ತು ಕುಟುಂಬ ಇಲಾಖೆಯ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತ, ಎಡಿಜಿಪಿ ಬಿ.ಕೆ.ಸಿಂಗ್, ಏರ್‌ಫೋರ್ಸ್ ಸೆಲೆಕ್ಷನ್ ಬೋರ್ಡ್‌ನ ಏರ್ ಕಮಾಂಡರ್ ಅಭಿಜಿತ್ ಟೋಕೆಕರ್, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಸೇರಿದಂತೆ ಹಿರಿಯ ಅಧಿಕಾರಿಗಳು ಆತ್ಮೀಯವಾಗಿ ಬರಮಾಡಿಕೊಂಡರು. ನಂತರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಂಜನಗೂಡು ರಸ್ತೆಯಲ್ಲಿ ಆಗಮಿಸಿ ರಿಂಗ್ ರಸ್ತೆ ಶ್ರೀರಾಂಪುರ, ದಟ್ಟಗಳ್ಳಿ, ಬೋಗಾದಿ ಜಂಕ್ಷನ್ ಮೂಲಕ ಆಯಿಷ್ ಸಂಸ್ಥೆಗೆ ಆಗಮಿಸಿ, ವಜ್ರ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ವಜ್ರ ಮಹೋತ್ಸವದ ಕಾರ್ಯಕ್ರಮ ಮುಗಿದ ನಂತರ ಕುಕ್ಕರಹಳ್ಳಿ ಕೆರೆ ರಸ್ತೆ, ರಾಮಸ್ವಾಮಿ ವೃತ್ತ, ಚಾಮರಾಜ ಜೋಡಿ ರಸ್ತೆ, ಗನ್‌ಹೌಸ್ ವೃತ್ತ, ನಂಜನಗೂಡು ರಸ್ತೆ, ಗಾಲ್ಫ್ ಕ್ಲಬ್ ರಸ್ತೆ ಜಂಕ್ಷನ್ ಮೂಲಕ ರ‍್ಯಾಡಿಸನ್ ಬ್ಲೂ ಹೋಟೆಲ್ ತಲುಪಿದರು.


ವಾಣಿಜ್ಯ ಬಳಕೆಯ ಸಿಲಿಂಡರ್ ಬೆಲೆ 51 ರೂ. ಇಳಿಕೆ



ನವದೆಹಲಿ,ಸೆ.1–ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆ 51.50 ರೂ. ಇಳಿಕೆಯಾಗಿದೆ. ತೈಲ ಮಾರುಕಟ್ಟೆ ಕಂಪನಿಗಳು 19 ಕೆಜಿ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ಸೆ.1 ರಿಂದ ಜಾರಿಗೆ ಬರುವಂತೆ 51.50 ರೂ.ಗಳಷ್ಟು ಕಡಿಮೆ ಮಾಡುವುದಾಗಿ ತಿಳಿಸಿವೆ.

ವಾಣಿಜ್ಯ ಬಳಕೆಯ ಸಿಲಿಂಡರ್ ಬೆಲೆ ಮಾತ್ರ ಕಡಿಮೆಯಾಗಿದ್ದು 14.2 ಕೆಜಿ ಗೃಹ ಬಳಕೆಯ ಸಿಲಿಂಡರ್‌ಗಳ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಈ ಹಿಂದೆ ತೈಲ ಕಂಪನಿಗಳು 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ನ ಬೆಲೆಯನ್ನು 33.50 ರೂ.ಗಳಷ್ಟು ಕಡಿಮೆ ಮಾಡಿದ್ದವು. ಅದಕ್ಕೂ ಮೊದಲು ಜುಲೈ 1ರಂದು 58.50 ರೂ.ಗಳಷ್ಟು ಬೆಲೆಯನ್ನು ಕಡಿಮೆ ಮಾಡಿದ್ದವು. ಜೂನ್‌ನಲ್ಲಿ ತೈಲ ಕಂಪನಿಗಳು ವಾಣಿಜ್ಯ ಸಿಲಿಂಡರ್‌ಗಳಿಗೆ 24 ರೂ.ಗಳಷ್ಟು ಕಡಿತವನ್ನು ಘೋಷಿಸಿ, ದರವನ್ನು 1,723.50 ರೂ.ಗಳಿಗೆ ನಿಗದಿಪಡಿಸಿದ್ದವು. ಏಪ್ರಿಲ್‌ನಲ್ಲಿ ಬೆಲೆ 1,762 ರೂ.ಗಳಷ್ಟಿತ್ತು. ಫೆಬ್ರವರಿಯಲ್ಲಿ 7 ರೂ.ಗಳಷ್ಟು ಸಣ್ಣ ಇಳಿಕೆಯಾಗಿತ್ತು. ಆದರೆ ಮಾರ್ಚ್‌ನಲ್ಲಿ 6 ರೂ. ಹೆಚ್ಚಳ ಮಾಡಿತ್ತು.

ಮೈಸೂರಿನ ಸೋಸಲೆ ಕರ್ನಾಟಕ ಬ್ರಾಹ್ಮಣ ಸಂಘಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭೇಟಿ



ಮೈಸೂರಿನ ಸೋಸಲೆ ಕರ್ನಾಟಕ ಬ್ರಾಹ್ಮಣ ಸಂಘಕ್ಕೆ ಭೇಟಿ ನೀಡಿದ್ದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹಾಗೂ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಅವರನ್ನು ಸನ್ಮಾನಿಸಲಾಯಿತು

ಮೈಸೂರು, ಸೆ.1– ಮೈಸೂರಿನ ಕೆಆರ್ ಮೊಹಲ್ಲಾದಲ್ಲಿರುವ ಸೋಸಲೆ ಕರ್ನಾಟಕ ಬ್ರಾಹ್ಮಣ ಸಂಘದ ನವೀಕೃತ ಕಟ್ಟಡಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭೇಟಿ ನೀಡಿದರು.

ಈ ವೇಳೆ ಮಾತನಾಡಿದ ಅವರು, ನವೀಕೃತ ಕಟ್ಟಡಕ್ಕೆ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ನಮ್ಮ ತಂದೆ ಆರ್. ಗುಂಡೂರಾಯರ ಅಚ್ಚುಮೆಚ್ಚಿನ ಪ್ರೀತಿಪಾತ್ರವಾದ ಸೋಸಲೆ ಕರ್ನಾಟಕ ಬ್ರಾಹ್ಮಣ ಸಂಘವು ಮೈಸೂರಿನಲ್ಲಿ 1924ರಲ್ಲೇ ನಿರ್ಮಾಣ ಮಾಡಿದ್ದ ವಿದ್ಯಾರ್ಥಿ ನಿಲಯ ಶತಮಾನೋತ್ಸವ ಕಂಡಿದೆ.

ನಾನು ಸಹ ತಂದೆ–ತಾಯಿಯಿಂದ ರೂಡಿಸಿಕೊಂಡ ಸೇವಾಮನೋಭಾವದ ದೃಷ್ಟಿಯಿಂದ ಸದಾಕಾಲಕ್ಕೆ ಸಂಘದ ಚಟುವಟಿಕೆಗಾಗಿ ಸಹಕಾರ ನೀಡುತ್ತೇನೆ. ಮೈಸೂರಿನಲ್ಲಿ ವಿಪ್ರ ಸಮಾಜದ ನಾಯಕರಾಗಿರುವ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್ ಅವರು ಸಹ ವಿಪ್ರ ಸಮುದಾಯದ ಹಲಾವರು ಸಂಘ–ಸಂಸ್ಥೆಗಳಿಗೆ ಸಹಕಾರ ನೀಡಿದ್ದಾರೆ. ಅದರಂತೆ ಸಂಘದ ನವೀಕೃತ ಕಟ್ಟಡದ ಲೋಕಾರ್ಪಣೆ ನೇತೃತ್ವ ವಹಿಸಬೇಕೆಂದು ಹೇಳಿದರು

ನಂತರ ಮುಡಾ ಮಾಜಿ ಅಧ್ಯಕ್ಷರೂ ಆದ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ರಾಜ್ಯ ಉಪಾಧ್ಯಕ್ಷ ಹೆಚ್.ವಿ. ರಾಜೀವ್ ಮಾತನಾಡಿ, ಕರ್ನಾಟಕ ರಾಜ್ಯದಲ್ಲಿ ಹಲವಾರು ಯೋಜನೆಗಳನ್ನು ಜಾರಿಗೆ ತಂದ ಮಾಜಿ ಮುಖ್ಯಮಂತ್ರಿ ಗುಂಡೂರಾಯರು ಹಲವಾರು ವಿಪ್ರ ನಾಯಕರು ರಾಜಕೀಯವಾಗಿ ಮುಖ್ಯವಾಹಿನಿಗೆ ಬರಲು ಬೆನ್ನುಲುಬಾಗಿ ನಿಂತು ಪ್ರೇರಣೆಯಾಗಿದ್ದರು. ಅವರಂತೆ ಅವರ ಸುಪುತ್ರರಾದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಹ ಸಮುದಾಯದ ಯಾವುದೇ ಸಮಸ್ಯೆಗಳಿದ್ದರೂ ಸ್ಪಂದಿಸುವ ನಾಯಕರಾಗಿದ್ದಾರೆ. ಅಖಿಲ ಕರ್ನಾಟಕ ಬ್ರಾಹ್ಮಣ ಮಾಹಾಸಭಾ ಸಂಘಟನಾತ್ಮಕವಾಗಿ ರಾಜ್ಯದಲ್ಲಿ ಬಲಿಷ್ಠವಾಗಲು ಗುಂಡೂರಾಯರ ಕುಟುಂಬ ಪ್ರಮುಖವಾದುದು. ಸೋಸಲೆ ಕರ್ನಾಟಕ ಬ್ರಾಹ್ಮಣ ಸಂಘದ ನವೀಕೃತ ಕಟ್ಟಡಕ್ಕೆ ಗುಂಡೂರಾಯರು ಮತ್ತು ವರಲಕ್ಷ್ಮಿ ಗುಂಡೂರಾಯರ ಹೆಸರನ್ನು ನಾಮಕರಣ ಮಾಡಲು ಮುಂದಾಗಿರುವ ಸಂಘದ ಪದಾಧಿಕಾರಿಗಳ ಕಾರ್ಯ ಸ್ವಾಗತಾರ್ಹ ಎಂದರು.

ಇದೇ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಸತೀಶ್, ಕಾರ್ಯದರ್ಶಿ ಮಹೇಶ್ ಕುಮಾರ್, ಖಜಾಂಜಿ ಎಸ್.ಎಲ್.ನಾಗರಾಜ್, ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆಯ ಸಂಘಟನಾ ಕಾರ್ಯದರ್ಶಿ ವಿನಯ್ ಕಣಗಾಲ್ ಇನ್ನಿತರರು ಹಾಜರಿದ್ದರು

ಹವಾಮಾನ ವೈಪರೀತ್ಯ, ವ್ಯಾಪಕವಾಗುತ್ತಿರುವ ವೈರಲ್ ಫೀವರ್; ಮೈಸೂರಿನ ಆಸ್ಪತ್ರೆಗಳಲ್ಲಿ ರೋಗಿಗಳ ಸಂಖ್ಯೆ ಏರಿಕೆ



ಮೈಸೂರು ಜೆಎಸ್ಎಸ್ ಆಸ್ಪತ್ರೆಯ ಮಕ್ಕಳ ವಿಭಾಗದಲ್ಲಿ ಮಕ್ಕಳೊಂದಿಗೆ ಪೋಷಕರು ವೈದ್ಯರಿಗಾಗಿ ಕಾದಿರುವ ದೃಶ್ಯ.

ಮೈಸೂರು, ಸೆ.1(ಎಂಕೆ)–ಹವಾಮಾನ ವೈಪರೀತ್ಯದಿಂದಾಗಿ ಮಕ್ಕಳು, ಯುವಕ–ಯುವತಿಯರು ಸೇರಿದಂತೆ ಹಲವರಲ್ಲಿ ವೈರಲ್ ಫೀವರ್(ಜ್ವರ) ಹೆಚ್ಚಾಗಿದ್ದು, ಸರ್ಕಾರಿ ಸೇರಿದಂತೆ ಖಾಸಗಿ ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಜನರು ಮುಗಿಬೀಳುತ್ತಿರುವ ದೃಶ್ಯ ಸಾಮಾನ್ಯವಾಗಿದೆ.

ಗೌರಿ–ಗಣೇಶ ಹಬ್ಬದ ಸಂಭ್ರಮದ ನಡುವೆ ಇದ್ದಕ್ಕಿದ್ದಂತೆ ಮಳೆ, ಬಿಸಿಲು ಹಾಗೂ ಮೋಡ ಕವಿದ ವಾತಾವರಣದಿಂದಾಗಿ ಶೀತ ಮತ್ತು ಬಿಸಿ ಗಾಳಿಯಿಂದಾಗಿ ಎಲ್ಲೆಡೆ ಜ್ವರ, ನೆಗಡಿ, ಕೆಮ್ಮು, ಸುಸ್ತು, ತಲೆನೋವು ಸೇರಿದಂತೆ ನಾನಾ ರೀತಿಯ ಕಾಯಿಲೆಗಳಿಂದ ಬಳಲುವಂತಾಗಿದೆ.

ಕೆಮ್ಮು, ನೆಗಡಿ, ಜ್ವರವಲ್ಲದೇ, ಹಲವು ಜನರಲ್ಲಿ ವೈರಲ್ ಜ್ವರ(ಒಬ್ಬರಿಂದ ಮತ್ತೊಬ್ಬರಿಗೆ ಹರಡುವುದು) ಕಂಡುಬಂದಿದ್ದು, ಪ್ರಾಥಮಿಕ ಆರೋಗ್ಯ ಕೇಂದ್ರ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ, ಸಾರ್ವಜನಿಕ ಆಸ್ಪತ್ರೆಗಳಲ್ಲಿ ಒಪಿಡಿ ಸಂಖ್ಯೆ ಹೆಚ್ಚಾಗಿದೆ. ಖಾಸಗಿ ಆಸ್ಪತ್ರೆ ಕ್ಲಿನಿಕ್‌ಗಳಲ್ಲಿಯೂ ಕ್ಯೂನಲ್ಲಿ ನಿಲ್ಲುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಆಗಸ್ಟ್ ತಿಂಗಳಲ್ಲಿ ಮಳೆ ಅಬ್ಬರಿಸಿದ ಪರಿಣಾಮ ಚಳಿಗಾಲದ ವಾತಾವರಣ ನಿರ್ಮಾಣವಾಗಿದೆ. ಜ್ವರ, ಕೆಮ್ಮು ಮಕ್ಕಳಲ್ಲಿ ಒಬ್ಬರಿಂದ ಒಬ್ಬರಿಗೆ ಹರಡುತ್ತಿದ್ದು, ಪೋಷಕರು ಎಚ್ಚರಿಕೆ ವಹಿಸಬೇಕಾಗಿದೆ. ಮಕ್ಕಳಿಗೆ ಅನಾರೋಗ್ಯ ಕಂಡುಬಂದಲ್ಲಿ ನಿರ್ಲಕ್ಷ್ಯತೆ ವಹಿಸಬಾರದು. ಸೀಸನ್ ವೈರಲ್ ಫೀವರ್ ಇದಾಗಿದ್ದು, ಡೆಂಗ್ಯೂ ಮತ್ತು ಮಲೇರಿಯಾ ಎಂದು ಆತಂಕ ಪಡಬಾರದು ಎಂದು ಜಿಲ್ಲಾ ಆರ್‌ಸಿಹೆಚ್ (ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ) ಅಧಿಕಾರಿ ಡಾ.ಸಿರಾಜ್ ಅಹಮದ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ವೈರಲ್ ಫೀವರ್‌ನಿಂದ ಬಳಲುತ್ತಿರುವ ಮಕ್ಕಳಿಗೆ ವೈದ್ಯರ ಸಲಹೆ ಮೇರೆಗೆ ಔಷಧೋಪಚಾರದ ಜೊತೆಗೆ ವಿಶ್ರಾಂತಿ ಅಗತ್ಯವಿದೆ. ಬಿಸಿ ನೀರು ಬಳಸಬೇಕು. ನೀರನ್ನು ಅಗತ್ಯ ಪ್ರಮಾಣದಲ್ಲಿ ಕುಡಿಯಬೇಕು. ಬಿಸಿ ಪದಾರ್ಥಗಳ ಜೊತೆಗೆ ದೈಹಿಕ ಶಕ್ತಿ ಹೆಚ್ಚಿಸುವ ಆಹಾರ ಪದಾರ್ಥಗಳನ್ನು ಬಳಕೆ ಮಾಡಬೇಕು ಎಂದು ಸಲಹೆ ನೀಡಿದ್ದಾರೆ.

ಮಕ್ಕಳ ಸಂಖ್ಯೆ ಹೆಚ್ಚಳ...!

"ಚೆಲುವಾಂಬ ಆಸ್ಪತ್ರೆಯಲ್ಲಿ ಕಳೆದ ಐದಾರು ದಿನಗಳಿಂದ ಜ್ವರ, ಕೆಮ್ಮು, ನೆಗಡಿ ಎಂದು ಚಿಕಿತ್ಸೆಗೆ ಬರುವ ಮಕ್ಕಳ ಸಂಖ್ಯೆ ಹೆಚ್ಚಾಗಿದೆ. ಸೀಸನ್ ವೈರಲ್ ಫೀವರ್ ಇದಾಗಿದ್ದು, ಮಕ್ಕಳಿಗೆ ಸೂಕ್ತ ಚಿಕಿತ್ಸೆ ಹಾಗೂ ವಿಶ್ರಾಂತಿ ಅಗತ್ಯವಿರಲಿದೆ.

–ಡಾ.ಸುಧಾ, ವೈದ್ಯಕೀಯ ಅಧೀಕ್ಷಕಿ, ಚೆಲುವಾಂಬ ಆಸ್ಪತ್ರೆ

ಪ್ರತಿದಿನ 200–250!: ಕಳೆದ 20 ದಿನಗಳಿಂದ ಚೆಲುವಾಂಬ ಆಸ್ಪತ್ರೆಗೆ ಜ್ವರ, ನೆಗಡಿ, ಕೆಮ್ಮು ಎಂದು ಬರುವ ಮಕ್ಕಳ ಸಂಖ್ಯೆ ಹೆಚ್ಚಾಗಿದ್ದು, ಪ್ರತಿನಿತ್ಯ 200–250 ಹೊರರೋಗಿ ಮಕ್ಕಳು ಹಾಗೂ 30–40 ಮಕ್ಕಳು ಒಳರೋಗಿಗಳಾಗಿ ದಾಖಲಾಗುತ್ತಿದ್ದಾರೆ ಎಂದು ಚೆಲುವಾಂಬ ಆಸ್ಪತ್ರೆ ಶಿಶುವೈದ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಎನ್.ಪ್ರದೀಪ್ ತಿಳಿಸಿದರು.

ಫ್ಲೂ ವ್ಯಾಕ್ಸಿನೇಷನ್ ಒಳ್ಳೆಯದು: 1ರಿಂದ 3 ವರ್ಷದ ಮಕ್ಕಳಲ್ಲಿ ಹೆಚ್ಚಾಗಿ ವೈರಲ್ ಫೀವರ್ ಕಂಡುಬರುತ್ತಿದ್ದು, ಸಾಧ್ಯವಾದಷ್ಟು ಮಕ್ಕಳಿಗೆ ಮಾಸ್ಕ್, ಟೋಪಿ, ಸ್ವೆಟರ್‌ಗಳನ್ನು ಹಾಕಿ ಬೆಚ್ಚಗಿರಿಸಬೇಕು. ಜ್ವರ ಇರುವ ಮಕ್ಕಳೊಂದಿಗೆ ಬೇರೆ ಮಕ್ಕಳನ್ನು ಸೇರಿಸಬಾರದು. ಜ್ವರ ಕಡಿಮೆಯಾಗುವವರೆಗೆ ಶಾಲೆಗೆ ಮಕ್ಕಳನ್ನು ಕಳುಹಿಸಬಾರದು. ಜೊತೆಗೆ ಫ್ಲೂ ವ್ಯಾಕ್ಸಿನೇಷನ್ ಹಾಕಿಸಿದರೂ ಒಳ್ಳೆಯದು ಎಂದರು.

ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್‌ಗೆ ಹುಟ್ಟುಹಬ್ಬದ ಶುಭಾಶಯ...





ಮೈಸೂರಿನ ಚಾಮುಂಡಿ ವೃತ್ತದಲ್ಲಿ ಮುಡಾ ಮಾಜಿ ಅಧ್ಯಕ್ಷ ಎಚ್.ವಿ.ರಾಜೀವ್ ಅವರ ಹುಟ್ಟುಹಬ್ಬವನ್ನು ಕೇಕ್ ಕತ್ತರಿಸಿ, ಆಚರಿಸಲಾಯಿತು. ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್‌ಬುಕ್, ಪೆನ್, ಜಾಮಿಟ್ರಿ ಬಾಕ್ಸ್ ಹಾಗೂ ಉಪಾಹಾರ ವಿತರಿಸಿ, ಶುಭ ಕೋರಲಾಯಿತು. ಕೆಪಿಸಿಸಿ ಸಂಯೋಜಕ, ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್, ನಗರಾಧ್ಯಕ್ಷ ಜೆ.ಪ್ರಭು, ಕೆ.ಆರ್.ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಕಾರ್ಯದರ್ಶಿ ಮಲ್ಲೇಶ್ ಮಲ್ಲ, ಎಡಿಜಿಪಿ ತಿಮ್ಮಯ್ಯ, ಮೈಸೂರು ವಕೀಲರ ಸಂಘದ ಉಪಾಧ್ಯಕ್ಷ ಚಂದ್ರಶೇಖರ್, ವಕೀಲ ಕೆ.ಗಂಗಾಧರ್, ಡಿಸಿಸಿ ಕಿಸಾನ್ ಘಟಕದ ಅಧ್ಯಕ್ಷ ಜಿ.ಮಹದೇವ, ನಾಯಕರ ಸಂಘದ ರಾಜ್ಯಾಧ್ಯಕ್ಷ ದ್ಯಾವಪ್ಪನಾಯಕ ಇದ್ದರು.

ಆಸ್ಟ್ರಿಚ್ ಪಕ್ಷಿ ದತ್ತು...



ಕಾಂಗ್ರೆಸ್ ಹಿರಿಯ ನಾಯಕ ಎಚ್.ವಿ.ರಾಜೀವ್ ಅವರ ಹುಟ್ಟುಹಬ್ಬದ ಅಂಗವಾಗಿ ಎಚ್.ವಿ. ರಾಜೀವ್ ಸ್ನೇಹಬಳಗದ ಸದಸ್ಯ ಆರ್. ಹುಡ್ಕೋ ಕುಮಾರ್ ಮೈಸೂರಿನ ಮೃಗಾಲಯದಲ್ಲಿ ಒಂದು ಆಸ್ಟ್ರಿಚ್ ಪಕ್ಷಿ ದತ್ತು ಪಡೆದರು. ರಾಜೀವ್ ಅವರ ಪತ್ನಿ ಲಕ್ಷ್ಮಿ ರಾಜೀವ್, ನವ್ಯ ರಾಜೀವ್, ಮಾಜಿ ಮೇಯರ್ ಭೈರಪ್ಪ, ಮಾಜಿ ಕಾರ್ಪೊರೇಟರ್ ಕೆ.ವಿ.ಮಲ್ಲೇಶ್, ನಾಗೇಶ್ ರಂಗನಾಥ್ ಇನ್ನಿತರರಿದ್ದರು.

ನಿಧಿ ಸೋರಿಗೆ ಪಿಎಚ್.ಡಿ ಪದವಿ



ಮೈಸೂರು: ಡಾ.ಮಹೆಜಿಬಿನ್ ಖಾನ್ ಅವರ ಮಾರ್ಗದರ್ಶನದಲ್ಲಿ ನಿಧಿ ಸೋರಿ ಅವರು ಸೂಕ್ಷ್ಮ ಜೀವಿವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಸಣ್ಣಮ್ಮ ನಿಧನ



ಮೈಸೂರು: ಮೈಸೂರಿನ ಗಾಂಧಿನಗರ ಮಹದೇವಪುರ ಮುಖ್ಯ ರಸ್ತೆಯ ನಿವಾಸಿ ಲೇಟ್ ಹೊನ್ನಪ್ಪ ಅವರ ಪತ್ನಿ ಶ್ರೀಮತಿ ಸಣ್ಣಮ್ಮ (84) ಅವರು ಭಾನುವಾರ ನಿಧನರಾದರು.

ಮೃತರು ಐವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ ಗಾಂಧಿನಗರದ ಆದಿ ಕರ್ನಾಟಕ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರಲ್ಲಿ ಮೋಡ ಕವಿದ ವಾತಾವರಣ: ಹಲವೆಡೆ ಭಾರಿ ಮಳೆ

ಮೈಸೂರು,ಸೆ.1(ಎಂಕೆ)–ಮೈಸೂರಲ್ಲಿ ಮೋಡ ಕವಿದ ವಾತಾವರಣದ ಜೊತೆಗೆ ಹಲವೆಡೆ ಭಾರಿ ಮಳೆ ಮುಂದುವರೆದಿದ್ದು, ಸೋಮವಾರ ಮಧ್ಯಾಹ್ನದ ವೇಳೆಗೆ ಅಲ್ಲಲ್ಲಿ ಭಾರಿ ಮಳೆಯಾಯಿತು. ಬೆಳಗ್ಗೆ ಕೆಲ ಕಾಲ ಬಿಸಿಲಿತ್ತು. ಬಳಿಕ ಮೋಡ ಕವಿದ ವಾತಾವರಣ ಆವರಿಸಿತು. ಬೆಳಗ್ಗೆ ಸುಮಾರು 10.30ರ ನಂತರ ಅಲ್ಲಲ್ಲಿ ತುಂತುರು ಮಳೆಯಾದರೆ, ಮಧ್ಯಾಹ್ನ 3 ಗಂಟೆಗೆ ಸುಮಾರಿಗೆ ಸಿದ್ಧಾರ್ಥ ನಗರ, ಆಲನಹಳ್ಳಿ, ರಾಘವೇಂದ್ರನಗರ ಸೇರಿದಂತೆ 5–10 ನಿಮಿಷ ಮಳೆ ಜೋರಾಗಿತ್ತು. ಪರಿಣಾಮ ರಸ್ತೆಬದಿ ವ್ಯಾಪಾರಿಗಳು, ದ್ವಿಚಕ್ರ ವಾಹನ ಸವಾರರು, ಪಾದಚಾರಿಗಳು ಪರದಾಡುವಂತಾಯಿತು. ರಸ್ತೆಬದಿ ವ್ಯಾಪಾರಿಗಳು ಟಾರ್ಪಲ್ ಹೊದಿಸಿ, ಮಳೆ ನಿಲ್ಲುವವರೆಗೂ ಅಕ್ಕ–ಪಕ್ಕದ ಕಟ್ಟಡಗಳ ಆಶ್ರಯ ಪಡೆದರೆ, ದ್ವಿಚಕ್ರ ವಾಹನ ಸವಾರರು ಪೆಟ್ರೋಲ್ ಬಂಕ್, ಮರಗಳ ಕೆಳಗೆ ನಿಂತಿದ್ದ ದೃಶ್ಯಗಳು ಸಾಮಾನ್ಯವಾಗಿದ್ದವು.

ಮಳೆ ಮುನ್ಸೂಚನೆ: ಕೊಡಗು, ಹಾಸನ, ಚಿಕ್ಕಮಗಳೂರು ಜಿಲ್ಲೆಯ ಅಲ್ಲಲ್ಲಿ, ದಕ್ಷಿಣ ಒಳನಾಡಿನ ಮೈಸೂರು, ಮಂಡ್ಯ, ರಾಮನಗರ, ಬೆಂಗಳೂರು ಗ್ರಾಮಾಂತರ ಹಾಗೂ ನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಹಾಗೂ ಚಿತ್ರದುರ್ಗ ಜಿಲ್ಲೆಗಳ ಅಲ್ಲಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

1.47 ಕೋಟಿ ವೆಚ್ಚದ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಶಾಸಕ ಕೆ.ಹರೀಶ್‌ಗೌಡ ಗುದ್ದಲಿಪೂಜೆ



ದೇವರಾಜ ಸರ್ಕಾರಿ ಬಾಲಕಿಯರ ಸ್ವತಂತ್ರ ಪದವಿ ಪೂರ್ವ ಕಾಲೇಜು ಆವರಣದಲ್ಲಿ 1.47 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಶಾಸಕ ಕೆ.ಹರೀಶ್‌ಗೌಡರು ಸೋಮವಾರ ಗುದ್ದಲಿ ಪೂಜೆ ನೆರವೇರಿಸಿದರು.

ಮೈಸೂರು, ಸೆ.1(ಎಂಕೆ)– ಮೈಸೂರಿನ ವಾರ್ಡ್ ನಂ.23ರ ವ್ಯಾಪ್ತಿಯ ದೇವರಾಜ ಸರ್ಕಾರಿ ಬಾಲಕಿಯರ ಸ್ವತಂತ್ರ ಪದವಿ ಪೂರ್ವ ಕಾಲೇಜು ಆವರಣದಲ್ಲಿ 1.47 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಶಾಸಕ ಕೆ.ಹರೀಶ್‌ಗೌಡರು ಸೋಮವಾರ ಗುದ್ದಲಿಪೂಜೆ ನೆರವೇರಿಸಿದರು.

ಜಿಪಂನ 2022–23ನೇ ಸಾಲಿನ ಲೆಕ್ಕಶೀರ್ಷಿಕೆ ವಿವೇಕ ಶಾಲೆ(ಪದವಿಪೂರ್ವ ಕಾಲೇಜು) ಯೋಜನೆ ಅಡಿಯಲ್ಲಿ 6 ತರಗತಿ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದ ಅವರು, ಚಾಮರಾಜ ಕ್ಷೇತ್ರದಲ್ಲಿ ಮೂಲಸೌಕರ್ಯಗಳ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಹಂತ ಹಂತವಾಗಿ ನಡೆಸಲಾಗುತ್ತಿದೆ. ಈ ನಿಟ್ಟಿನಲ್ಲಿ ಬಾಕಿ ಇರುವ ಕಾಮಗಾರಿಗಳಿಗೂ ಚಾಲನೆ ನೀಡುವ ಜೊತೆಗೆ ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಪಟ್ಟ ಕಟ್ಟಡಗಳ ಕಾಮಗಾರಿಗಳನ್ನು ಗುರುತಿಸಿ ಕಾಮಗಾರಿ ಆರಂಭಿಸಲಾಗುತ್ತಿದೆ. ಸರ್ಕಾರಿ ಶಾಲಾ–ಕಾಲೇಜುಗಳನ್ನು ಉನ್ನತೀಕರಿಸುವಲ್ಲಿ ಪ್ರಾಮಾಣಿಕ ಪಯತ್ನ ಮಾಡುವುದಾಗಿ ತಿಳಿಸಿದರು.

ಮಾಜಿ ಮೇಯರ್ ಅನಂತು, ಪಾಲಿಕೆ ಮಾಜಿ ಸದಸ್ಯ ಎಂ.ಡಿ.ನಾಗಭೂಷಣ್, ದೇವರಾಜ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಎಸ್.ರಮೇಶ್ ರಾಯಪ್ಪ, ವಾರ್ಡ್ ಅಧ್ಯಕ್ಷ ಆನಂದ್, ಮುಖಂಡರಾದ ವೆಂಕಟೇಶ್, ಜ್ಞಾನೇಶ್, ಲೋಕಿ, ಜಗದೀಶ್, ಮಂಜುನಾಥ್, ನಂಜುಂಡಿ, ಸಂಜಯ್, ಶೇಖರ್, ಮಂಗಳ, ಶಾಂತ, ಲೀಲಾವತಿ, ವಸಂತಮ್ಮ, ರಾಣಿ, ಆಶ್ರಯ ಸಮಿತಿ ಸದಸ್ಯರಾದ ಅನಂತ್ ನಾರಾಯಣ, ಇಬ್ರಾಹಿಂ, ಜಿಪಂ ಇಂಜಿನಿಯರ್ ಮೋಹನ್‌ಕುಮಾರಿ, ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

ದೇಶ – ವಿದೇಶ

ಲಂಡನ್: ಹಿಂದೂ ಸಮುದಾಯ ಭವನದಲ್ಲಿ ಗಣೇಶೋತ್ಸವದ ವೇಳೆ ಬೆಂಕಿ



ಲಂಡನ್: ಪೂರ್ವ ಲಂಡನ್‌ನ ಇಲ್‌ಫೋರ್ಡ್‌ನಲ್ಲಿರುವ ಕ್ಲೀವ್‌ಲ್ಯಾಂಡ್ ರಸ್ತೆಯ ಶ್ರೀ ಸೊರಾತಿಯಾ ಪ್ರಜಾಪತಿ ಸಮುದಾಯ ಭವನದಲ್ಲಿ ಹಿಂದೂ ಸಮಾಜ ಗಣೇಶ ವಿಸರ್ಜನಾ ಮಹೋತ್ಸವದ ಸಂಭ್ರಮದಲ್ಲಿದ್ದ ಸಂದರ್ಭದಲ್ಲಿ ಬೆಂಕಿ ಅವಘಡ ಸಂಭವಿಸಿದೆ. ಕೂಡಲೇ ರಕ್ಷಣಾ ಕಾರ್ಯ ಕೈಗೊಂಡ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿದ್ದಾರೆ. ಕಟ್ಟಡಕ್ಕೆ ಭಾಗಶಃ ಹಾನಿಯಾಗಿದ್ದು, ಯಾರಿಗೂ ಗಾಯಗಳಾಗಿಲ್ಲ. ಸ್ಥಳೀಯರ ಪ್ರಕಾರ ಪಟಾಕಿ ಸಿಡಿತ ಅವಘಡಕ್ಕೆ ಕಾರಣ ಎನ್ನಲಾಗಿದೆ. ಆದರೆ, ಪಟಾಕಿ ಸಿಡಿತದಿಂದಲೇ ಬೆಂಕಿ ಹೊತ್ತಿಕೊಂಡಿರುವುದಕ್ಕೆ ಯಾವುದೇ ಸಾಕ್ಷಿಗಳಿಲ್ಲ. ಘಟನೆ ಬಗ್ಗೆ ತನಿಖೆ ನಡೆಯುತ್ತಿದೆ. ಇಲ್‌ಫೋರ್ಡ್‌ನಲ್ಲೇ ಭಾರತೀಯ ರೆಸ್ಟೋರೆಂಟ್ ಮೇಲೆ ದಾಳಿ ಮಾಡಿ ಬೆಂಕಿ ಹಚ್ಚಿದ್ದ ಘಟನೆ ಕಳೆದ ವಾರ ನಡೆದಿತ್ತು. ಇದೀಗ ಕೆಲವೇ ಕಿಲೋ ಮೀಟರ್ ದೂರ ಇರುವ ಹಿಂದೂ ಸಮುದಾಯ ಭವನದಲ್ಲಿ ಬೆಂಕಿ ಅವಘಡ ಸಂಭವಿಸಿರುವುದು ಆತಂಕಕ್ಕೆ ಕಾರಣವಾಗಿದೆ.

ಮತ್ತೊಬ್ಬಳನ್ನು ಮದುವೆಯಾಗುವ ಆಸೆಗೆ ಪ್ರೇಯಸಿಯನ್ನೇ ಕೊಂದ ಪ್ರಿಯಕರ



ಮುಂಬೈ: ಬೇರೊಬ್ಬಳನ್ನು ಮದುವೆಯಾಗಲು ಪ್ರೇಯಸಿ ಅಡ್ಡಿಯಾಗುತ್ತಾಳೆ ಎಂದು ಪ್ರಿಯಕರನೇ ಆಕೆಯನ್ನು ಹತ್ಯೆ ಮಾಡಿದ ಘಟನೆ ಮಹಾರಾಷ್ಟ್ರದ ರತ್ನಗಿರಿಯಲ್ಲಿ ನಡೆದಿದೆ. ಕೊಲೆಯ ಬಳಿಕ ಮೃತದೇಹವನ್ನು ಆರೋಪಿ ಹಳ್ಳಕ್ಕೆ ಎಸೆದಿದ್ದ ಎನ್ನಲಾಗಿದೆ. ಭಕ್ತಿ ಜಿತೇಂದ್ರ ಮಾಯೇಕರ್ (26) ಕೊಲೆಯಾದ ಯುವತಿ. ಆಕೆ ಆ.17ರಂದು ತನ್ನ ಗೆಳೆಯನನ್ನು ಭೇಟಿಯಾಗುವುದಾಗಿ ತಿಳಿಸಿ ತೆರಳಿದ್ದಳು. ಬಳಿಕ ಯುವತಿ ನಾಪತ್ತೆಯಾಗಿದ್ದಳು. ಈ ಸಂಬಂಧ ಕುಟುಂಬಸ್ಥರು ದೂರು ದಾಖಲಿಸಿದ್ದರು. ಪೊಲೀಸರು ಆಕೆಯ ಮೊಬೈಲ್ ಕರೆ ವಿವರಗಳ ಆಧಾರದ ಮೇಲೆ ಆರೋಪಿ ದುರ್ವಾಸ್ ದರ್ಶನ್ ಪಾಟೀಲ್‌ನನ್ನು ಬಂಧಿಸಿದ್ದಾರೆ. ವಿಚಾರಣೆ ವೇಳೆ ಆರೋಪಿ ಕೊಲೆ ಮಾಡಿದ್ದನ್ನು ಒಪ್ಪಿಕೊಂಡಿದ್ದು, ಆಕೆಯ ಶವವನ್ನು ಅಂಬಾಘಾಟ್‌ನಲ್ಲಿ ಎಸೆದಿದ್ದಾಗಿ ತಿಳಿದ್ದಾನೆ.

ಮತ್ತೊಬ್ಬ ಯುವತಿಯೊಂದಿಗೆ ಮದುವೆಯಾಗುವ ವಿಚಾರಕ್ಕೆ ಆಕೆ ಗಲಾಟೆ ಮಾಡಿದ್ದಕ್ಕಾಗಿ ಹತ್ಯೆ ಮಾಡಿದ್ದಾಗಿ ತಿಳಿಸಿದ್ದಾನೆ. ಈ ಸಂಬಂಧ ಆರೋಪಿಯ ಸಹಾಯಕರಾದ ವಿಶ್ವಾಸ್ ವಿಜಯ್ ಪವಾರ್ ಮತ್ತು ಸುಶಾಂತ್ ಶಾಂತಾರಾಮ್ ನರಲ್ಕರ್ ಎಂಬವರನ್ನು ಸಹ ಬಂಧಿಸಿದ್ದಾರೆ.

ಲ್ಯಾಂಡಿಂಗ್ ಟೆಸ್ಟ್ ವೇಳೆ ಪಾಕ್‌ನ ಸರ್ಕಾರಿ ಹೆಲಿಕಾಪ್ಟರ್ ಪತನ: ಐವರು ಸಾವು



ಇಸ್ಲಾಮಾಬಾದ್: ಹೊಸದಾಗಿ ನಿರ್ಮಾಣವಾಗಿದ್ದ ಹೆಲಿಪ್ಯಾಡ್ ಮೇಲೆ ಲ್ಯಾಂಡಿಂಗ್ ಟೆಸ್ಟ್ ನಡೆಸುತ್ತಿದ್ದಾಗ ಪಾಕಿಸ್ತಾನದ ಸರ್ಕಾರಿ ಹೆಲಿಕಾಪ್ಟರ್ ಪತನಗೊಂಡು ಐವರು ಸಾವನ್ನಪ್ಪಿರುವ ಘಟನೆ ಗಿಲ್ಗಿಟ್–ಬಾಲ್ಟಿಸ್ತಾನ್‌ನಲ್ಲಿ ನಡೆದಿದೆ.


ಈ ಕುರಿತು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಮಾತನಾಡಿ, ಹೊಸದಾಗಿ ನಿರ್ಮಾಣವಾಗಿದ್ದ ಹೆಲಿಪ್ಯಾಡ್‌ನಲ್ಲಿ ಲ್ಯಾಂಡಿಂಗ್ ಪರೀಕ್ಷೆ ನಡೆಸುತ್ತಿದ್ದಾಗ MI–17 ಹೆಲಿಕಾಪ್ಟರ್ ಪತನಗೊಂಡಿದೆ. ಹೆಲಿಕಾಪ್ಟರ್‌ನಲ್ಲಿದ್ದ ಐವರೂ ಸಾವನ್ನಪ್ಪಿದ್ದಾರೆ. ಇತ್ತೀಚೆಗೆ ಖೈಬರ್ ಪಖ್ತುನ್ಖ್ವಾ ಪ್ರಾಂತ್ಯದಲ್ಲಿ ಪ್ರವಾಹಪೀಡಿತ ಪ್ರದೇಶಗಳಲ್ಲಿ ಕಾರ್ಯಾಚರಣೆ ನಡೆಸುತ್ತಿದ್ದ MI–17 ಸರ್ಕಾರಿ ಹೆಲಿಕಾಪ್ಟರ್ ಪತನಗೊಂಡಿತ್ತು. ಅದಾದ ಕೆಲವು ದಿನಗಳ ನಂತರ ಇದೀಗ ಮತ್ತೊಂದು ಹೆಲಿಕಾಪ್ಟರ್ ಪತನಗೊಂಡಿದೆ.

ಕೇರಳ ದೇವಸ್ಥಾನದ ಆನೆ ದಾಳಿ: ಮಾವುತ ಸಾವು, ಮತ್ತೊಬ್ಬ ಗಂಭೀರ



ಆಲಪ್ಪುಳ: ಕೇರಳದ ಕರಾವಳಿ ಜಿಲ್ಲೆಯ ಹರಿಪಾದ್‌ನಲ್ಲಿರುವ ದೇವಸ್ಥಾನದ ಆನೆ ಇಬ್ಬರು ಮಾವುತರ ಮೇಲೆ ದಾಳಿ ನಡೆಸಿದೆ. ಇದರ ಪರಿಣಾಮ ಒಬ್ಬರು ಮೃತಪಟ್ಟು, ಮತ್ತೊಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಕಳೆದ ಕೆಲವು ತಿಂಗಳಿಂದ ಸ್ಕಂದನ್ ಎಂಬ ಆನೆಗೆ ಮದವೇರಿತ್ತು. ಹೀಗಾಗಿ ದೇವಸ್ಥಾನದ ಅರ್ಚಕರ ಮನೆಯಲ್ಲಿ ಕಟ್ಟಿಹಾಕಲಾಗಿತ್ತು. ಭಾನುವಾರ ಮಧ್ಯಾಹ್ನ ಮದವೇರಿದ ಸ್ಕಂದನ್ ಆನೆ ಏಕಾಏಕಿ, ಸುನಿಲ್‌ಕುಮಾರ್ ಎಂಬ ಮಾವುತನ ಮೇಲೆ ದಾಳಿ ನಡೆಸಿದೆ. ಘಟನೆ ಬಳಿಕ ಸ್ಕಂದನ್ ಆನೆ ನಿರ್ವಾಹಕ ಮುರಳೀಧರನ್ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಮುಂದಾದರು. ದೇವಸ್ಥಾನಕ್ಕೆ ಸ್ಥಳಾಂತರಿಸುವಾಗ ಮತ್ತೆ ಕೋಪಗೊಂಡ ಸ್ಕಂದನ್, ನಿರ್ವಾಹಕ ಮುರಳೀಧರನ್ ಅವರ ಮೇಲೂ ಗಂಭೀರವಾಗಿ ದಾಳಿ ನಡೆಸಿತು. ನಿರ್ವಾಹಕ ಮುರಳೀಧರನ್ ಅವರನ್ನು ಆಸ್ಪತ್ರೆಗೆ ಸಾಗಿಸುವ ದಾರಿ ಮಧ್ಯದಲ್ಲೇ ಮೃತಪಟ್ಟಿದ್ದಾರೆ. ಗಾಯಳು ಸುನಿಲ್‌ಕುಮಾರ್ ಸ್ಥಿತಿಯೂ ಗಂಭೀರವಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ

ತಮಾಷೆಗಾಗಿ ಡೋರ್‌ಬೆಲ್ ಬಾರಿಸಿದ ಹುಡುಗನ ಗುಂಡಿಟ್ಟು ಕೊಂದರು!



ಹೂಸ್ಟನ್: ತಮಾಷೆ ಮಾಡಲೆಂದು ಡೋರ್‌ಬೆಲ್ ಬಾರಿಸಿದ 11 ವರ್ಷದ ಬಾಲಕನ ಮೇಲೆ ಗುಂಡಿನ ದಾಳಿಯಾಗಿದ್ದು, ಸ್ಥಳದಲ್ಲೇ ಮೃತಪಟ್ಟಿದ್ದಾನೆ ಎಂದು ಹೂಸ್ಟನ್ ನಗರ ಪೊಲೀಸರು ತಿಳಿಸಿದ್ದಾರೆ. ಮನೆಯ ಡೋರ್‌ಬೆಲ್ ಬಾರಿಸಿ, ಮನೆಯವರು ಬಾಗಿಲು ತೆರೆಯುವ ಮುನ್ನವೇ ಅಲ್ಲಿಂದ ತಪ್ಪಿಸಿಕೊಂಡು ಹೋಗುವ 'ಡಿಂಗ್ ಡಾಂಗ್ ಡಿಚಿಂಗ್' ಎನ್ನುವ ಪ್ರ್ಯಾಂಕ್ ಮಾಡುವ ವೇಳೆ ಘಟನೆ ಜರುಗಿದೆ. ಘಟನೆಯ ಕುರಿತು ತನಿಖೆ ಮಾಡಲಾಗುತ್ತಿದೆ. ಇದುವರೆಗೂ ಯಾರನ್ನೂ ಬಂಧಿಸಲಾಗಿಲ್ಲ. ಮೃತ ಬಾಲಕನ ಗುರುತು ಲಭ್ಯವಾಗಿಲ್ಲ ಎಂದು ಪೊಲೀಸರು ಹೇಳಿದ್ದಾರೆ. 2023ರಲ್ಲೂ ದಕ್ಷಿಣ ಕ್ಯಾಲಿಫೋರ್ನಿಯಾದಲ್ಲಿ 'ಡಿಂಗ್ ಡಾಂಗ್ ಡಿಚಿಂಗ್' ಪ್ರ್ಯಾಂಕ್ ಮಾಡಿದ ಮೂವರು ಬಾಲಕರನ್ನು ವ್ಯಕ್ತಿಯೊಬ್ಬರು ಗುಂಡಿಟ್ಟು ಕೊಂದಿದ್ದರು. 2025ರ ಮೇ ತಿಂಗಳಲ್ಲೂ ಟಿಕ್‌ಟಾಕ್ ವಿಡಿಯೋಗಾಗಿ ಪ್ರ್ಯಾಂಕ್ ಮಾಡುತ್ತಿದ್ದ 18 ವರ್ಷದ ಹುಡುಗನ ಮೇಲೆ ಗುಂಡಿನ ದಾಳಿಯಾಗಿತ್ತು.

ಒಂದೇ ಬಿಲ್‌ಗೆ ಎರಡು ಬಾರಿ ಹಣ ಪಾವತಿ

ಪೌರಾಯುಕ್ತ, ಮೂವರು ಮಹಿಳಾ ಸಿಬ್ಬಂದಿ ವಿರುದ್ಧ ಕ್ರಮಕ್ಕೆ ಆದೇಶ

ಮಡಿಕೇರಿ,ಸೆ.1–ಒಂದೇ ಬಿಲ್‌ಗೆ ಎರಡು ಬಾರಿ ಹಣ ಪಾವತಿ ಮಾಡಿದ ಅಧಿಕಾರಿ ಸೇರಿದಂತೆ ನಾಲ್ವರು ಸಿಬ್ಬಂದಿ ವಿರುದ್ಧ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಆದೇಶಿಸಿದ್ದಾರೆ.

ಕಾಡು ಕಡಿಯುವ ಯಂತ್ರಗಳ ದುರಸ್ತಿ ಮಾಡಿಸಿದ ಆರೋಪ ತನಿಖೆಯಿಂದ ಸಾಬೀತಾದ ಹಿನ್ನೆಲೆ ನಗರಸಭೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ.



ವೆಂಕಟ್ ರಾಜಾ

ನಗರಸಭೆಯ ಹಿಂದಿನ ಆಯುಕ್ತ ಪ್ರಸ್ತುತ ಚಾಮರಾಜನಗರ ನಗರಸಭೆಯಲ್ಲಿರುವ ಎಸ್.ವಿ.ರಾಮದಾಸ್, ಹಿಂದಿನ ಸಹಾಯಕ ಕಾರ್ಯಪಾಲಕ ಅಭಿಯಂತರರು(ಪರಿಸರ) ಪ್ರಸ್ತುತ ಹುಣಸೂರು ನಗರಸಭೆಯಲ್ಲಿರುವ ಸೌಮ್ಯಾಕೆ, ಹಿಂದಿನ ಲೆಕ್ಕಾಧೀಕ್ಷಕರು, ಪ್ರಸ್ತುತ ವಿರಾಜಪೇಟೆ ಪುರಸಭೆಯ ಕಚೇರಿ ವ್ಯವಸ್ಥಾಪಕಿ ಕೆ.ಬಿ.ಸುಜಾತ, (ಪ್ರಭಾರ) ಹಾಗೂ ದ್ವಿತೀಯ ದರ್ಜೆ ಸಹಾಯಕಿ ಬಿ.ಆರ್. ಹರಿಣಿ ಅವರುಗಳ ಮೇಲಿನ ಆರೋಪ ರುಜು ವಾತು ಆಗಿರುತ್ತದೆ. ಆದುದರಿಂದ ಇವರುಗಳ ವಿರುದ್ಧ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ದಂಡನೆಯೊಂದಿಗೆ ಬಿಲ್‌ಪಾವತಿ ಹಣ ರೂ.6,320 ಮೊತ್ತವನ್ನು ವಸೂಲಿ ಮಾಡಿ ನಗರಸಭಾ ನಿಧಿಗೆ ಜಮಾ ಮಾಡುವಂತೆ ತಿಳಿಸಿದ್ದಾರೆ.

ನಗರಸಭೆಯ ಕಾಡು ಕಡಿಯುವ ಯಂತ್ರಗಳ ದುರಸ್ತಿ ಕಾರ್ಯವನ್ನು ನಿಯಮಬಾಹಿರವಾಗಿ ನಗರಸಭಾ ಸದಸ್ಯ ಕೆ.ಎಂ. ಅಪ್ಪಣ್ಣ ಅವರಿಗೆ ಸೇರಿದ ಪ್ಲಾಂಟರ್ಸ್ ವರ್ಲ್ಡ್ ಎಂಬ ಸಂಸ್ಥೆಯ ಮೂಲಕ ಮಾಡಲಾಗಿದೆ. ಒಂದೇ ಕೆಲಸಕ್ಕೆ ಎರಡೆರಡು ಬಿಲ್ಲುಗಳನ್ನು ಸೃಷ್ಟಿಸಿ ಎರಡೆರಡು ಬಾರಿ ಹಣ ಪಾವತಿಸಿ ಅಧಿಕಾರ ದುರುಪಯೋಗ ಮಾಡಿ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿರುವುದರಿಂದ ಸೂಕ್ತ ತನಿಖೆ ನಡೆಸಿ ಹಣ ದುರುಪಯೋಗವಾಗಿದ್ದಲ್ಲಿ, ನಷ್ಟ ಮತ್ತು ದುರುಪಯೋಗಕ್ಕೆ ಸಂಬಂಧಿಸಿದ ಅಧಿಕಾರಿ ಹಾಗೂ ನೌಕರರ ಮೇಲೆ ಕಾನೂನು ಪ್ರಕಾರ ಶಿಸ್ತಿನ ಕ್ರಮ ಕೈಗೊಳ್ಳುವಂತೆ ನಗರಸಭೆಯ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ಪಕ್ಷದ ಸದಸ್ಯ ಅಮೀನ್ ಮೊಹಿಸಿನ್ ಅವರು 2024ರ ಜು.23ರಂದು ಜಿಲ್ಲಾಧಿಕಾರಿಗಳಿಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದರು. ಈ ಬಗ್ಗೆ ತನಿಖೆ ನಡೆಸಲು ಹಿರಿಯ ಉಪವಿಭಾಗಾಧಿಕಾರಿ ಹಾಗೂ ಮಂಡನಾಧಿಕಾರಿಯಾಗಿ ಕುಶಾಲನಗರ ಪುರಸಭೆಯ ಮುಖ್ಯಾಧಿಕಾರಿಗಳನ್ನು ಜಿಲ್ಲಾಧಿಕಾರಿಗಳು ನೇಮಕ ಮಾಡಿದ್ದರು.

ವಿಶೇಷ ಹಿಲ್ ಕೌನ್ಸಿಲ್ ಸ್ಟೇಟಸ್ ಪಡೆಯುವುದು

ಕೊಡವರ ಸಂವಿಧಾನಬದ್ಧ ಹಕ್ಕು

ಸಾರ್ವತ್ರಿಕ ಕೈಲ್ ಪೊದು ಹಬ್ಬದಲ್ಲಿ ಹೆಚ್. ವಿಶ್ವನಾಥ್



ಸಿಎನ್‌ಸಿ ಆಯೋಜಿಸಿದ್ದ ಸಭೆಯಲ್ಲಿ ಎಂಎಲ್‌ಸಿ ಹೆಚ್.ವಿಶ್ವನಾಥ್ ಮಾತನಾಡುತ್ತಿರುವುದು.

ಮಡಿಕೇರಿ,ಸೆ.1–ಕೊಡವ ಲ್ಯಾಂಡ್ ಭೌಗೋಳಿಕ–ರಾಜಕೀಯ ಸ್ವಾಯತ್ತತೆ ಮತ್ತು ವಿಶೇಷ ಹಿಲ್ ಕೌನ್ಸಿಲ್ ಸ್ಟೇಟಸ್ ಪಡೆಯುವುದು ಕೊಡವರ ಸಂವಿಧಾನಬದ್ಧ ಹಕ್ಕಾಗಿದೆ ಎಂದು ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ತಿಳಿಸಿದ್ದಾರೆ.

ಮಡಿಕೇರಿಯ ಹೊರ ವಲಯದ ಕ್ಯಾಪಿಟಲ್ ವಿಲೇಜ್‌ನಲ್ಲಿ ಕೊಡವ ನ್ಯಾಷನಲ್ ಕೌನ್ಸಿಲ್ ವತಿಯಿಂದ ನಡೆದ 30ನೇ ವರ್ಷದ ಸಾರ್ವತ್ರಿಕ ಕೈಲ್ ಪೊದು ಹಬ್ಬ ಆಚರಣೆಯಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಕೊಡವರು ಕೇವಲ 1 ಲಕ್ಷದ ಒಳಗೆ ಇರುವ ಅತ್ಯಂತ ನಗಣ್ಯ ಜನಸಂಖ್ಯೆಯ ಸೂಕ್ಷ್ಮ ಸಮುದಾಯವಾಗಿದ್ದು, ಭಾರತದ ಈಶಾನ್ಯ ಪ್ರಾಂತ್ಯ ಹಾಗೂ ಗೋದಾವರಿ ಹಿಲ್‌ಟ್ರ್ಯಾಕ್ಟ್ ಮತ್ತು ವಿಶಾಖಪಟ್ಟಣಂ ಹಿಲ್ ಟ್ರ್ಯಾಕ್ಟ್ ಬುಡಕಟ್ಟು ಮಾದರಿಯಲ್ಲಿ ಕೊಡವರಿಗೆ ಶಾಸನಾತ್ಮಕವಾದ ಭದ್ರತೆಯನ್ನು ನೀಡಬೇಕು. 40–50ಲಕ್ಷ ಜನಸಂಖ್ಯೆ ಇರುವ ಬಲಾಢ್ಯರನ್ನು ಎಸ್‌ಟಿ ಪಟ್ಟಿಯಲ್ಲಿ ಸೇರಿಸಿರುವಾಗ ಸಂವಿಧಾನಿಕ ಸಬಲೀಕರಣಕ್ಕಾಗಿ ಬುಡಕಟ್ಟು ಲಕ್ಷಣವನ್ನು ಹೊಂದಿರುವ ಕೊಡವರನ್ನು ಎಸ್‌ಟಿ ಪಟ್ಟಿಗೆ ಸೇರಿಸುವುದು ಪ್ರಯಾಸದ ಕೆಲಸವಲ್ಲ ಎಂದರು.

ಪ್ರಜೆಗಳೇ ಪ್ರಭುಗಳು ಎನ್ನುವುದನ್ನು ಇಂದಿನ ರಾಜಕಾರಣಿಗಳು ಮರೆಯುತ್ತಿದ್ದಾರೆ. ರಿಯಲ್ ಎಸ್ಟೇಟ್ ದಂಧೆಯ ಮೂಲಕ ಪಾಳೆಗಾರರಂತೆ ಮೆರೆಯುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ ಅವರು, ಚುನಾಯಿತ ಜನಪ್ರತಿನಿಧಿಗಳು ಸಾಮಂತರಲ್ಲ ಎನ್ನುವುದನ್ನು ಅರಿತು ಪ್ರಜೆಗಳೇ ಸಾರ್ವಭೌಮರೆನ್ನುವ ಹಕ್ಕನ್ನು ಅರಿತುಕೊಂಡು ಕ್ಷೇತ್ರದ ಮತದಾರರು ಪ್ರಶ್ನೆ ಮಾಡುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ಮಾತನಾಡಿ, ಯುದ್ಧ ಮತ್ತು ಬೇಟೆಯ ಕೌಶಲ್ಯಗಳು ಕೊಡವರಲ್ಲಿ ವಂಶವಾಹಿಯಾಗಿ ಬೇರೂರಿದೆ. ಶಸ್ತ್ರಾಸ್ತ್ರಗಳನ್ನು ಹೊಂದುವುದು ಯೋಧ ಪರಂಪರೆಯ ಕೊಡವರ ಅನುವಂಶಿಕ ಶಾಶ್ವತ ಹಕ್ಕಾಗಿದೆ. ಬಂದೂಕಿನೊಂದಿಗೆ ಕೊಡವರು ಭಾವನಾತ್ಮಕ ಸಂಬಂಧ ಹೊಂದಿದ್ದಾರೆ. ಈ ಹಕ್ಕನ್ನು ಕಸಿದುಕೊಳ್ಳಲು ಯಾರಿಂದಲೂ ಸಾಧ್ಯವಿಲ್ಲ ಇದಕ್ಕಾಗಿ ಕೈಲ್ ಪೊದು ಹಬ್ಬ ಆಚರಣೆಯ ಸಂದರ್ಭ ವಿವಿಧ ಹಕ್ಕೊತ್ತಾಯಗಳನ್ನು ಮಂಡಿಸಲಾಗುವುದು ಎಂದು ನಾಚಪ್ಪ ತಿಳಿಸಿದರು. ಕಲಿಯಂಡ ಮೀನಾ, ಪುಲ್ಲೇರ ಸ್ವಾತಿ, ಅಪ್ಪಚ್ಚೀರ ರೀನಾ, ನಂದೇಟಿರ ಕವಿತಾ, ಪಟ್ಟಮಾಡ ಲಲಿತಾ, ಚೋಳಪಂಡ ಜ್ಯೋತಿ, ಅರೆಯಡ ಸವಿತಾ, ಪಚ್ಚಾರಂಡ ಶಾಂತಿ, ಕಲಿಯಂಡ ಪ್ರಕಾಶ್, ಬಾಚರಣಿಯಂಡ ಚಿಪ್ಪಣ್ಣ, ಅಳ್ಮಂಡ ಜೈ, ಕಾಂಡೇರ ಸುರೇಶ್, ಅಪ್ಪಚ್ಚಿರ ರಮ್ಮಿ ನಾಣಯ್ಯ, ಅಜ್ಜಿಕುಟ್ಟೀರ ಲೋಕೇಶ್, ಕಿರಿಯಮಾಡ ಶೆರಿನ್, ಚಂಬಂಡ ಜನತ್, ಅರೆಯಡ ಗಿರೀಶ್, ನಂದೇಟಿರ ರವಿ ಸುಬ್ಬಯ್ಯ, ಮಂದಪಂಡ ಮನೋಜ್, ಮಂದಪಂಡ ಸೂರಜ್, ಪುಲ್ಲೇರ ಕಾಳಪ್ಪ, ಮತ್ತಿತರರು ಪಾಲ್ಗೊಂಡು ಸಿಎನ್‌ಸಿಯ ಬೇಡಿಕೆಗಳ ಪರ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ನಿಯಮ ಉಲ್ಲಂಘಿಸಿದ 5 ಡಿಜೆ ವಾಹನ ವಶ, ಪ್ರಕರಣ ದಾಖಲು

ಕುಶಾಲನಗರ, ಸೆ.1–ಗಣಪತಿ ವಿಸರ್ಜನೆ ವೇಳೆ ನಿಗದಿಪಡಿಸಿದ್ದ ಷರತ್ತುಗಳನ್ನು ಉಲ್ಲಂಘಿಸಿದ 5 ಡಿಜೆ ವಾಹನಗಳನ್ನು ವಶಪಡಿಸಿಕೊಂಡಿರುವ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಪಟ್ಟಣದ ಜನತಾ ಕಾಲೋನಿ, ಮಾದಾಪಟ್ಟಣ ಗ್ರಾಮದಲ್ಲಿ ನಿಗಧಿಪಡಿಸಿದ್ದ ಡೆಸಿಬಲ್‌ಗಿಂತ ಹೆಚ್ಚಿನ ಡೆಸಿಬಲ್ ಸೌಂಡ್ಸ್ ಬಳಸಿದ ಹಿನ್ನೆಲೆಯಲ್ಲಿ ಐದು ಡಿಜೆ ಸೌಂಡ್ಸ್ ವಾಹನ ವಿರುದ್ಧ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನಿಗಧಿಪಡಿಸಿರುವ ಡೆಸಿಬಲ್‌ಗಿಂತ ಹೆಚ್ಚಿನ ಡೆಸಿಬಲ್ ಸೌಂಡ್ಸ್ ಸಿಸ್ಟಂ ಉಪಕರಣಗಳನ್ನು ಬಳಸದಂತೆ ಸೂಚನೆ ನೀಡಿದ್ದರೂ ನಿನ್ನೆ ಟೌನ್ ಪೊಲೀಸ್ ಠಾಣಾ ವ್ಯಾಪ್ತಿಯ ಜನತಾ ಕಾಲೋನಿ ಹಾಗೂ ಮಾದಾಪಟ್ಟಣ ಗ್ರಾಮದಲ್ಲಿ ಗಣಪತಿ ಮೂರ್ತಿಯ ವಿಸರ್ಜನೆ ಸಂದರ್ಭ ಭಾರಿ ವಾಹನಗಳಲ್ಲಿ 110 ರಿಂದ 120 ಡೆಸಿಬಲ್ ವರೆಗಿನ ಹೆಚ್ಚಿನ ಶಬ್ದದ ಧ್ವನಿವರ್ಧಕಗಳನ್ನು ಬಳಸದಂತೆ ಬಂದೋ ಬಸ್ತ್‌ನಲ್ಲಿದ್ದ ಸ್ಥಳೀಯ ಪೊಲೀಸ್ ಅಧಿಕಾರಿ, ಸಿಬ್ಬಂದಿ ತಿಳಿಸಿದ್ದರೂ



ಸಹ ಹೆಚ್ಚಿನ ಶಬ್ದದ ಧ್ವನಿವರ್ಧಕಗಳನ್ನು ಬಳಸಿರುವ ಹಿನ್ನೆಲೆ ಯಲ್ಲಿ ಐವರು ವಾಹನ ಚಾಲಕರುಗಳ ವಿರುದ್ಧ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಂಡಿರುವುದಾಗಿ ಠಾಣಾಧಿಕಾರಿ ಗಣೇಶ್ ತಿಳಿಸಿದ್ದಾರೆ.

ಕಾಡಾನೆಗಳ ದಾಳಿ: ಹೂ ಕುಂಡಗಳ ಧ್ವಂಸ

ಮಡಿಕೇರಿ: ಮನೆಯ ಅಂಗಳಕ್ಕೆ ಬಂದ ಕಾಡಾನೆಗಳ ಹಿಂಡು ಹೂ ಕುಂಡಗಳನ್ನು ಧ್ವಂಸ ಮಾಡಿದ ಘಟನೆ ನಾಪೋಕ್ಲು ಸಮೀಪದ ಕಕ್ಕಬ್ಬೆಯ ನಾಲಡಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಕೋಡಿಮಣಿಯಂಡ ಶರಣ್ ಕುಟ್ಟಪ್ಪ ಅವರ ಮನೆಯ ಅಂಗಳದಲ್ಲಿದ್ದ ಹೂ ಗಿಡಗಳು ಹಾಗೂ ಹೂ ಕುಂಡಗಳು ಕಾಡಾನೆ ದಾಳಿಗೆ ಧ್ವಂಸವಾಗಿವೆ. ಭಾನುವಾರ ಬೆಳಗ್ಗೆ 4 ಗಂಟೆಯ ವೇಳೆಗೆ 4 ಕಾಡಾನೆಗಳು 2 ಮರಿಗಳ ಸಹಿತ ಮನೆಯ ಅಂಗಳದಲ್ಲಿ ದಾಂಧಲೆ ನಡೆಸಿದ್ದಲ್ಲದೆ ಸಮೀಪದ ಕಾಫಿ ತೋಟಗಳಲ್ಲಿಯೂ ಕೃಷಿ ಗಿಡಗಳನ್ನು ನಾಶ ಮಾಡಿವೆ. ಗ್ರಾಮದಲ್ಲಿ ಕಾಡಾನೆಗಳಿಂದ ಜೀವ ಹಾನಿ ಸಂಭವಿಸುವ ಸಾಧ್ಯತೆಯಿದ್ದು ಕೂಡಲೇ ಸಂಬಂಧಪಟ್ಟವರು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಶರಣ್ ಕುಟ್ಟಪ್ಪ ಒತ್ತಾಯಿಸಿದ್ದಾರೆ.



ಸೆ.13, 14 ವಿಶ್ವವಿಖ್ಯಾತ ಗಗನಚುಕ್ಕಿ ಜಲಪಾತೋತ್ಸವ

ಮಳವಳ್ಳಿ, ಸೆ.1–ತಾಲೂಕಿನ ಶಿವನ ಸಮುದ್ರದ (ಬ್ಲಫ್) ವಿಶ್ವವಿಖ್ಯಾತ ಗಗನ ಚುಕ್ಕಿ ಜಲಪಾತೋತ್ಸವವು ಈ ಬಾರಿ ಸೆ.13 ಮತ್ತು 14ರಂದು ಅದ್ಧೂರಿಯಾಗಿ ನಡೆಯಲಿದೆ ಎಂದು ಶಾಸಕ ಪಿ.ಎಂ. ನರೇಂದ್ರ ಸ್ವಾಮಿ ತಿಳಿಸಿದ್ದಾರೆ.

ಶಿವನಸಮುದ್ರದ ಗಗನಚುಕ್ಕಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಜಲಪಾತೋತ್ಸವದ ಯಶಸ್ಸಿಗೆ ಬೇಕಾದ ಸಿದ್ಧತೆಗಳ ಬಗ್ಗೆ ಗಮನ ಹರಿಸುವಂತೆ ಸೂಚಿಸಿ, ದಸರಾ ಜೊತೆಗೆ ನಿರಂತರ ಕಾರ್ಯಕ್ರಮಗಳು ಇರುವುದರಿಂದ ಸೆ.13 ಮತ್ತು 14ರಂದು ಜಲಪಾತೋತ್ಸವ ಆಯೋ ಜಿಸಲಾಗಿದೆ. ಪ್ರವಾಸಿಗರನ್ನು ಸೆಳೆಯುವ ನಿಟ್ಟಿನಲ್ಲಿ ಜಲಪಾತೋತ್ಸವಕ್ಕೆ ವಿನೂತನ ಲೈಟಿಂಗ್ಸ್ ಮತ್ತು ಲೇಸರ್‌ಶೋ ಇರಲಿದೆ. ಅಲ್ಲದೇ ಜಲಪಾತೋತ್ಸವದ ಬಳಿಯಿಂದ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳಕ್ಕೆ ನೇರಪ್ರಸಾರದ ವ್ಯವಸ್ಥೆ ಇರುತ್ತದೆ ಎಂದು ವಿವರಿಸಿದರು.

ಎರಡು ದಿನಗಳ ಕಾರ್ಯಕ್ರಮಕ್ಕೆ ಲಕ್ಷಾಂತರ ಮಂದಿ ಸೇರುವ ನಿರೀಕ್ಷೆ ಇದೆ. ಜಲಪಾತೋತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಕಾರ ಕೋರಲಾಗಿದೆ. ಈ ಬಾರಿ ರೊಟ್ಟಿಕಟ್ಟೆ ಬಳಿ ಕುಡಿಯುವ ನೀರಿನ ಕಾಮಗಾರಿ ನಡೆಯುತ್ತಿರುವುದರಿಂದ ವೇದಿಕೆ ಕಾರ್ಯಕ್ರಮವನ್ನು ಮಲ್ಲಿಕ್ಯಾತನಹಳ್ಳಿ ಸಮೀಪವೇ ನಡೆಸಲಾಗುತ್ತದೆ.

ತಾಲೂಕಿನಿಂದ ಬರುವ ಜನರಿಗೆ ಉಚಿತ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ಅಲ್ಲದೇ ಜಿಲ್ಲಾ ಕೇಂದ್ರದಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗುತ್ತದೆ. ಊಟ, ಕುಡಿಯುವ ನೀರು ಹಾಗೂ ಪ್ರತ್ಯೇಕ ಶೌಚಾಯಲದ ವ್ಯವಸ್ಥೆ ಮಾಡಲಾಗುವುದು. ಎರಡು ದಿನಗಳು ವಿವಿಧ ಮಳಿಗೆಗಳನ್ನು ತೆರೆಯುವ ಸಂಬಂಧ ಅಧಿಕಾರಿಗಳು ನಿರ್ಧರಿಸಲಿದ್ದಾರೆ. ಇಲ್ಲಿನ ವ್ಯಾಪಾರಿಗಳಿಗೆ ಮಲ್ಲಿಕ್ಯಾತನಹಳ್ಳಿ ಬಳಿಯೇ ಸ್ಥಳಾವಕಾಶ ನೀಡಲಾಗುತ್ತದೆ ಎಂದು ಹೇಳಿದರು.




ಗಗನಚುಕ್ಕಿ ಜಲಪಾತೋತ್ಸವದ ಅಂಗವಾಗಿ ಸೋಮವಾರ ಶಾಸಕ ಪಿ.ಎಂ.ನರೇಂದ್ರಸ್ವಾಮಿ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಕಳೆದ ಬಾರಿಯಂತೆ ಈ ಸಲವೂ ಕೆಆರ್‌ಎಸ್ ಜಲಾಶಯ ತುಂಬಿದೆ. ಹೀಗಾಗಿ ವೈಭವದ ಜಲಪಾತೋತ್ಸವಕ್ಕೆ ನಿರ್ಧರಿಸಲಾಗಿದೆ. ಜಲಪಾತೋತ್ಸವದ ಅದ್ದೂರಿ ಆಚರಣೆ ಹಾಗೂ ಯಶಸ್ವಿಗೆ ಅಧಿಕಾರಿಗಳು ತಮಗೆ ವಹಿಸಿರುವ ಜವಾಬ್ದಾರಿ ನಿರ್ವಹಿಸಬೇಕು. ವೇದಿಕೆ ಸಮಿತಿ, ಸಾಂಸ್ಕೃತಿಕ ಸಮಿತಿ, ಸಾರಿಗೆ ಸಮಿತಿ, ಆರೋಗ್ಯ ಸಮಿತಿ, ಸ್ವಚ್ಛತಾ ಸಮಿತಿ, ಆಹಾರ ಸಮಿತಿ ಸೇರಿ ವಿವಿಧ ಸಮಿತಿಗಳನ್ನು ರಚಿಸಲಾಗಿದೆ ಎಂದು ಹೇಳಿದರು.

ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಉಪ ವಿಭಾಗಾಧಿಕಾರಿ ಎಂ.ಶಿವಮೂರ್ತಿ, ತಹಸೀಲ್ದಾರ್ ಎಸ್.ವಿ.ಲೋಕೇಶ್, ಡಿವೈಎಸ್ಪಿ ವಿ.ಕೃಷ್ಣಪ್ಪ, ತಾಪಂ ಇಒ ಎಚ್.ಜಿ. ಶ್ರೀನಿವಾಸ್, ವಿವಿಧ ಇಲಾಖೆಗಳ ಅಧಿಕಾರಿಗಳಾದ ಎ.ಎಂ.ಸೋಮಶೇಖರ್, ಅಪ್ಪಣ್ಣ ಬೋಯಿ, ಎಚ್.ಎಸ್.ಪ್ರೇಮ್‌ಕುಮಾರ್, ಭರತೇಶ್ ಕುಮಾರ್, ರಂಗಸ್ವಾಮಿ, ಮನ್ಮುಲ್ ನಿರ್ದೇಶಕರಾದ ಆರ್.ಎನ್.ವಿಶ್ವಾಸ್, ಡಿ.ಕೃಷ್ಣಗೌಡ, ಪಿಡಿಒ ಕುಮಾರ್, ಗ್ರಾಪಂ ಉಪಾಧ್ಯಕ್ಷ ಬಿ.ರಘು, ಮುಖಂಡರಾದ ಕೆ.ಜೆ.ದೇವರಾಜು, ಮಹದೇವು, ಶ್ರೀಕಾಂತ್, ಶ್ರೀನಿವಾಸ್, ಸಿ.ಎಂ.ವೇದಮೂರ್ತಿ, ಅಶ್ವತ್ಥ್ ಕುಮಾರ್ ಪಾಲ್ಗೊಂಡಿದ್ದರು.

ನಾಳೆ ವಿದ್ಯುತ್ ವ್ಯತ್ಯಯ

ಮಂಡ್ಯ, ಸೆ.1– ಚಿಕ್ಕ ಮಂಡ್ಯ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಪಣಕನಹಳ್ಳಿ, ಗೊರವಾಲೆ ಎನ್.ಜೆವೈ ಮಾರ್ಗ ಮತ್ತು ಸಂಪಹಳ್ಳಿ ಐ.ಪಿ ಮಾರ್ಗದಲ್ಲಿ ತುರ್ತು ಕಾರ್ಯ ನಿರ್ವಹಣೆ ಹಮ್ಮಿಕೊಂಡಿರುವುದರಿಂದ ಸೆ.3 ರಂದು ವಿದ್ಯುತ್ ವ್ಯತ್ಯಯ ಉಂಟಾಗಲಿದೆ.



ಗ್ರಾಮಾಂತರ ಪ್ರದೇಶಗಳಾದ ಸಂಪಹಳ್ಳಿ, ಗೊರವಾಲೆ, ಬಿ.ಹೊಸಹಳ್ಳಿ, ಬೀರಗೌಡನಹಳ್ಳಿ, ಶಂಭೂನಹಳ್ಳಿ, ಕೋಣನಹಳ್ಳಿ, ಪಣಕನಹಳ್ಳಿ, ಹೊಳಲು, ಎಂ.ಜಿ.ಬಡಾವಣೆ, ತಂಡಸನಹಳ್ಳಿ, ಸಿದ್ದಯ್ಯನ ಕೊಪ್ಪಲು, ವೈ.ಯರಹಳ್ಳಿ, ಅವ್ವೇರಹಳ್ಳಿ, ಸಂಪಹಳ್ಳಿ ಐ.ಪಿ ಮಾರ್ಗ ಹಾಗೂ ಈ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಕಾರು ಡಿಕ್ಕಿ: ಬೈಕ್ ಸವಾರ ಸಾವು

ಹಲಗೂರು, ಸೆ.1– ರಾಷ್ಟ್ರೀಯ ಹೆದ್ದಾರಿ–948ರ ಬಾಳೆಹೊನ್ನಿಗ ಗೇಟ್ ಬಳಿ ಕಾರು ಮತ್ತು ಬೈಕ್ ನಡುವೆ ಸೋಮವಾರ ಬೆಳಿಗ್ಗೆ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರ ಮೃತಪಟ್ಟ ಘಟನೆ ಸೋಮವಾರ ಬೆಳಿಗ್ಗೆ ನಡೆದಿದೆ.



ಗೋಪಾಲ

ಮೃತ ವ್ಯಕ್ತಿಯನ್ನು ಬಾಳೆಹೊನ್ನಿಗ ಗ್ರಾಮದ ಗೋಪಾಲ (52) ಎಂದು ಗುರುತಿಸಲಾಗಿದೆ. ಅವರು ಕಾರ್ಯನಿಮಿತ್ತ ದಳವಾಯಿ ಕೋಡಿಹಳ್ಳಿ ಗ್ರಾಮಕ್ಕೆ ತೆರಳಿ ಸ್ವಗ್ರಾಮಕ್ಕೆ ಹಿಂತಿರುಗುವ ವೇಳೆ ಹಲಗೂರು ದಿಕ್ಕಿನಿಂದ ಬಂದ ಕಾರು ಬೈಕ್‌ಗೆ ಡಿಕ್ಕಿ ಹೊಡೆದಿದೆ.

ಅಪಘಾತದಲ್ಲಿ ತೀವ್ರ ಗಾಯಗೊಂಡ ಗೋಪಾಲ ಅವರನ್ನು ಹಾರೋಹಳ್ಳಿ ಬಳಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ಬೆಳಿಗ್ಗೆ ಮೃತಪಟ್ಟರು. ಬೈಕ್ ಹಿಂಬದಿ ಸವಾರ ವೆಂಕಟಯ್ಯ ಗಂಭೀರವಾಗಿ ಗಾಯಗೊಂಡಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ. ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅಪೌಷ್ಟಿಕತೆ ನಿವಾರಣೆಗೆ ಪೌಷ್ಟಿಕಾಂಶ ಆಹಾರ ಅಗತ್ಯ

ಶ್ರೀರಂಗಪಟ್ಟಣ, ಸೆ.1–ಅಪೌಷ್ಟಿಕತೆ ನಿವಾರಣೆಗೆ ಪೌಷ್ಟಿಕಾಂಶವುಳ್ಳ ಆಹಾರ ಅವಶ್ಯಕವಾಗಿದ್ದು ಪ್ರತಿಯೊಬ್ಬರೂ ಪೌಷ್ಟಿಕ ಆಹಾರ ಸೇವನೆ ಮಾಡುವ ಮೂಲಕ ರೋಗ ನಿರೋಧಕ ಶಕ್ತಿಯನ್ನು ವೃದ್ಧಿಸಿಕೊಂಡು ಆರೋಗ್ಯವಂತ ಸಮಾಜ ನಿರ್ಮಿಸಬೇಕೆಂದು ಪ್ರಧಾನ ಸಿವಿಲ್ ನ್ಯಾಯಾಧೀಶ ಹರೀಶ್‌ಕುಮಾರ್ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಆರೋಗ್ಯ ಇಲಾಖೆ ಸಂಯುಕ್ತಾಶ್ರಯದಲ್ಲಿ ಪೌಷ್ಟಿಕಾಂಶ ದಿನಾಚರಣೆ ಹಾಗೂ ಪೋಷಣ್ ಮಾಸಾಚರಣೆ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಪೌಷ್ಟಿಕ ಆಹಾರ ಪ್ರತಿಯೊಬ್ಬ ವ್ಯಕ್ತಿಯ ಸರ್ವತೋಮುಖ ಬೆಳವಣಿಗೆಗೆ ಅಗತ್ಯವಾಗಿದ್ದು ದಿನ ನಿತ್ಯ ಸೇವಿಸುವ ಆಹಾರದಲ್ಲಿ ಸೊಪ್ಪು, ತರಕಾರಿ, ಮೊಳಕೆ ಕಾಳು, ಬೇಳೆ ಕಾಳು, ಹಣ್ಣು ಹಂಪಲುಗಳನ್ನು ಸೇವಿಸುವುದರಿಂದ ಉತ್ತಮ ಪೌಷ್ಟಿಕಾಂಶಗಳು ದೊರೆಯುವುದರಿಂದ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಕಾರಿಯಾಗಲಿದೆ ಎಂದರು.

ನಂತರ ಅಪರ ಸಿವಿಲ್ ನ್ಯಾಯಾಧೀಶ ಹನುಮಂತಪ್ಪರಾಯಪ್ಪ ಬಿ.ಆರ್ ಮಾತನಾಡಿ ಹೆಣ್ಣು ಮಕ್ಕಳು ಮತ್ತು ಮಹಿಳೆಯರು ದೇಶದ ಆಸ್ತಿ, ಪುರುಷರಿಗೆ ಸರಿ ಸಮಾನವಾದ ಎಲ್ಲಾ ಕ್ಷೇತ್ರಗಳಲ್ಲೂ ಕೆಲಸ ಮಾಡುತ್ತಿದ್ದಾರೆ. ಆದ್ದರಿಂದ ರಕ್ತ ಹೀನತೆ ಅಲಕ್ಷ್ಯ ಮಾಡಬೇಡಿ ತಮ್ಮ ಆರೋಗ್ಯದ ಕಡೆ ಹೆಚ್ಚು ಗಮನ ಕೊಡಿ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರು ಮಾತನಾಡಿದರು. ಆರೋಗ್ಯ ಇಲಾಖೆಯ ಪೌಷ್ಟಿಕ ಆಹಾರದ ಮಹತ್ವದ ಭಿತ್ತಿಪತ್ರ ಬಿಡುಗಡೆ ಮಾಡಿದರು. ಹಾಗೆಯೇ ವಿವಿಧ ಬಗೆಯ ಪೌಷ್ಟಿಕ ಆಹಾರದ ಪದಾರ್ಥಗಳನ್ನು ಪ್ರದರ್ಶಿಸಲಾಯಿತು. ಕಾರ್ಯಕ್ರಮದಲ್ಲಿ ಹಿರಿಯ ಅಂಗನವಾಡಿ ಮೇಲ್ವಿ ಚಾರಕಿ ಪುಷ್ಪ, ಮೇಲ್ವಿಚಾರಕಿ ಆಶಾ, ಸುಜಾತ, ಪ್ರಥಮ ದರ್ಜೆ ಸಹಾಯಕ ಕಿರಣರಾಜೆ ಹಾಗೂ ಗರ್ಭಿಣಿಯರು, ಅಂಗನವಾಡಿ ಕಾರ್ಯಕರ್ತೆಯರು, ಪಾಲ್ಗೊಂಡಿದ್ದರು.

ಸಂಘವನ್ನು ಅಭಿವೃದ್ಧಿ ಪಡಿಸಲು ಷೇರುದಾರರ ಸಹಕಾರ ಅಗತ್ಯ

ಭಾರತೀನಗರ, ಸೆ.1– ಸಹಕಾರ ಸಂಘವನ್ನು ಅಭಿವೃದ್ಧಿಪಡಿಸಲು ಷೇರುದಾರರ ಸಹಕಾರ ಅಗತ್ಯವಾಗಿದೆ ಎಂದು ಶ್ರೀವಿಶ್ವೇಶ್ವರಯ್ಯ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆ.ಟಿ.ಗಿರೀಶ್ ತಿಳಿಸಿದರು.

ಇಲ್ಲಿನ ಅಂಬೇಡ್ಕರ್ ಭವನದಲ್ಲಿ ನಡೆದ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಕಳೆದ ಸಾಲಿನಲ್ಲಿ 3.34 ಲಕ್ಷ ನಿವ್ವಳ ಲಾಭ ಗಳಿಸಿದ್ದು ಪ್ರಸಕ್ತ ವರ್ಷದಲ್ಲಿ ಮತ್ತಷ್ಟು ಹೆಚ್ಚು ಲಾಭಗಳಿಸಬೇಕಾದರೆ ಷೇರುದಾರರು ಆಡಳಿತ ಮಂಡಳಿಗೆ ಸಹಕಾರ ನೀಡಬೇಕು. ಹೆಚ್ಚು ಹೆಚ್ಚು ಷೇರುಗಳನ್ನು ಕಟ್ಟಿ ಉಳಿತಾಯ ಖಾತೆಯನ್ನು ತೆರೆಯಬೇಕೆಂದು ಮನವಿ ಮಾಡಿದರು.

ಮುಂದಿನ ದಿನಗಳಲ್ಲಿ ಇ–ಸ್ಟಾಂಪ್ ಸೌಲಭ್ಯವನ್ನು ನಮ್ಮ ಸಂಘದಿಂದ ನೀಡಲು ಮುಂದಾಗಿದ್ದೇವೆ. ಸ್ವಸಹಾಯ ಸಂಘಗಳನ್ನು ಹೊಸದಾಗಿ ತೆರೆದು ಸ್ತ್ರೀಶಕ್ತಿ ಸಂಘಕ್ಕೆ ಸಾಲಸೌಲಭ್ಯಗಳನ್ನು ನೀಡಲು ಮುಂದಾಗಿದ್ದೇವೆ. ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಹೇಳಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳಿಸಿ ಷೇರುದಾರರ ಮಕ್ಕಳಿಗೆ ಹಾಗೂ ಅತೀ ಹೆಚ್ಚು ಪಿಗ್ಮಿ ಹಣ ವನ್ನು ಕಟ್ಟಿದ ಷೇರುದಾರರಿಗೆ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಉಪಾಧ್ಯಕ್ಷೆ ಬಿ.ಎಸ್.ಜ್ಯೋತಿ, ನಿರ್ದೇಶಕರಾದ ಪಿ.ಶಿವಣ್ಣ ಡಿ.ದೇವರಾಜು, ಎಸ್.ಟಿ.ಮಹೇಶ್, ಜಿ.ಎಸ್.ಲೋಕೇಶ್, ಆರ್.ಕೆ.ಚಂದ್ರಶೇಖರ್, ಸಿ.ಬಿ.ಪ್ರಕಾಶ್, ಭವಾನಿ, ಕೃಷ್ಣ, ಎಚ್.ಪಿ.ಸಿದ್ದಾಚಾರಿ, ಸೀನ, ಕೆ.ಎಸ್. ರಾಜೇಶ, ಸಂಘದ ಸಿಇಓ ಕೆ.ಪವಿತ್ರ ನಯನ, ಕಿರಣ್ ಸೇರಿದಂತೆ ಹಲವರಿದ್ದರು.

ಶತಾಯುಷಿ ಸಾಕಮ್ಮ ನಿಧನ



ಕೆ.ಆರ್.ಪೇಟೆ: ತಾಲೂಕಿನ ಕಸಬಾ ಹೋಬಳಿಯ ಲಕ್ಷ್ಮೀಪುರ ಗ್ರಾಮದ ಲೇಟ್ ಕೆಂಪೇಗೌಡರ ಧರ್ಮಪತ್ನಿ, ಶತಾಯುಷಿ ಶ್ರೀಮತಿ ಸಾಕಮ್ಮ(105) ಅವರು ಭಾನುವಾರ ನಿಧನ ಹೊಂದಿದರು.

ಮೃತರು ಪುತ್ರ, ಇಬ್ಬರು ಪುತ್ರಿಯರು, ಮೊಮ್ಮಗ ಲಕ್ಷ್ಮೀಪುರ ಹಾಲಿನ ಡೇರಿನ ಕಾರ್ಯದರ್ಶಿ ರಮೇಶ್ ಸೇರಿದಂತೆ ಎಂಟು ಮೊಮ್ಮಕ್ಕಳು, 15ಕ್ಕೂ ಹೆಚ್ಚು ಮುಮ್ಮಕ್ಕಳು, ಮರಿಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಭಾನುವಾರ ಮಧ್ಯಾಹ್ನ ಸ್ವಗ್ರಾಮ ಲಕ್ಷ್ಮೀಪುರ ಗ್ರಾಮದಲ್ಲಿ ನಡೆಯಿತು.

ಜನರ ಬದುಕು ಕಟ್ಟುವಲ್ಲಿ ಸುತ್ತೂರು ಶ್ರೀಗಳ ಪಾತ್ರ ಮಹತ್ತರ



ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ವರ್ಧಂತೋತ್ಸವ ಅಂಗವಾಗಿ ಹಿರಿಯರ ಮನೆಯಲ್ಲಿ ಅನ್ನದಾಸೋಹ ಆಯೋಜಿಸಲಾಗಿತ್ತು.

ಚಾಮರಾಜನಗರ, ಸೆ.1–ಅಕ್ಷರ, ಅನ್ನ ಆರೋಗ್ಯ ದಾಸೋಹಗಳ ಮೂಲಕ ಜನರ ಬದುಕು ಕಟ್ಟುವಲ್ಲಿ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ಸೇವೆ ಮಹತ್ತರವಾಗಿದೆ ಎಂದು ಎಪಿಎಂಸಿ ಮಾಜಿ ಅಧ್ಯಕ್ಷ ಬಿ.ಕೆ ರವಿ ಕುಮಾರ್ ಅಭಿಪ್ರಾಯಪಟ್ಟರು

ನಗರದ ಆಶ್ರಯ ಸೇವಾ ಟ್ರಸ್ಟ್ ಆಶ್ರಯದಲ್ಲಿ ನಡೆಯುತ್ತಿರುವ ಹಿರಿಯರ ಮನೆಯಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಸುತ್ತೂರು ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ವರ್ಧಂತೋತ್ಸವದಲ್ಲಿ ಮಾತನಾಡಿದ ಅವರು, ಸುತ್ತೂರು ಶ್ರೀಗಳ ಮುಂದಾಲೋಚನೆ, ದೂರದೃಷ್ಟಿ ಎಲ್ಲರಿಗೂ ಮಾದರಿಯಾಗಿದೆ. ದೇಶ ವಿದೇಶಗಳಲ್ಲಿ ಅವರು ಸ್ಥಾಪಿಸಿರುವ ಶಾಲಾ ಕಾಲೇಜುಗಳು ಕೇವಲ ಕಟ್ಟಡಗಳಾಗಿರದೆ ಯುವಜನರಿಗೆ ನಾಯಕತ್ವ, ಆಧ್ಯಾತ್ಮ ಶಕ್ತಿ ತುಂಬುವುದಲ್ಲದೆ ಅವರಿಗೆ ಉದ್ಯೋಗವಕಾಶಗಳನ್ನು ಕಲ್ಪಿಸಿ ಅವರ ಬದುಕು ಕಟ್ಟುವ ಕಾಯಕದಲ್ಲಿ ಮುಂಚೂಣಿಯಲ್ಲಿದೆ.

ಈ ವರ್ಷದಿಂದ ಪ್ರಾರಂಭಿಸಿರುವ ಅವರ ಜನ್ಮದಿನ ಕಾರ್ಯಕ್ರಮವನ್ನು ಮುಂದಿನ ವರ್ಷದಿಂದ ಅರ್ಥಪೂರ್ಣವಾಗಿ ಎಲ್ಲರ ಸಹಕಾರದಿಂದ ಸಮಾಜ ಮುಖಿಯಾಗಿ ಆಚರಿಸಲಾಗುವುದು. ಹಿರಿಯರ ಮನೆಯ ಆಶ್ರಯದಲ್ಲಿರುವ ವೃದ್ಧರು ಹಾಗೂ ನಿರಾಶ್ರಿತರಿಗೆ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ಜನ್ಮವರ್ಧಂತೋತ್ಸವದ ಅಂಗವಾಗಿ ಶಾಲು ವಿತರಿಸಲಾಯಿತು. ಎಲ್ಲರಿಗೂ ಉಚಿತ ಊಟದ ವ್ಯವಸ್ಥೆ ಮಾಡಲಾಗಿತ್ತು.

ಜೆಎಸ್‌ಎಸ್ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಆರ್‌ಎಂಸ್ವಾಮಿ, ಚೂಡಾ ಮಾಜಿ ಅಧ್ಯಕ್ಷ ಸೈಯದ್ ರಫಿ, ಪಿಎಲ್‌ಡಿ ಬ್ಯಾಂಕ್ ಮಾಜಿ ಸದಸ್ಯರಾದ ಉತ್ತುವಳ್ಳಿ ದೊರೆಸ್ವಾಮಿ, ಆಶ್ರಯ ಸೇವಾ ಟ್ರಸ್ಟ್‌ನ ಮುಖ್ಯಸ್ಥ ರಮೇಶ್ ಗುರುಸ್ವಾಮಿ, ಪತ್ರಕರ್ತರಾದ ರೇಣುಕೇಶ್ ಮೊದಲಾದವರು ಸಮಾರಂಭದಲ್ಲಿ ಹಾಜರಿದ್ದರು.

ಕಾರು–ಬೈಕ್ ಡಿಕ್ಕಿ ಸವಾರ ಸಾವು

ಗುಂಡ್ಲುಪೇಟೆ: ಲಾರಿಯನ್ನು ಹಿಂದಿಕ್ಕಲು ಮುನ್ನುಗ್ಗಿದ ಕಾರು ಚಾಲಕನ ನಿಯಂತ್ರಣ ತಪ್ಪಿ ರಸ್ತೆಯ ಮತ್ತೊಂದು ಬದಿಯಲ್ಲಿ ಹೋಗುತ್ತಿದ್ದ ಬೈಕಿಗೆ ಡಿಕ್ಕಿ ಹೊಡೆದು ಸವಾರನ ಸಾವಿಗೆ ಕಾರಣವಾದ ಘಟನೆ ಪಟ್ಟಣದಲ್ಲಿ ಸೋಮವಾರ ನಡೆದಿದೆ.



ಮನೋಜ್

ಬಾಳೆಕಾಯಿ ಮಂಡಿಯಲ್ಲಿ ಲೋಡರುಗಳಾಗಿ ಕಾರ್ಯನಿರ್ವಹಿಸುತ್ತಿರುವ ಬೈಕ್ ಸವಾರ ಭೀಮನಬೀಡು ಗ್ರಾಮದ ಮನೋಜ್(23) ಮೃತರಾದರೆ ಆತನ ಜತೆಗಿದ್ದ ಮಹೇಶ್ ಮತ್ತು ಅಭಿ ಎಂಬುವರು ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ.

ಪಟ್ಟಣದ ಡಿ.ದೇವರಾಜ ಅರಸು ಕ್ರೀಡಾಂಗಣದ ಎದುರು ರಾಷ್ಟ್ರೀಯ ಹೆದ್ದಾರಿಯಲ್ಲಿ ಮೈಸೂರಿನತ್ತ ಹೋಗುತ್ತಿದ್ದ ಲಾರಿಯನ್ನು ಹಿಂದಿಕ್ಕಲು ಅತಿ ವೇಗವಾಗಿ ಸಾಗಿದ ಕಾರಿನ ಹಿಂಭಾಗ ಲಾರಿಗೆ ತಾಕಿದ್ದರಿಂದ ಚಾಲಕನ ನಿಯಂತ್ರಣ ತಪ್ಪಿದ ಕಾರು ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ರಸ್ತೆಯ ಮತ್ತೊಂದು ಬದಿಗೆ ನುಗ್ಗಿದೆ. ಈ ವೇಳೆ ಎದುರಿನಿಂದ ಬರುತ್ತಿದ್ದ ಬೈಕಿಗೆ ಡಿಕ್ಕಿ ಹೊಡೆದಿದೆ. ಘಟನೆಯಲ್ಲಿ ಬೈಕಿನಲ್ಲಿ ಬರುತ್ತಿದ್ದ ಮೂವರು ಕಾರ್ಮಿಕರಿಗೂ ತೀವ್ರ ಪೆಟ್ಟುಗಳಾಗಿದ್ದು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆಸ್ಪತ್ರೆಯಲ್ಲಿ ಮನೋಜ್ ಸಾವಿಗೀಡಾದರೆ ಮತ್ತಿಬ್ಬರಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಹಲವಾರು ಪ್ರಕರಣಗಳಲ್ಲಿ ಕರ್ತವ್ಯಲೋಪವೆಸಗಿದ

ಚಾ.ನಗರ ನಗರಸಭೆ ಆಯುಕ್ತ ರಾಮದಾಸ್ ಕರ್ತವ್ಯದಿಂದ ಬಿಡುಗಡೆಗೆ ಆದೇಶ

ಚಾಮರಾಜನಗರ, ಸೆ.1– ಪೌರಾಯುಕ್ತ ಹುದ್ದೆಯಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸದೆ ಕರ್ತವ್ಯ ಲೋಪವೆಸಗಿದ ನಗರಸಭೆ ಪೌರಾಯುಕ್ತ ಎಸ್.ವಿ. ರಾಮದಾಸ್ ಅವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾನಾಗ್ ಆದೇಶ ಹೊರಡಿಸಿದ್ದಾರೆ.



ರಾಮದಾಸ್

ರಾಮದಾಸ್ ಅವರನ್ನು ಅವರ ಮೂಲ ಹುದ್ದೆಯಾದ ತೋಟಗಾರಿಕೆ ಇಲಾಖೆಯ ಸಕ್ಷಮ ಪ್ರಾಧಿಕಾರದಲ್ಲಿ ವರದಿ ಮಾಡಿಕೊಳ್ಳಲು ಸೂಚಿಸಿದ್ದಾರೆ. ಅವರ ಸ್ಥಾನಕ್ಕೆ ನಗರಸಭೆ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ರೂಪಾ ಅವರನ್ನು ಪ್ರಭಾರ ಆಯುಕ್ತರಾಗಿ ನೇಮಕ ಮಾಡಲಾಗಿದ್ದು, ಅಧಿಕಾರ ವಹಿಸಿಕೊಂಡಿದ್ದಾರೆ.

ರಾಮದಾಸ್ ಅವರ ವಿರುದ್ಧ ಹಲವಾರು ಆರೋಪಗಳಿದ್ದು, ಮುಖ್ಯವಾಗಿ ಕೌನ್ಸಿಲ್ ಸಭೆಯಲ್ಲಿ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದ್ದ ಕಾಮಗಾರಿಗಳಿಗೆ ಬದಲಾಗಿ, ತಮಗೆ ಬೇಕಾದ ಕಾಮಗಾರಿಗಳನ್ನು ಕೌನ್ಸಿಲ್ ಗಮನಕ್ಕೂ ತಾರದೇ ಬದಲಿಸಿಕೊಂಡು, ನಕಲಿ ನಡಾವಳಿಗಳನ್ನು ಸಲ್ಲಿಸಿ ಅಧಿಕಾರ ದುರುಪಯೋಗ ಮಾಡಿಕೊಂಡಿರುವ ಬಗ್ಗೆ ನಗರಸಭೆ ಅಧ್ಯಕ್ಷರು ಜಿಲ್ಲಾಧಿಕಾರಿಯವರಿಗೆ ದೂರು ನೀಡಿದ್ದರು.

ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು ಮಾಡುವ ಲೈನ್ ಪದೇ ಪದೇ ರಿಪೇರಿಯಾಗುತ್ತಿದ್ದರೂ ಯಾವುದೇ ಕ್ರಮ ಕೈಗೊಳ್ಳದೇ ವಿಫಲ ರಾಗಿದ್ದಾರೆ. ಪ್ರಾದೇಶಿಕ ಆಯುಕ್ತರ ನ್ಯಾಯಾಲಯಕ್ಕೆ ದಾಖಲಾತಿ ಸಲ್ಲಿಸದೇ, ನ್ಯಾಯಾಲಯಕ್ಕೆ ಅಗೌರವ ತೋರಿದ್ದಾರೆ. 15ನೇ ಹಣಕಾಸು ಆಯೋಗದ ಅನುದಾನವನ್ನು ಸಂಪೂರ್ಣವಾಗಿ ವೆಚ್ಚ ಮಾಡದೇ ನಗರದ ಮೂಲ ಸೌಕರ್ಯ ನೀಡಲು ವಿಫಲರಾಗಿದ್ದಾರೆ. ಹೈಕೋರ್ಟ್‌ನಲ್ಲಿ ನಗರಸಭೆಗೆ ಸಂಬಂಧಿಸಿದ ಪ್ರಕರಣಗಳಿಗೆ ಯಾವುದೇ ಕ್ರಮ ವಹಿಸದೆ ನ್ಯಾಯಾಲಯದ ಆದೇಶಗಳನ್ನು ಪಾಲನೆ ಮಾಡದೇ ನಿರ್ಲಕ್ಷ್ಯ ವಹಿಸಿರುವುದು ಸೇರಿದಂತೆ ಅನೇಕ ಕರ್ತವ್ಯಗಳಲ್ಲಿ ಲೋಪ ಎಸಗಿರುವುದನ್ನು ಜಿಲ್ಲಾಧಿಕಾರಿಯವರು ತಮ್ಮ ಆದೇಶದಲ್ಲಿ ಉಲ್ಲೇಖಿಸಿದ್ದಾರೆ.

ಜಿಲ್ಲಾಡಳಿತದಿಂದ ಖರೀದಿಸಿರುವ ಲ್ಯಾಪ್‌ಟಾಪ್ ಮತ್ತು ಹೊಲಿಗೆಯಂತ್ರಗಳನ್ನು ಪಡೆದು ಫಲಾನುಭವಿಗಳಿಗೆ ವಿತರಿಸದೆ ಅನುಪಯುಕ್ತವಾಗಿ ಹಾಳಾಗುವಂತೆ ಮಾಡಿರುವುದು. ಇದಕ್ಕೆ ನೋಟೀಸ್ ನೀಡಿದ್ದರೂ ಅದನ್ನು ನಿರ್ಲಕ್ಷ್ಯ ಮಾಡಿದ್ದಾರೆ. ಸಫಾಯಿ ಕರ್ಮಚಾರಿಗಳಿಗೆ ಮನೆ ನಿರ್ಮಾಣಕ್ಕಾಗಿ ಸೂಕ್ತ ನಿವೇಶನ ಗುರುತಿಸದೇ ಇರುವುದು, ಪೌರ ಕಾರ್ಮಿಕರಿಗೆ ನಿಯಮಿತವಾಗಿ ಆರೋಗ್ಯ ತಪಾಸಣೆ ನಡೆಸದೇ ಇರುವುದು, ನ್ಯಾಯಾಲಯ ರಸ್ತೆ ಪೂರ್ಣಗೊಳಿಸುವಂತೆ ಆದೇಶಿಸಿದ್ದರೂ ಅದು ಅಪೂರ್ಣಗೊಂಡಿರುವುದು, ಅಲ್ಲದೇ ಅದೇ ನ್ಯಾಯಾಲಯ ರಸ್ತೆಯನ್ನು ಅಭಿವೃದ್ಧಿ ಪಡಿಸುವ ಸಂದರ್ಭದಲ್ಲಿ ರಸ್ತೆಗಾಗಿ ಭೂ ಸ್ವಾಧೀನಗೊಳ್ಳಬೇಕಾದ ಕಟ್ಟಡ, ಮನೆ ಮಾಲೀಕರಿಂದ ಅನುಮತಿ ಪಡೆದು, ಪಾರದರ್ಶಕತೆ ಕಾಯ್ದುಕೊಂಡು ಸೂಕ್ತ ಪರಿಹಾರ ನಿಗದಿಗೊಳಿಸುವ ಮೂಲಕ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಲು ನ್ಯಾಯಾಲಯ ಸೂಚಿಸಿದ್ದರೂ ನಿರ್ಲಕ್ಷ್ಯ ವಹಿಸಿರುವುದು.

ಅಲ್ಲದೇ ಬಹಳ ಮುಖ್ಯವಾಗಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಇ ಖಾತಾ ಅಭಿಯಾನವನ್ನು 3 ತಿಂಗಳೊಳಗೆ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಆಸ್ತಿ ಇ ಖಾತೆ ನೀಡುವಂತೆ ನಿರ್ದೇಶನವಿದ್ದರೂ ಒಟ್ಟು 4787 ಅನಧಿಕೃತ ಆಸ್ತಿಗಳಿಗೆ ಈವರೆವಿಗೆ ಕೇವಲ 860 ಬಿ ಖಾತಾ ನೀಡಿ, ಶೇ.17 ರಷ್ಟು ಮಾತ್ರ ಸಾಧನೆ ಮಾಡುವ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿರುವುದು ಸೇರಿದಂತೆ ಹಲವಾರು ವಿಷಯಗಳಲ್ಲಿ ಕರ್ತವ್ಯ ಲೋಪ ಎಸಗಿರುವುದು ಸಾಬೀತಾದ ಕಾರಣ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ನಗರಸಭೆ ಆಯುಕ್ತ ರಾಮದಾಸ್ ಅವರನ್ನು ಕರ್ತವ್ಯದಿಂದ ಬಿಡುಗಡೆ ಮಾಡಿದ್ದಾರೆ.

ಲಾರಿ–ಟ್ರ್ಯಾಕ್ಟರ್ ಮುಖಾಮುಖಿ ಡಿಕ್ಕಿ : ಲಾರಿ ಚಾಲಕ ಸಾವು

ಯಳಂದೂರು,ಸೆ.1–(ವಿ.ನಾಗರಾಜು) ಲಾರಿ, ಟ್ರ್ಯಾಕ್ಟರ್ ನಡುವೆ ಸಂಭವಿಸಿದ ಮುಖಾಮುಖಿ ಡಿಕ್ಕಿಯಲ್ಲಿ ಲಾರಿ ಚಾಲಕ ಸ್ಥಳದಲ್ಲೇ ಮೃತಪಟ್ಟ ಘಟನೆ ತಾಲೂಕಿನ ಮದ್ದೂರು ಗ್ರಾಮ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ.

ಉಡುಪಿ ಜಿಲ್ಲೆಯ ಕೊಂಗನಪಡಿ ಗ್ರಾಮದ ನಿವಾಸಿ, ಲಾರಿ ಚಾಲಕ ಅನಂತಪದ್ಮನಾಭ ಕೋಡಂಜಾಯ್(75) ಮೃತ ವ್ಯಕ್ತಿ. ಮದ್ದೂರು ಗ್ರಾಮದ ಎಳೆಪಿಳ್ಳಾರಿ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೊಳ್ಳೇಗಾಲದಿಂದ ನಗರ ಕಡೆಗೆ ತೆರಳುತ್ತಿದ್ದ ಲಾರಿ ಹಾಗೂ ಮದ್ದೂರು ಕಡೆಯಿಂದ ಕಬ್ಬು ತುಂಬಿಕೊಂಡು ಕುಂತೂರು ಸಕ್ಕರೆ ಕಾರ್ಖಾನೆ ಕಡೆ ತೆರಳುತ್ತಿದ್ದ ಟ್ರ್ಯಾಕ್ಟರ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದೆ. ಈ ವೇಳೆ ಲಾರಿ ಚಾಲಕ ಸ್ಥಳದಲ್ಲಿಯೇ ಮೃತಪಟ್ಟರೆ, ಟ್ರ್ಯಾಕ್ಟರ್‌ನಲ್ಲಿದ್ದ ತಾಲೂಕಿನ ಆಲ್ಕೆರೆ ಅಗ್ರಹಾರ ಗ್ರಾಮದ ನಿವಾಸಿಗಳಾದ ನಿಂಗರಾಜು, ಮಲ್ಲೇಶ್ ಎಂಬವರು ಗಾಯಗೊಂಡಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅಗರ–ಮಾಂಬಳ್ಳಿ ಠಾಣೆಯ ಪೊಲೀಸರು ಮೃತದೇಹವನ್ನು ಕೊಳ್ಳೇಗಾಲದ ಸರ್ಕಾರಿ ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಿದರು. ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಈ ಸಂಬಂಧ ಅಗರ–ಮಾಂಬಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೈಸೂರಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು


ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ಹಿನ್ನೆಲೆಯಲ್ಲಿ ಆಯಿಷ್ ಸಂಸ್ಥೆ ಮುಂದೆ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು.



ಆಯಿಷ್ ಸಂಸ್ಥೆ ಆವರಣದಲ್ಲಿ ಶ್ವಾನ ಹಾಗೂ ಬಾಂಬ್ ಸ್ಕ್ವಾಡ್ ತಂಡ ಪರಿಶೀಲಿಸುತ್ತಿರುವುದು.



ಚಾಮರಾಜ ಜೋಡಿ ರಸ್ತೆಯಲ್ಲಿ ವಾಹನಗಳ ನಿಲುಗಡೆ ನಿಷೇಧಿಸಿ, ಫಲಕ ಅಳವಡಿಸಿರುವುದು

ಮೈಸೂರು, ಸೆ.1(ಎಂಟಿವೈ)– ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಮನದ ಹಿನ್ನೆಲೆಯಲ್ಲಿ ಮೈಸೂರಿನ ವಿವಿಧೆಡೆ ಸೋಮವಾರ ಬೆಳಗ್ಗೆಯಿಂದಲೇ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿ, ರಾಷ್ಟ್ರಪತಿಗಳ ಕಾರ್ಯಕ್ರಮ ನಡೆಯುವ ಆಯಿಷ್ ಹಾಗೂ ವಾಸ್ತವ್ಯ ಹೂಡುವ ರ್‍ಯಾಡಿಸನ್ ಬ್ಲೂ ಹೋಟೆಲ್ ಸುತ್ತ ತೀವ್ರ ಕಟ್ಟೆಚ್ಚರ ವಹಿಸಲಾಗಿತ್ತು.

ಮೂರು ವರ್ಷಗಳ ನಂತರ ಎರಡು ದಿನಗಳ ಮೈಸೂರು ಪ್ರವಾಸ ಕೈಗೊಂಡಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭದ್ರತೆಗೆ ನಗರ ಹಾಗೂ ಜಿಲ್ಲಾ ಪೊಲೀಸರು ಯಾವುದೇ ಭದ್ರತಾ ಲೋಪವಾಗದಂತೆ ಕಟ್ಟೆಚ್ಚರ ವಹಿಸಿದ್ದರು. ರಾಷ್ಟ್ರಪತಿಗಳ ಭದ್ರತಾ ಕಾರ್ಯಕ್ಕೆ ನಿಯೋಜಿಸಿದ್ದ ಪೊಲೀಸರು ಬೆಳಗ್ಗೆ 8 ಗಂಟೆಯಿಂದಲೇ ಭದ್ರತಾ ಕಾರ್ಯದಲ್ಲಿ ತೊಡಗಿದ್ದರು.

ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಿಂದ ರಿಂಗ್ ರಸ್ತೆಯ ಜಂಕ್ಷನ್‌ವರೆಗೂ ದಕ್ಷಿಣ ಗ್ರಾಮಾಂತರ ಪೊಲೀಸರು ಮಾರ್ಗದುದ್ದಕ್ಕೂ ಭದ್ರತೆ ಕೈಗೊಂಡಿದ್ದರು. ನಂತರ ನಂಜನಗೂಡು ರಿಂಗ್ ರಸ್ತೆ ಜಂಕ್ಷನ್‌ನಿಂದ ಶ್ರೀರಾಂಪುರ, ದಟ್ಟಗಳ್ಳಿ, ಬೋಗಾದಿ ಜಂಕ್ಷನ್ ಮೂಲಕ ಗಂಗೋತ್ರಿ ಬಡಾವಣೆಯಲ್ಲಿರುವ ಆಯಿಷ್ ಸಂಸ್ಥೆವರೆಗೆ ನಗರ ಪೊಲೀಸರು ಭದ್ರತೆಯಲ್ಲಿ ತೊಡಗಿದ್ದರು. ಆಯಿಷ್ ಕಾರ್ಯಕ್ರಮ ಮುಗಿದ ನಂತರ ರಾಷ್ಟ್ರಪತಿಗಳು ರ್‍ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಲಿದ್ದು, ಅಲ್ಲಿಯೂ ಭದ್ರತೆ ಕೈಗೊಂಡಿದ್ದರು. ರಾಷ್ಟ್ರಪತಿಗಳು ಸಂಚರಿಸುವ ವಾಹನ, ಕಾನ್ವೆ ವಾಹನಗಳಿಗೆ ಯಾವುದೇ ಅಡಚಣೆಯಾಗದಂತೆ ಕ್ರಮ ಕೈಗೊಂಡರು.

ದಾರಿಯುದ್ದಕ್ಕೂ ಕಟ್ಟುನಿಟ್ಟಿನ ಕ್ರಮ: ಮಂಡಕಳ್ಳಿ ವಿಮಾನ ನಿಲ್ದಾಣದಿಂದ ಆಯಿಷ್ ಸಂಸ್ಥೆ ಹಾಗೂ ರ್‍ಯಾಡಿಸನ್ ಬ್ಲೂ ಹೋಟೆಲ್‌ವರೆಗೂ ರಾಷ್ಟ್ರಪತಿಗಳು ಸಂಚರಿಸುವ ರಸ್ತೆಯುದ್ದಕ್ಕೂ ಪೊಲೀಸರು ಹದ್ದಿನಕಣ್ಣಿಟ್ಟು ಕಾರ್ಯನಿರ್ವಹಿಸಿದರು.

ಜಿಲ್ಲಾ, ನಗರ ಪೊಲೀಸರಿಂದ ಕಟ್ಟೆಚ್ಚರ

ರಾಷ್ಟ್ರಪತಿಗಳ ಆಗಮನದ ಹಿನ್ನೆಲೆಯಲ್ಲಿ ಕಳೆದ 2–3ದಿನದಿಂದ ಭದ್ರತಾ ಕಾರ್ಯವನ್ನು ಅವಲೋಕಿಸಿದ್ದ ಪೊಲೀಸರು, ಇಂದು ಬೆಳಗ್ಗೆಯಿಂದಲೇ ಭದ್ರತಾ ಕಾರ್ಯನಿರ್ವಹಿಸಿದ್ದ ಪೊಲೀಸರು ರಾಷ್ಟ್ರಪತಿಗಳ ವಾಹನ ಸುಗಮ ಸಂಚಾರಕ್ಕೆ ಅಗತ್ಯ ಕ್ರಮ ಕೈಗೊಂಡಿದ್ದರು. ಅದರಲ್ಲೂ ಕುಕ್ಕರಹಳ್ಳಿ ಕೆರೆ ರಸ್ತೆಯಲ್ಲಿ ಮರಗಳ ಮೇಲೆ ನೇತಾಡುತ್ತಿದ್ದ ಗಾಳಿಪಟ, ಗಾಳಿಪಟದ ದಾರ, ಪ್ಲಾಸ್ಟಿಕ್ ಪೇಪರ್ ಸೇರಿದಂತೆ ಅಪಾಯಕಾರಿ ಎನಿಸಿದ ವಸ್ತುಗಳನ್ನು ಬೆಳಗ್ಗಿನಿಂದಲೇ ಕೊನೆ ಹಂತದ ಭದ್ರತಾ ಕಾರ್ಯಾಚರಣೆಯಲ್ಲಿ ತೆರವುಗೊಳಿಸಲಾಯಿತು.

ಪ್ರತಿ ಹಂತದಲ್ಲಿ ತಪಾಸಣೆ: ರಾಷ್ಟ್ರಪತಿ ದ್ರೌಪದಿ ಮುರ್ಮು ಪಾಲ್ಗೊಳ್ಳುವ ಆಯಿಷ್ ವಜ್ರ ಮಹೋತ್ಸವ ಕಾರ್ಯಕ್ರಮ ನಡೆಯುವ ಸಭಾಂಗಣದಲ್ಲಿ ಬೆಳಗ್ಗೆಯಿಂದಲೇ ಭದ್ರತಾ ತಪಾಸಣೆ ನಡೆಸಲಾಯಿತು. ಆಯಿಷ್ ಸಂಸ್ಥೆ ಆವರಣಕ್ಕೆ ಪಾಸ್ ಹಾಗೂ ಗುರುತಿನ ಚೀಟಿ ಇದ್ದವರಿಗೆ ಮಾತ್ರ ಒಳ ಪ್ರವೇಶಿಸಲು ಅವಕಾಶ ಮಾಡಿಕೊಡಲಾಯಿತು. ಮುಖ್ಯ ದ್ವಾರದಲ್ಲಿಯೇ ಪೊಲೀಸರು ಪ್ರತಿಯೊಬ್ಬರನ್ನು ತಪಾಸಣೆ ನಡೆಸಿ ಆಯಿಷ್ ಸಂಸ್ಥೆ ಆವರಣ ಪ್ರವೇಶಿಸಲು ಅವಕಾಶ ನೀಡಿದರು. ಸಭಾಂಗಣ ಪ್ರವೇಶಿಸುವ ವೇಳೆಯೂ ಮತ್ತೊಂದು ಸುತ್ತಿನ ತಪಾಸಣೆ ನಡೆಸಲಾಯಿತು. ವಜ್ರಮಹೋತ್ಸವದ ಅಂಗವಾಗಿ ಶ್ವಾನದಳ, ಬಾಂಬ್ ಸ್ಕ್ವಾಡ್ ತಂಡ 3–4 ಆಯಿಷ್ ಸಂಸ್ಥೆಯ ಆವರಣ ತಪಾಸಣೆ ಮಾಡಿ, ಸುರಕ್ಷತೆಗೆ ಆದ್ಯತೆ ನೀಡಿತು.

ರಸ್ತೆಪಕ್ಕದ ಪೆಟ್ಟಿಗೆ ಅಂಗಡಿ ತೆರವು: ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಮನದ ಹಿನ್ನೆಲೆಯಲ್ಲಿ ಆಯಿಷ್ ಸುತ್ತಮುತ್ತ ಇರುವ ಪೆಟ್ಟಿಗೆ ಅಂಗಡಿಗಳನ್ನು ತೆರವು ಮಾಡಲಾಗಿತ್ತು. ಆಯಿಷ್ ಸಂಸ್ಥೆಯ ಆವರಣದಲ್ಲಿರುವ ಎಟಿಎಂ ಕೇಂದ್ರಗಳನ್ನು ಬಂದ್ ಮಾಡಲಾಗಿತ್ತು.

ಪಾರ್ಕಿಂಗ್ ಫ್ರೀ ರಸ್ತೆ: ಆಯಿಷ್ ಕಾರ್ಯಕ್ರಮ ಮುಗಿಸಿ ರ್‍ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಲು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಸ್ತೆ ಮಾರ್ಗದಲ್ಲಿ ತೆರಳಿದ್ದರಿಂದ ಭದ್ರತಾ ದೃಷ್ಟಿಯಿಂದ ಬೆಳಗ್ಗಿನಿಂದಲೇ ರಾಮಸ್ವಾಮಿ ವೃತ್ತದಿಂದ ಪಾಠಶಾಲಾ ವೃತ್ತದವರೆಗೂ ಚಾಮರಾಜ ಜೋಡಿ ರಸ್ತೆಯಲ್ಲಿ ವಾಹನಗಳ ಪಾರ್ಕಿಂಗ್ ನಿಷೇಧಿಸಲಾಗಿತ್ತು. ಆದರೆ, ಅಲ್ಲಿನ ಮಳಿಗೆಗಳಲ್ಲಿ ವಾಣಿಜ್ಯ ವಹಿವಾಟು ನಡೆಸುವುದಕ್ಕೆ ಅವಕಾಶ ನೀಡಲಾಗಿತ್ತು.

ಚಾಮುಂಡೇಶ್ವರಿ ದರ್ಶನ ಪಡೆದ ರಾಷ್ಟ್ರಪತಿಗಳ ಕುಟುಂಬ ಸದಸ್ಯರು

ಕೊನೆ ಘಳಿಗೆಯಲ್ಲಿ ರಾಷ್ಟ್ರಪತಿ ಭೇಟಿ ರದ್ದು

ಮೈಸೂರು,ಸೆ.1(ಎಂಟಿವೈ)– ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಮುಂಡಿಬೆಟ್ಟ ಭೇಟಿ ಕಾರ್ಯಕ್ರಮ ರದ್ದಾದ ಹಿನ್ನೆಲೆಯಲ್ಲಿ ಅವರ ಮಗಳು, ಅಳಿಯ ಹಾಗೂ ಕುಟುಂಬ ಸದಸ್ಯರು ಬಿಗಿ ಭದ್ರತೆಯಲ್ಲಿ ರಾತ್ರಿ 7.15ಕ್ಕೆ ಚಾಮುಂಡಿಬೆಟ್ಟಕ್ಕೆ ತೆರಳಿ ದೇವಿ ದರ್ಶನ ಪಡೆದರು.



ನಿಗದಿಯಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರ್‍ಯಾಡಿಸನ್ ಬ್ಲೂ ಹೋಟೆಲ್‌ನಿಂದ ಸಂಜೆ 6.30ರಿಂದ 7.30ರ ವೇಳೆಗೆ ಚಾಮುಂಡಿಬೆಟ್ಟಕ್ಕೆ ಭೇಟಿ ನೀಡುವ ಕಾರ್ಯಕ್ರಮವಿತ್ತು. ಆದರೆ, ಸೋಮವಾರ ಬೆಳಗ್ಗೆಯಷ್ಟೇ ರಾಷ್ಟ್ರಪತಿಗಳು ಚಾಮುಂಡಿಬೆಟ್ಟಕ್ಕೆ ಭೇಟಿ ನೀಡುವ ಕಾರ್ಯಕ್ರಮ ಅನಿವಾರ್ಯ ಕಾರಣದಿಂದ ರದ್ದಾಗಿರುವ ಮಾಹಿತಿ ಲಭ್ಯವಾಗಿತ್ತು

ಆದರೆ, ರಾಷ್ಟ್ರಪತಿಗಳ ಮಗಳು, ಅಳಿಯ ಹಾಗೂ ಕುಟುಂಬದ ಸದಸ್ಯರು ನಿಗದಿಯಂತೆ ಸಂಜೆ 7.15ಕ್ಕೆ ಬಿಗಿ ಭದ್ರತೆಯೊಂದಿಗೆ ಚಾಮುಂಡಿಬೆಟ್ಟಕ್ಕೆ ತೆರಳಿದರು. ಮುಖ್ಯದ್ವಾರದ ಬಳಿಯೇ ಕಾರಿನಲ್ಲಿ ಬಂದಿಳಿದ ಅವರನ್ನು ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ.ಎಂ.ಜೆ.ರೂಪ, ದೇವಾಲಯದ ಪ್ರಧಾನ ಆಗಮಿಕ ಡಾ.ಎನ್.ಶಶಿಶೇಖರ್ ದೀಕ್ಷಿತ್ ಬರಮಾಡಿಕೊಂಡರು. ಬಳಿಕ ದೇವಿ ದರ್ಶನ ಪಡೆದು, ಅವರು ಹಾಗೂ ರಾಷ್ಟ್ರಪತಿ ದ್ರೌಪದಿ ಮುರ್ಮು ಹೆಸರಲ್ಲಿ ಅರ್ಚನೆ ಮಾಡಲಾಯಿತು. ನಂತರ ರಾತ್ರಿ 7.50ಕ್ಕೆ ಬೆಟ್ಟದಿಂದ ನಿರ್ಗಮಿಸಿದರು.

ಮಧ್ಯಾಹ್ನದಿಂದಲೇ ಬಂದ್: ರಾಷ್ಟ್ರಪತಿಗಳ ಚಾಮುಂಡಿಬೆಟ್ಟ ಭೇಟಿ ಹಿನ್ನೆಲೆಯಲ್ಲಿ ಇಂದು ಮಧ್ಯಾಹ್ನ 2 ಗಂಟೆಯಿಂದ ರಾತ್ರಿ 8.30ರವರೆಗೆ ಚಾಮುಂಡಿಬೆಟ್ಟಕ್ಕೆ ಸಾರ್ವಜನಿಕರು, ಪ್ರವಾಸಿಗರ ಪ್ರವೇಶ ನಿಷೇಧಿಸಲಾಗಿತ್ತು. ತಾವರೆಕಟ್ಟೆ ಹಾಗೂ ಉತ್ತನಹಳ್ಳಿ ರಸ್ತೆಯಿಂದ ಬರುವ ಎಲ್ಲಾ ವಾಹನಗಳಿಗೆ ಪ್ರವೇಶ ನಿರ್ಬಂಧಿಸಲಾಗಿತ್ತು. ರಾತ್ರಿ 8.30 ರ ನಂತರ ಸಾರ್ವಜನಿಕರಿಗೆ ದರ್ಶನಕ್ಕೆ ವ್ಯವಸ್ಥೆ ಮಾಡಿಕೊಡಲಾಯಿತು.

ಇಂದು ಅರಮನೆಯಲ್ಲಿ ರಾಷ್ಟ್ರಪತಿಗಳಿಗೆ ಆತಿಥ್ಯ!

ಮೈಸೂರಲ್ಲೇ ವಾಸ್ತವ್ಯ ಹೂಡಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಳೆ (ಸೆ.2) ಬೆಳಗ್ಗೆ 8.30ಕ್ಕೆ ರ್‍ಯಾಡಿಸನ್ ಬ್ಲೂ ಹೋಟೆಲ್‌ನಿಂದ ನಿರ್ಗಮಿಸಿ, 8.40ಕ್ಕೆ ಬಿ.ಎನ್.ರಸ್ತೆಯಿಂದ ಜಯಮಾರ್ತಾಂಡ ದ್ವಾರದ ಮೂಲಕ ಮೈಸೂರು ಅರಮನೆಗೆ ಆಗಮಿಸಲಿದ್ದಾರೆ. ಅರಮನೆಯಲ್ಲಿ ರಾಜವಂಶಸ್ಥರಾದ ಪ್ರಮೋದಾದೇವಿ ಒಡೆಯರ್, ರಾಷ್ಟ್ರಪತಿಗಳಿಗೆ ಉಪಾಹಾರ ಕೂಟ ಏರ್ಪಡಿಸಿದ್ದು, ಕೆಲ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಉಪಾಹಾರದ ಬಳಿಕ ಅರಮನೆ ವೀಕ್ಷಿಸುವ ಸಾಧ್ಯತೆ ಇದ್ದು, ನಂತರ ಬೆಳಗ್ಗೆ 10 ಗಂಟೆಗೆ ಅರಮನೆಯಿಂದ ನಿರ್ಗಮಿಸಿ, 10.20ಕ್ಕೆ ಮಂಡಕಳ್ಳಿ ವಿಮಾನ ನಿಲ್ದಾಣ ತಲುಪಲಿದ್ದಾರೆ. ವಿಶೇಷ ವಿಮಾನದಲ್ಲಿ ಬೆಳಗ್ಗೆ 10.30ಕ್ಕೆ ತಮಿಳುನಾಡಿನ ಚೆನ್ನೈಗೆ ಪ್ರಯಾಣ ಬೆಳಸಲಿದ್ದಾರೆ.

ಬೆಳಗ್ಗೆ 8.30ರಿಂದ 10 ಗಂಟೆವರೆಗೆ ರಾಷ್ಟ್ರಪತಿಗಳು ಅರಮನೆಯಲ್ಲಿಯೇ ಇರುವುದರಿಂದ ಬೆಳಗ್ಗೆಯಿಂದ 11.30ರವರೆಗೂ ಅರಮನೆಗೆ ಪ್ರವಾಸಿಗರು ಹಾಗೂ ಸಾರ್ವಜನಿಕರ ಪ್ರವೇಶ ನಿರ್ಬಂಧಿಸಲಾಗಿದೆ. 11.30ರ ನಂತರ ಅರಮನೆ ವೀಕ್ಷಣೆಗೆ ಅವಕಾಶ ನೀಡಲಾಗುತ್ತದೆ.

ಸಿಎಂ-ರಾಷ್ಟ್ರಪತಿ ನಡುವೆ ಹಾಸ್ಯಮಯ ಭಾಷಾ ಜುಗಲ್‌ಬಂದಿ

'ಯು ನೋ ಕನ್ನಡ' ಎಂದ ಸಿಎಂ ಸಿದ್ದರಾಮಯ್ಯಗೆ 'ನಂಗೆ ಎಲ್ಲ ಭಾಷೆಗಳೂ ಇಷ್ಟ, ಕನ್ನಡವೂ ಅರ್ಥವಾಗುತ್ತೆ' ಎಂದ ರಾಷ್ಟ್ರಪತಿ

ಮೈಸೂರು, ಸೆ.1– ಮೈಸೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ರಾಷ್ಟ್ರಪತಿ ದ್ರೌಪದಿ ಮುರ್ಮು ನಡುವೆ ನಡೆದ ಹಾಸ್ಯಮಯ ಭಾಷಾ ಜುಗಲ್‌ಬಂದಿ ನೆರೆದಿದ್ದವರಲ್ಲಿ ನಗೆಯ ಅಲೆ ಎಬ್ಬಿಸಿತು. ಮೈಸೂರಿನ ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರ ಮಹೋತ್ಸವ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಭಾಷಣ ಆರಂಭಕ್ಕೂ ಮುನ್ನ ರಾಷ್ಟ್ರಪತಿಯವರತ್ತ ತಿರುಗಿ, 'ಯು ನೋ ಕನ್ನಡ?, (ನಿಮಗೆ ಕನ್ನಡ ಗೊತ್ತೇ?) ಎಂದು ಹಾಸ್ಯಭರಿತವಾಗಿ ಪ್ರಶ್ನಿಸಿದರು. ಇದಕ್ಕೆ ಮುರ್ಮು ಅವರು ತಮ್ಮ ಭಾಷಣದ ವೇಳೆ 'ನನಗೆ ದೇಶದ ಎಲ್ಲಾ ಭಾಷೆಗಳೂ ಇಷ್ಟ, ಮತ್ತು ಕನ್ನಡ ಸ್ವಲ್ಪ ಸ್ವಲ್ಪ ಅರ್ಥವಾಗುತ್ತದೆ' ಎಂದು ಹಿಂದಿಯಲ್ಲಿ ಹೇಳುವ ಮೂಲಕ ಸಿಎಂಗೆ ಟಾಂಗ್ ಕೊಟ್ಟರು.


ದ್ರೌಪದಿ ಮುರ್ಮು


ಸಿದ್ದರಾಮಯ್ಯ

ಮೈಸೂರಿನ ವಾಕ್ ಮತ್ತು ಶ್ರವಣ ಸಂಸ್ಥೆಯ ವಜ್ರ ಮಹೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು. ಮೊದಲಿಗೆ ಭಾಷಣ ಮಾಡಲು ಪ್ರಾರಂಭಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತಮ್ಮ ಭಾಷಣವನ್ನು ಶುರು ಮಾಡುವ ಮುನ್ನ ರಾಷ್ಟ್ರಪತಿಯವರತ್ತ ತಿರುಗಿ, 'ಯು ನೋ ಕನ್ನಡ?" (ನಿಮಗೆ ಕನ್ನಡ ಗೊತ್ತೇ?) ಎಂದು ಹಾಸ್ಯಭರಿತವಾಗಿ ಪ್ರಶ್ನಿಸಿದರು. ಸಿಎಂ ಅವರ ಈ ಅನಿರೀಕ್ಷಿತ ಪ್ರಶ್ನೆಗೆ ರಾಷ್ಟ್ರಪತಿ ಮುರ್ಮು ಮತ್ತು ವೇದಿಕೆಯ ಮೇಲಿದ್ದ ಗಣ್ಯರು ನಕ್ಕರು. ನಂತರ ಸಿಎಂ, 'ನಿಮಗೆ ಕನ್ನಡ ಬರುತ್ತಾ? ನಾನು ಕನ್ನಡದಲ್ಲಿ ಮಾತನಾಡುತ್ತೇನೆ' ಎಂದು ಹೇಳಿ ತಮ್ಮ ಭಾಷಣವನ್ನು ಪ್ರಾರಂಭಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ತಮ್ಮ ಭಾಷಣದಲ್ಲಿ ಸಿಎಂ ಸಿದ್ದರಾಮಯ್ಯ ಅವರಿಗೆ ಹಾಸ್ಯಭರಿತವಾಗಿ ಉತ್ತರ ನೀಡಿದರು. 'ನನಗೆ ಎಲ್ಲಾ ಭಾಷೆಗಳೂ ಇಷ್ಟ, ಮತ್ತು ಕನ್ನಡ ಸ್ವಲ್ಪ ಸ್ವಲ್ಪ ಅರ್ಥವಾಗುತ್ತದೆ' ಎಂದು ಹಿಂದಿಯಲ್ಲಿ ಹೇಳುವ ಮೂಲಕ ಸಿಎಂಗೆ ಟಾಂಗ್ ಕೊಟ್ಟರು. ರಾಷ್ಟ್ರಪತಿ ಮುರ್ಮು ಅವರ ಈ ಮಾತು ಮತ್ತೊಮ್ಮೆ ನೆರೆದಿದ್ದವರಲ್ಲಿ ನಗೆಯನ್ನು ಉಕ್ಕಿಸಿದವು. ಗಂಭೀರವಾದ ಕಾರ್ಯಕ್ರಮದ ನಡುವೆ ಇಂತಹ ಭಾಷಾ ವಿನೋದವು ವಾತಾವರಣವನ್ನು ಹಗುರಗೊಳಿಸಿತು. ಈ ಘಟನೆಯು ರಾಷ್ಟ್ರಪತಿ ಮತ್ತು ಮುಖ್ಯಮಂತ್ರಿ ನಡುವಿನ ಸೌಹಾರ್ದ ಸಂಬಂಧವನ್ನು ಬಿಂಬಿಸಿತು ಮತ್ತು ಎಲ್ಲರ ಗಮನ ಸೆಳೆಯಿತು.

ರಾಷ್ಟ್ರಪತಿಗಳು ಸಾಗುವ ಮಾರ್ಗದಲ್ಲಿ ನಿರ್ಬಂಧ

ಹೈರಾಣಾದ ಮಹಿಳೆಯರು, ಮಕ್ಕಳು, ವೃದ್ಧರು!

ಮೈಸೂರು,ಸೆ.1(ಎಂಟಿವೈ)– ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಪ್ರವಾಸದ ಹಿನ್ನೆಲೆಯಲ್ಲಿ ಮೈಸೂರಿನ ವಿವಿಧ ರಸ್ತೆಯಲ್ಲಿ ಮಿತಿ ಮೀರಿದ ಭದ್ರತೆಯಿಂದಾಗಿ ಹಿರಿಯ ನಾಗರಿಕರು, ವಿದ್ಯಾರ್ಥಿಗಳು, ಅನಾರೋಗ್ಯ ಪೀಡಿತರು ತೊಂದರೆ ಅನುಭವಿಸುವಂತಾಯಿತು.


ಟ್ರಾಫಿಕ್ ಜಾಮ್ ಉಂಟಾಗಿ ಸಾಲುಗಟ್ಟಿ ನಿಂತಿರುವ ವಾಹನಗಳು.

ವಿಮಾನ ನಿಲ್ದಾಣದಿಂದ ರಿಂಗ್ ರಸ್ತೆ ಮೂಲಕ ಆಯಿಷ್ ಸಂಸ್ಥೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಆಗಮಿಸುವ ವೇಳೆ ಅರ್ಧ ಗಂಟೆ ಮೊದಲೇ ವಿವಿಧ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ನಿರ್ಬಂಧ ಹೇರಲಾಗಿತ್ತು. ಇದರಿಂದ ನೂರಾರು ವಾಹನಗಳು ಆಯಾ ರಸ್ತೆಗಳಲ್ಲಿಯೇ ಸಾಲುಗಟ್ಟಿ ನಿಲ್ಲಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು. ಇದರಿಂದ ಹಿರಿಯ ನಾಗರಿಕರು, ಮಹಿಳೆಯರು, ವಿದ್ಯಾರ್ಥಿಗಳು ಮಾತ್ರವಲ್ಲದೆ, ಅನಾರೋಗ್ಯ ಪೀಡಿತರು ತೀವ್ರ ತೊಂದರೆಗೀಡಾದರು.

ಪೊಲೀಸರು ರಾಷ್ಟ್ರಪತಿ ಆಗಮನ ಹಾಗೂ ನಿರ್ಗಮನದ ವೇಳೆ ಕೇವಲ ಐದು ನಿಮಿಷವಷ್ಟೇ ವಾಹನ ಸಂಚಾರಕ್ಕೆ ಕಡಿವಾಣ ಹಾಕಲಾಗುವುದು. ಸಾರಿಗೆ ಸಂಸ್ಥೆ, ಖಾಸಗಿ ಬಸ್ ಹಾಗೂ ಭಾರಿ ವಾಹನಗಳ ಸಂಚಾರಕ್ಕೆ ಬದಲಿ ಮಾರ್ಗ ಸೂಚಿಸಲಾಗಿದ್ದು, ಉಳಿದಂತೆ ಸಾರ್ವಜನಿಕರ ವಾಹನ ಸಂಚಾರ ಎಂದಿನಂತೆ ಇರುತ್ತದೆ. ಕಾನ್ವೆ ವಾಹನ ಆಗಮನಕ್ಕೆ ಐದು ನಿಮಿಷ ಮೊದಲು ಹಾಗೂ ನಿರ್ಗಮನದ ನಂತರ ಐದು ನಿಮಿಷದ ಅವಧಿಯಲ್ಲಿ ಮಾತ್ರ ವಾಹನ ಸಂಚಾರದಲ್ಲಿ ವ್ಯತ್ಯಯ ಉಂಟಾಗುತ್ತದೆ ಎಂದು ತಿಳಿಸಿದ್ದರು. ಅದನ್ನು ನಂಬಿ ಬಂದ ವಾಹನ ಸವಾರರು ಟ್ರಾಫಿಕ್ ಜಾಮ್‌ನಲ್ಲಿ ಸಿಲುಕಿ ಪರದಾಡಿದರು.

ಬೋಗಾದಿ ರಸ್ತೆ, ಸರಸ್ವತಿಪುರಂ, ರಾಮಸ್ವಾಮಿ ವೃತ್ತ ಸೇರಿದಂತೆ ವಿವಿಧ ರಸ್ತೆಗಳಲ್ಲಿ ಗಂಟೆಗಟ್ಟಲೆ ಟ್ರಾಫಿಕ್ ಜಾಮ್ ಉಂಟಾಗಿ ವಾಹನ ಸವಾರರು ಸಿಲುಕಿಕೊಂಡು ತೊಂದರೆ ಅನುಭವಿಸಿದರು.

ರಾಷ್ಟ್ರಪತಿಗಳ ನಿಂತಲ್ಲೇ ಸ್ವಾಗತಿಸಿದ ಮೈಸೂರು ಜನ!



ಮೈಸೂರು,ಸೆ.1(ಎಂಟಿವೈ)– ಮೈಸೂರಿಗೆ ಬಂದ ದೇಶದ ಪ್ರಥಮ ಪ್ರಜೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹಾದು ಹೋಗುವ ಮಾರ್ಗದಲ್ಲಿ ಜನ ಉತ್ಸುಕರಾಗಿ ನಿಂತಿದ್ದ ದೃಶ್ಯ ಕಂಡುಬಂದಿತು.

ವಿಮಾನ ನಿಲ್ದಾಣದಿಂದ ರಿಂಗ್ ರಸ್ತೆ ಮಾರ್ಗವಾಗಿ ಬಿಗಿ ಭದ್ರತೆಯಲ್ಲಿ ಸಾಗಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ನೋಡಲು ನಂಜನಗೂಡು ರಿಂಗ್ ರಸ್ತೆ ಜಂಕ್ಷನ್, ಶ್ರೀರಾಂಪುರ, ದಟ್ಟಗಳ್ಳಿ, ಬೋಗಾದಿ ರಿಂಗ್ ರಸ್ತೆ ಜಂಕ್ಷನ್‌ನಲ್ಲಿ ನೂರಾರು ಮಂದಿ ನಿಂತಿದ್ದರು. ಪೊಲೀಸರ ಭದ್ರತೆಯಿಂದಾಗಿ ದೂರದಿಂದಲೇ ನಿಂತುಕೊಂಡು ರಾಷ್ಟ್ರಪತಿಗಳಿದ್ದ ವಾಹನ ಬರುತ್ತಿದ್ದಂತೆಯೇ ಗೌರವಪೂರ್ವಕವಾಗಿ ಕೈ ಬೀಸಿ, ಸ್ವಾಗತಿಸಿದರು.

ಸ್ಪೀಚ್ ಅಂಡ್ ಹಿಯರಿಂಗ್ ಸಂಸ್ಥೆಯ ಬಳಿಯೂ ನೂರಾರು ಮಂದಿ ರಸ್ತೆ ಬದಿ ನಿಂತುಕೊಂಡೇ ರಾಷ್ಟ್ರಪತಿಗಳನ್ನು ಸ್ವಾಗತಿಸಿದರು. ಕಾರ್ಯಕ್ರಮ ಮುಗಿಸಿ ರ್‍ಯಾಡಿಸನ್ ಬ್ಲೂ ಹೋಟೆಲ್‌ಗೆ ತೆರಳುವಾಗ ಕುಕ್ಕರಹಳ್ಳಿ ಕೆರೆ ರಸ್ತೆ, ರಾಮಸ್ವಾಮಿ ವೃತ್ತ, ಚಾಮರಾಜ ಜೋಡಿ ರಸ್ತೆ, ಗನ್‌ಹೌಸ್ ವೃತ್ತ ಸೇರಿದಂತೆ ಮಾರ್ಗದುದ್ದಕ್ಕೂ ಜನ ನಿಂತು ರಾಷ್ಟ್ರಪತಿ ಅವರನ್ನು ಕಂಡು, ನಿಂತಲ್ಲೇ ಅಭಿನಂದನೆ ಸೂಚಿಸಿ, ಮೊಬೈಲ್‌ಗಳಲ್ಲಿ ಚಿತ್ರೀಕರಿಸಿಕೊಂಡು ಸಂಭ್ರಮಿಸಿದರು.

ಭಾರತೀಯ ಸಂಜ್ಞೆ ಭಾಷೆ ಬಳಕೆಗೆ ಉತ್ತೇಜಿಸಬೇಕು

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್

ಮೈಸೂರು,ಸೆ.1(ಪಿಎಂ)– ಭಾರತೀಯ ಸಂಜ್ಞೆ ಭಾಷೆಯನ್ನು ಪ್ರಮಾಣೀಕರಿಸುವ ಮತ್ತು ಸಮಾಜದಲ್ಲಿ ಅದರ ಬಳಕೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹೇಳಿದರು.


ಆಯಿಷ್ ವಜ್ರ ಮಹೋತ್ಸವದಲ್ಲಿ ಮಾತನಾಡುತ್ತಿರುವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್

ಮೈಸೂರಿನ ಅಖಿಲ ಭಾರತ ವಾಕ್–ಶ್ರವಣ ಸಂಸ್ಥೆಯ ನೈಮಿಷಂ ಆವರಣದ ನಾಲೆಡ್ಜ್ ಪಾರ್ಕ್‌ನ ಸೆಮಿನಾರ್ ಹಾಲ್‌ನಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸಂಸ್ಥೆಯ ವಜ್ರ ಮಹೋತ್ಸವ ಸಮಾರಂಭದಲ್ಲಿ ಹಿಂದಿಯಲ್ಲಿ ಅವರು ಮಾತನಾಡಿದರು.

ಶ್ರವಣ ಮತ್ತು ಮಾತಿನ ದುರ್ಬಲತೆ ಇರುವ ಜನರಿಗೆ ಸಂಜ್ಞೆ ಭಾಷೆಯು ಪರಿಣಾಮಕಾರಿ ಸಂವಹನ ಸಾಧನವಾಗಿದೆ. ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಇದರ ಅಭಿವೃದ್ಧಿಯ ಅವಶ್ಯಕತೆಯಿದೆ ಎಂದರು. 'ಸಬ್ ಕಾ ಸಾಥ್ ಸಬ್ ಕಾ ವಿಕಾಸ್' ಮಂತ್ರವನ್ನು ಅರಿತುಕೊಂಡು, ಭಾರತ ಸರ್ಕಾರದ ವಿಶೇಷಚೇತನರ ಸಬಲೀಕರಣ ಇಲಾಖೆಯು ದೇಶದ ಅಂಗವಿಕಲ ವ್ಯಕ್ತಿಗಳ ಸಬಲೀಕರಣ ಹಾಗೂ ಎಲ್ಲರನ್ನೂ ಒಳಗೊಂಡ ಸಮಾಜದ ಸೃಷ್ಟಿಗಾಗಿ ಶ್ರಮಿಸುತ್ತಿದೆ. ಶ್ರವಣದೋಷವುಳ್ಳವರಿಗಾಗಿ ಕಾಕ್ಲಿಯರ್ ಇಂಪ್ಲಾಂಟ್ ಯೋಜನೆಯನ್ನು ಇಲಾಖೆಯು ಜಾರಿಗೊಳಿಸುತ್ತಿದೆ ಮತ್ತು ಭಾರತೀಯ ಸಂಕೇತ ಭಾಷಾ ನಿಘಂಟನ್ನು ಸಹ ಅಭಿವೃದ್ಧಿಪಡಿಸಿದೆ ಎಂದು ತಿಳಿಸಿದರು.

ತಾಂತ್ರಿಕ ಪ್ರಗತಿಯ ಈ ಯುಗದಲ್ಲಿ ನಮ್ಮೆಲ್ಲರ ಮುಂದೆ ಹೊಸ ಸವಾಲುಗಳು ಮತ್ತು ಹೊಸ ಅವಕಾಶಗಳಿವೆ. ಕೃತಕ ಬುದ್ಧಿಮತ್ತೆ, ಡಿಜಿಟಲ್ ಚಿಕಿತ್ಸೆ, ಟೆಲಿ–ಆಡಿಯಾಲಜಿಯಂತಹ ಕ್ಷೇತ್ರಗಳಲ್ಲಿ ಹೊಸ ಸಾಧ್ಯತೆಗಳಿವೆ. ಈ ದಿಕ್ಕಿನಲ್ಲಿ ಹೆಚ್ಚಿನ ಪ್ರಯತ್ನಗಳನ್ನು ಮಾಡಬೇಕಾಗಿದೆ ಎಂದು ಹೇಳಿದರು.

ಆಯಿಷ್ ಸಂಸ್ಥೆಯು ಆರಂಭದಿಂದಲೂ ಶ್ರವಣ ಮತ್ತು ವಾಕ್ ಅಂಗವೈಕಲ್ಯ ಕ್ಷೇತ್ರದಲ್ಲಿ ಶಿಕ್ಷಣ, ಸಂಶೋಧನೆ ಮತ್ತು ಸೇವೆಯ ವಿಶಿಷ್ಟ ಕಾರ್ಯವನ್ನು ಮಾಡುತ್ತಿದೆ. ಇದು ಅನೇಕ ಜನರಿಗೆ ಧ್ವನಿ ನೀಡಿದೆ, ಅವರಿಗೆ ಕೇಳುವ ಅವಕಾಶವನ್ನು ನೀಡಿದೆ ಮತ್ತು ಅವರನ್ನು ಸಮಾಜದ ಮುಖ್ಯವಾಹಿನಿಗೆ ಸಂಪರ್ಕಿಸಿದೆ ಇದು ನಿಜಕ್ಕೂ ವಿಶಿಷ್ಟ ಸಾಧನೆಯಾಗಿದೆ ಎಂದು ಶ್ಲಾಘಿಸಿದರು.

ಪ್ರಸ್ತುತ ಇಡೀ ಆಗ್ನೇಯ ಏಷ್ಯಾದಲ್ಲಿ ಸಂವಹನ ಅಸ್ವಸ್ಥತೆಗಳ ಕ್ಷೇತ್ರದಲ್ಲಿ ಪ್ರಮುಖ ಸಂಸ್ಥೆಯಾಗಿ ಆಯಿಷ್ ಕಾರ್ಯನಿರ್ವಹಿಸುತ್ತಿದೆ. ಈ ಸಂಸ್ಥೆಯು 14 ಶೈಕ್ಷಣಿಕ ಕಾರ್ಯಕ್ರಮಗಳನ್ನು ನೀಡುತ್ತಿದ್ದು, ರಾಷ್ಟ್ರೀಯ ಶಿಕ್ಷಣ ನೀತಿ 2020ಕ್ಕೆ ಅನುಗುಣವಾಗಿ ಬಹುಶಿಸ್ತೀಯ ಶೈಕ್ಷಣಿಕ ವಾತಾವರಣವನ್ನು ಉತ್ತೇಜಿಸುತ್ತದೆ. ಇದರ ಬಹುಶಿಸ್ತಿನ ತಂಡವು ವಾಕ್ ಮತ್ತು ಶ್ರವಣ ದೋಷ ಹೊಂದಿರುವ ವ್ಯಕ್ತಿಗಳಿಗೆ ಸಮಗ್ರ ಆರೈಕೆಯನ್ನು ಒದಗಿಸುತ್ತದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಸಾರ್ವಜನಿಕರು, ಮಾಧ್ಯಮದವರಿಗೂ ನಿರ್ಬಂಧ

ಮೈಸೂರು,ಸೆ.1(ಪಿಎಂ)– ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಆಯಿಷ್ ವಜ್ರ ಮಹೋತ್ಸವದಲ್ಲಿ ಪೊಲೀಸರು ಭಾರೀ ಕಟ್ಟೆಚ್ಚರ ವಹಿಸಿದ್ದರು. ಸಮಾರಂಭಕ್ಕೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸಲಾಗಿತ್ತು. ಆಯಿಷ್ ಅಧಿಕಾರಿ, ಸಿಬ್ಬಂದಿ ಪೈಕಿ ಆಯ್ದವರಿಗಷ್ಟೇ ಪ್ರವೇಶಾವಕಾಶ ಕಲ್ಪಿಸಲಾಗಿತ್ತು. ಸ್ಥಳಾವಕಾಶದ ಕಾರಣ ನೀಡಿ ಮಾಧ್ಯಮದವರಿಗೂ ಪ್ರವೇಶ ಕಲ್ಪಿಸಿರಲಿಲ್ಲ. ಸಮಾರಂಭದ ವರದಿಗಾರಿಕೆಗಾಗಿ ಯುಟ್ಯೂಬ್ ಲೈವ್ ಲಿಂಕ್ ನೀಡಲಾಗಿತ್ತು.

ಸಚಿವ ಜಮೀರ್‌ಗೆ 2 ಕೋಟಿ ಸಾಲ ನೀಡಿದ್ದ ರಾಧಿಕಾ ಕುಮಾರಸ್ವಾಮಿ

ಲೋಕಾಯುಕ್ತ ತನಿಖೆ ವೇಳೆ ಬೆಳಕಿಗೆ

ಬೆಂಗಳೂರು, ಸೆ.1(ಕೆಎಂಶಿ)– ಆದಾಯ ಮೂಲಕ್ಕಿಂತ ಹೆಚ್ಚು ಸಂಪತ್ತುಗಳಿಕೆ ಆರೋಪದಲ್ಲಿ ಸಿಲುಕಿರುವ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರಿಗೆ ನಟಿ ರಾಧಿಕಾ ಕುಮಾರಸ್ವಾಮಿ 2 ಕೋಟಿ ರೂ. ನೆರವು ನೀಡಿರುವುದು ಬೆಳಕಿಗೆ ಬಂದಿದೆ.


ರಾಧಿಕಾ ಜಮೀರ್

ಜಮೀರ್ ಅಹ್ಮದ್ ಖಾನ್ ವಿರುದ್ಧ ಕೇಳಿ ಬಂದಿರುವ ಆರೋಪದ ಬಗ್ಗೆ ಲೋಕಾಯುಕ್ತ ತನಿಖೆ ನಡೆಯುತ್ತಿದೆ. ತನಿಖಾ ತಂಡ ವಶಪಡಿಸಿಕೊಂಡಿರುವ ದಾಖಲೆಗಳಲ್ಲಿ ರಾಧಿಕಾ ಕುಮಾರಸ್ವಾಮಿ ಹಣ ನೀಡಿರುವ ವಿವರಣೆ ಇದೆ ಎನ್ನಲಾಗಿದೆ.

ಈ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸರು ರಾಧಿಕಾ ಕುಮಾರಸ್ವಾಮಿ ಅವರಿಗೆ ಸಮನ್ಸ್ ಜಾರಿಗೊಳಿಸಿದ್ದರಿಂದ ವಿಚಾರಣೆಗೆ ಹಾಜರಾಗಿದ್ದಾರೆ.

ಶಮಿಕಾ ಎಂಟರ್‌ಪ್ರೈಸಸ್ ಹೆಸರಿನಲ್ಲಿ 2012ರಲ್ಲಿ ಯಶ್ ಮತ್ತು ರಮ್ಯಾ ಅಭಿನಯದ ಚಿತ್ರ ನಿರ್ಮಾಣ ಮಾಡಿದ್ದು, ಅದರ ಯಶಸ್ಸು ಮತ್ತು ಸ್ಯಾಟಲೈಟ್ ಹಕ್ಕಿನಿಂದ ದೊರೆತ ಲಾಭಾಂಶದಲ್ಲಿ ಎರಡು ಕೋಟಿ ರೂ.ಗಳನ್ನು ಸಚಿವರಿಗೆ ನೀಡಿದ್ದಾಗಿ ರಾಧಿಕಾ ಕುಮಾರಸ್ವಾಮಿ ಲೋಕಾಯುಕ್ತ ವಿಚಾರಣೆ ವೇಳೆ ತಿಳಿಸಿದ್ದಾರೆ. ರಾಧಿಕಾ ಕುಮಾರಸ್ವಾಮಿ ಹೇಳಿಕೆ ದಾಖಲಿಸಿಕೊಂಡಿರುವ ಲೋಕಾಯುಕ್ತ, ಪೂರಕ ದಾಖಲೆಗಳನ್ನು ಒದಗಿಸುವಂತೆ ಸೂಚಿಸಿದೆ.

ಹೋಟೆಲ್ ವ್ಯವಹಾರದಲ್ಲಿ ನಷ್ಟ: ಯುವಕ ಆತ್ಮಹತ್ಯೆ

ಮೈಸೂರು, ಸೆ.1(ಬಿಎಲ್‌ಯು)– ಹೋಟೆಲ್ ವ್ಯವಹಾರದಲ್ಲಿ ನಷ್ಟವಾಗಿ ಸಾಲದ ಹೊರೆ ತಾಳಲಾರದೆ ವ್ಯಕ್ತಿಯೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮೈಸೂರಿನ ಲೋಕನಾಯಕನಗರದಲ್ಲಿ ಇಂದು ಸಂಭವಿಸಿದೆ.



ಮೈಸೂರಿನ ಹೆಬ್ಬಾಳು ಎರಡನೇ ಹಂತದ ವಾಸಿ ಎಸ್. ಅಭಿಜಿತ್ (31) ಮೃತಪಟ್ಟ ವ್ಯಕ್ತಿ. ವಿಜಯನಗರದ ವಾಟರ್ ಟ್ಯಾಂಕ್ ಬಳಿ ನಾನ್ ಕಿಂಗ್ ಎಂಬ ಹೋಟೆಲ್ ಅನ್ನು ಅಭಿಜಿತ್ ನಡೆಸುತ್ತಿದ್ದರು. ಆದರೆ ಕಳೆದ ಆರು ತಿಂಗಳಿಂದ ಹೋಟೆಲ್ ವ್ಯವಹಾರದಲ್ಲಿ ನಷ್ಟವಾಗಿತ್ತು. ಈ ಕಾರಣದಿಂದ ಅಭಿಜಿತ್ ಹೋಟೆಲ್ ಮುಚ್ಚಿದ್ದರು.

ಹೋಟೆಲ್ ವ್ಯವಹಾರ ಮಾಡುವ ಸಂದರ್ಭದಲ್ಲಿ ಖಾಸಗಿ ಫೈನಾನ್ಸ್‌ನಲ್ಲಿ 25 ಲಕ್ಷ ಸಾಲ ಪಡೆದಿದ್ದರು. ಇದರ ಜೊತೆಗೆ ಮತ್ತೊಂದು ಖಾಸಗಿ ಫೈನಾನ್ಸ್‌ನಲ್ಲಿ 15 ಲಕ್ಷ ಕಾರ್ ಲೋನ್ ಪಡೆದಿದ್ದರು. ಇದಲ್ಲದೆ ಪರಿಚಯಸ್ಥರ ಬಳಿಯೂ ಕೈ ಸಾಲ ಪಡೆದಿದ್ದರು ಎಂದು ಪೊಲೀಸರಿಗೆ ನೀಡಿರುವ ದೂರಿನಲ್ಲಿ ಇವರ ಅಣ್ಣ ಅವಿನಾಶ್ ಎಸ್. ತಿಳಿಸಿದ್ದಾರೆ.

ಪ್ರತಿ ತಿಂಗಳು ಒಂದು ಲಕ್ಷ ರೂಪಾಯಿ ಸಾಲ ಮರುಪಾವತಿ ಮಾಡಬೇಕಾಗಿತ್ತು. ಸಾಲದ ಹೊರೆ ಹೆಚ್ಚಾದಾಗ ಮನೆಗೆ ಬರುವುದನ್ನು ನಿಲ್ಲಿಸಿದ್ದರು. ಲೋಕನಾಯಕನಗರದ ಸ್ನೇಹಿತನ ಮನೆಯಲ್ಲಿ ಕಳೆದ 4 ತಿಂಗಳಿಂದ ವಾಸವಾಗಿದ್ದರು. ಸಾಲದ ಹೊರೆಯಿಂದ ಮಾನಸಿಕ ಒತ್ತಡದಲ್ಲಿದ್ದ ಅಭಿಜಿತ್ ಮದ್ಯ ಸೇವನೆಗೆ ದಾಸನಾಗಿದ್ದರು. ನಿನ್ನೆ ರಾತ್ರಿ ಸ್ನೇಹಿತರ ಜೊತೆ ಮುಂಜಾನೆ 4.30 ಗಂಟೆವರೆಗೆ ಪಾರ್ಟಿ ಮಾಡಿದ್ದರು. ಸ್ನೇಹಿತರು ಅಭಿಜಿತ್‌ನನ್ನು ಮನೆಯಲ್ಲಿ ಬಿಟ್ಟು ತಿಂಡಿ ತರಲು ಮುಂಜಾನೆ 5.30 ಗಂಟೆಯಲ್ಲಿ ಹೊರಗೆ ಹೋಗಿದ್ದರು. ಈ ಸಂದರ್ಭದಲ್ಲಿ ಸುಮಾರು 6.30 ಗಂಟೆಯಲ್ಲಿ ಅಭಿಜಿತ್ ಮನೆಯ ಹಾಲ್‌ನಲ್ಲಿರುವ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದ ಎಂದು ತಿಳಿಸಿದ್ದಾರೆ.

ಅಭಿಜಿತ್ ಆತ್ಮಹತ್ಯೆ ಮಾಡಿಕೊಂಡಿರುವ ವಿಚಾರವನ್ನು ಸ್ನೇಹಿತರು ನನಗೆ ತಿಳಿಸಿದರು. ತರುವಾಯ ಮೇಟಗಳ್ಳಿ ಪೊಲೀಸರಿಗೆ ದೂರು ನೀಡಿದ್ದಾಗಿ ಅವಿನಾಶ್ ಹೇಳಿದ್ದಾರೆ. ಈ ಸಂಬಂಧ ಮೇಟಗಳ್ಳಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಆರೋಗ್ಯಕರ ಜೀವನಕ್ಕೆ ಸುರಕ್ಷಿತ ಆಹಾರ ಅಗತ್ಯ

ಕಡ್ಡಾಯವಾಗಿ ಎಫ್‌ಎಸ್‌ಎಸ್‌ಎಐ ಲೈಸೆನ್ಸ್ ಪಡೆಯಿರಿ: ಮೈಮುಲ್ ಅಧ್ಯಕ್ಷ ಆರ್.ಚೆಲುವರಾಜು

ತಿ.ನರಸೀಪುರ, ಸೆ.1– ಆರೋಗ್ಯಕರ ಜೀವನಕ್ಕಾಗಿ ಸುರಕ್ಷಿತ ಆಹಾರ ಸೇವನೆ ಅತ್ಯಗತ್ಯ. ಇದನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕಿದೆ ಎಂದು ಮೈಮುಲ್ ಅಧ್ಯಕ್ಷ ಆರ್.ಚೆಲುವರಾಜು ತಿಳಿಸಿದರು.

ಮೈಸೂರು ಜಿಲ್ಲೆ ಆಹಾರ ಸುರಕ್ಷತೆ ಗುಣಮಟ್ಟ ಪ್ರಾಧಿಕಾರ ಹಾಗೂ ಆಹಾರ ಸುರಕ್ಷತೆ ತರಬೇತಿ ಮತ್ತು ಪ್ರಮಾಣಪತ್ರ ಕೇಂದ್ರದ ವತಿಯಿಂದ ಪಟ್ಟಣದ ಮೈಮುಲ್ ಉಪಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಆಹಾರ ಸುರಕ್ಷತಾ ತರಬೇತಿ ಮತ್ತು ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಶ್ವಾದ್ಯಂತ ಪ್ರತಿ 10 ಜನರಲ್ಲಿ ಒಬ್ಬರು ಕಲುಷಿತ ಆಹಾರ ಸೇವನೆಯಿಂದ ಅನಾರೋಗ್ಯಕ್ಕೆ ಒಳಗಾಗುತ್ತಿದ್ದಾರೆ ಎಂದು ಸಂಶೋಧನೆ ಹೇಳುತ್ತದೆ. ಇದರಲ್ಲಿ ವಯಸ್ಸಾದವರು, 5 ವರ್ಷದೊಳಗಿನ ಮಕ್ಕಳು ಮತ್ತು ಬಡ ಕುಟುಂಬದವರು ಹೆಚ್ಚಿನವರಿದ್ದಾರೆ. ಅಲ್ಲದೇ ಗುಣಮಟ್ಟವಲ್ಲದ ಆಹಾರದಿಂದ ಹರಡುವ ರೋಗಗಳು ಕೂಡ ಹೆಚ್ಚಾಗಿ ಈ ವರ್ಗ ಮತ್ತು ವಯೋಮಾನದಲ್ಲಿ ಕಂಡು ಬರುತ್ತವೆ. ಹೀಗಾಗಿ ಅಸುರಕ್ಷಿತ ಆಹಾರ ಜನರ ಆರೋಗ್ಯ ಮತ್ತು ಯೋಗಕ್ಷೇಮದ ಮೇಲೆ ಬೀರುವ ಪರಿಣಾಮ ತಡೆಯುವುದು ಆಹಾರ ಸುರಕ್ಷತಾ ತರಬೇತಿಯ ಮುಖ್ಯ ಉದ್ದೇಶವಾಗಿದೆ ಎಂದರು.



ಕಾರ್ಯಕ್ರಮವನ್ನು ಮೈಮುಲ್ ಅಧ್ಯಕ್ಷ ಆರ್.ಚೆಲುವರಾಜು ಉದ್ಘಾಟಿಸಿದರು.

ದೇಶದ ಆಹಾರ ಸುರಕ್ಷತೆ ಕಾಯ್ದೆ ಅನ್ವಯ ಹಾಲು ಉತ್ಪಾದಕರ ಸಹಕಾರ ಸಂಘಗಳು ನೋಂದಣಿ ಮಾಡಿಸಿ ಪರವಾನಗಿ ಪಡೆಯುವುದು ಅವಶ್ಯಕ. ಇಡೀ ದೇಶದಲ್ಲಿ ಆಹಾರ ಸುರಕ್ಷತಾ ಕಾಯ್ದೆ ಜಾರಿಗೊಂಡಿರುವುದರಿಂದ ಆಹಾರ ವಸ್ತುಗಳನ್ನು ಉತ್ಪಾದಿಸುವ ಪ್ರತಿಯೊಂದು ಸಂಸ್ಥೆ, ವ್ಯಕ್ತಿಗಳು ನೋಂದಣಿ ಮಾಡಿಸುವುದು ಅಗತ್ಯ. ಹೀಗಾಗಿ ಜಿಲ್ಲೆಯ ಆಹಾರ ಸುರಕ್ಷತೆ ಗುಣಮಟ್ಟ ಪ್ರಾಧಿಕಾರದಲ್ಲಿ ನಿಗದಿತ ಶುಲ್ಕ ನೀಡಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದರು.

ಪ್ರಸ್ತುತ ಹಾಲಿನಲ್ಲಿಯೂ ಕಲಬೆರಕೆ ಬರುತ್ತಿದೆ ಎನ್ನುವ ದೂರಿದೆ. ಹೀಗಾಗಿ ಸರ್ಕಾರ, ಎಲ್ಲಾ ಹಾಲಿನ ಡೇರಿಗಳಲ್ಲಿ ಪರೀಕ್ಷೆ ಮಾಡಬೇಕು. ಜೊತೆಗೆ ಆಹಾರ ಸುರಕ್ಷತೆ ಕಾಯ್ದೆಯನ್ವಯ ಗುಣಮಟ್ಟ ಕಾಯ್ದುಕೊಂಡು ನಿಯಮ ಪಾಲಿಸಲಾಗುತ್ತಿದೆಯೇ, ಪ್ರಮಾಣ ಪತ್ರ ಪಡೆದುಕೊಂಡಿದ್ದಾರೆಂಯೇ ಎನ್ನುವುದನ್ನು ಪರೀಕ್ಷೆ ನಡೆಸಲಾಗುವುದು. ಆದ್ದರಿಂದ ಜಿಲ್ಲೆಯ ಎಲ್ಲಾ ಹಾಲಿನ ಡೇರಿಗಳು ಎಫ್‌ಎಸ್‌ಎಸ್‌ಎಐ ಅಡಿ ನೋಂದಣಿ ಮಾಡಿಸಿ ಪ್ರಮಾಣ ಪತ್ರ ಪಡೆಯಬೇಕು. ಇಲ್ಲವಾದರೆ ದಾಳಿ ವೇಳೆ ಪರವಾನಗಿ ಇಲ್ಲದಿರುವುದು ಕಂಡು ಬಂದರೆ ಕಾನೂನು ರೀತಿ ಕ್ರಮ ಅನಿವಾರ್ಯ ಎಂದರು.

ಮೈಮುಲ್ ವ್ಯವಸ್ಥಾಪಕ ಕೆ.ಎಲ್.ಕುಬಸವರಾಜು ಮಾತನಾಡಿ, 2006ರಲ್ಲಿ ಆಹಾರ ಸುರಕ್ಷಿತ ಕಾಯ್ದೆ, 2017 ತರಬೇತಿ ಕಾಯ್ದೆ ಮತ್ತು 2020ರಲ್ಲಿ ತರಬೇತಿ ಕಡ್ಡಾಯ ಕಾಯ್ದೆ ಜಾರಿಗೆ ಬಂತು. ಮಾರಾಟಗಾರರು ಜನರಿಗೆ ಉತ್ತಮ ಆಹಾರ ಕೊಡಬೇಕು. ಬೇಕರಿ, ಹೋಟೆಲ್, ಪ್ರಾವಿಜನ್ ಸ್ಟೋರ್, ಟೀ ಸ್ಟಾಲ್ ಹಾಗೂ ಜನರು ತಿನ್ನುವ ಯಾವುದೇ ಪದಾರ್ಥಗಳನ್ನು ಮಾರಾಟ ಮಾಡಬೇಕಾದರೆ ಕಡ್ಡಾಯವಾಗಿ ಎಫ್‌ಎಸ್‌ಎಸ್‌ಎಐ ಲೈಸೆನ್ಸ್ ಪಡೆಯಬೇಕು. ಮಾರಾಟ ಮಾಡುವುದಕ್ಕೂ ಮುನ್ನಾ, ಆಹಾರದ ಬಗ್ಗೆ ತಿಳಿದುಕೊಳ್ಳಬೇಕು. ಲೈಸೆನ್ಸ್ ಪಡೆಯದೆ ಮಾರಾಟ ಮಾಡಿ ಹೆಚ್ಚು ಕಡಿಮೆ ಆದರೆ ನಿಮ್ಮ ಮೇಲೆ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮೈಮುಲ್ ಮಾಜಿ ಅಧ್ಯಕ್ಷ ಓಂಪ್ರಕಾಶ್, ಮೈಸೂರು ಜಿಲ್ಲಾ ಹಾಲು ಒಕ್ಕೂಟದ ತಾಲೂಕು ಮೇಲ್ವಿಚಾರಕ ಆರ್.ಪ್ರಮೋದ್, ವಿಸ್ತರಣಾಧಿಕಾರಿ ಅನಿತಾ, ಕೆ.ಎನ್.ಶೃತಿ, ಬಿ.ಎಸ್.ರಂಜಿತ, ತರಬೇತುದಾರ ಯಶ್ವಂತ್ ಅರುಣ್, ಗ್ಲೋಬಲ್ ಇನ್ಸ್ಟಿಟ್ಯೂಟ್ ರಾಜ್ಯ ಮುಖ್ಯಸ್ಥ ರಾಘವೇಂದ್ರ ಶೆಟ್ಟಿ, ರಾಜ್ಯ ಉಸ್ತುವಾರಿ ರಶ್ಮಿ ಸೇರಿದಂತೆ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿ ಹಾಜರಿದ್ದರು.

ನಂದಿನಿ ಉತ್ಪನ್ನ ವಿದೇಶದಲ್ಲೂ ಪ್ರಸಿದ್ಧ

ನಂದಿನಿ ಉತ್ಪನ್ನಗಳು ಇಂದು ರಾಜ್ಯ, ದೇಶವಲ್ಲದೇ ಹೊರ ದೇಶದಲ್ಲಿಯೂ ಪ್ರಸಿದ್ಧಿ ಪಡೆದಿವೆ. ಇದಕ್ಕೆ ಹಾಲು ಉತ್ಪಾದಕರು ಮತ್ತು ಡೇರಿ ಸಿಬ್ಬಂದಿಗಳ ಪರಿಶ್ರಮವೇ ಕಾರಣ. ಇಂದು ಮಾರು ಕಟ್ಟೆಯಲ್ಲಿ ಸ್ಪರ್ಧೆ ಹೆಚ್ಚುತ್ತಿದೆ. ಖಾಸಗಿ ಕಂಪನಿಗಳು ಹೆಚ್ಚು ಲಾಭ ಪಡೆಯುವ ಉದ್ದೇಶದೊಂದಿಗೆ ಹಾಲಿನ ಉತ್ಪನ್ನಗಳನ್ನು ಗುಣಮಟ್ಟದಲ್ಲಿ ತಯಾರಿಸುತ್ತಿರುವುದರಿಂದ ಸ್ಪರ್ಧೆ ಹೆಚ್ಚಾಗಿದೆ. ಆದರೆ ಜನತೆಯ ನಂಬಿಕೆಯಿಂದ ಇಂದು ನಂದಿನಿ ಉತ್ಪನ್ನಗಳು ಪ್ರಸಿದ್ಧಿ ಪಡೆದಿವೆ. ನಂದಿನಿ ಉತ್ಪನ್ನಗಳಿಗೆ ಮತ್ತಷ್ಟು ಬೇಡಿಕೆ ಬರಲು ರೈತರು ಪರಿಶುದ್ಧ ವಾದ ಹಾಲನ್ನು ಸಹ ಕಾರ ಸಂಘಗಳಿಗೆ ನೀಡಬೇಕು.

–ಚೆಲುವರಾಜು, ಮೈಮುಲ್ ಅಧ್ಯಕ್ಷ.

ಸೆ.4ಕ್ಕೆ ಹುಣಸೂರು ನಗರಸಭೆ ಅಧ್ಯಕ್ಷರ ಚುನಾವಣೆ



ಹುಣಸೂರು, ಸೆ.1– ನಗರಸಭೆ ಅಧ್ಯಕ್ಷ ಸ್ಥಾನಕ್ಕೆ ಸೆ.4ರಂದು ಚುನಾವಣೆ ನಡೆಯಲಿದ್ದು, ಅಧ್ಯಕ್ಷ ಸ್ಥಾನ ಯಾರಿಗೆ ಒಲಿಯಲಿದೆ ಎಂಬ ಬಗ್ಗೆ ತೀವ್ರ ಕುತೂಹಲ ಮೂಡಿದೆ.

ನಗರದ ನಗರಸಭೆ ಅಧ್ಯಕ್ಷ ಸ್ಥಾನ 2ಬಿ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದು, ನಗರದ 13ನೇ ವಾರ್ಡ್ ಖಾಜಿ ಮೊಹಲ್ಲಾದ ಪಕ್ಷೇತರ ಅಭ್ಯರ್ಥಿ ಮಾಲೀಕ್ ಪಾಷಾ ಹಾಗೂ 14ನೇ ವಾರ್ಡ್ ಮುಸ್ಲಿಂ ಬ್ಲಾಕ್‌ನ ಜೆಡಿಎಸ್ ಸದಸ್ಯೆ ಶಾಹೀನ್ ತಾಜ್ ಹೆಸರು ಕೇಳಿ ಬರುತ್ತಿದೆ. ಪ್ರಸ್ತುತ ಕಾಂಗ್ರೆಸ್ 14, ಜೆಡಿಎಸ್ 7, ಬಿಜೆಪಿ 3, ಪಕ್ಷೇತರ 5, ಎಸ್‌ಡಿಪಿ 2, ಸಂಸದರು 1, ಶಾಸಕರು 1 ಸೇರಿ ಒಟ್ಟು 33 ಮಂದಿ ಮತ ಚಲಾಯಿಸಬಹುದಾಗಿದ್ದು, ಇದರಲ್ಲಿ ಮೂವರು ಕಾಂಗ್ರೆಸ್ ಸದಸ್ಯರು ಜೆಡಿಎಸ್‌ನಲ್ಲಿ ಗುರ್ತಿಸಿಕೊಂಡಿದ್ದಾರೆ ಎನ್ನಲಾಗಿದೆ.

13ನೇ ವಾರ್ಡ್‌ನ ಪಕ್ಷೇತರ ಸದಸ್ಯ ಮಾಲೀಕ್ ಪಾಷಾ ಮಾತನಾಡಿ, ನನಗೆ ಶಾಸಕ ಜಿ.ಡಿ.ಹರೀಶ್‌ಗೌಡ ಅವರು ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತಾರೆ ಎಂಬ ನಂಬಿಕೆ, ವಿಶ್ವಾಸವಿದೆ. ಹೀಗಾಗಿ ಪಕ್ಷೇತರ ಅಭ್ಯರ್ಥಿಗೆ ಅವಕಾಶ ಕಲ್ಪಿಸಿಕೊಡುವ ಸಂಪೂರ್ಣ ಭರವಸೆ ನನಗಿದೆ ಎಂದರು.

14ನೇ ವಾರ್ಡ್‌ನ ಜೆಡಿಎಸ್ ಸದಸ್ಯೆ ಶಾಹಿನ್ ತಾಜ್ ಮಾತನಾಡಿ, ಈ ಬಾರಿ ನಾನು ನಗರಸಭೆ ಅಧ್ಯಕ್ಷ ಸ್ಥಾನಕ್ಕೆ ಪ್ರಬಲ ಆಕಾಂಕ್ಷಿಯಾಗಿದ್ದೇನೆ. ಶಾಸಕ ಜಿ.ಡಿ. ಹರೀಶ್ ಗೌಡರ ಮೇಲೆ ಸಂಪೂರ್ಣ ವಿಶ್ವಾಸವಿದೆ ಎಂದರು.

ಉಮೇದುವಾರಿಕೆ ಸಲ್ಲಿಕೆ ಇಲ್ಲ: ನಗರಸಭೆ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸುತ್ತಿರುವ ಪಕ್ಷೇತರ ಅಭ್ಯರ್ಥಿ ಮಾಲೀಕ್ ಪಾಷಾ ವಿರುದ್ಧ ಕಾಂಗ್ರೆಸ್ ಅಭ್ಯರ್ಥಿ ಉಮೇದುವಾರಿಕೆ ಸಲ್ಲಿಸುವುದಿಲ್ಲ. ಬದಲಿಗೆ ಮಾಲೀಕ್ ಪಾಷ ಅವರಿಗೆ ಬೆಂಬಲ ನೀಡುವುದಾಗಿ ತಾಲೂಕು ಕಾಂಗ್ರೆಸ್ ಅಧ್ಯಕ್ಷ ರಮೇಶ್ ತಿಳಿಸಿದ್ದಾರೆ.

ಪಕ್ಷೇತರ ಅಭ್ಯರ್ಥಿ ಮಾಲೀಕ್ ಪಾಷಾ ಈ ಹಿಂದೆ ಕಾಂಗ್ರೆಸ್‌ನ ಅನುಷಾ, ಸೌರಬ, ಪರ್ವೀನ್ ತಾಜ್, ಗೀತಾ ಅವರು ನಗರಸಭೆ ಅಧ್ಯಕ್ಷರಾಗಲು ಸಹಾಯ ಮಾಡಿದ್ದರಿಂದ ಈ ಬಾರಿ ನಾವು ಮಾಲೀಕ್ ಪಾಷಾ ಅವರನ್ನು ಬೆಂಬಲಿಸುವುದಾಗಿ ತಿಳಿಸಿದರು.

ಒಟ್ಟಾರೆ ಸೆ.4ರಂದು ನಡೆಯುವ ಹುಣಸೂರು ನಗರಸಭೆ ಚುನಾವಣೆಯಲ್ಲಿ ಪಕ್ಷೇತರ ಸದಸ್ಯ ಮಾಲೀಕ್ ಪಾಷಾ ಬಹುತೇಕ ಅಧ್ಯಕ್ಷರಾಗಲಿದ್ದಾರೆ ಎನ್ನಲಾಗುತ್ತಿದ್ದು, ಅಂತಮ ಫಲಿತಾಂಶಕ್ಕಾಗಿ ಕಾದು ನೋಡಬೇಕಿದೆ.

ಕಾಡಿನ ಸುರಕ್ಷತೆಗೆ ಹೆಚ್ಚು ಒತ್ತು ಹಿನ್ನೆಲೆ

ಮಾನವ–ಪ್ರಾಣಿ ಸಂಘರ್ಷ ತಡೆಗೆ ಬ್ಯಾರಿಕೇಡ್ ಪರಿಹಾರ

ಹೆಚ್.ಡಿ.ಕೋಟೆ, ಸೆ.1– ಕಾಡಿನ ಸುರಕ್ಷತೆಗೆ ಹೆಚ್ಚು ಒತ್ತು ನೀಡಿರುವ ಹಿನ್ನೆಲೆಯಲ್ಲಿ ಪ್ರಸ್ತುತ ಕಾಡುಪ್ರಾಣಿಗಳು ಹೆಚ್ಚಾಗಿರುವುದರಿಂದ ಮಾನವ ಮತ್ತು ಪ್ರಾಣಿ ಸಂಘರ್ಷ ಹೆಚ್ಚಾಗಿದೆ ಎಂದು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ತಾಲೂಕಿನ ಮಾನಿ ಮೂಲೆ ಹಾಡಿಯಲ್ಲಿ ಆಯೋಜಿಸಿದ್ದ 125ನೇ ಮನ್ ಕೀ ಬಾತ್ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಮಾನವ ಹಾಗೂ ವನ್ಯಜೀವಿಗಳ ಸಂಘರ್ಷ ತಡೆಗಟ್ಟಲು ರಾಜ್ಯದ ಅರಣ್ಯ ಗಡಿ ಭಾಗದ ಸಾವಿರಾರು ಕಿಮೀ ರೈಲ್ವೆ ಬ್ಯಾರಿಕೇಡ್ ಅಳವಡಿಸಲು ಯೋಜನೆ ರೂಪಿಸಲಾಗುತ್ತಿದ್ದು, ಬಳಿಕ ಅನುಷ್ಠಾನದ ಬಗ್ಗೆ ವಿಶೇಷ ಕಾಳಜಿ ವಹಿಸಲಾಗುವುದು ಎಂದರು.

ಪ್ರಧಾನಿ ಮೋದಿಯವರ ಕಾರ್ಯಕ್ರಮಗಳು ಮತ್ತು ಅವರ ಅಭಿವೃದ್ಧಿ ಕಾರ್ಯಗಳು ಸಮಾಜದ ಕಟ್ಟಕಡೆ ವ್ಯಕ್ತಿಗೂ ತಲುಪುತ್ತಿವೆ. ಅದಕ್ಕೆ ಇಂದು ನಡೆದ ಕಾರ್ಯಕ್ರಮವೇ ಸಾಕ್ಷಿ ಎಂದರು.

ಮೈಸೂರು ಜಿಲ್ಲಾ ಗ್ರಾಮಾಂತರ ಬಿಜೆಪಿ ಅಧ್ಯಕ್ಷ ಕುಂಬ್ರಳ್ಳಿ ಸುಬ್ಬಣ್ಣ ಮಾತನಾಡಿ, ತಾಲೂಕಿನ ಮಾನಿ ಮೂಲೆ ಹಾಡಿಯಲ್ಲಿ ಕಾರ್ಯಕ್ರಮ ಆಯೋಜಿಸಲು ಹಲವು ಸಮಸ್ಯೆ ಎದುರಾದವು. ಆ ಸಮಸ್ಯೆಗಳಿಗೆ ಪರಿಹಾರ ಕಂಡು ಕೊಂಡು ಹಾಡಿಯಲ್ಲಿ ಕಾರ್ಯಕ್ರಮ ಆಯೋಜಿಸಿದ್ದೇವೆ. ಜೊತೆಗೆ ಇಲ್ಲಿನ ಸಮಸ್ಯೆಗಳನ್ನು ಗುರುತಿಸಿ ಸಂಸದರಿಗೆ ಮಾಹಿತಿ ನೀಡಲಾಗಿದ್ದು, ಕೇಂದ್ರ ಸರ್ಕಾರದ ಗಮನ ಸೆಳೆಯುವ ಪ್ರಯತ್ನ ಮಾಡಲಾಗುವುದು ಎಂದರು.



ಮಾನಿಮೂಲೆ ಹಾಡಿಯಲ್ಲಿ ಮನ್ ಕೀ ಬಾತ್ ಕಾರ್ಯಕ್ರಮ ನಡೆಯಿತು.

ಈ ವೇಳೆ ಗ್ರಾಪಂ ಅಧ್ಯಕ್ಷ ಸುಬ್ರಹ್ಮಣ್ಯಸ್ವಾಮಿ, ಮಾಜಿ ಶಾಸಕ ಬಾಲರಾಜು, ಜಿಲ್ಲಾ ವಿಭಾಗದ ಪ್ರಮುಖರಾದ ಎನ್.ವಿ.ಫಣೀಶ್, ಕೋಟೆ, ಸರಗೂರು ತಾಲೂಕು ಬಿಜೆಪಿ ಅಧ್ಯಕ್ಷರಾದ ಶಂಬೇಗೌಡ, ಗುರುಸ್ವಾಮಿ, ಮುಖಂಡರಾದ ಮಹೇಶ್, ಕಿರಣ್, ಬಾಲಕೃಷ್ಣ, ಪರೀಕ್ಷಿತರಾಜೇ ಅರಸ್, ಸಿ.ಕೆ.ಗಿರೀಶ್, ಗುರುಸ್ವಾಮಿ, ಯೋಗೇಶ್‌ಕುಮಾರ್, ಶಿವರಾಜಪ್ಪ, ಗಣಪತಿ, ಶಿವರುದ್ರಪ್ಪ, ಮೊತ್ತ ಬಸವರಾಜು, ವಿಜಯಕುಮಾರ್, ರಾಜು, ಗುರುಸ್ವಾಮಿ, ಸುಬ್ರಹ್ಮಣ್ಯ, ಪೃಥ್ವಿ, ಲಕ್ಷ್ಮಣ್, ಬಾಲರಾಜು, ವಿವೇಕಾನಂದ, ವೆಂಕಟೇಶ್, ಸಾಮ್ರಾಟ್, ಸೋಮಶೇಖರ್, ಅನಿಲ್, ಪುಟ್ಟಣ್ಣ, ಮಂಜುನಾಥ್, ವೆಂಕಟಸ್ವಾಮಿ, ಶಿವರಾಜು, ಟಿ.ವೆಂಕಟೇಶ್, ನಟರಾಜು ಇದ್ದರು.

ಧರ್ಮಸ್ಥಳ ವಿರುದ್ಧ ಅಪಪ್ರಚಾರ ಖಂಡಿಸಿ ಪ್ರತಿಭಟನೆ

ಸರಗೂರು, ಸೆ.1– ಶ್ರೀಕ್ಷೇತ್ರ ಧರ್ಮಸ್ಥಳ ಹಾಗೂ ಧರ್ಮಾಧಿಕಾರಿ ಡಾ.ವೀರೇಂದ್ರ ಹೆಗ್ಗಡೆ ಅವರ ಬಗ್ಗೆ ಅಪಪ್ರಚಾರ ಮಾಡುತ್ತಿರುವವರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪಟ್ಟಣದಲ್ಲಿ ಹಿಂದೂ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರು ಪ್ರತಿಭಟನಾ ಮೆರವಣಿಗೆ ನಡೆಸಿದರು.

ಪಟ್ಟಣದ ಸಂತೆಮಾಸ್ತಮ್ಮ ದೇವಾಲಯದಿಂದ ಹೊರಟ ಹಿಂದೂ ಸಂಘಟನೆಗಳ ಒಕ್ಕೂಟದ ಕಾರ್ಯಕರ್ತರ ಶ್ರೀಕ್ಷೇತ್ರ ಧರ್ಮಸ್ಥಳ ಸಂರಕ್ಷಣಾ ಅಭಿಯಾನ ಬೃಹತ್ ಮೆರವಣಿಗೆ ಬಸವೇಶ್ವರ ದೇವಾಲಯ, ಶ್ರೀಚಿಕ್ಕದೇವಮ್ಮ ಸರ್ಕಲ್, ಮಹಾವೀರ ವೃತ್ತ, ಬಸ್ ನಿಲ್ದಾಣದ ವೃತ್ತ ತಲುಪಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು. ಬಳಿಕ ತಹಸೀಲ್ದಾರ್ ಮೋಹನಕುಮಾರಿ ಅವರಿಗೆ ಮನವಿ ಸಲ್ಲಿಸಿದರು.

ಹಿಂದೂ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಮೈಕಾ.ಪ್ರೇಮ್ ಕುಮಾರ್ ಮಾತನಾಡಿ, ಪ್ರಸ್ತುತ ಕೆಲವರು ಧರ್ಮಸ್ಥಳ ಮತ್ತು ಧರ್ಮಾಧಿಕಾರಿ ವಿರೇಂದ್ರ ಹೆಗ್ಗಡೆ ಅವರ ವಿರುದ್ಧ ಅಪಪ್ರಚಾರ ಮಾಡುತ್ತಿದ್ದಾರೆ. ಪುಣ್ಯ ಕ್ಷೇತ್ರಗಳನ್ನು ಗುರಿಯಾಗಿಸಿಕೊಂಡು ನಮ್ಮ ದೇವರು, ದೇವಸ್ಥಾನ, ಮಠ, ಮಂದಿರ, ನಂಬಿಕೆ, ಸಂಸ್ಕೃತಿ ಮೇಲೆ ದಾಳಿ ಮಾಡುತ್ತಿರುವ ಧರ್ಮ ದ್ರೋಹಿಗಳಾದ ಗಿರೀಶ್ ಮಟ್ಟಣ್ಣನವರ್, ಮಹೇಶ್ ತಿಮರೋಡಿ, ಯೂಟ್ಯೂಬರ್ ಸಮೀರ್, ಮಾಸ್ಕ್ ಮ್ಯಾನ್ ಚಿನ್ನಯ್ಯ ಅವರನ್ನು ಸೂಕ್ತ ತನಿಖೆಗೆ ಒಳಪಡಿಸಬೇಕು ಎಂದರು.



ಹಿಂದೂ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಮೈಕಾ.ಪ್ರೇಮ್ ಕುಮಾರ್ ಮಾತನಾಡಿದರು.

ಭಜರಂಗ ಸೇನೆಯ ಮಂಜುನಾಥ್ ಮಾತನಾಡಿದರು. ಈ ವೇಳೆ ಜೆಡಿಎಸ್ ಯುವ ಮುಖಂಡ ಜಯಪ್ರಕಾಶ್ ಚಿಕ್ಕಣ್ಣ, ಬಿಜೆಪಿ ಮುಖಂಡರಾದ ಮಂಜುನಾಥ್, ಗಿರೀಶ್, ಗುರುಸ್ವಾಮಿ, ಲಕ್ಷ್ಮಣ್, ಸುನಂದರಾಜ್, ಪಪಂ ಅಧ್ಯಕ್ಷೆ ರಾಧಿಕಾ, ಉಪಾಧ್ಯಕ್ಷ ವೀರೇಶ್, ಸದಸ್ಯರಾದ ನೂರಾಳಸ್ವಾಮಿ, ವಿನಯಕ ಪ್ರಸನ್ನ, ಮುಖಂಡರಾದ ಶ್ರೀವತ್ಸ ರಾಮು, ನವೀನ್ ಕುಮಾರ್, ಎಂ.ರವಿಕುಮಾರ್, ಚನ್ನಪ್ಪ, ಗೋಬಿ ರಂಗಸ್ವಾಮಿ, ಆನಂದ, ಜೈನ್ ಸಮಾಜದ ಮುಖಂಡರಾದ ಎಸ್.ಎಸ್.ಸೋಮಪ್ರಭ, ಮಹೇಂದ್ರ, ರವಿಗೌಡ, ಅಭಿ, ರಮೇಶ್, ಪಟೇಲ್ ಮಹೇಶ್, ಉಮೇಶ್, ರಮೇಶ್, ನಾಗರಾಜು, ಜಗದೀಶ್ ಇತರರಿದ್ದರು.

ಲಾರಿ ಮಾಲೀಕರ ಸಂಘದ ಕಚೇರಿ ಉದ್ಘಾಟನೆ

ತಿ.ನರಸೀಪುರ, ಸೆ.1– ಎಲ್ಲರೂ ಒಗ್ಗಟ್ಟಿನಿಂದ ಸಾಗಿದರೆ ಮಾತ್ರ ಪ್ರತಿಯೊಬ್ಬ ಲಾರಿ ಮಾಲೀಕನು ಉತ್ತಮ ಜೀವನ ಸಾಗಿಸಬಹುದು ಎಂದು ರಾಜ್ಯ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಡಾ. ಜಿ.ಆರ್.ಷಣ್ಮುಗಪ್ಪ ತಿಳಿಸಿದರು.

ಪಟ್ಟಣದ ಖಾಸಗಿ ಸಮುದಾಯ ಭವನದಲ್ಲಿ ನಡೆದ ಲಾರಿ ಮಾಲೀಕರ ಸಂಘದ ನೂತನ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಲಾರಿ ಮಾಲೀಕರನ್ನು ಕೆಲವರು ಅಸಡ್ಡೆಯಿಂದ ಕಾಣುತ್ತಾರೆ. ಅದಕ್ಕೆ ಕಾರಣ ನಮ್ಮಲ್ಲಿ ಒಗ್ಗಟ್ಟು ಇಲ್ಲದಿರುವುದು. ಅದಕ್ಕಾಗಿ ನಾವೆಲ್ಲರೂ ಸಂಘಟಿತರಾಗಿ ಸಾಗುವ ಮೂಲಕ ನಮ್ಮ ಗುರಿ ತಲುಪಬೇಕು. ಇಂದು ಲಾರಿ ಮಾಲೀಕರ ಜೀವನ ಶೋಚನೀಯವಾಗಿದ್ದು, ಲೆಕ್ಕಾಚಾರವಿಲ್ಲದೇ ಬಾಡಿಗೆ ಪಡೆದು ನಷ್ಟವನ್ನು ಅನುಭವಿಸುತ್ತಾರೆ. ಇವೆಲ್ಲದರ ನಿರ್ಮೂಲನೆಗಾಗಿ ಸಂಘ ಅಭಿವೃದ್ಧಿ ಪಡಿಸಬೇಕು ಎಂದರು.

ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ ಮಾತನಾಡಿ, ಇದು ಒಳ್ಳೆಯ ಬೆಳವಣಿಗೆಯಾಗಿದ್ದು, ಇದನ್ನು ಬೆಳೆಸಿಕೊಂಡು ಹೋಗುವಂತ ಕೆಲಸ ನಿರಂತರವಾಗಿ ಮಾಡಬೇಕು. ಹಗಲು ರಾತ್ರಿ ಕೆಲಸ ಮಾಡುವ ಲಾರಿ ಚಾಲಕರ ಜೀವನವನ್ನು ಸರ್ಕಾರ ಗಮನಿಸಬೇಕು. ಒಂದೇ ಒಂದು ಲಾರಿ ಇಟ್ಟಿರುವ ಮಾಲೀಕನು ಸಹ ಉತ್ತಮ ಜೀವನ ನಡೆಸಲು ಸಂಘದ ಸಹಕಾರ ಅತ್ಯಮೂಲ್ಯವಾಗಿದ್ದು, ಉತ್ತಮ ರೀತಿಯಲ್ಲಿ ಅಭಿವೃದ್ಧಿ ಪಡಿಸುವಂತೆ ತಿಳಿಸಿದರು.



ಕಚೇರಿಯನ್ನು ರಾಜ್ಯ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಷಣ್ಮುಗಪ್ಪ ಉದ್ಘಾಟಿಸಿದರು.

ಪಟ್ಟಣದ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಶಶಿ ಭೂಷಣ್, ಉಪಾಧ್ಯಕ್ಷ ಮದನ್ ಕುಮಾರ್, ಮೈಸೂರು ಜಿಲ್ಲಾ ಲಾರಿ ಮಾಲೀಕರ ಒಕ್ಕೂಟದ ಉಪಾಧ್ಯಕ್ಷರಾದ ಶ್ರೀನಿವಾಸರಾವ್, ಅಬ್ದುಲ್ ಖಾದರ್ ಶಾಹಿದ್, ಎಂ.ವಿಶ್ವನಾಥ್, ಕಾರ್ಯದರ್ಶಿ ಎಂ.ಎನ್.ಅನಿಲ್, ಲಾರಿ ಏಜೆಂಟ್ ಸ್ವಾಮಿ, ಚಾಮರಾಜನಗರ ಜಿಲ್ಲಾ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಜಿಯಾವುಲ್ಲಾ, ಮಂಡ್ಯ ಜಿಲ್ಲಾ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಟಿ.ಎಸ್.ಸತ್ಯಾನಂದ, ವೇಣುಗೋಪಾಲ್, ಸಿ.ವೈ.ನಾಗರಾಜು, ಎ.ಎನ್.ಸ್ವಾಮಿ, ಬಿ.ಸಿ.ಹುಚ್ಚೇಗೌಡ, ಸಿದ್ದರಾಜು, ಸಿ.ಎಸ್.ಸತೀಶ್ ಇತರರಿದ್ದರು.

ಅಂಕನಹಳ್ಳಿ ಗ್ರಾಪಂಗೆ ತಮ್ಮಣ್ಣೀಗೌಡ ನೂತನ ಅಧ್ಯಕ್ಷ

ಸಾಲಿಗ್ರಾಮ, ಸೆ.1–ತಾಲೂಕಿನ ಅಂಕನಹಳ್ಳಿ ಗ್ರಾಪಂ ನೂತನ ಅಧ್ಯಕ್ಷರಾಗಿ ತಮ್ಮಣ್ಣೀಗೌಡ ಅವಿರೋಧವಾಗಿ ಆಯ್ಕೆಯಾದರು.

ಈ ಹಿಂದಿನ ಅಧ್ಯಕ್ಷ ಬಾಬು ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಗ್ರಾಪಂ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ತಮ್ಮಣ್ಣೀಗೌಡರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಕೃಷಿ ಇಲಾಖೆ ಎ.ಡಿ.ಮಲ್ಲಿಕಾರ್ಜುನ್ ಘೋಷಿಸಿದರು.



ಅಂಕನಹಳ್ಳಿ ಗ್ರಾಪಂ ನೂತನ ಅಧ್ಯಕ್ಷ ತಮ್ಮಣ್ಣೀಗೌಡರನ್ನು ಸನ್ಮಾನಿಸಲಾಯಿತು.

ಚುನಾವಣಾ ಸಭೆಯಲ್ಲಿ ಉಪಾಧ್ಯಕ್ಷೆ ರುಕ್ಮಿಣಿ, ಸದ್ಯಸರಾದ ಎ.ವಿ.ಧನಂಜಯ, ಮಂಜುಳಾ, ಬಾಬು, ಲಕ್ಷ್ಮಮ್ಮ, ತುಳಸಮ್ಮ ಇದ್ದರು. ಸದಸ್ಯರಾದ ಮಹದೇವು, ದಿನೇಶ್, ಅಮ್ರಿನ್ ತಾಜ್ ಗೈರು ಹಾಜರಾಗಿದ್ದರು. ಪಿಡಿಓ ಕೆ.ನವೀನ್, ಕಾರ್ಯದರ್ಶಿ ಕೆ.ಎನ್.ರಾಮೇಗೌಡ ಸಹಕಾರ ನೀಡಿದರು.

ನೂತನ ಅಧ್ಯಕ್ಷ ತಮ್ಮಣ್ಣೀಗೌಡ ಮಾತನಾಡಿ, ಗ್ರಾಪಂ ವ್ಯಾಪ್ತಿಯ ಗ್ರಾಮಗಳಿಗೆ ಅಗತ್ಯವಿರುವ ಮೂಲ ಸೌಕರ್ಯ ಒದಗಿಸುವ ಜೊತೆಗೆ ಉದ್ಯೋಗ ಖಾತ್ರಿ ಯೋಜನೆ ಅನುಷ್ಠಾನಕ್ಕೆ ಮುಂದಾಗುವುದಾಗಿ ತಿಳಿಸಿದರು.

ನೂತನ ಅಧ್ಯಕ್ಷರನ್ನು ಮೈಮುಲ್ ಮಾಜಿ ಅಧ್ಯಕ್ಷ ಎ.ಟಿ.ಸೋಮಶೇಖರ್, ಮಾಜಿ ನಿರ್ದೇಶಕಿ ವಿಜಿಯಮ್ಮ, ಎಪಿಎಂಸಿ ಮಾಜಿ ಅಧ್ಯಕ್ಷ ಕುಪ್ಪಳ್ಳಿ ಸೋಮಶೇಖರ್, ಒಕ್ಕಲಿಗರ ಸಂಘದ ಅಧ್ಯಕ್ಷ ಶಿವರಾಂ, ಉಪಾಧ್ಯಕ್ಷ ಕುಚೇಲ, ನಿರ್ದೇಶಕ ಎಸ್.ಆರ್.ಪ್ರಕಾಶ್, ಹರದನಹಳ್ಳಿ ಗ್ರಾಪಂ ಅಧ್ಯಕ್ಷೆ ಭವ್ಯ, ಕರ್ಪೂರವಳ್ಳಿ ಗ್ರಾಪಂ ಮಾಜಿ ಅಧ್ಯಕ್ಷ ಪ್ರಸನ್ನಾಚಾರ್, ಮುಖಂಡರಾದ ತಿಮ್ಮಪ್ಪ, ಎ.ಜಿ.ಮನು, ಸಚಿನ್, ಮಧು, ರಂಗಪ್ಪ ಸೇರಿದಂತೆ ಮತ್ತಿತರರು ಅಭಿನಂದಿಸಿದರು.



ಸಂಸದ ಸುನೀಲ್ ಬೋಸ್‌ಗೆ ಸನ್ಮಾನ

ಭಾನುವಾರ ಹುಟ್ಟುಹಬ್ಬ ಆಚರಿಸಿಕೊಂಡ ಸಂಸದ ಸುನೀಲ್ ಬೋಸ್ ಅವರನ್ನು ತಿ.ನರಸೀಪುರ ತಾಲೂಕು ಕುರುಬರ ಸಂಘದ ನಿರ್ದೇಶಕ ಹೆಳವರಹುಂಡಿ ಅರುಣ್ ಕುಮಾರ್ ಸನ್ಮಾನಿಸಿದರು. ಈ ವೇಳೆ ಲೋಹಿತ್, ಎಂ.ರವಿ, ಪುರಸಭೆ ಮಾಜಿ ಅಧ್ಯಕ್ಷ ಮುನವಾರ್ ಪಾಷ ಇತರರಿದ್ದಾರೆ.

ಎಐ ತಂತ್ರಜ್ಞಾನ ಅಳವಡಿಕೆ ಮುನ್ನ ಅರಿವು ಅಗತ್ಯ

● ಶಾಸಕ ದರ್ಶನ್ ಅಭಿಪ್ರಾಯ ● ಪತ್ರಕರ್ತ ಪ್ರತಾಪ್‌ಗೆ ಶ್ರೀಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪ್ರದಾನ

ನಂಜನಗೂಡು, ಸೆ.1– ಬದಲಾದ ಕಾಲ ಘಟ್ಟದಲ್ಲಿ ಕೃತಕ ಬುದ್ಧಿಮತ್ತೆ(ಎಐ)ತಂತ್ರಜ್ಞಾನದಿಂದ ಹಲವು ಕ್ಷೇತ್ರಗಳಲ್ಲಿ ಮಹತ್ತರ ಬದಲಾವಣೆಗಳಾಗಿದ್ದು, ಪತ್ರಿಕೋದ್ಯಮದಲ್ಲಿಯೂ ಎಐ ಆಧಾರಿತ ಚಟುವಟಿಕೆಗಳು ನಡೆಯುತ್ತಿವೆ. ಇದರಿಂದ ಸಮಾಜದ ಮೇಲಾಗುವ ಪರಿಣಾಮ ಗಳ ಬಗ್ಗೆ ಅಧ್ಯಯನ ನಡೆಸಬೇಕಿದೆ ಎಂದು ಶಾಸಕ ದರ್ಶನ್ ಅಭಿಪ್ರಾಯಪಟ್ಟರು.

ನಗರದ ಶ್ರಾವಣ ಕಲ್ಯಾಣ ಮಂಟಪದಲ್ಲಿ ನಂಜನಗೂಡು ತಾಲೂಕು ಪತ್ರಕರ್ತರ ಸಂಘದಿಂದ ನಡೆದ ಪತ್ರಿಕಾ ದಿನಾಚರಣೆ ಮತ್ತು ಶ್ರೀ ಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ಪ್ರಧಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಎಐ ಬಳಕೆಯಿಂದಾಗಿ ಕೆಲಸ ಕಾರ್ಯಗಳು ತ್ವರಿತವಾಗುತ್ತಿದ್ದರೂ, ಭವಿಷ್ಯದಲ್ಲಿ ಉಂಟಾಗಬಹುದಾದ ಪರಿಣಾಮಗಳ ಬಗ್ಗೆ ಗಂಭೀರವಾಗಿ ಗಮನ ಹರಿಸಬೇಕಿದೆ. ಮೈಸೂರು ಪತ್ರಿಕೋದ್ಯಮದ ಬಗ್ಗೆ ಸಮಾಜದಲ್ಲಿ ಉತ್ತಮ ಅಭಿಪ್ರಾಯವಿದ್ದು, ಚುನಾಯಿತ ಜನಪ್ರತಿನಿಧಿಯಾಗಿ ನಾನು ಸಮರ್ಥವಾಗಿ ಕಾರ್ಯ ನಿರ್ವಹಿಸಲು ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸಲು ಮಾಧ್ಯಮದಲ್ಲಿನ ವರದಿಗಳು ನೆರವಾಗಿವೆ ಎಂದ ಅವರು, ತಾಲೂಕಿನ ಪತ್ರಕರ್ತರಿಗೆ ನಿವೇಶನ ಒದಗಿಸುವ ಸಂಬಂಧ ತಹಸೀಲ್ದಾರ್ ಜೊತೆ ಸಭೆ ನಡೆಸಿ ಸರ್ಕಾರದ ಮಟ್ಟದಲ್ಲಿ ಗಮನ ಸೆಳೆದು ನೆರವು ಒದಗಿಸಲಾಗುವುದು. ವಿಶೇಷವಾಗಿ ಸಿಎಂ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಗ್ರಾಮೀಣ ಪತ್ರಕರ್ತರಿಗೆ ನೆರವಾಗಿದ್ದು, ಉಚಿತ ಬಸ್ ಪಾಸ್ ಸೇರಿದಂತೆ ಹಲವು ಸವಲತ್ತುಗಳನ್ನು ಒದಗಿಸಿದೆ ಎಂದರು.



ಸಮಾರಂಭದಲ್ಲಿ ಪತ್ರಕರ್ತ ಪ್ರತಾಪ್ ಅವರಿಗೆ ಶ್ರೀಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಮಾತನಾಡಿ, ನಂಜನಗೂಡಿನಲ್ಲಿ ತಿರುಮಲಾಂಬ ಮೊದಲ ಮಹಿಳಾ ಪತ್ರಕರ್ತೆಯಾಗಿ ಗುರ್ತಿಸಿಕೊಂಡಿದ್ದರು. ಇದು ಈ ನೆಲದ ಜನರಿಗೆ ಹೆಮ್ಮೆ ಸಂಗತಿಯಾಗಿದೆ. ಪತ್ರಕರ್ತರು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸುವ ಮೂಲಕ ಸಮಾಜದ ಪ್ರಗತಿಗೆ ನೆರವಾಗಬೇಕಿದೆ. ಸರ್ಕಾರ ಮತ್ತು ಸಮಾಜದ ನಡುವೆ ಸೇತುವೆಯಾಗಿ ಪತ್ರಕರ್ತರು ಕಾರ್ಯ ನಿರ್ವಹಿಸಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಪತ್ರಕರ್ತ ಪ್ರತಾಪ್ ಕೋಡಿ ನರಸೀಪುರ ಅವರಿಗೆ 2024ನೇ ಸಾಲಿನ ಶ್ರೀಶಿವರಾತ್ರೀಶ್ವರ ಮಾಧ್ಯಮ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಮಾಜಿ ಶಾಸಕ ಕೇಶವಮೂರ್ತಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ಪ್ರಧಾನ ಕಾರ್ಯದರ್ಶಿ ನಾರಾಯಣ್, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಮೋಹನ್, ನಗರಸಭಾಧ್ಯಕ್ಷ ಶ್ರೀಕಂಠಸ್ವಾಮಿ, ಜೆಎಸ್‌ಎಸ್ ಮಹಾವಿದ್ಯಾಪೀಠದ ತೋಟಗಾರಿಕೆ ವಿಭಾಗದ ನಿರ್ದೇಶಕ ಎನ್.ಎಂ.ಶಿವಶಂಕರಪ್ಪ, ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಹೆಚ್.ಡಿ.ರಂಗಸ್ವಾಮಿ, ಉಪಾಧ್ಯಕ್ಷ ಜಿ.ಎಂ.ವೇಣುಗೋಪಾಲ್, ಪ್ರಧಾನ ಕಾರ್ಯದರ್ಶಿ ಎನ್.ಪಿ.ದೀಪಕ್ ಪ್ರಸಾದ್, ಸಹ ಕಾರ್ಯದರ್ಶಿ ಟಿ.ಕೆ ಬಸವರಾಜು, ಖಜಾಂಚಿ ಭಾಗ್ಯರಾಜ್, ಕಾರ್ಯಕಾರಿಣಿ ಸದಸ್ಯರಾದ ಮಧು, ಕೆಂಪೇಗೌಡ, ಶ್ರೀನಿವಾಸ್, ಎಂ.ಪ್ರಕಾಶ್, ಮಹದೇವಸ್ವಾಮಿ, ಕೃಷ್ಣಪ್ಪಗೌಡ, ಪತ್ರಕರ್ತರಾದ ಮಹದೇವ ಪ್ರಸಾದ್, ಚಿನ್ನಸ್ವಾಮಿ, ಗಂಗಾಧರ್, ಸತ್ಯನಾರಾಯಣ, ಮಹದೇವಸ್ವಾಮಿ, ಚಂದ್ರಶೇಖರ್, ರಾಘವೇಂದ್ರ, ಬಸವರಾಜು, ಚೆನ್ನಪ್ಪ, ನಂಜುಂಡ ನಾಯಕ ಸೇರಿದಂತೆ ಪತ್ರಕರ್ತರು, ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

ಇಂದಿರಾನಗರ ಡೇರಿಗೆ 19 ಲಕ್ಷ ರೂ. ಲಾಭ

ಹೆಚ್.ಡಿ.ಕೋಟೆ, ಸೆ.1– ಇಂದಿರಾನಗರ ಹಾಲು ಉತ್ಪಾದಕರ ಸಹಕಾರ ಸಂಘ 19 ಲಕ್ಷ ರೂ. ಲಾಭ ಗಳಿಸಿ ತಾಲೂಕಿಗೆ ಪ್ರಥಮ ಸ್ಥಾನ ಗಳಿಸಿದೆ ಎಂದು ಮೈಮುಲ್ ನಿರ್ದೇಶಕ ಕೆ.ಈರೇಗೌಡ ತಿಳಿಸಿದರು.

ತಾಲೂಕಿನ ಇಂದಿರಾನಗರ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ನಡೆದ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ಇಲ್ಲಿನ ಸಹಕಾರ ಸಂಘ ನಿತ್ಯ ಶೇ.100 ರಷ್ಟು ಗುಣಮಟ್ಟದ 3 ಸಾವಿರ ಲೀಟರ್ ಹಾಲು ಸಂಗ್ರಹಿಸುವ ಮೂಲಕ ತಾಲೂಕಿನಲ್ಲೇ ಅತೀ ಹೆಚ್ಚು ಹಾಲು ಸಂಗ್ರಹಣೆ ಮಾಡುವ ಸಂಘವಾಗಿ ಹೊರಹೊಮ್ಮಿದೆ. ಅಲ್ಲದೇ 2024–25ನೇ ಸಾಲಿನಲ್ಲಿ 19 ಲಕ್ಷ ರೂ. ಲಾಭ ಗಳಿಸಿ ಯಶಸ್ವಿಯಾಗಿ ಮುನ್ನಡೆದಿದೆ ಎಂದು ತಿಳಿಸಿದರು.



ಹಾಲು ಉತ್ಪಾದಕರಿಗೆ ಮಿಕ್ಸಿ ವಿತರಿಸಲಾಯಿತು.

ಈ ವೇಳೆ ಮೈಮುಲ್ ನಿರ್ದೇಶಕಿ ದಾಕ್ಷಾಯಿಣಿ ಬಸವರಾಜಪ್ಪ, ಸಂಘದ ಅಧ್ಯಕ್ಷ ಜಯಶಂಕರ್, ವಿಸ್ತರಣಾಧಿಕಾರಿ ಆರೀಫ್ ಇಕ್ಬಾಲ್, ಜಯಂತ್ ಕುಮಾರ್, ಸಿಇಓ ಶೇಖರ್, ಉಪಾಧ್ಯಕ್ಷ ಸನಾವುಲ್ಲಾ, ಮುಖಂಡರಾದ ತಂಗವೇಲು, ನಿರ್ದೇಶಕರಾದ ಮಾಧವನ್, ರಾಮಕೃಷ್ಣ, ನಾಗರಾಜ್, ಶಿವರಾಮನ್, ಫಯಾಜ್, ಈರನಾಯಕ, ಕುಮಾರ್, ಶಿನೋಜ್, ಶೀಲ, ಓಮನ, ಸಂಘದ ಸದಸ್ಯರು, ಹಾಲು ಉತ್ಪಾದಕರಿದ್ದರು.



ಸನ್ಮಾನ

ಮೈಸೂರು ತಾಲೂಕು ಜಂಬುಪುರ ಗ್ರಾಮದ ಸಿದ್ದಪ್ಪಾಜಿ ರಸ್ತೆಯಲ್ಲಿ ಗಜಾನನ ಯುವ ಬಳಗದಿಂದ ಗೌರಿ–ಗಣೇಶ ಪ್ರತಿಷ್ಠಾಪಿಸಿ ವಿಸರ್ಜನೆ ಮಾಡಲಾಯಿತು. ಈ ವೇಳೆ 20 ಸಾವಿರ ರೂ. ದೇಣಿಗೆ ನೀಡಿದ ಸಮಾಜ ಸೇವಕ ಎಸ್.ಶ್ರೀಕಾಂತ್ ಅವರನ್ನು ಬಳಗದಿಂದ ಸನ್ಮಾನಿಸಲಾಯಿತು.

ಧರ್ಮಸ್ಥಳ ವಿರುದ್ಧದ ಪಿತೂರಿ, ಅಪ ಪ್ರಚಾರದ ಹಿಂದೆ ಅತೀ ದೊಡ್ಡ ಕೈವಾಡವಿದೆ; ವಿದೇಶಿ ಫಂಡಿಂಗ್ ಕೂಡ ಇದೆ

● ರಾಜ್ಯ ಬಿಜೆಪಿ ನಾಯಕರ ಗಂಭೀರ ಆರೋಪ ● ಇದನ್ನು ಬಯಲು ಮಾಡಲು ಎನ್‌ಐಎ ಇಲ್ಲ ಸಿಬಿಐ ತನಿಖೆ ಆಗಲೇಬೇಕು ● ಧರ್ಮಸ್ಥಳ ವಿರುದ್ಧದ ಅಪಪ್ರಚಾರ ಖಂಡಿಸಿ ಕೈಗೊಂಡ 'ಧರ್ಮಸ್ಥಳ ಚಲೋ' ರ್‍ಯಾಲಿ ನಂತರ ಗುಡುಗು ● ಶ್ರೀ ಕ್ಷೇತ್ರದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಭೇಟಿ ಮಾಡಿ, ಆಶೀರ್ವಾದ ಪಡೆದ ನಾಯಕರು



ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ಧರ್ಮಸ್ಥಳದಲ್ಲಿ ಬೃಹತ್ ರ್‍ಯಾಲಿ ನಡೆಸಿದರು



ವೀರೇಂದ್ರ ಹೆಗ್ಗಡೆಯವರನ್ನ ಭೇಟಿಯಾಗಿ ಅಭಿನಂದಿಸಿದ ಬಿಜೆಪಿ ನಾಯಕರು

ಧರ್ಮಸ್ಥಳ, ಸೆ.1– ಕಳೆದ ಎರಡು ದಶಕಗಳಲ್ಲಿ ಧರ್ಮಸ್ಥಳದಲ್ಲಿ ನೂರಾರು ಅತ್ಯಾಚಾರ, ಕೊಲೆ ಮತ್ತು ರಹಸ್ಯ ಸಮಾಧಿ ಆರೋಪಗಳ ಹಿಂದೆ ಬಹಳ ದೊಡ್ಡ ಪಿತೂರಿ ನಡೆದಿದೆ. ಕ್ಷೇತ್ರದ ವಿರುದ್ಧ ಪಿತೂರಿಗೆ ವಿದೇಶದಿಂದ ಫಂಡಿಂಗ್ ಆಗುತ್ತಿದೆ ಇದೆಲ್ಲಾ ಹೊರಗೆ ಬರಬೇಕಾದರೆ ಪ್ರಕರಣವನ್ನು ರಾಜ್ಯ ಸರ್ಕಾರ ಎನ್‌ಐಎ ಅಥವಾ ಸಿಬಿಐಗೆ ವಹಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದರು.

ಧರ್ಮಸ್ಥಳ ವಿರುದ್ಧದ ಪಿತೂರಿ ಮತ್ತು ಅಪಪ್ರಚಾರವನ್ನು ಖಂಡಿಸಿ ವಿಜಯೇಂದ್ರ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್. ಬಿಜೆಪಿ ಶಾಸಕರು ಮತ್ತು ಹಲವು ನಾಯಕರು ಇಂದು 'ಧರ್ಮಸ್ಥಳ ಚಲೋ' ನಡೆಸಿದರು. ರ್‍ಯಾಲಿಗೂ ಮುನ್ನ ನಾಯಕರು ಶ್ರೀ ಮಂಜುನಾಥ ದೇವಸ್ಥಾನಕ್ಕೆ ಭೇಟಿ ನೀಡಿ ಸ್ವಾಮಿಯ ದರ್ಶನ ಪಡೆದು, ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಬಳಿಕ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

ಬಳಿಕ ಧರ್ಮಸ್ಥಳ ಕ್ಷೇತ್ರದ ಹೊರ ವಲಯದಲ್ಲಿರುವ ಮೈದಾನದಲ್ಲಿ ಆಯೋಜನೆಯಾಗಿದ್ದ ಬೃಹತ್ ಸಮಾವೇಶದಲ್ಲಿ ಮಾತನಾಡಿದ ಅವರು, ಜಾತಿ, ಧರ್ಮ ಲೆಕ್ಕಿಸದೆ ಎಲ್ಲರೂ ಸಿಬಿಐ ಅಥವಾ ಎನ್‌ಐಎಯಿಂದ ಸಮಗ್ರ ತನಿಖೆಗೆ ಒತ್ತಾಯಿಸುತ್ತಿದ್ದಾರೆ. ಇದು ಧರ್ಮಸ್ಥಳದ ಮಂಜುನಾಥನ ಎಲ್ಲಾ ಭಕ್ತರ ಬೇಡಿಕೆಯಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ರಚಿಸಿರುವ ಎಸ್‌ಐಟಿ ತನಿಖೆಯ ಸಮಯದಲ್ಲಿ ಬಹಳಷ್ಟು ಸುಳ್ಳು ಪ್ರಚಾರವನ್ನು ನಡೆಸಲಾಗಿದೆ. ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಸುಳ್ಳು ಪ್ರಚಾರವನ್ನು ನಡೆಸಿರುವ ರೀತಿಗೆ ಕೋಟ್ಯಾಂತರ ಭಕ್ತರು ಅಸಮಾಧಾನ ಗೊಂಡಿದ್ದು, ಅವರ ಭಾವನೆಗಳಿಗೆ ನೋವುಂಟು ಮಾಡಿದೆ ಎಂದರು. ಎಸ್‌ಐಟಿ ತನಿಖೆಗಾಗಿ ರಾಜ್ಯ ಸರ್ಕಾರದ ಮೇಲೆ ಎಡಪಂಥೀಯ ಗುಂಪುಗಳಿಂದ ಸಾಕಷ್ಟು ಒತ್ತಡವಿತ್ತು ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿಕೊಂಡಿದ್ದಾರೆ.

ಡಿಸಿಎಂ ಡಿಕೆ ಶಿವಕುಮಾರ್ ಅವರೇ ಧರ್ಮಸ್ಥಳದ ವಿಚಾರದಲ್ಲಿ ದೊಡ್ಡ ಪಿತೂರಿ ನಡೆದಿದೆ ಎಂದು ಹೇಳಿದ್ದಾರೆ ಎಂದ ಅವರು, ಧರ್ಮಸ್ಥಳ ಪ್ರಕರಣದ ಹಿಂದೆ ಇರುವ ದುಷ್ಟಶಕ್ತಿಗಳು ಬಹಿರಂಗ ಆಗಬೇಕು. ಹಿಂದೂ ಸಮಾಜವನ್ನು ರಕ್ಷಣೆ ಮಾಡುವಂತಹ ಕೆಲಸ ಆಗಬೇಕು. ಈಗ ಎಸ್‌ಐಟಿಯವರು ಬಂಧಿಸಿರುವುದು ಸಣ್ಣಪುಟ್ಟವರು. ಇದರ ಹಿಂದೆ ಬಲಾಢ್ಯರು ಇದ್ದಾರೆ. ಅವರನ್ನು ಹೊರಗೆ ತೆಗೆಯುವಂತಹ ಕೆಲಸ ಆಗಬೇಕು. ಇದಕ್ಕೆ ಎನ್‌ಐಎ ತನಿಖೆ ಅಗತ್ಯ ಎಂದರು.

ಹಿಂದೂ ವಿರೋಧಿ ಸರ್ಕಾರಕ್ಕೆ ಪಾಠ ಕಲಿಸಲು ಧರ್ಮಸ್ಥಳ ಚಲೋ ಆರಂಭಿಸಲಾಗಿದೆ. ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದ ನಂತರ ಗೃಹಮಂತ್ರಿಯನ್ನು ಅವರ ಮನೆಗೆ ಹೋಗಲು ಸರ್ಕಾರ ತಡೆದಿದೆ. ಧರ್ಮಸ್ಥಳ ವಿಚಾರದಲ್ಲಿ ಒಂದು ತಿಂಗಳಿಂದ ನಿತ್ಯ ಅಪಪ್ರಚಾರ ನಡೆಯುತ್ತಿದೆ. ಇಲ್ಲಿಯವರೆಗೂ ತಾಳ್ಮೆಯಿಂದ ಇದ್ದೆವು. ಧರ್ಮಸ್ಥಳ ವಿಚಾರಕ್ಕೆ ಎಸ್‌ಐಟಿ ತನಿಖೆ ವೇಳೆ ನಾವು ಸ್ವಾಗತಿಸಿದ್ದೆವು. ಆದರೆ, ಅಪ ಪ್ರಚಾರ ಆಗುತ್ತಿದ್ದರೆ, ಸರ್ಕಾರ ತಡೆಯುತ್ತದೆ ಎಂದುಕೊಂಡೆವು. ಆದರೆ, ಯಾವುದನ್ನು ಮಾಡಲಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಗುಡುಗಿದರು.

ಧರ್ಮಸ್ಥಳ ಸಣ್ಣ ದೇವಾಲಯವಲ್ಲ. ಕೋಟ್ಯಾಂತರ ಭಕ್ತರನ್ನು ಹೊಂದಿರುವ ಪುಣ್ಯಕ್ಷೇತ್ರ. ಬೀದಿಲಿ ಹೋಗುವವನು ದೂರು ಕೊಟ್ಟಿದ್ದಕ್ಕೆ ಪ್ರಾಥಮಿಕ ತನಿಖೆ ಮಾಡಲು ಶುರು ಮಾಡಿದರು. ಈ ಸರ್ಕಾರಕ್ಕೆ ಭಗವಂತ ಒಳಿತನ್ನು ಮಾಡುತ್ತಾನೆಯೇ ಎಂದು ಕಿಡಿ ಕಾರಿದರು. ಈ ವೇದಿಕೆ ಮೂಲಕ ನಾವು ಸೌಜನ್ಯ ಹತ್ಯೆ ಕೇಸ್ ಅನ್ನು ಮರುತನಿಖೆ ಮಾಡಬೇಕು ಎಂದು ಆಗ್ರಹಿಸುತ್ತೇವೆ ಎಂದರು.

ಕಾಣದ ಕೈಗಳು ಕೆಲಸ ಮಾಡುತ್ತಿವೆ : ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮಾತನಾಡಿ, ಧರ್ಮಸ್ಥಳ ಐತಿಹಾಸಿಕ ಸ್ಥಳ, ಪವಿತ್ರ ಭೂಮಿ. ಧರ್ಮಸ್ಥಳವು ನಮ್ಮ ಧರ್ಮ, ನಂಬಿಕೆ ಮತ್ತು ಇತಿಹಾಸ ಹಾಗೂ ಧಾರ್ಮಿಕತೆಯ ಭವಿಷ್ಯದ ಸಂಬಂಧ ಹೊಂದಿದೆ. ಧರ್ಮಸ್ಥಳದ ಹೆಸರಿಗೆ ಕಪ್ಪು ಚುಕ್ಕೆ ಹಚ್ಚಲು ಪಣತೊಟ್ಟ ಕಾಣದ ಕೈಗಳು ಕೆಲಸ ಮಾಡುತ್ತಿವೆ. ಧರ್ಮಸ್ಥಳ ವಿರುದ್ಧದ ಷಡ್ಯಂತ್ರ ಪ್ರಕರಣ ಎನ್‌ಐಎಗೆ ವಹಿಸಬೇಕು ಎಂದು ಆಗ್ರಹಿಸಿದರು.

ಧರ್ಮಸ್ಥಳದ ಪಾವಿತ್ರ್ಯತೆಯನ್ನು ಹಾಳು ಮಾಡಬೇಕೆಂಬ ಪಿತೂರಿ ಮುರಿದು ಹೋಗುತ್ತಿದೆ. ಧರ್ಮಸ್ಥಳದ ಮೇಲೆ ನಡೆದ ದಾಳಿಗೆ ಧರ್ಮವೇ ಉತ್ತರವನ್ನು ನೀಡುತ್ತಿದೆ. ಅಂದು ಇತಿಹಾಸದಲ್ಲಿ ಭಾರತದ ಹಿಂದೂ ದೇವಾಲಯಗಳ ಮೇಲೆ ಆಕ್ರಮಣಗಳು ನಡೆದವು. ಇಂದು ಸಹ ನಮ್ಮ ದೇವಾಲಯಗಳ ಮೇಲೆ ಎಡಪಂಥೀಯ ಸರ್ಕಾರಗಳು, ಕಾಣದ ಕೈಗಳ ಆಕ್ರಮಣ ಮುಂದುವರೆಯುತ್ತಲೇ ಇದೆ. ದೇವಾಲಯಗಳು ನಮ್ಮ ಧರ್ಮದ ಪ್ರಾಣವಾಯು. ಇವು ಯಾರ ಆಸ್ತಿ ಅಲ್ಲ, ಇದು ಭಕ್ತರ ಆಧ್ಯಾತ್ಮಿಕ ಕೇಂದ್ರ. ಧರ್ಮಸ್ಥಳದ ಪರ ಹೋರಾಟ ರಾಜಕೀಯವಲ್ಲ, ಇದು ಧರ್ಮ – ಸಂಸ್ಕೃತಿಯ ರಕ್ಷಣೆಗಾಗಿ ನಡೆಯುತ್ತಿರುವ ಪ್ರಾಮಾಣಿಕ ಹೋರಾಟ ಎಂದು ಪ್ರಹ್ಲಾದ್ ಜೋಶಿ ಹೇಳಿದರು.

ಮೊದಲಿಗೆ ಎಸ್‌ಐಟಿ ಬೇಕಿಲ್ಲ ಎಂದು ಹೇಳಿ ಮತ್ತೆ ಸರ್ಕಾರ ತನಿಖೆ ತಂಡ ರಚಿಸಿದ್ಯಾಕೆ? ಯಾರೋ ಒಬ್ಬ ಬುರುಡೆ ತಂದು ಕೊಟ್ಟಾಗ, ಅವನ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿಲ್ಲ. ಜೊತೆಗೆ ಎಲ್ಲಿಂದ ಬುರುಡೆ ಸಿಕ್ಕಿತ್ತು ಎಂದೂ ಸಹ ಪ್ರಶ್ನೆ ಮಾಡಿಲ್ಲ. 16 ಗುಂಡಿ ಅಗೆದರೂ ಬುರುಡೆ ಮಾತ್ರ ಸಿಗಲಿಲ್ಲ ಎಂದು ಕಿಡಿಕಾರಿದರು.

ಇದೊಂದು ಬುರುಡೆ ಸರ್ಕಾರ : ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಧರ್ಮಸ್ಥಳಕ್ಕೆ ಕಳಂಕ ಹಚ್ಚಬೇಕು ಎಂದು ಬುರುಡೆ ಇಟ್ಟುಕೊಂಡು ಧರ್ಮಸ್ಥಳದಿಂದ ದೆಹಲಿವರೆಗೂ ಆಟವಾಡಿದರು. ಬುರುಡೆ ಸರ್ಕಾರದ ವಿರುದ್ಧ ಹೋರಾಡಬೇಕು. ರಾಜ್ಯದಲ್ಲಿರುವುದು ಸರ್ಕಾರವಲ್ಲ ಬುರುಡೆ ಸರ್ಕಾರ. ಬರಿಬುರುಡೆ ಬಿಡುವುದೇ ಇವರ ಕೆಲಸ. ಸೌಜನ್ಯ ಕೇಸ್‌ಗೆ ರಕ್ಷಣೆ, ನ್ಯಾಯ ಎರಡಕ್ಕೂ ನ್ಯಾಯಾಲಯದಲ್ಲಿ ಹೋರಾಟ ಮಾಡಬೇಕು. ಬುರುಡೆ ಗ್ಯಾಂಗ್ ಜೊತೆ ಬುರುಡೆ ಬಿಡಬಾರದು. ಬುರುಡೆ ಹೇಳುವವರನ್ನು ಮುಂದಿಟ್ಟುಕೊಂಡು ಎಡಪಂಥೀಯರ ಜೊತೆ ಸೇರಿ ಧರ್ಮಸ್ಥಳ, ಮಂಜುನಾಥನಿಗೆ ಕಳಂಕ ತರುತ್ತಿದ್ದಾರೆ. ನಾವು ಬಿಜೆಪಿ ನಾಯಕರಾಗಿಯಲ್ಲ, ಮಂಜುನಾಥ ಸ್ವಾಮಿಯ ಭಕ್ತರಾಗಿ ಹೋರಾಟ ಮಾಡಲು ಬಂದಿದ್ದೇವೆ. ಸರ್ಕಾರ ಮಾಡುತ್ತಿರುವ ಅನಾಚಾರದ ವಿರುದ್ಧ ಹೋರಾಡಬೇಕು ಎಂದು ಹೇಳಿದರು.

ಮೀನಲ್ಲ, ತಿಮಿಂಗಿಲ ಹಿಡಿಯಬೇಕು

ಧರ್ಮಸ್ಥಳದಲ್ಲಿ ಸಾವಿರಾರು ಶವ ಹೂಳಲಾಗಿದೆ ಎಂದು ದೂರು ಕೊಟ್ಟ ನಂತರ ಎಸ್‌ಐಟಿ ರಚನೆ ಮಾಡಿದಿರಿ. ಇದನ್ನು ನಾವು ಬೆಂಬಲಿಸಿದ್ದೆವು. ಆದರೆ, ತನಿಖಾ ತಂಡ ಪ್ರಕರಣದ ಹಿಂದಿರುವ ಸಣ್ಣ ಮೀನುಗಳನ್ನು ಹಿಡಿಯುತ್ತಿದೆ. ಆದರೆ, ತಿಮಿಂಗಿಲಕ್ಕಾಗಿ ಬಲೆ ಬೀಸಬೇಕು ಎಂದು ವಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು. ಕಾಂಗ್ರೆಸ್ ಸರ್ಕಾರ ಧರ್ಮದ ರಾಜಕಾರಣ ಮಾಡುತ್ತಿದೆ. ಸೌಜನ್ಯ ಕೇಸ್ ತನಿಖೆ ಮಾಡುವುದಕ್ಕೆ ನಮ್ಮ ಹೋರಾಟವಿಲ್ಲ. ಧರ್ಮಸ್ಥಳ ವಿರುದ್ಧ ನಾವು ಅಪಪ್ರಚಾರ ಮಾಡುತ್ತಿರುವುದರ ವಿರುದ್ಧ ಪ್ರತಿಭಟನೆ ಮಾಡುತ್ತಿದ್ದೇವೆ. ಮಂಜುನಾಥನ ಕ್ಷೇತ್ರಕ್ಕೆ ಬರೋಕೆ ಸಿಎಂ, ಡಿಸಿಎಂಗೆ ಮಾನ–ಮಾರ್ಯಾದೆ ಇದ್ಯಾ?. ವೀರೇಂದ್ರ ಹೆಗ್ಗಡೆಯವರ ಕುಟುಂಬ ಚಿತ್ರಹಿಂಸೆ ಪಟ್ಟಿದೆ. ಅವರ ಶಾಪ ನಿಮ್ಮನ್ನು ತಟ್ಟದೆ ಬಿಡಲ್ಲ ಎಂದು ಹೇಳಿದರು.

ಚಂದಮಾಮ ಬೇತಾಳನ ಧರ್ಮಸ್ಥಳಕ್ಕೆ ಹಿಡ್ಕೊಂಡು ಬಂದಿದ್ದಾರೆ. ಬುರುಡೆ ಗ್ಯಾಂಗ್ ಸಿನಿಮಾ ಮುಂದೆ ಆರ್‌ಆರ್, ಕೆಜಿಎಫ್ ಏನೂ ಇಲ್ಲ. ಡೈರೆಕ್ಟರ್ ಯಾರೋ ಇರಬಹುದು. ಇದಕ್ಕೆ ಪ್ರೊಡ್ಯೂಸರ್ ಮಾತ್ರ ರಾಜ್ಯ ಸರ್ಕಾರ. ಧರ್ಮಸ್ಥಳ ಆಯ್ತು ಈಗ ಚಾಮುಂಡಿ ಬೆಟ್ಟಕ್ಕೆ ಬಂದಿದ್ದೀರಾ. ದಸರಾ ಎಲ್ಲರದ್ದೂ ಅಂತೀರಾ. ಧರ್ಮಸ್ಥಳಕ್ಕೂ ಬಾನು ಮುಷ್ತಾಕ್‌ರನ್ನು ಕರೆದುಕೊಂಡು ಬನ್ನಿ ಎಂದು ಕಿಡಿಕಾರಿದರು.

ಇಂದು ನಿವೃತ್ತ ಪೊಲೀಸ್ ಅಧಿಕಾರಿಗಳ ಸಂಘದ ಮಹಾಸಭೆ

ಮೈಸೂರು, ಸೆ. 1– ನಿವೃತ್ತ ಪೊಲೀಸ್ ಅಧಿಕಾರಿಗಳ ಸಂಘದ ವಾರ್ಷಿಕ ಮಹಾಸಭೆ ನಾಳೆ (ಸೆ. 2) ಬೆಳಗ್ಗೆ 10 ಗಂಟೆಗೆ ಮೈಸೂರಿನ ಪೊಲೀಸ್ ಭವನದಲ್ಲಿ ಸಂಘದ ಅಧ್ಯಕ್ಷ ಎಂ.ಸಿ. ಮರಿಸ್ವಾಮಿ ಅಧ್ಯಕ್ಷತೆಯಲ್ಲಿ ನಡೆಯಲಿದೆ. ಕೆಎಸ್‌ಆರ್‌ಪಿ 5ನೇ ಬೆಟಾಲಿಯನ್ ಕಮಾಂಡೆಂಟ್ ಕೆ.ಬಿ. ದೊರೆಮಣಿ ಭೀಮಯ್ಯ ಉದ್ಘಾಟಿಸಲಿದ್ದು, ಸಂಘದ ಗೌರವ ಅಧ್ಯಕ್ಷ ಬಿ.ಎಂ. ನಾಣಯ್ಯ ಉಪಸ್ಥಿತರಿರುವರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಜನತಾ ಬಜಾರ್‌ಗೆ 17 ಮಂದಿ ಕಾಂಗ್ರೆಸ್ ಬೆಂಬಲಿತರು ನಿರ್ದೇಶಕರಾಗಿ ಆಯ್ಕೆ



ಮೈಸೂರು, ಸೆ. 1– ಮೈಸೂರು–ಚಾಮರಾಜನಗರ ಜಿಲ್ಲಾ ಕೇಂದ್ರ ಸಹಕಾರ ಸಗಟು ಮಾರಾಟ ಸಂಘದ (ಜನತಾ ಬಜಾರ್) ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ 17 ನಿರ್ದೇಶಕರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಧ್ಯಕ್ಷರಾಗಿ ಯು.ಎಸ್. ರಮೇಶ್, ಉಪಾಧ್ಯಕ್ಷರಾಗಿ ಶ್ರೀಮತಿ ಹೆಚ್.ಸಿ. ಪಂಕಜ, ನಿರ್ದೇಶಕರಾಗಿ ಗುಲಾಂ ರಬ್ಬಾನಿ, ಹೆಚ್.ಎಸ್. ರಾಮಮೂರ್ತಿ, ಎನ್. ಮಂಜುನಾಥ್, ಎಸ್. ರಾಮಕೃಷ್ಣೇಗೌಡ, ಎಂ.ಎ. ನಯನ್‌ಕುಮಾರ್, ಶ್ರೀಮತಿ ಎಂ. ಮೀನಾಕ್ಷಿ, ಬಿ. ರಾಮಾರಾಧ್ಯ, ಸಿ.ಎಂ. ಸುಂದ್ರಪ್ಪ, ಎಂ. ಆನಂದ್, ಶ್ರೀಮತಿ ರೂಪಾ (ಎಸ್. ಸೌಮ್ಯ), ಶ್ರೀಮತಿ ಕೆ. ಉಷಾ, ಶ್ರೀಮತಿ ನಸೀಮಾ ಜಾನ್, ಶ್ರೀಮತಿ ಹೆಚ್.ಪಿ. ಶೋಭಾ, ಆರ್. ಗೌತಮ್, ಶ್ರೀಮತಿ ಮಂಜುಳಾ ಆಯ್ಕೆಯಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಲಲಿತಮಹಲ್ ಹೋಟೆಲ್ ಬಳಿ ಬಯಲು, ರಸ್ತೆ ಬದಿ ಸ್ವಚ್ಛತೆಗೆ ಸ್ಥಳೀಯರ ಪ್ರಶಂಸೆ

ಇದೇ ವಾತಾವರಣ ಕಾಯ್ದುಕೊಳ್ಳುವಂತೆ ಮೈಸೂರು ಪಾಲಿಕೆ ಆಡಳಿತಕ್ಕೆ ಆಗ್ರಹ

ಮೈಸೂರು,ಸೆ.1(ಎಂಟಿವೈ)– ಮೈಸೂರಿನ ಲಲಿತಮಹಲ್ ಮೈದಾನ ಹಾಗೂ ರಸ್ತೆಯ ಆಜುಬಾಜು, ಖಾಲಿ ಜಾಗಗಳಲ್ಲಿ ಬೀಡು ಬಿಟ್ಟಿದ್ದ 50ಕ್ಕೂ ಹೆಚ್ಚು ಫಾಸ್ಟ್‌ಫುಡ್‌ಗಳನ್ನು ತೆರವುಗೊಳಿಸಿರುವ ಮೈಸೂರು ಮಹಾನಗರ ಪಾಲಿಕೆ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿರುವ ಸ್ಥಳೀಯರು, ಮೈಸೂರಿನ ಎಲ್ಲಾ ರಸ್ತೆಗಳಲ್ಲೂ ಇದೇ ರೀತಿ ತೆರವು ಕಾರ್ಯಾಚರಣೆ ಕೈಗೊಂಡು ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವುದರ ಜೊತೆಗೆ ಸ್ವಚ್ಛತೆ ಕಾಪಾಡುವಂತೆ ಆಗ್ರಹಿಸಿದ್ದಾರೆ.

ಸಾಂಸ್ಕೃತಿಕ ನಗರಿ ಮೈಸೂರಲ್ಲಿ ಇತ್ತೀಚೆಗೆ ದಿನದಿಂದ ದಿನಕ್ಕೆ ರಸ್ತೆ ಬದಿ ವ್ಯಾಪಾರಿ ಹೆಚ್ಚಾಗುತ್ತಿದ್ದು, ಪಾದಚಾರಿ ಹಾಗೂ ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿದೆ. ಅದರಲ್ಲೂ ಅನ್ಯ ರಾಜ್ಯಗಳಿಂದ ಆಗಮಿಸಿರುವವರು ಗುಂಪು ಗುಂಪಾಗಿ ವಿವಿಧ ರಸ್ತೆಗಳಲ್ಲಿ ವ್ಯಾಪಾರ–ವಹಿವಾಟು ಆರಂಭಿಸಿದ್ದು, ಇದರಿಂದ ವಾಹನ ಸವಾರರಿಗೆ ತೊಂದರೆಯುಂಟಾಗುತ್ತಿದೆ. ಸದಾ ವಾಹನ ದಟ್ಟಣೆ ಇರುವಂತಹ ರಸ್ತೆಗಳ ತಿರುವುಗಳಲ್ಲಿ, ಕಿರಿದಾದ ರಸ್ತೆಗಳಲ್ಲಿಯೇ ಬೀದಿ ಬದಿ ವ್ಯಾಪಾರ ತಲೆ ಎತ್ತುತ್ತಿರುವುದು ಅಪಾಯಕ್ಕೆ ಎಡೆಮಾಡಿಕೊಡುತ್ತಿದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಮೈಸೂರು ಪ್ರವಾಸದ ಹಿನ್ನೆಲೆಯಲ್ಲಿ ಭದ್ರತಾ ದೃಷ್ಟಿಯಿಂದ ವಿಶೇಷ ಭದ್ರತಾ ತಂಡದ ಸೂಚನೆ ಮೇರೆಗೆ ಲಲಿತ ಮಹಲ್ ಮೈದಾನದ ಬಳಿ ರಾಷ್ಟ್ರೀಯ ಹೆದ್ದಾರಿ 766(212) ಬದಿಯ 50ಕ್ಕೂ ಹೆಚ್ಚು ಫಾಸ್ಟ್‌ಫುಡ್‌ಗಳನ್ನು, ಐದು ದಿನದ ಹಿಂದೆ ಮೈಸೂರು ಮಹಾನಗರ ಪಾಲಿಕೆ ಕಾರ್ಯಾಚರಣೆ ನಡೆಸಿ ತೆರವುಗೊಳಿಸಿತ್ತು. ರಸ್ತೆ ಬದಿಯಲ್ಲಿ ವ್ಯಾಪಾರಿಗಳು ನಿಲ್ಲಿಸಿ ಹೋಗಿದ್ದ ಫಾಸ್ಟ್‌ಫುಡ್‌ನ ಹಳೆ ವಾಹನ, ಪೆಟ್ಟಿಗೆ ಅಂಗಡಿಗಳನ್ನು ಪಾಲಿಕೆ ಅಧಿಕಾರಿಗಳು ತೆರವು ಮಾಡಿ, ಆ ಸ್ಥಳವನ್ನು ಸ್ವಚ್ಛಗೊಳಿಸಿದ್ದರು.

ಪಾಲಿಕೆಯ ತೆರವು ಕಾರ್ಯಾಚರಣೆಗೆ ಬೀದಿ ಬದಿ ವ್ಯಾಪಾರಿಗಳು ಆಕ್ಷೇಪ ವ್ಯಕ್ತಪಡಿಸಿ, ನಗರ ಪಾಲಿಕೆ ಗದಾಪ್ರಹಾರ ಮಾಡುತ್ತಿದೆ ಎಂದು ದೂರಿದ್ದರು. ಕಾರ್ಯಾಚರಣೆಗೆ ಸಂಬಂಧಿಸಿದಂತೆ ಮೈಸೂರು ಮಹಾನಗರ ಪಾಲಿಕೆ ಸ್ಪಷ್ಟನೆ ನೀಡಿ, ರಾಷ್ಟ್ರಪತಿ ಪ್ರವಾಸದ ಹಿನ್ನೆಲೆ ಯಲ್ಲಿ ತೆರವು ಕಾರ್ಯಾಚರಣೆ ನಡೆಸಲಾಗಿದೆ. ಉದ್ದೇಶಪೂರ್ವಕವಾಗಿ ತೆರವು ಕಾರ್ಯಾಚರಣೆ ನಡೆಸಿಲ್ಲ ಎಂದು ಸ್ಪಷ್ಟಪಡಿಸಿತ್ತು.

ತೆರವು ಕಾರ್ಯಾಚರಣೆ ಸ್ಥಳೀಯರಿಂದ ಪ್ರಶಂಸೆ: ಲಲಿತಮಹಲ್ ಮೈದಾನದ ಬಳಿ ತಲೆ ಎತ್ತಿದ್ದ ಫಾಸ್ಟ್‌ಫುಡ್‌ಗಳಿಂದ ಸ್ಥಳೀಯರಿಗೆ ಭಾರೀ ತೊಂದರೆಯಾಗುತ್ತಿತ್ತು. ಸಿದ್ಧಾರ್ಥನಗರದ ಹಿರಿಯ ನಾಗರಿಕರಿಗೆ, ಆ ಭಾಗದಲ್ಲಿರುವ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ, ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚರಿಸುವ ವಾಹನ ಚಾಲಕರು, ಸವಾರರಿಗೆ ತೀವ್ರ ತೊಂದರೆಯಾಗುತ್ತಿತ್ತು. ಫಾಸ್ಟ್‌ಫುಡ್‌ಗಳಿರುವ ಸ್ಥಳದ ಸಮೀಪ ಸ್ಕೇಟಿಂಗ್, ಯೋಗಭವನ, ಜಿಮ್ ಸಲಕರಣೆಯುಳ್ಳ ಪಾರ್ಕ್ ಇದೆ. ಈ ಭಾಗದಲ್ಲಿ ಸಂಜೆ ವೇಳೆ ವಾಯುವಿಹಾರಕ್ಕೆ ಬರುವವರಿಗೆ ಫಾಸ್ಟ್‌ಫುಡ್‌ಗಳಿಂದ ಬರುವ ಹೊಗೆಯಿಂದ ತೊಂದರೆಯಾಗುತ್ತಿತ್ತು. ಸ್ಕೇಟಿಂಗ್ ಪಾರ್ಕ್‌ನಲ್ಲಿ ಮೂಳೆ, ಬಿಯರ್ ಬಾಟಲ್, ಕಸದ ರಾಶಿ ಬಂದು ಬೀಳುತ್ತಿತ್ತು. ಅಲ್ಲದೆ, ಫಾಸ್ಟ್‌ಫುಡ್‌ಗಳಲ್ಲಿ ಉಳಿದ ಆಹಾರ ಪದಾರ್ಥಗಳನ್ನು ಕಾಂಪೌಂಡ್ ಪಕ್ಕದಲ್ಲಿ ಸುರಿದು ಹೋಗುತ್ತಿದ್ದು, ಇದರಿಂದ ದುರ್ವಾಸನೆ ಬೀರುತ್ತಾ ಸ್ಥಳೀಯ ವಾತಾವರಣ ಹಾಳಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಮೈಸೂರು ಮಹಾನಗರ ಪಾಲಿಕೆ ನಡೆಸಿದ ತೆರವು ಕಾರ್ಯಾಚರಣೆ ಸ್ಥಳೀಯರಿಗೆ ಸಂತೋಷ ತಂದಿದೆ.



ಮೈಸೂರಿನ ಲಲಿತಮಹಲ್ ಮೈದಾನದ ಎದುರು ಇದ್ದ ಫಾಸ್ಟ್‌ಫುಡ್ ತೆರವು ಮಾಡಿ, ಆ ಜಾಗವನ್ನು ಸ್ವಚ್ಛಗೊಳಿಸಿರುವುದು.

ಈ ಕಾರ್ಯಾಚರಣೆ ಮಾದರಿಯಾಗಲಿ

ಲಲಿತಮಹಲ್ ರಸ್ತೆಯಲ್ಲಿ ಜನರಿಗೆ ತೊಂದರೆಯಾಗಿದ್ದ ಫಾಸ್ಟ್‌ಫುಡ್‌ಗಳ ತೆರವು ಇತರೆ ರಸ್ತೆಗಳಿಗೂ ಅನ್ವಯಿಸಿ, ಇದೇ ಮಾದರಿಯಲ್ಲಿ ಕಾರ್ಯಾಚರಣೆ ನಡೆಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಅಲ್ಲದೆ, ದಸರಾ ಸಮೀಪಿಸುತ್ತಿದ್ದು, ಮೈಸೂರಿಗೆ ಬರುವ ಪ್ರವಾಸಿಗರ ಸಂಖ್ಯೆ ಹೆಚ್ಚಾಗುತ್ತಿದೆ. ನಾಡಹಬ್ಬಕ್ಕೆ ಬರುವ ಪ್ರವಾಸಿಗರಿಗೆ ಬೀದಿ ಬದಿ ವ್ಯಾಪಾರಿಗಳಿಂದ ತೊಂದರೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಜಿಲ್ಲಾಡಳಿತದ್ದಾಗಿದೆ. ಸಯ್ಯಾಜಿರಾವ್ ರಸ್ತೆ ಹಾಗೂ ಧನ್ವಂತರಿ ರಸ್ತೆಯ ಜಂಕ್ಷನ್‌ನಲ್ಲಿಯೇ ಕೆಲವು ತಳ್ಳುಗಾಡಿಗಳನ್ನು ನಿಲ್ಲಿಸಿಕೊಂಡು ವ್ಯಾಪಾರ ಮಾಡುತ್ತಿದ್ದು, ವಾಹನ ಸವಾರರಿಗೆ ತೊಂದರೆಯಾಗುತ್ತಿದೆ. ಗಾಡಿ ಸ್ವಲ್ಪ ಮುಂದೆ ನಿಲ್ಲಿಸಿಕೊಳ್ಳುವಂತೆ ಮನವಿ ಮಾಡಿದರೆ, ಅಲ್ಲಿನ ವ್ಯಾಪಾರಿಗಳು ಜಗಳಕ್ಕೆ ಬೀಳುತ್ತಾರೆ. ಪೊಲೀಸರು ತಿರುವು, ಅಪಾಯಕ್ಕೆ ಎಡೆ ಮಾಡಿಕೊಡುವ ಸ್ಥಳದಲ್ಲಿರುವ ಬೀದಿ ಬದಿ ವ್ಯಾಪಾರಿಗಳಿಗೆ ಧಮ್ಕಿ ಹಾಕುತ್ತಾರೆ. ಕಡಿವಾಣ ಹಾಕಬೇಕು. ಬೇರೆ ರಾಜ್ಯಗಳಿಂದ ಬಂದು ಹಂತ ಹಂತವಾಗಿ ವಿವಿಧ ರಸ್ತೆಬದಿಯಲ್ಲಿ ವ್ಯಾಪಾರಿ ಮಾಡಲು ಮುಂದಾಗುತ್ತಿರುವವರ ವಿರುದ್ಧವೂ ಕ್ರಮ ಕೈಗೊಂಡು ತೆರವು ಮಾಡಬೇಕು. ಬಲ್ಲಾಳ್ ವೃತ್ತದ ಬಳಿ ಪಾಲಿಕೆಯಿಂದ ನಿರ್ಮಿಸಿರುವ ಶೆಲ್ಟರ್‌ನಲ್ಲಿ ಹೊರಗಿನಿಂದ ಬಂದ ವ್ಯಾಪಾರಿಗಳು ಸ್ಥಳ ಅತಿಕ್ರಮಣ ಮಾಡುತ್ತಿದ್ದು, ಮುಂದಿನ ದಿನಗಳಲ್ಲಿ ಪಾಲಿಕೆಗೆ ತಲೆ ನೋವಾಗಿ ಪರಿಣಮಿಸಬಹುದಾಗಿದ್ದು, ಕೂಡಲೆ ಪಾಲಿಕೆ ಎಚ್ಚೆತ್ತುಕೊಳ್ಳುವಂತೆ ಸಾರ್ವಜನಿಕರು ಆಗ್ರಹಿಸಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಕೂಲಿ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಅಂದೊಂದಿತ್ತು ಕಾಲ(ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಕೂಲಿ (ಹಿಂ)	4 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಉಸಿರು (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕೂಲಿ (ಕ)	4 ಪ್ರದರ್ಶನಗಳು
ರಾಜಕಮಲ್	
ರಿಪ್ಪನ್ ಸ್ವಾಮಿ (ಕ)	4 ಪ್ರದರ್ಶನಗಳು
ಸಂಗಂ	
ಸು ಫ್ರಮ್ ಸೋ (ಕ)	4 ಪ್ರದರ್ಶನಗಳು
ಲಿಡೋ	
ವಿಷ್ಣುವರ್ಧನ(ಕ) + ಸಿಂಹರೂಪಿಣಿ (ಕ)	2+2 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಉಸಿರು (ಕ)	2+2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಕೂಲಿ (ತ): ಬೆ.7ಕ್ಕೆ, ಮ.3ಕ್ಕೆ, ರಾ.10.15ಕ್ಕೆ, ವಾರ್ –2 (ಹಿಂ): ಬೆ.10.45ಕ್ಕೆ, ಸಂ.6.40ಕ್ಕೆ.
ಸ್ಕ್ರೀನ್ 2	ಕೂಲಿ (ತ): ಬೆ.7ಕ್ಕೆ, ಸು ಫ್ರಂ ಸೋ (ಕ): ಬೆ.10.20ಕ್ಕೆ, ಮ.1.15ಕ್ಕೆ, ಸಂ.4.10ಕ್ಕೆ, ರಾ.7ಕ್ಕೆ, ವಾರ್ –2 (ಹಿಂ): ರಾ.9.50ಕ್ಕೆ.
ಸ್ಕ್ರೀನ್ 3	ಕೂಲಿ (ತ): ಬೆ.7.05ಕ್ಕೆ, ರಾ.8.15ಕ್ಕೆ, ಕೂಲಿ (ಕ): ಬೆ.10.30ಕ್ಕೆ, ಮಹಾವತಾರ ನರಸಿಂಹ (3ಡಿ)(ಕ): ಮ.1.50ಕ್ಕೆ, ವಾರ್ –2 (ಹಿಂ): ಸಂ.4.35ಕ್ಕೆ.
ಸ್ಕ್ರೀನ್ 4	ಕೂಲಿ (ತ): ಬೆ.7ಕ್ಕೆ, ಬೆ.11.55ಕ್ಕೆ, ಮ.3.25ಕ್ಕೆ, ಸಂ.6.45ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಸು ಫ್ರಂ ಸೋ (ಕ): ಬೆ.10ಕ್ಕೆ, ಮ.3.55ಕ್ಕೆ, ವಾರ್–2 (ಹಿಂ): ಮ.12.40ಕ್ಕೆ, ಕೂಲಿ (ಕ): ಸಂ.6.35ಕ್ಕೆ, ಕೂಲಿ (ತ): ರಾ.9.40ಕ್ಕೆ.
ಸ್ಕ್ರೀನ್ 2	ಕೂಲಿ (ತ): ಬೆ.6.45ಕ್ಕೆ, ಬೆ.10ಕ್ಕೆ, ಸಂ.4.35ಕ್ಕೆ, ರಾ.7.50ಕ್ಕೆ, ವಾರ್–2 (ಹಿಂ): ಮ.1.15ಕ್ಕೆ.
ಸ್ಕ್ರೀನ್ 3	ವಾರ್–2 (ಹಿಂ): ಬೆ.10.05ಕ್ಕೆ, ಸು ಫ್ರಂ ಸೋ (ಕ): ಮ.1.20ಕ್ಕೆ, ರಾ.7.10ಕ್ಕೆ, ಕೂಲಿ (ಕ): ಸಂ.4ಕ್ಕೆ, ಕೂಲಿ (ತ): ರಾ.9.50ಕ್ಕೆ.
ಸ್ಕ್ರೀನ್ 4	ಕೂಲಿ (ತ): ಬೆ.7ಕ್ಕೆ, ಮಹಾವತಾರ ನರಸಿಂಹ (3ಡಿ)(ಕ): ಬೆ.10.15ಕ್ಕೆ, ಸಂ.4ಕ್ಕೆ, ಕೂಲಿ (ಕ): ಮ.12.45ಕ್ಕೆ, ವಾರ್–2 (ಹಿಂ): ಸಂ.6.35ಕ್ಕೆ, ರಾ.9.55ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ದಸರಾ ಮುನ್ನವೇ ಬಿಜೆಪಿಯಿಂದ ಚಾಮುಂಡಿಬೆಟ್ಟ ಧರ್ಮ ಯಾತ್ರೆ

ಡಿಸಿಎಂ ಡಿ.ಕೆ. ಶಿವಕುಮಾರ್ ಚಾಮುಂಡಿಬೆಟ್ಟ ಹಿಂದೂಗಳದ್ದಲ್ಲ ಎಂಬ ಹೇಳಿಕೆಗೆ ಸೆಡ್ಡು ಹೊಡೆದ ಬಿಜೆಪಿ


ಬೆಂಗಳೂರು, ಸೆ.01(ಕೆಎಂಶಿ)–ದಸರಾ ಮಹೋತ್ಸವಕ್ಕೂ ಮುನ್ನವೇ ಚಾಮುಂಡಿಬೆಟ್ಟ ಧರ್ಮ ಯಾತ್ರೆಯನ್ನು ರಾಜ್ಯ ಬಿಜೆಪಿ ಹಮ್ಮಿಕೊಂಡಿದೆ.

ಚಾಮುಂಡಿಬೆಟ್ಟ ಹಿಂದೂಗಳದ್ದು, ಅದು ಹಿಂದೂಗಳಿಗೇ ಸೇರಿದ್ದು, ಇದು ಸರ್ಕಾರದ್ದಲ್ಲ ಎಂಬುದನ್ನು ಪ್ರತಿಪಾದಿಸಲು ಧರ್ಮಯಾತ್ರೆ ಕೈಗೊಂಡಿದೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಮುಂಡಿಬೆಟ್ಟ ಸರ್ಕಾರಕ್ಕೆ ಸೇರಿದ್ದು, ಕೇವಲ ಹಿಂದೂಗಳಿಗೆ ಸೇರಿದ್ದಲ್ಲ ಎಂಬ ಹೇಳಿಕೆ ಹಿನ್ನೆಲೆಯಲ್ಲಿ ಬಿಜೆಪಿ ಧರ್ಮಯಾತ್ರೆ ಹಮ್ಮಿಕೊಂಡಿದೆ.

ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಪಕ್ಷದ ಸಂಸದರು, ಶಾಸಕರು, ಮುಖಂಡರು, ಮೈಸೂರು ಜಿಲ್ಲಾಧಿಕಾರಿ ಕಚೇರಿಯಿಂದ ಚಾಮುಂಡಿಬೆಟ್ಟಕ್ಕೆ ಪಾದಯಾತ್ರೆ ಕೈಗೊಳ್ಳಲಿದ್ದಾರೆ. ಧರ್ಮಸ್ಥಳದ ಉಜಿರೆಯಲ್ಲಿ ಇಂದು ನಡೆದ ಸಮಾವೇಶಕ್ಕೂ ಮುನ್ನ ರಾಜ್ಯ ಬಿಜೆಪಿ ನಾಯಕರು ಸಮಾಲೋಚನೆ ನಡೆಸಿ, ಧರ್ಮಯಾತ್ರೆ ಕೈಗೊಳ್ಳಲು ನಿರ್ಧರಿಸಿದರು. ನಾಯಕರು ನಗರಕ್ಕೆ ಆಗಮಿಸಿದ ನಂತರ ಒಂದೆರಡು ದಿನದಲ್ಲೇ ಪಾದಯಾತ್ರೆ ರೂಪುರೇಷೆ ಸಿದ್ಧಪಡಿಸಿ ಇದರ ಉಸ್ತುವಾರಿಯನ್ನು ಸ್ಥಳೀಯ ಬಿಜೆಪಿ ಘಟಕಕ್ಕೆ ನೀಡಲು ತೀರ್ಮಾನಿಸಿದ್ದಾರೆ. ಧರ್ಮಸ್ಥಳ ವಿರುದ್ಧ ಅಪಪ್ರಚಾರ ನಡೆಸಿದ ರೂವಾರಿಗಳನ್ನು ಪತ್ತೆ ಹಚ್ಚಲು ಎನ್‌ಐಎ ತನಿಖೆಗೆ ವಹಿಸಬೇಕೆಂದು ಆಗ್ರಹಿಸಿ ಇಂದು ಉಜಿರೆಯಲ್ಲಿ ಜಾಥಾ ಮತ್ತು ಸಮಾವೇಶವನ್ನು ಬಿಜೆಪಿ ನಡೆಸಿತು. ಇದೇ ಮಾದರಿಯಲ್ಲಿ ಚಾಮುಂಡಿಬೆಟ್ಟ ಹಿಂದೂಗಳದ್ದು ಎಂದು ಪ್ರತಿಪಾದಿಸಲು ಮುಂದಾಗಿದೆ.

ಮೈಸೂರು ಆಕಾಶವಾಣಿ ಕೇಂದ್ರದ ಸಹಾಯಕ ನಿರ್ದೇಶಕರಾಗಿ ಟಿ.ವಿ. ವಿದ್ಯಾಶಂಕರ್ ಅಧಿಕಾರ



ಮೈಸೂರು, ಸೆ. 1– ಮೈಸೂರು ಆಕಾಶವಾಣಿ ಕೇಂದ್ರದ ಸಹಾಯಕ ನಿರ್ದೇಶಕರಾಗಿ (ಕಾರ್ಯಕ್ರಮ) ಟಿ.ವಿ.ವಿದ್ಯಾಶಂಕರ್ ಸೋಮವಾರ ಅಧಿಕಾರ ಸ್ವೀಕರಿಸಿದರು. ಇವರು ಬೆಂಗಳೂರು, ಹಾಸನ ಮತ್ತು ಧಾರವಾಡ ಕೇಂದ್ರಗಳಲ್ಲಿ ಕಾರ್ಯಕ್ರಮ ನಿರ್ವಾಹಕರಾಗಿ ಸೇವೆ ಸಲ್ಲಿಸಿದ್ದಾರೆ. ತಾವು ಸೇವೆ ಸಲ್ಲಿಸಿದ ಕೇಂದ್ರಗಳಲ್ಲಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ರೂಪಿಸಿ ಪ್ರಸಾರಿಸಿದ್ದಾರೆ. ಇವರು ನಾಡಿನ ಹಿರಿಯ ವಿದ್ವಾಂಸರಾದ ಡಾ. ಟಿ.ವಿ. ವೆಂಕಟಾಚಲ ಶಾಸ್ತ್ರೀ ಅವರ ಸುಪುತ್ರರು ಎಂದು ಮೈಸೂರು ಆಕಾಶವಾಣಿ ಕೇಂದ್ರದ ಕಾರ್ಯಕ್ರಮ ಸಂಯೋಜಕ ಎನ್.ಕೇಶವಮೂರ್ತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಹೆಸರಾಂತ
ವೈಶಾಖ್ ಗ್ರೂಪ್ ಆಫ್ ಹೋಟೆಲ್ಸ್‌ನ
ಮಾಲೀಕರು (ಹೋಟೆಲ್ ವೈಶಾಖ್ ಇಂಟರ್‌ನಾಷನಲ್,
ಹೋಟೆಲ್ ವೈಶಾಖ್ ರೆಸಿಡೆನ್ಸಿ, ಹೋಟೆಲ್ ವೈಶಾಖ್ ಕಂಫರ್ಟ್,
ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪ
ಹೋಟೆಲ್ ರಿಯೋ ಮೆರಿಡಿಯನ್)
ಹಾಗೂ ನೂರಾರು ಕುಟುಂಬದ ಅನ್ನದಾತರಾದ
ಶ್ರೀ ಅಶೋಕ್ ರವರಿಗೆ
ಶ್ರೀಮತಿ ಜಯಮ್ಮ ಗೋವಿಂದೇಗೌಡರ ಸುಪುತ್ರ
ಸರಳ ಸ್ನೇಹಜೀವಿ
ಹುಟ್ಟು ಹಬ್ಬದ ಶುಭಾಶಯಗಳು
ತಾಯಿ ಚಾಮುಂಡೇಶ್ವರಿ ನಿಮಗೆ
ಆಯುರಾರೋಗ್ಯ ಕರುಣಿಸಲೆಂದು ಪ್ರಾರ್ಥಿಸುವ
ಆಡಳಿತ ಮಂಡಳಿ ಮತ್ತು ಸಿಬ್ಬಂದಿ ವರ್ಗದವರು
ಶುಭ ಕೋರುವವರು :
ಶ್ರೀ ಓಂಶಕ್ತಿ ಗ್ರೂಪ್ಸ್
ಓಂ
ಶಕ್ತಿ
ಶ್ರೀ ಪ್ರವೀಣ್ ಕುಮಾರ್
Hotel RIO MERIDIAN
your host in city of palaces